ಸುದ್ದಿಗಳ ಹೊನಲು

# ಸಂಜೆ ಮುಗಿಲು



ಹೇಣು ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 217, ಪುಟಗಳು: 8, ಗುರುವಾರ, 16 ಮೇ 2024 **RNI NO. KARKAN/2002/08054**

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

### ಸುಭಾಷಿತ

ಕಲಿಯಲು ತಿರಸ್ಕರಿಸುವುದು,
ಜೀವಿಸಲು ತಿರಸ್ಕರಿಸುವುದಕ್ಕೆ
ಸಮನಾದದು.

● ರಾಮಕೃಷ್ಣ ಪರಮಹಂಸ

### ಪಂಚಾಂಗ

(ಗುರುವಾರ 16, ಮೇ-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ವೈಶಾಖ ಮಾಸ, ಶುಕ್ಲ ಪಕ್ಷ,
- ಅಷ್ಟಮಿ/ನವಮಿ,
- ಗುರುವಾರ, ಮಖ ನಕ್ಷತ್ರ.
- ರಾಹುಕಾಲ: 01:55 ರಿಂದ 03:30
- ಗುಳಿಕಕಾಲ: 09:10 ರಿಂದ 10:45
- ಯಮಗಂಡ: ಕಾಲ 05:59 ರಿಂದ 07:35

# ಬಿಜೆಪಿ ಇಬ್ಭಾಗ ಆಗುತ್ತೆ

## ಮೋದಿ ಪ್ರಧಾನಿಯಾಗಿ ಮುಂದುವರೆಯುವುದು ಅಸಾಧ್ಯ



**ಮಹಾರಾಷ್ಟ್ರ:** ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಸೋಲು ಅನುಭವಿಸಲಿದ್ದು, ಚುನಾವಣಾ ಫಲಿತಾಂಶದ ಬಳಿಕ ಬಿಜೆಪಿ ಇಬ್ಭಾಗ ಆಗಲಿದ್ದು, ಮೋದಿ ಪ್ರಧಾನಿಯಾಗಿ ಮುಂದುವರೆಯುವುದು ಅಸಾಧ್ಯ ಎಂದು ಶಿವಸೇನೆ(ಯುಟಿಬಿ) ಮುಖ್ಯಸ್ಥ ಉದ್ಧವ್ ಠಾಕ್ರೆ ಹೇಳಿದ್ದಾರೆ. ನಾಸಿಕ್ ನಲ್ಲಿ ರಾಜಾಭಾವು ವಾಜೆ ಪರ ಪ್ರಚಾರ ಮಾಡಿದ ಠಾಕ್ರೆ, ಮೋದಿ ಬಗ್ಗೆ ವಾಗ್ದಾಳಿ ನಡೆಸಿ, ನಮ್ಮ ಪಕ್ಷವು ಕಾಂಗ್ರೆಸ್‌ನೊಂದಿಗೆ ವಿಲೀನವಾಗಲಿದೆ ನೀವು ಹೇಳುತ್ತಿದ್ದೀರಿ, ಆದರೆ 30 ವರ್ಷಗಳಿಂದ ನಾವು ಬಿಜೆಪಿಯೊಂದಿಗೆ ಇದ್ದರೂ ವಿಲೀನವಾಗಲಿಲ್ಲ, ಜೂನ್ 5ರ ಬಳಿಕ ನೀವು ಮಾಜಿ ಪ್ರಧಾನಿಯಾಗುತ್ತೀರಿ ಇದು ಜನರ ನಿರ್ಧಾರ ಎಂದಿದ್ದಾರೆ.

2014 ಹಾಗೂ 2019ರಲ್ಲಿ ನರೇಂದ್ರ ಮೋದಿ ಪಕ್ಷಕ್ಕೆ ಮತಯಾಚಿಸಿದ್ದಕ್ಕಾಗಿ ಕ್ಷಮೆ ಯಾಚಿಸಿದರು. ನಿಮ್ಮ ಉತ್ತರಾಧಿಕಾರಿ ಬಗ್ಗೆ ನಿಮಗೆ ಯೋಚನೆ ಇದೆಯೇ ಎಂದು ಮೋದಿಯವರನ್ನು ಪ್ರಶ್ನಿಸುತ್ತೇನೆ. ಗುಜರಾತ್ ನಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ಮತ್ತು ಮಹಾರಾಷ್ಟ್ರ ಮತ್ತು ಗುಜರಾತ್‌ನಲ್ಲಿ ರೈತರ ನಡುವೆ ತಾರತಮ್ಯ ಮಾಡುವ ಮೂಲಕ 40 ಕ್ಕೂ ಹೆಚ್ಚು ಸಂಸದರನ್ನು ಆಯ್ಕೆ ಮಾಡಿದ ಬಿಜೆಪಿ ಮತ್ತು ಪ್ರಧಾನಿ ಮೋದಿ ಮಹಾರಾಷ್ಟ್ರದ ಜನರ ಬೆನ್ನಿಗೆ ಚೂರಿ ಹಾಕಿದ್ದಾರೆ ಎಂದು ಹೇಳಿದ್ದಾರೆ.

ಪುಟ 2

## ಶಿಕ್ಷಣ ಇಲಾಖೆ ವಿರುದ್ಧ ಚಾಟಿ ಬೀಸಿದ ಮಕ್ಕಳ ಹಕ್ಕುಗಳ ಆಯೋಗ

# ನರ್ಸರಿ ಶಾಲೆಗಳ ಕಡಿವಾಣಕ್ಕೆ ಒತ್ತಾಯ



**ಬೆಂಗಳೂರು:** ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ವರ್ಷದಿಂದ ವರ್ಷಕ್ಕೆ ನಾಯಿ ಕೊಡೆಗಳಂತೆ ನರ್ಸರಿ LKG, UKG ಶಾಲೆಗಳು ತಲೆ ಎತ್ತುತ್ತಿವೆ. ಪೂರ್ವ ಪ್ರಾಥಮಿಕ ಶಾಲೆಗಳ ಹೆಸರಲ್ಲಿ ಪೋಷಕರ ಬಳಿ ಲಕ್ಷ ಲಕ್ಷ ಸುಲಿಗೆ ಮಾಡ್ತಿವೆ. ಶಿಕ್ಷಣ ಇಲಾಖೆಯ ಅನುಮತಿ ಇಲ್ಲದೆಯೇ ಯಾವುದೇ ಮಾನದಂಡಗಳಿಲ್ಲದೇ ಶಾಲೆಗಳ ಆರಂಭವಾಗುತ್ತಿರುವುದರಿಂದ ನರ್ಸರಿಗಳಲ್ಲಿ ಮಕ್ಕಳ ಮೇಲೆ ದೌರ್ಜನ್ಯ ಪ್ರಕರಣಗಳು ಹಾಗೂ ಹಲ್ಲೆ ಹೆಚ್ಚಾಗುತ್ತಿವೆ. ಸದ್ಯ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಇವುಗಳಿಗೆ ಯಾವುದೇ ಕಠಿಣವಾದ ಮಾರ್ಗಸೂಚಿಗಳಿಲ್ಲ. ಪೂರ್ವ ಪ್ರಾಥಮಿಕ ಶಾಲೆಗಳ ನೊಂದಣಿ ಕಡ್ಡಾಯ ಮಾಡಿರುವುದು ಬಿಟ್ರೆ ಯಾವುದೇ ಮಾನದಂಡ ಇಲ್ಲ. ಇನ್ನೂ ಈ ಶಾಲೆಗಳು ಯಾವುದೇ. ರೂಲ್ಸ್ ಫಾಲೋ ಕೂಡಾ ಮಾಡ್ತಿಲ್ಲ.

2018 ಶಿಕ್ಷಣ ಕಾಯ್ದೆಯ ಪ್ರಕಾರ ನರ್ಸರಿ ಶಾಲೆಗಳು ಕಡ್ಡಾಯ ನೊಂದಣಿಯಾಗಬೇಕು. ಆದರೆ ಶಿಕ್ಷಣ ಇಲಾಖೆಯ STATSನಲ್ಲಿ ಈ ನರ್ಸರಿ ಶಾಲೆಗಳು ರಿಜಿಸ್ಟರ್ ಆಗೋದಿಲ್ಲ. ಪ್ರತಿ ವರ್ಷ ಸಾವಿರಾರು ಸಂಖ್ಯೆಯಲ್ಲಿ ಓಪನ್ ಆಗ್ತಿವೆ, ಕ್ಲೋಸ್ ಆಗ್ತಿವೆ. ಆದ್ರೆ ನೊಂದಣಿಯಾಗ್ತಿಲ್ಲ. ಯಾವುದೇ ನಿಯಮ ಪಾಲನೆ ಮಾಡ್ತಿಲ್ಲ. ಹೀಗಾಗಿ ಮಕ್ಕಳ ಹಕ್ಕುಗಳ ಆಯೋಗ ಈ ಬಗ್ಗೆ ಶಿಕ್ಷಣ ಇಲಾಖೆಗೆ ಪತ್ರ ಬರೆದು ವರದಿ ಕೇಳಿದೆ. ಅಷ್ಟೇ ಅಲ್ಲದೆ ಸದ್ಯ ನರ್ಸರಿಗಳಲ್ಲಿ ಮಕ್ಕಳ ರಕ್ಷಣೆ ಹಾಗೂ ಮೂಲಭೂತ ಸೌಕರ್ಯ ಇಲ್ಲ. ಇನ್ನು ಹಲವೆಡೆ ದೌರ್ಜನ್ಯ ಹಲ್ಲೆ ಹೆಚ್ಚಾಗುತ್ತಿವೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ನವೀನ್ ಪಟ್ನಾಯಕ್ ಮತ್ತೆ ಸಿಎಂ ಆದರೆ ತಕ್ಷಣ ಜನರಿಗೆ ಉಚಿತ ವಿದ್ಯುತ್ ಆದೇಶಕ್ಕೆ ಸಹಿ



**ದಿಯೋಗಢ:** ನವೀನ್ ಪಟ್ನಾಯಕ್ ಮತ್ತೊಮ್ಮೆ ಒಡಿಶಾದ ಮುಖ್ಯಮಂತ್ರಿಯಾಗುತ್ತಿದ್ದಂತೆ ಜನರಿಗೆ ಉಚಿತ ವಿದ್ಯುತ್ ನೀಡುವ ಆದೇಶಕ್ಕೆ ಮೊದಲು ಸಹಿ ಹಾಕಲಿದ್ದಾರೆ ಎಂದು ಅವರ ಆಪ್ತ ಸಹಾಯಕ ವಿಕೆ ಪಾಂಡಿಯನ್ ಹೇಳಿದ್ದಾರೆ. ಅವರ ಮೊದಲ ಆದೇಶವು ಒಡಿಶಾದ 90 ಪ್ರತಿಶತ ಜನಸಂಖ್ಯೆಗೆ ಉಚಿತ ವಿದ್ಯುತ್ ಪೂರೈಕೆಯಾಗುವ ಕುರಿತು ಇರುತ್ತದೆ ಎಂದು ಹೇಳಿದ್ದಾರೆ.

ಪುಟ 2

### ಪತ್ನಿಗೆ ವಿಡಿಯೋ ಕಾಲ್ ಮಾಡಿ ಹೆದರಿಸಲು ಹೋಗಿ ಜಿಮ್ ಟ್ರೈನರ್ ಸಾವು



**ಬೆಂಗಳೂರು:** ಪತ್ನಿಗೆ ವಿಡಿಯೋ ಕಾಲ್ ಮಾಡಿ ನೇಣು ಬಿಗಿದುಕೊಂಡಂತೆ ಹೆದರಿಸುವಾಗಲೇ ಪತಿಮೃತಪಟ್ಟಿರುವಂತಹ ಘಟನೆ ಬಾಗಲಗುಂಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಿನ್ನೆ ನಡೆದಿದೆ. ಬಿಹಾರ ಮೂಲದ ಅಮಿತ್ ಕುಮಾರ್ (28) ಮೃತ ದುರ್ದೈವಿ. ಅಮಿತ್ ಕುಮಾರ್ ಜಿಮ್ ಟ್ರೈನರ್ ಆಗಿದ್ದು, 10 ವರ್ಷದ ಹಿಂದೆ ಬೆಂಗಳೂರಿಗೆ ಕೆಲಸ ಹುಡುಕಿಕೊಂಡು ಬಂದಿದ್ದ. ಒಂದು ವರ್ಷದ ಹಿಂದೆ ಜಿಮ್ ಸಮೀಪವೇ ಓರ್ವ ಯುವತಿಯನ್ನು ಪ್ರೀತಿಸಿದ್ದ. ಪೋಷಕರ ವಿರೋಧದ ನಡುವೆ ವಿವಾಹವಾಗಿದ್ದರು.

ಪುಟ 2

## ಕೇಂದ್ರದ ಬರ ಪರಿಹಾರದ ಹಣ ಸಾಲಕ್ಕೆ ಜಮೆ

# ಎಚ್‌ಡಿಕೆ ವಾಗ್ದಾಳಿ



**ಬೆಂಗಳೂರು:** ಕೇಂದ್ರ ಸರ್ಕಾರದ ವತಿಯಿಂದ ರೈತರಿಗೆ ಬಿಡುಗಡೆಯಾಗಿರುವ ಬರ ಪರಿಹಾರದ ಹಣವನ್ನು ಬ್ಯಾಂಕ್ ಗಳು ಸಾಲದ ಖಾತೆಗೆ ಜಮೆ ಮಾಡಿಕೊಳ್ಳುತ್ತಿರುವುದಕ್ಕೆ ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್‌ಡಿ ಕುಮಾರಸ್ವಾಮಿ ಕಿಡಿಕಾರಿದ್ದಾರೆ. ಬ್ಯಾಂಕ್ ಗಳು ಹಾಗೂ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಸಂದೇಶ ಪ್ರಕಟಿಸಿರುವ ಅವರು, ಬ್ಯಾಂಕ್ ಗಳ ವರ್ತನೆ ನಿಜಕ್ಕೂ ಕ್ರೂರಾತಿ ಕ್ರೂರ, ಖಂಡನೀಯ ಎಂದಿದ್ದಾರೆ.

ಯಾವ ಕಡೆಯಿಂದ ನೋಡಿದರೂ ರೈತರ ಸಂಕಷ್ಟಕ್ಕೆ ಕೊನೆಯೇ ಇಲ್ಲ ಎನ್ನುವಂತಾಗಿದೆ. ಹೆಸರಿಗೆ ಅನ್ನದಾತ, ಆದರೆ ಅವರ ಕಣ್ಣೀರು ಒರೆಸಿ ಅವರಿಗೆ ಧಾತನಾಗಿ ನಿಲ್ಲಬೇಕಿದ್ದ ರಾಜ್ಯ ಕಾಂಗ್ರೆಸ್ ಸರಕಾರ ಕೈಕಟ್ಟಿ ಕೂತಿದೆ. ಕೇಂದ್ರ ಸರಕಾರದಿಂದ ರೈತರ ಬ್ಯಾಂಕ್ ಖಾತೆಗಳಿಗೆ ಜಮೆ ಆಗಿದ್ದ ಬರ ಪರಿಹಾರ ಹಣವನ್ನು ಸಾಲಕ್ಕೆ ಜಮೆ ಮಾಡಿಕೊಳ್ಳುತ್ತಿರುವ ಬ್ಯಾಂಕ್ ಗಳ ವರ್ತನೆ ನಿಜಕ್ಕೂ ಕ್ರೂರಾತಿ ಕ್ರೂರ, ಖಂಡನೀಯ. ಮೊದಲೇ ತೀವ್ರ ಬರ, ಬೆಳೆನಾಶದಿಂದ ಕಂಗೆಟ್ಟಿರುವ ರೈತರ ಕಣ್ಣಲ್ಲಿ ರಕ್ತ ಕಣ್ಣೀರು ತರಿಸುವ ಅಮಾನವೀಯ ಕ್ರಮ ಇದು ಎಂದರೆ ತಪ್ಪಲ್ಲ ಎಂದು ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದಾರೆ.

**ಕುಮಾರಸ್ವಾಮಿ ಎಕ್ಸ್ ಸಂದೇಶ:** ರಾಜ್ಯ ಸರಕಾರ ಕೂಡಲೇ ಸಾಲ ನೀಡಿರುವ ಎಲ್ಲಾ ಬ್ಯಾಂಕ್ ಗಳ ಮುಖ್ಯಸ್ಥರ ಸಭೆ ಕರೆದು, ಈ ಬಗ್ಗೆ ಗಂಭೀರವಾಗಿ ಚರ್ಚೆ ನಡೆಸಬೇಕು. ಬರ ಪರಿಹಾರ ಮೊತ್ತವನ್ನು ಸಾಲಕ್ಕೆ ಜಮೆ ಮಾಡಬಾರದು ಎಂದು ತಾಕೀತು ಮಾಡಬೇಕು ಎನ್ನುವುದು ನನ್ನ ಆಗ್ರಹ ಎಂದು ಅವರು ಉಲ್ಲೇಖಿಸಿದ್ದಾರೆ.

ಪುಟ 2

# ಪ್ರಜ್ವಲ್ ರೇವಣ್ಣ ಕಣ್ಣಾಮುಚ್ಚಾಲೆ ಆಟ



**ಬೆಂಗಳೂರು:** ಕಳೆದ 20 ದಿನದಿಂದ ಕಣ್ಣಾಮುಚ್ಚಾಲೆ ಆಟ ಆಡುತ್ತಿರುವ ಪ್ರಜ್ವಲ್ ರೇವಣ್ಣ ತಮ್ಮ ಆಟವನ್ನು ಮುಂದುವರಿಸಿದ್ದು, ಬೆಂಗಳೂರು ವಿಮಾನ ನಿಲ್ದಾಣದಿಂದ ವಿಶೇಷ ತನಿಖಾ ತಂಡದ ಪೊಲೀಸರು ಬರಿಗೈಯಲ್ಲಿ ವಾಪಸ್ ಆಗಿದ್ದಾರೆ.

ಜರ್ಮನಿಯ ಮ್ಯೂನಿಕ್‌ನಿಂದ ರಿಟರ್ನ್ ಟಿಕೆಟ್ ಬುಕ್ಕಿಂಗ್ ಮಾಡಿದ್ದ ಪ್ರಜ್ವಲ್ ಮಧ್ಯರಾತ್ರಿ ಬರುವ ನಿರೀಕ್ಷೆಗಳು ಇತ್ತು. ಎಸ್‌ಐಟಿ ಪೊಲೀಸರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಿಡುಬಿಟ್ಟಿದ್ದರು. ಆದರೆ ಆ ಎಲ್ಲಾ ನಿರೀಕ್ಷೆಗಳು ಹುಸಿಯಾಗಿದೆ.

ಮಧ್ಯರಾತ್ರಿ 12:30ಕ್ಕೆ ಬಂದ ಲುಫ್ತಾನ್ಸಾ ಏರ್‌ಲೈನ್ಸ್‌ನಲ್ಲಿ ಬರುವ ಸಾಧ್ಯತೆ ಇದ್ದ ಕಾರಣ ಪೊಲೀಸರು ಕಾದಿದ್ದರು. ನಂತರ ಬ್ರಿಟೀಷ್ ಏರ್‌ಲೈನ್ಸ್‌ನಲ್ಲಿ ಬರುವ ಮಾಹಿತಿ ತಿಳಿದು ಮಂಜಾನೆ 5 ಗಂಟೆಯ ವರೆಗೆ ಕಾದಿದ್ದರು.

ಪುಟ 2

## ಬಿಹಾರದ ಮದರಸಾದಲ್ಲಿ ಬಾಂಬ್ ಸ್ಫೋಟ

# ಇಬ್ಬರಿಗೆ ಗಾಯ



**ಬಿಹಾರ:** ಬಿಹಾರದ ಮದರಸಾದಲ್ಲಿ ಬಾಂಬ್ ಸ್ಫೋಟಗೊಂಡು ಮೌಲ್ವಿ ಸೇರಿ ಇಬ್ಬರು ಗಾಯಗೊಂಡಿರುವ ಘಟನೆ ಬಿಹಾರದಲ್ಲಿ ನಡೆದಿದೆ. ಬಿಹಾರದ ಛಾಪ್ರಾ ಜಿಲ್ಲೆಯ ಗರ್ಖಾದ ಮೋತಿರಾಜ್‌ಪುರದ ಮದರಸಾ ಬಳಿ ಬಾಂಬ್ ತಯಾರಿಸುವ ವೇಳೆ ಸ್ಫೋಟ ಸಂಭವಿಸಿ ಇಬ್ಬರು ಗಾಯಗೊಂಡಿದ್ದಾರೆ. ಗಾಯಗೊಂಡವರಲ್ಲಿ ಮಸೀದಿಯ ಮೌಲ್ವಿ ಇಮಾಮುದ್ದೀನ್ ಕೂಡ ಸೇರಿದ್ದಾರೆ.

ಮದರಸಾದೊಳಗೆ ಬಿದ್ದಿದ್ದ ಬಾಂಬ್ ಅನ್ನು ಅಲ್ಲಿದ್ದ ವಿದ್ಯಾರ್ಥಿಯೊಬ್ಬ ಚೆಂಡು ಎಂದು ತಿಳಿದು ಎಸೆದಿದ್ದಾನೆ. ಘಟನೆಯಲ್ಲಿ ಮೌಲ್ವಿ ಹಾಗೂ ವಿದ್ಯಾರ್ಥಿಗೆ ಗಂಭೀರ ಗಾಯಗಳಾಗಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಬಾಂಬ್ ತಯಾರಿಸುವಾಗ ಸ್ಫೋಟ ಸಂಭವಿಸಿದ್ದು, ಇಮಾಮುದ್ದೀನ್ ಮತ್ತು ವಿದ್ಯಾರ್ಥಿಯೊಬ್ಬ ಗಾಯಗೊಂಡಿರುವ ಶಂಕೆ ವ್ಯಕ್ತವಾಗಿದೆ.

ಘಟನೆ ಬಗ್ಗೆ ಮಾಹಿತಿ ಲಭಿಸಿದ ತಕ್ಷಣ ಹೆಚ್ಚುವರಿ ಎಸ್ಪಿ ರಾಜ್ ಕಿಶೋರ್ ಸಿಂಗ್ ಸ್ಥಳಕ್ಕೆ ಧಾವಿಸಿ ತನಿಖೆ ಆರಂಭಿಸಿದ್ದಾರೆ. ಫೋರೆನ್ಸಿಕ್ ತಂಡವನ್ನು ಸ್ಥಳಕ್ಕೆ ಕರೆಸಲಾಗಿದೆ ಎಂದು ರಾಜಕಿಶೋರ್ ಸಿಂಗ್ ಹೇಳಿದ್ದಾರೆ. ಘಟನೆಯ ನಂತರ ಆ ಪ್ರದೇಶದಲ್ಲಿ ನೀರವ ಮೌನ ಆವರಿಸಿತ್ತು. ಮೊದಲು ಎಲ್ಲರೂ ಸಿಲಿಂಡರ್ ಸ್ಫೋಟ ಎಂದು ಹೇಳಲು ಶುರು ಮಾಡಿದ್ದರು. ಆದರೆ, ಪೊಲೀಸರ ಪ್ರಾಥಮಿಕ ತನಿಖೆಯಲ್ಲಿ ಇಲ್ಲಿ ಬಾಂಬ್ ಸ್ಫೋಟ ನಡೆದಿರುವುದು ಬೆಳಕಿಗೆ ಬಂದಿದ್ದು, ಬಳಿಕ ವಿಧಿವಿಜ್ಞಾನ ತಂಡವನ್ನು ಕರೆಸಲಾಗಿದೆ. ಗಾರ್ಖಾದ ಮೋತಿ ರಾಜ್‌ಪುರ ಪ್ರದೇಶವು ಈಗಾಗಲೇ ಪಟಾಕಿ ತಯಾರಿಕೆಯ ವಿಷಯಕ್ಕೆ ಕುಖ್ಯಾತಿ ಪಡೆದಿದೆ.

ಪುಟ 2

# ಸ್ಲೋವಾಕಿಯಾ ಪ್ರಧಾನಿ ರಾಬರ್ಟ್ ಹತ್ಯೆಗೆ ಯತ್ನ



**ಸ್ಲೋವಾಕಿಯಾ:** ಸ್ಲೋವಾಕಿಯಾ ಪ್ರಧಾನಿ ರಾಬರ್ಟ್ ಫಿಕೊ ಮೇಲೆ ದುಷ್ಕರ್ಮಿಗಳು ಗುಂಡಿನ ದಾಳಿ ನಡೆಸಿದ್ದಾರೆ. ತಕ್ಷಣವೇ ಬಾಡಿಗಾರ್ಡ್ಸ್ ಕಾರ್ಯಪ್ರವೃತ್ತರಾಗಿ ಹೇಗೆ ಪ್ರಾಣ ಉಳಿಸಿದರು ಎನ್ನುವ ವಿಡಿಯೋ ಇದೀಗ ಎಲ್ಲೆಡೆ ವೈರಲ್ ಆಗುತ್ತಿದೆ. ಹ್ಯಾಂಡ್ಲೋವಾದಲ್ಲಿ ನಡೆದ ಗುಂಡಿನ ದಾಳಿಯಲ್ಲಿ ಗಾಯಗೊಂಡ ಫಿಕೊ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಹಂಡ್ಲೋವಾದಲ್ಲಿ ನಡೆದ ಸರ್ಕಾರಿ ಸಭೆಯ ನಂತರ ಈ ಘಟನೆ ನಡೆದಿದೆ.

ಸ್ಲೋವಾಕಿಯಾದ ಟ್ರೆನ್ಸಿನ್ ಪ್ರದೇಶದ ಗಣಿಗಾರಿಕೆ ಪಟ್ಟಣವಾಗಿದೆ, ಅಲ್ಲಿ ಸರ್ಕಾರಿ ಸಭೆ ನಡೆದ ಸಾಂಸ್ಕೃತಿಕ ಭವನದ ಹೊರಗೆ ಪಿಎಂ ಫಿಕೊ ಮೇಲೆ ಶೂಟರ್ ಗುಂಡು ಹಾರಿಸಿದ್ದಾನೆ. ಘಟನೆ ವೇಳೆ ಅಲ್ಲೇ ಇದ್ದ ಪೊಲೀಸರು ಕೂಡಲೇ ಕೃತ್ಯವೆಸಗಿದ ವ್ಯಕ್ತಿಯನ್ನು ವಶಕ್ಕೆ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಕಳೆದ ಸೆಪ್ಟೆಂಬರ್ ನಲ್ಲಿ ನಡೆದ ಚುನಾವಣೆಯಲ್ಲಿ ಫಿಕೊ ಅಧಿಕಾರಕ್ಕೇರಿದ್ದರು.

ನಾಲ್ಕು ಗುಂಡುಗಳು ಫಿಕೊ ಹೊಟ್ಟೆಗೆ ತಗುಲಿದೆ. ಫಿಕೊ ಅವರನ್ನು ಹ್ಯಾಂಡ್ಲೋವಾ ಪಟ್ಟಣದ ಆಸ್ಪತ್ರೆಗೆ ಕರೆದೊಯ್ಯುವಾಗ ಪ್ರಜ್ಞೆ ಇತ್ತು ಮತ್ತು ಬುಲೆಟ್ ಗಾಯಗಳಿಗೆ ಚಿಕಿತ್ಸೆ ನೀಡಲಾಯಿತು.

ಪುಟ 2

## ಇಸ್ರೇಲ್ ದೂತಾವಾಸ ಕಚೇರಿ ಸ್ಫೋಟಕ್ಕೆ ಸಂಚು: ಸಂಚುಕೋರ ನೂರುದ್ದೀನ್

# ಬಂಧನ



**ಬೆಂಗಳೂರು:** ಕರ್ನಾಟಕ ರಾಜಧಾನಿ ಬೆಂಗಳೂರಿನಲ್ಲಿರುವ ಇಸ್ರೇಲ್ ದೂತಾವಾಸ ಕಚೇರಿ ಸ್ಫೋಟಕ್ಕೆ ಮತ್ತು ದೇಶದ ವಿವಿಧ ನಗರಗಳಲ್ಲಿರುವ ವಿದೇಶಗಳ ರಾಯಭಾರ ಕಚೇರಿಗಳಲ್ಲಿ ಸ್ಫೋಟಕ್ಕೆ ಸಂಚು ಹೂಡಿದ್ದ ಪ್ರಮುಖ ಆರೋಪಿ ನೂರುದ್ದೀನ್ ಅಲಿಯಾಸ್ ರಫಿಯನ್ನು ರಾಷ್ಟ್ರೀಯ ತನಿಖಾ ದಳದಅಧಿಕಾರಿಗಳು ಮೈಸೂರಿನಲ್ಲಿ ಬಂಧಿಸಿದ್ದಾರೆ. ಸ್ಫೋಟಕ್ಕೆ ಸಂಚು ಹೂಡಿದ್ದ ಆರೋಪದಲ್ಲಿ ಬಂಧಕ್ಕೊಳಗಾಗಿ ನಂತರ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದ ನೂರುದ್ದೀನ್ ಬಳಿಕ ನಾಪತ್ತೆಯಾಗಿದ್ದ.

ವಿಚಾರಣೆಗೂ ಹಾಜರಾಗದೆ ನಾಪತ್ತೆಯಾದ ಕಾರಣ ಆತನನ್ನು ಚೆನ್ನೈನ ನ್ಯಾಯಾಲಯ ಘೋಷಿತ ಅಪರಾಧಿ ಎಂದು ಪ್ರಕಟಿಸಿತ್ತು.

ಪುಟ 2

## ಇಂದೋರ್-ಅಹಮದಾಬಾದ್ ರಾಷ್ಟ್ರೀಯ ಹೆದ್ದಾರಿಯಲ್ಲಿ ನಿಂತಿದ್ದ ಟ್ರಕ್ ಗೆ ಕಾರು ಡಿಕ್ಕಿ

# 8 ಮಂದಿ ಸಾವು



**ಮಧ್ಯಪ್ರದೇಶ:** ಇಂದೋರ್-ಅಹಮದಾಬಾದ್ ರಾಷ್ಟ್ರೀಯ ಹೆದ್ದಾರಿಯಲ್ಲಿ ನಿಂತಿದ್ದ ಟ್ರಕ್ ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ 8 ಮಂದಿ ಸಾವನ್ನಪ್ಪಿದ್ದು, ಓರ್ವ ಗಾಯಗೊಂಡಿದ್ದಾರೆ. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ (ಎಎಸ್ಪಿ) ರೂಪೇಶ್ ಕುಮಾರ್ ದ್ವಿವೇದಿ ಮಾತನಾಡಿ, ಇಂದೋರ್ -ಅಹಮದಾಬಾದ್ ರಾಷ್ಟ್ರೀಯ ಹೆದ್ದಾರಿಯ ಘಾಟಬಿಲ್ಲೋಡ್ ಬಳಿ ಈ ಘಟನೆ ಸಂಭವಿಸಿದೆ ಎಂದು ಹೇಳಿದ್ದಾರೆ. ಮಾಹಿತಿಯ ಪ್ರಕಾರ, ರಾತ್ರಿ 10.30 ರ ಸುಮಾರಿಗೆ ಬೊಲೆರೋ ನಿಂತಿದ್ದ ಟ್ರಕ್ ಗೆ ಡಿಕ್ಕಿ ಹೊಡೆದು ಅಪಘಾತ ಸಂಭವಿಸಿದೆ.

ಅಪಘಾತದ ನಂತರ ಅಕ್ಕಪಕ್ಕದ ಜನರು ರಕ್ಷಣಾ ಕಾರ್ಯಾಚರಣೆ ನಡೆಸಿದರು. ಮಾಹಿತಿ ಪಡೆದ ಪೊಲೀಸರು ಮತ್ತು ಆಡಳಿತ ತಂಡಗಳು ಮತ್ತು ಆಂಬ್ಯುಲೆನ್ಸ್ ಕೂಡ ಸ್ಥಳಕ್ಕೆ ತಲುಪಿತು. ಎಂಟು ಜನರು ಸಾವನ್ನಪ್ಪಿದ್ದಾರೆ ಎಂದು ದೃಢಪಡಿಸಲಾಗಿದೆ, ಮತ್ತೊಬ್ಬ ವ್ಯಕ್ತಿ ಗಾಯಗೊಂಡಿದ್ದಾರೆ. ಅಪರಿಚಿತ ವಾಹನದ ಚಾಲಕ ಅಪಘಾತದ ನಂತರ ಪರಾರಿಯಾಗಿದ್ದಾನೆ. ಗಾಯಗೊಂಡ ವ್ಯಕ್ತಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಎಎಸ್ಪಿ ತಿಳಿಸಿದ್ದಾರೆ. ಘಟನೆಯ ಕುರಿತು ಹೆಚ್ಚಿನ ವಿವರಗಳನ್ನು ನಿರೀಕ್ಷಿಸಲಾಗುತ್ತಿದೆ.

ಪುಟ 2

## ಮುಂಡ್ರೋಡು ಮೀಸಲು ಅರಣ್ಯದಲ್ಲಿ ಸಾವಿರಾರು ಮರ ಕಡಿದ ಆರೋಪ

# ತನಿಖೆಗೆ ಆದೇಶಿಸಿದ ಸಚಿವ ಖಂಡ್ರೆ





**ಮಡಿಕೇರಿ:** ತಲಕಾವೇರಿ ಅಭಯಾರಣ್ಯದ ವಿರಾಜಪೇಟೆ ವಲಯದ ಮುಂಡ್ರೋಡು ಮೀಸಲು ಅರಣ್ಯದಲ್ಲಿ ಅಕ್ರಮವಾಗಿ ಸಾವಿರಾರು ಮರಗಳನ್ನು ಕಡಿಯಲಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿ ಅರಣ್ಯ ಸಚಿವ ಈಶ್ವರ್ ಬಿ ಖಂಡ್ರೆ ತನಿಖೆಗೆ ಆದೇಶಿಸಿದ್ದಾರೆ. ಕೊಡಗು ಜಿಲ್ಲೆಯ ಅರಣ್ಯ ಅಧಿಕಾರಿಗಳು ಮರ ಕಡಿದ ವಿಷಯದಲ್ಲಿ ನಿರ್ಲಕ್ಷ್ಯ ತೋರುತ್ತಿದ್ದಾರೆ ಎಂದು ಹೋರಾಟಗಾರರು ಆರೋಪಿಸಿದ್ದರು.

ಮರಹನನ ಕುರಿತು ಸಚಿವರ ಕಾರ್ಯಾಲಯಕ್ಕೆ ಮಾಹಿತಿ ನೀಡದೆ ನಿರ್ಲಕ್ಷ್ಯ ವಹಿಸಿದ ಅಧಿಕಾರಿಗಳ ವಿರುದ್ಧ ಈಶ್ವರ್ ಖಂಡ್ರೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕರ್ತವ್ಯ ಲೋಪ ಎಸಗಿದ ಅಧಿಕಾರಿಗಳ ವಿರುದ್ಧ ತನಿಖೆಗೆ ಸೂಚನೆ ನೀಡಿದ ಅವರು, ಎಪಿಸಿಸಿಎಫ್ ದರ್ಜೆಯ ಅಧಿಕಾರಿಯನ್ನು ಸ್ಥಳಕ್ಕೆ ಕಳುಹಿಸಿ ವರದಿ ನೀಡುವಂತೆ ಸೂಚನೆ ನೀಡಿದ್ದಾರೆ. ಜತೆಗೆ, ಮರ ಕಡಿದ ಆರೋಪಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆಗೆ ಆದೇಶ ನೀಡಿದ್ದಾರೆ.

239 ಮರಗಳನ್ನು ಕಡಿದ ವಿಚಾರವಾಗಿ ಏಪ್ರಿಲ್ 30 ರಂದು ಮೂವರ ವಿರುದ್ಧ ಮುಂಡ್ರೋಟು ರೇಂಜ್ ಫಾರೆಸ್ಟ್ ಆಫೀಸರ್ ಪ್ರಕರಣ ದಾಖಲಿಸಿದ್ದರು. ಆದರೆ, ಕೊಡಗು ಏಕೀಕರಣ ರಂಗದ ಕಾರ್ಯಕರ್ತರು ಘಟನಾ ಸ್ಥಳಕ್ಕೆ ಭೇಟಿ ನೀಡಿ, ಈ ಪ್ರದೇಶದಲ್ಲಿ ಸಾವಿರಾರು ಮರಗಳನ್ನು ಕಡಿಯಲಾಗಿದೆ ಎಂದು ಆರೋಪಿಸಿದ್ದರು.

**ಅಧಿಕಾರಿಗಳಿಗೆ ಖಂಡ್ರೆ ಸೂಚನೆ ಏನೇನು:** ಮರ ಕಡಿದ ವಿಚಾರವಾಗಿ ಸಮಗ್ರ ಪರಿಶೀಲನೆಗಾಗಿ ಹೆಚ್ಚುವರಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯನ್ನು ತಕ್ಷಣವೇ ನಿಯೋಜಿಸಬೇಕು ಮತ್ತು ಮೂರು ದಿನಗಳಲ್ಲಿ ಜಿಪಿಎಸ್ ಟ್ಯಾಗ್ ಮಾಡಿದ ವೀಡಿಯೊಗಳನ್ನು ಒಳಗೊಂಡಂತೆ ವಾಸ್ತವ ವರದಿಯನ್ನು ಸಲ್ಲಿಸಬೇಕು. ನಿರ್ಲಕ್ಷ್ಯ ತೋರಿದ ಅರಣ್ಯ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಸಚಿವರು ಸೂಚನೆ ನೀಡಿದ್ದಾರೆ.

ಪುಟ 2

## ಮೈಸೂರು ಸರ್ಕಾರಿ ಆಸ್ಪತ್ರೆಯಲ್ಲಿ ನೀರು, ವಿದ್ಯುತ್ ಸಮಸ್ಯೆ

# ಚಿಕಿತ್ಸೆ ಸಿಗದೆ ರೋಗಿಗಳ ಪರದಾಟ



**ಮೈಸೂರು:** ಕರ್ನಾಟಕದ ಗ್ರಾಮೀಣ ಭಾಗ ಮತ್ತು ದೂರದ ಊರುಗಳಲ್ಲಿ ಗುಣಮಟ್ಟದ ಆರೋಗ್ಯ ಸೇವೆಯನ್ನು ನೀಡಲು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಮಾಡುತ್ತಿರುವ ಪ್ರಯತ್ನಗಳ ಬಗ್ಗೆ ಹೆಮ್ಮೆಯಿಂದ ಹೇಳಿಕೊಳ್ಳುತ್ತಿವೆ, ಆದರೆ ಇಲ್ಲಿಯ ವಾಸ್ತವವೇ ಬೇರೆ ಇದೆ. ಬಡವರ ಆರೋಗ್ಯ ಸೇವೆಗಾಗಿ ಶ್ರಮಿಸುತ್ತಿದ್ದೇವೆ. ಆರೋಗ್ಯ ಕ್ಷೇತ್ರದಲ್ಲಿ ನಾವು ಬಹಳಷ್ಟು ಅಭಿವೃದ್ಧಿ ಮಾಡಿದ್ದೇವೆ ಎಂದು ಹೇಳುವ ರಾಜಕಾರಣಿಗಳು ಒಮ್ಮೆ ಹೆಚ್‌ಡಿ ಕೋಟೆ ತಾಲೂಕಿನ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿದ್ದರು.

ಈ ಭಾಗದಲ್ಲಿ ಹೆಚ್ಚಾಗಿರುವ ಬುಡಕಟ್ಟು ಜನರಿಗೆ ಸೇವೆ ಸಲ್ಲಿಸುತ್ತಿರುವ ಹೆಚ್‌ಡಿ ಕೋಟೆ ತಾಲೂಕಿನ ಸರ್ಕಾರಿ ಆಸ್ಪತ್ರೆಯಲ್ಲಿ ವಿದ್ಯುತ್ ಮತ್ತು ನೀರಿನ ನಿರಂತರ ಕೊರತೆಯಿಂದಾಗಿ ರೋಗಿಗಳು ತೀವ್ರ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ನೀರಿಲ್ಲದೆ ಪರದಾಡುತ್ತಿರುವ ಬಗ್ಗೆ ಹೇಳಿಕೊಳ್ಳಲಾಗಿರುವ ವಿಡಿಯೋ ಈಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ರೋಗಿಗಳಿಗೆ ಬೇಕಾಗಿರುವ ಅಗತ್ಯ ಚಿಕಿತ್ಸೆಗಳನ್ನು ನೀಡಲು ಸೌಲಭ್ಯದ ಕೊರತೆಯಿಂದಾಗಿ ಕಳೆದ ಎರಡು ದಿನದಿಂದ ಕನಿಷ್ಠ 5 ರಿಂದ 10 ಡಯಾಲಿಸಿಸ್ ರೋಗಿಗಳಿಗೆ ಆಸ್ಪತ್ರೆಯ ಸಿಬ್ಬಂದಿ ಚಿಕಿತ್ಸೆ ನೀಡಲಾಗಿಲ್ಲ. ತೀವ್ರ ಮೂತ್ರಪಿಂಡದ ಸಮಸ್ಯೆಗಳಿರುವ ವ್ಯಕ್ತಿಗಳಿಗೆ ಡಯಾಲಿಸಿಸ್ ಮಾಡುವುದು ಅತ್ಯವಶ್ಯಕ. ಆದರೆ ಆಸ್ಪತ್ರೆಯಲ್ಲಿ ವಿದ್ಯುತ್ ಮತ್ತು ನೀರಿನ ಸಮಸ್ಯೆಯಿಂದಾಗಿ ರೋಗಿಗಳಿಗೆ ಚಿಕಿತ್ಸೆ ಸಹ ಕಷ್ಟಕರವಾಗಿದೆ. ಈ ಆಸ್ಪತ್ರೆಯಲ್ಲಿ ಅತಿ ಮುಖ್ಯವಾದ ನೀರು, ವಿದ್ಯುತ್ ಇಲ್ಲದೆ ಅನೇಕರ ರೋಗಿಗಳ ಜೀವಕ್ಕೆ ಅಪಾಯವಿದೆ ಎಂಬಂತಾಗಿದೆ.

ಆಸ್ಪತ್ರೆಗೆ ಬಂದ ರೋಗಿಗಳು ಸರಿಯಾದ ಚಿಕಿತ್ಸೆ ಸಿಗದೆ ಸರ್ಕಾರದ ವಿರುದ್ಧ ಆಕ್ರೋಶ ಹೊರ ಹಾಕಿದ್ದಾರೆ. ಆಸ್ಪತ್ರೆಗೆ ಸೇರಿದ ನಂತರವೂ ಚಿಕಿತ್ಸೆ ಸಿಗದೆ ಉಸಿರಾಟದ ಸಮಸ್ಯೆ ಎದುರಿಸುತ್ತಿದ್ದ ರೋಗಿಗಳು ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿ ಬೇರೆಡೆ ತೆರಳಿದ್ದಾರೆ. ಡಯಾಲಿಸಿಸ್ ಮಿಸ್ ಆದ ರೋಗಿಗಳು ಮತ್ತಷ್ಟು ಆರೋಗ್ಯ ಸಮಸ್ಯೆಗಳನ್ನು ಎದುರಿಸುವಂತಾಗಿದೆ. ಈ ಸರ್ಕಾರಿ ಆಸ್ಪತ್ರೆಯಲ್ಲಿನ ಕಳಪೆ ಸೇವೆ ಮತ್ತು ಸಂಪನ್ಮೂಲಗಳ ಕೊರತೆಯ ವಿರುದ್ಧ ರೋಗಿಗಳು ತಮ್ಮ ಹತಾಶೆ ಮತ್ತು ಭಯವನ್ನು ವ್ಯಕ್ತಪಡಿಸಿದ್ದಾರೆ. ಬಡ ರೋಗಿಗಳಿಗೆ ಸರ್ಕಾರಿ ಆಸ್ಪತ್ರೆ ಇದ್ದರೂ ಇಲ್ಲದಂತಾಗಿದೆ.

ಪುಟ 2

## ತಿಮಿಂಗಿಲದ ಬಗ್ಗೆ ಹೆಚ್‌ಡಿಕೆ ಮಾಹಿತಿ ಕೊಡಲಿ: ಪರಮೇಶ್ವರ್

**ಬೆಂಗಳೂರು:** ಪೆನ್ ಡ್ರೈವ್ ಹಂಚಿದ ತಿಮಿಂಗಿಲ ಯಾರು ಅಂತ ಮಾಜಿ ಮುಖ್ಯಮಂತ್ರಿ, ಕುಮಾರಸ್ವಾಮಿ ಅವರಿಗೆ ಗೊತ್ತಿದ್ದರೆ ಮಾಹಿತಿ ಕೊಡಲಿ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ತಿಮಿಂಗಿಲ ಯಾರು ಅಂತ ಗೊತ್ತಿದ್ದರೆ ಹೇಳಬಹುದಲ್ವ. ಕುಮಾರಸ್ವಾಮಿ ತಿಮಿಂಗಿಲ ಯಾರೂ ಅಂತ ಹೇಳಿದರೆ ಮುಗಿದು ಹೋಗುತ್ತದೆ. ತಿಮಿಂಗಿಲ ಯಾರೂ ಅಂತ ಕುಮಾರಸ್ವಾಮಿ ಗೆ ಗೊತ್ತಿದೆ ಹಾಗಾದರೆ ಅದನ್ನು ಹೇಳದೇ ಇರೋದೇ ದೊಡ್ಡ ತಪ್ಪಲ್ವಾ?. ತಿಮಿಂಗಿಲ ಯಾರೂ ಅಂತ ಕುಮಾರಸ್ವಾಮಿ ಹೇಳಿಬಿಡಲಿ. ಅಲ್ಲಿಗೆ ಎಲ್ಲವೂ ಮುಗಿದು ಹೋಗುತ್ತದೆ ಎಂದು ತಿಳಿಸಿದರು. ಪ್ರಜ್ವಲ್ ಎಲ್ಲಿದ್ದಾನೆ ಎಂಬುದು ಎಸ್‌ಐಟಿಗೆ ಗೊತ್ತಿದೆ. ನಿಮಗೇನಾದರೂ ಮಾಹಿತಿ ಇದೆಯಾ ನಿಮಗೆ? ಪ್ರಜ್ವಲ್ ಎಲ್ಲಿದ್ದಾನೆ ಅಂತ ನಿಮಗೇನಾದರೂ ಗೊತ್ತಿದೆಯಾ?. ಗೊತ್ತಿದ್ದರೆ ಹೇಳಿ ನೀವೇ, ನಮಗೂ ಸಹಾಯ ಆಗುತ್ತದೆ. ಸಿಎಂ ಜೊತೆಗೆ ಸಭೆ ಬಗ್ಗೆ ನಿಮಗೆ ಹೇಳುವ ವಿಚಾರ ಏನೂ ಇಲ್ಲ. ಸಿಎಂ ಕಡೆಯಿಂದ ಕೆಲ ಸೂಚನೆಗಳು ಇದ್ದಾವೆ. ಆದರೆ ನಿಮಗೆ ಹೇಳಲ್ಲ. ಜಾರಕಿಹೊಳಿ ಅವರ ಮನೆಗೆ ಹೋಗಿದ್ದೆ.ಅವರ ಮಗಳು ಚುನಾವಣೆಗೆ ನಿಂತಿದ್ರು. ಅದರ ಬಗ್ಗೆ ಹೋಗಿ ಚರ್ಚೆ ಮಾಡಿದ್ದೆ. ಸಮುದಾಯವಾರು ಡಿಸಿಎಂ ಬಗ್ಗೆ ಚರ್ಚೆ ಮಾಡಿಲ್ಲ. ಭ್ರಷ್ಟಾಚಾರದ ಪೆನ್ ಡ್ರೈವ್ ಇದೆ. ತನಿಖೆ ಮಾಡಿಸುವುದಾದರೆ ಕೊಡ್ತೀನಿ ಎಂದು ದಿನಾ ಹೇಳುತ್ತಿರುತ್ತಾರೆ. ಮೊದಲು ಕೊಡಲಿ. ಕೊಡುವುದಕ್ಕೂ ಮೊದಲು ಹೇಳಿದ್ರೆ, ಹೆಂಗೆ ಎಂದು ಹೇಳಿದರು.

## ಕಾಲೇಜಿನ ಐದನೇ ಮಹಡಿಯಿಂದ ಜಿಗಿದು ವಿದ್ಯಾರ್ಥಿ ಆತ್ಮಹತ್ಯೆ

**ಬೆಂಗಳೂರು:** ಕಾಲೇಜಿನ ಐದನೇ ಮಹಡಿಯಿಂದ ವಿದ್ಯಾರ್ಥಿಯೊಬ್ಬ ಜಿಗಿದು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿ ಸಮೀಪದ ಕಾಲೇಜಿನಲ್ಲಿ ನಡೆದಿದೆ. ಕರಸಾಲ ರಾಹುಲ್ (21) ಆತ್ಮಹತ್ಯೆ ಮಾಡಿಕೊಂಡಿರುವ ವಿದ್ಯಾರ್ಥಿ. ಈತ ಕಂಪ್ಯೂಟರ್ ಸೈನ್ಸ್ ವಿಭಾಗದ ಐದನೇ ಸೆಮಿಸ್ಟರ್‌ನಲ್ಲಿ ವ್ಯಾಸಂಗ ಮಾಡುತ್ತಿದ್ದ.



ಸೋಮವಾರ ಕಾಲೇಜಿನಲ್ಲಿ ಪರೀಕ್ಷೆ ನಡೆದಿದ್ದು, ಈ ಸಮಯದಲ್ಲಿ ಕಾಲೇಜಿಗೆ ತಡವಾಗಿ ಬಂದಿದ್ದ. ಇದೇ ವಿಚಾರವಾಗಿ ಕಾಲೇಜಿನಲ್ಲಿ ವಿದ್ಯಾರ್ಥಿಯನ್ನು ನಿಂದಿಸಿರುವ ಶಂಕೆ ವ್ಯಕ್ತವಾಗಿದೆ. ಇದರಿಂದಲೇ ಮನನೊಂದು ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂಬ ಅನುಮಾನ ವ್ಯಕ್ತವಾಗಿದೆ. ರಾಹುಲ್ ಮೂಲತಃ ಆಂಧ್ರಪ್ರದೇಶ ಕರ್ನೂಲ್ ಮೂಲದ ದಂಪತಿಗಳ ಕುಟುಂಬದಿಂದ ಬಂದಿದ್ದು, ಕೆಲ ವರ್ಷಗಳಿಂದ ವಿದ್ಯಾಭ್ಯಾಸಕ್ಕಾಗಿ ಕಾಲೇಜು ಹಾಸ್ಟೆಲ್‌ನಲ್ಲಿ ಇದ್ದ ಎನ್ನಲಾಗುತ್ತಿದೆ. ಸದ್ಯ ಪರಪ್ಪನ ಅಗ್ರಹಾರ ಪೊಲೀಸರು ಪ್ರಕರಣ ದಾಖಲಿಸಿ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಿದ್ದಾರೆ. ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪೊಲೀಸರು ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.

# ಅಂಜಲಿ ಹತ್ಯೆ ಪ್ರಕರಣದಲ್ಲಿ ಪೊಲೀಸರಿಗೆ ತಲೆದಂಡ

**ಹುಬ್ಬಳ್ಳಿ:** ಇಲ್ಲಿನ ವೀರಾಪುರ ಓಣಿಯ ಅಂಜಲಿ ಯುವತಿಯ ಹತ್ಯೆ ಪ್ರಕರಣದಲ್ಲಿ ಪೊಲೀಸರಿಗೆ ತಲೆದಂಡವಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಡಿಗೇರಿ ಪೊಲೀಸ್ ಇನ್ಸ್‌ಪೆಕ್ಟರ್ ಚಂದ್ರಶೇಖರ ಚಿಕ್ಕೋಡಿ ಹಾಗೂ ಠಾಣೆಯ ಮುಖ್ಯಪೇದೆ ರೇಖಾ ಅವರನ್ನ ಅಮಾನತುಗೊಳಿಸಿ ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ್ ಅವರು ಆದೇಶ ಹೊರಡಿಸಿದ್ದಾರೆ.





ಮೃತ ಯುವತಿ ಅಂಜಲಿ ಹತ್ಯೆಗೂ ಮುನ್ನ ಆರೋಪಿ ವಿಶ್ವನಿಂದ ಜೀವ ಬೆದರಿಕೆ ಇರುವುದಾಗಿ ಅಂಜಲಿ ಕುಟುಂಬಸ್ಥರು ಪೊಲೀಸರಿಗೆ ದೂರು ನೀಡಿದ್ದರು. ಆದ್ರೆ ಪೊಲೀಸರು ನಿರ್ಲಕ್ಷ್ಯ ವಹಿಸಿದ್ದರಿಂದ ಹತ್ಯೆ ನಡೆದಿದೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ. ಅಲ್ಲದೇ ಅಂಜಲಿ ಕುಟುಂಬಸ್ಥರು ಠಾಣೆಗೆ ಬಂದು ಹೋಗಿರುವುದಕ್ಕೆ ಠಾಣೆಯ ಸಿಸಿಟಿವಿಯಲ್ಲಿ ಸೆರೆಯಾಗಿರುವ ದೃಶ್ಯಗಳೂ ಇವೆ. ಹಾಗಾಗಿ ಇಬ್ಬರು ಅಧಿಕಾರಿಗಳನ್ನ ಸಮಾನತು ಮಾಡಲಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

**ಏನಿದು ಹತ್ಯೆ ಕೇಸ್?:** ನೇಹಾ ಪ್ರಕರಣ ಮಾಸುವ ಮುನ್ನವೇ ಹುಬ್ಬಳ್ಳಿಯಲ್ಲಿ ಮತ್ತೊಂದು ಕೊಲೆ ನಡೆದಿದೆ. ವೀರಾಪುರ ಓಣಿಯ 21 ವರ್ಷ ಅಂಜಲಿ ಎಂಬ ಯುವತಿ ಅಂಜಲಿ ಎಂಬಾಕೆಯನ್ನು ವಿಶ್ವ ಅಲಿಯಾಸ್ ಗಿರೀಶ್ ಎಂಬ ಯುವಕ ಭೀಕರವಾಗಿ ಹತ್ಯೆ ಮಾಡಿದ್ದಾನೆ. ಬೆಳಗಿನ ಜಾವ ಅಂಜಲಿ ಬಾಗಿಲು ತೆಗೆಯುತ್ತಿದ್ದಂತೆಯೇ 4 ಬಾರಿ ಚಾಕು ಇರಿದು ಎಸ್ಕೇಪ್ ಆಗಿದ್ದಾನೆ. ರಕ್ತದ ಮಡುವಿನಲ್ಲಿ ಅಂಜಲಿ ನೋಡಿ ಪೋಷಕರು ಕಣ್ಣೀರು ಹಾಕಿದ್ದರು. ಬಳಿಕ ಮೃತ ಅಂಜಲಿ ಕುಟುಂಬಕ್ಕೆ 25 ಲಕ್ಷ ಪರಿಹಾರ, ಒಬ್ಬರಿಗೆ ಸರ್ಕಾರಿ ನೌಕರಿ ನೀಡಬೇಕೆಂದು ಟೆಂಗಿನಕಾಯಿ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದ್ದಾರೆ. ಇದೇ ವೇಳೆ ನೇಹಾ ತಂದೆ ನಿರಂಜನ ಹಿರೇಮಠ 1 ಲಕ್ಷ ರೂ. ಧನ ಸಹಾಯ ಮಾಡಿ, ಸಾಂತ್ವನ ಹೇಳಿದ್ದಾರೆ.

**ಪ್ರಕರಣ ವರದಿ ಕೇಳಿದ ಮಹಿಳಾ ಆಯೋಗ:** ಪ್ರಕರಣದ ಕುರಿತು ಕಮಿಷನರ್ ರೇಣುಕಾ ಮಾತಾಡಿ, ಅಂಜಲಿ ಪ್ರೀತಿ ನಿರಾಕರಿಸಿದ್ದಕ್ಕೆ ವಿಶ್ವ ಕೊಲೆ ಮಾಡಿರುವ ಶಂಕೆ ಇದೆ. 2 ವಿಶೇಷ ತಂಡ ರಚನೆ ಮಾಡಲಾಗಿದೆ. ಶಾಲಾ, ಕಾಲೇಜು, ಕಾರ್ಯಸ್ಥಳಗಳಲ್ಲಿ, ಮಹಿಳೆಯರು ಹೆಚ್ಚಾಗಿ ಸೇರುವ ಸ್ಥಳದಲ್ಲಿ ಪೊಲೀಸರು ಜಾಗೃತಿ ಮೂಡಿಸ್ತೇವೆ ಅಂದಿದ್ದಾರೆ. ಈ ಮಧ್ಯೆ, ಕೊಲೆಗಾರನ ವಿರುದ್ಧ ನಿರ್ದಾಕ್ಷಿಣ್ಯ ಕ್ರಮಕ್ಕೆ ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತರಿಗೆ ಮಹಿಳಾ ಆಯೋಗ ಪತ್ರ ಬರೆದು ಒತ್ತಾಯಿಸಿದೆ, ಜೊತೆಗೆ ಪ್ರಕಣದ ಕುರಿತು ವರದಿ ನೀಡುವಂತೆ ಪತ್ರದ ಮೂಲಕ ಕೇಳಿದೆ.

# ಪ್ರೀತಿಸಿ ಮದುವೆಯಾಗಿದ್ದ ನವಜೋಡಿ ನೇಣಿಗೆ ಶರಣು

**ವಿಜಯಪುರ:** ನಾಲ್ಕು ತಿಂಗಳ ಹಿಂದಷ್ಟೇ ಪ್ರೀತಿಸಿ ಮದುವೆಯಾಗಿದ್ದ ನವ ವಿವಾಹಿತ ಜೋಡಿ ನೇಣಿಗೆ ಶರಣಾದ ಘಟನೆ ವಿಜಯಪುರದಲ್ಲಿ ನಡೆದಿದೆ. ಮನೋಜ್ ಕುಮಾರ್ ಪೋಳ (30), ರಾಖಿ (23) ನೇಣಿಗೆ ಶರಣಾದ ದಂಪತಿ. ವಿಜಯಪುರ ನಗರದ ಹೊರ ಭಾಗದ ಶ್ರೀ ಸಿದ್ದೇಶ್ವರ ಬಡಾವಣೆಯ ಮನೆಯಲ್ಲಿ ನೇಣಿಗೆ ಶರಣಾಗಿದ್ದಾರೆ. ಕಳೆದ 4 ತಿಂಗಳ ಹಿಂದೆ ಜೋಡಿ ಪರಸ್ಪರ ಪ್ರೀತಿಸಿ ಮದುವೆಯಾಗಿದ್ದರು. ಸೋಮವಾರ ತಡರಾತ್ರಿ ಊಟ ಮಾಡಿದ ಬಳಿಕ ನವ ವಿವಾಹಿತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮನೋಜ್ ಕುಮಾರ್ ಹಾಗೂ ರಾಖಿ ಇಬ್ಬರೇ ಮನೆಯಲ್ಲಿದ್ದ ವೇಳೆ ಘಟನೆ ನಡೆದಿದೆ. ಮನೋಜ್ ಕುಮಾರ್ ತಾಯಿ ಭಾರತಿ ಮಗಳ ಊರಿಗೆ ಹೋಗಿದ್ದರು. ಇಂದು ಬೆಳಗ್ಗೆ ವಾಪಸ್ ಮನೆಗೆ ಬಂದಾಗ ಘಟನೆ ಬೆಳಕಿಗೆ ಬಂದಿದೆ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ. ಸ್ಥಳಕ್ಕೆ ಜಲನಗರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಜಲನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಪೊಲೀಸರ ತನಿಖೆ ಬಳಿಕ ಪತಿ-ಪತ್ನಿ ಆತ್ಮಹತ್ಯೆ ಮಾಡಿಕೊಂಡಿದ್ದರ ಕುರಿತ ಮಾಹಿತಿ ತಿಳಿದು ಬರಲಿದೆ.



# ಪೆನ್‌ಡ್ರೈವ್ ಪ್ರಕರಣದಲ್ಲಿ ಕಾಂಗ್ರೆಸ್ ಕೈವಾಡ

**ಬೆಂಗಳೂರು:** ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಪ್ರಕರಣದಲ್ಲಿ ಕಾಂಗ್ರೆಸ್ ಕೈವಾಡ ಇದೆ. ಇದನ್ನು ಬಿಜೆಪಿ ಮೇಲೆ ಹೊರಿಸುವ ಪ್ರಯತ್ನವನ್ನು ಕಾಂಗ್ರೆಸ್‌ನ ಹಿರಿಯ ನಾಯಕರು ಮಾಡುತ್ತಿದ್ದಾರೆ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್ ಹೇಳಿದರು.



ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಜಿ ಸಚಿವ ರೇವಣ್ಣ ಅವರನ್ನು ಕೂಡಲೇ ಬಂಧಿಸಿದ್ದರೂ, ಚಾಲಕನನ್ನು ಮಾತ್ರ ಬಂಧಿಸಿಲ್ಲ. ಎಸ್‌ಐಟಿ ಅಧಿಕಾರಿಗಳು ಪಕ್ಷಪಾತ ಧೋರಣೆಯಿಂದ ಕೆಲಸ ಮಾಡುತ್ತಿದ್ದಾರೆ. ಹೆಚ್‌ಡಿ ಕುಮಾರಸ್ವಾಮಿ ಅವರು ಹೇಳಿದಂತೆ ಇಲ್ಲಿ ತಿಮಿಂಗಿಲವೇ ಇದೆ. ಅದನ್ನು ಬಡಿದು ತಿನ್ನಬೇಕಾ ಬೇಡವಾ ಎಂದು ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡರ ಕುಟುಂಬ ತೀರ್ಮಾನಿಸಲಿದೆ. ಆದರೆ ಮಾಜಿ ಪ್ರಧಾನಿ ದೇವೇಗೌಡರ ಮೂಲಕ ಇಡೀ ಒಕ್ಕಲಿಗ ಸಮುದಾಯವನ್ನು ಅಪಮಾನಿಸಬೇಕಿತ್ತೇ ಎಂದು ಜನರು ಮಾತನಾಡುತ್ತಿದ್ದಾರೆ. ಆದ್ದರಿಂದ ಬಿಜೆಪಿಯ ಮೇಲೆ ಆರೋಪ ತರುವ ಪ್ರಯತ್ನ ನಡೆದಿದೆ ಎಂದರು.

ತನಿಖೆಯ ಪ್ರತಿ ಮಾಹಿತಿ ಮೊದಲು ಕಾಂಗ್ರೆಸ್ ನಾಯಕರಿಗೆ ತಲುಪುತ್ತಿದೆ. ಎಸ್ ಐಟಿ ಅಧಿಕಾರಿಗಳು ಕಾಂಗ್ರೆಸ್ ನಾಯಕರು ಹೇಳಿದಂತೆ ಕೇಳುತ್ತಿದ್ದಾರೆ. ಆದ್ದರಿಂದ ಈ ಪ್ರಕರಣವನ್ನು ಸಿಬಿಐಗೆ ವಹಿಸಬೇಕು. ಆ ನಂತರ ಯಾರೆಲ್ಲಾ ಬಂಧನಕ್ಕೊಳಗಾಗುತ್ತಾರೆ ಎಂದು ನೋಡಲಿ ಎಂದು ಕಿಡಿಕಾರಿದರು.

ಕಾರು ಚಾಲಕ ಎಲ್ಲೋ ನಿಂತು ಸಂದೇಶ ಕಳುಹಿಸುತ್ತಿದ್ದಾನೆ. ಶಾಸಕ ಮಂಜು ಸೇರಿದಂತೆ ಹಲವರ ಮೇಲೆ ಆರೋಪ ಮಾಡಲಾಗಿದೆ. ಕಾಂಗ್ರೆಸ್‌ನವರೇ ಚಾಲಕನನ್ನು ಎಲ್ಲೋ ಇರಿಸಿದ್ದಾರೆ. ಹಾಸನದಲ್ಲಿ ಎಲ್ಲಾ ಕಡೆ ಪೆನ್‌ಡ್ರೈವ್ ಹಂಚಲಾಗಿದೆ ಎಂದ ಮೇಲೆ ಅದು ಬಿಜೆಪಿ ಕಾರ್ಯಕರ್ತರಿಗೆ ತಲುಪಿರಬಹುದು. ಆದರೆ ಕಾಂಗ್ರೆಸ್ ಕಾರ್ಯಕರ್ತರ ಬಳಿಯೂ ವೀಡಿಯೋ ಇದೆ. ಆ ರೀತಿಯಲ್ಲಿ ನೋಡುವುದಾದರೆ ಕಾಂಗ್ರೆಸ್ ಕಾರ್ಯಕರ್ತರನ್ನು ಕೂಡ ಬಂಧಿಸಬೇಕಿತ್ತು ಎಂದು ವಾಗ್ದಾಳಿ ನಡೆಸಿದರು.

ಮಾಜಿ ಸಚಿವ ರೇವಣ್ಣ ಜೈಲಿಗೆ ಹೋದಾಗ ಕಾಂಗ್ರೆಸ್ ನಾಯಕರು ಹೆಚ್ಚು ಖುಷಿ ಪಟ್ಟಿದ್ದಾರೆ. ಇದು ವ್ಯವಸ್ಥಿತ ಸಂಚಾಗಿದ್ದು, ಎಲ್ಲರೂ ಟೀಮ್ ಮಾಡಿಕೊಂಡಿದ್ದಾರೆ. ಚುನಾವಣೆಯ ದೃಷ್ಟಿಯಿಂದ ಈ ಕೆಲಸ ಮಾಡಿದ್ದಾರೆ. ತಿಮಿಂಗಿಲ ಆಮ್ಲಜನಕಕ್ಕಾಗಿ ಹೊರಗೆ ಬರಲೇಬೇಕು. ಮುಂದೆ ಇದು ತಿಳಿದುಬರಲಿದೆ ಎಂದರು.

**ಫಲಿತಾಂಶದ ಬಳಿಕ ಗೊತ್ತಾಗಲಿದೆ:** ಕಳೆದ ಬಾರಿ ಕಾಂಗ್ರೆಸ್ ಶಾಸಕರು ಬಿಜೆಪಿಗೆ ಬಂದಾಗ ಕಾಂಗ್ರೆಸ್ ನಾಯಕರು ಏನೂ ಮಾಡಲಿಲ್ಲ, ಆಗ ಬಂದಂತೆ ಮುಂದೆಯೂ ಬಿಟ್ಟು ಬರುತ್ತಾರೆ. ಫಲಿತಾಂಶ ಬಂದ ಬಳಿಕ ಎಲ್ಲವೂ ಗೊತ್ತಾಗುತ್ತದೆ. ಭ್ರಷ್ಟ ಸರ್ಕಾರದ ಪಾಪದ ಕರ್ಮ, ರೈತರ ಆತ್ಮಹತ್ಯೆ, ಮಕ್ಕಳ ಮಾರಾಟ, ಬರಗಾಲದ ಬವಣೆ, ಮೊದಲಾದ ಕಾರಣಗಳಿಂದ ಕಾಂಗ್ರೆಸ್ ಶಾಸಕರೇ ಸರ್ಕಾರವನ್ನು ಬೀಳಿಸುತ್ತಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಗಲುಗನಸು ಕಾಣುತ್ತಿದ್ದಾರೆ. ಮಹಾರಾಷ್ಟ್ರದಲ್ಲಿ 90ಕ್ಕೂ ಅಧಿಕ ಶಾಸಕರು ಪಕ್ಷ ಬಿಟ್ಟು ಹೋಗಿದ್ದರು. ನರೇಂದ್ರ ಮೋದಿಯವರು ಮತ್ತೆ ಪ್ರಧಾನಿಯಾದ ನಂತರ ಕಾಂಗ್ರೆಸ್‌ಗೆ ಗಂಟುಮೂಟೆ ಕಟ್ಟುವುದೇ ಗತಿ ಎಂದು ಲೇವಡಿ ಮಾಡಿದರು.

# ವಿಚಾರಣೆಗೆ ಪ್ರಜ್ವಲ್ ಗೈರು: ಎಸ್‌ಐಟಿ ಮುಂದಿರುವ ಆಯ್ಕೆ ಏನು?

**ಬೆಂಗಳೂರು:** ಅತ್ಯಾಚಾರ ಪ್ರಕರಣದ ಆರೋಪಿ ಪ್ರಜ್ವಲ್ ರೇವಣ್ಣ ಅವರನ್ನು ಸ್ವದೇಶಕ್ಕೆ ಕರೆ ತರಲು ವಿಶೇಷ ತನಿಖಾ ತಂಡದ ಮುಂದಿರುವ ಏಕೈಕ ಆಯ್ಕೆ ಅಂದ್ರೆ ಅದು ರೆಡ್ ಕಾರ್ನರ್ ನೋಟಿಸ್.

ರೆಡ್ ಕಾರ್ನರ್ ನೋಟಿಸ್ ಅನ್ನು ಅಷ್ಟು ಸುಲಭವಾಗಿ ಹೊರಡಿಸಲು ಸಾಧ್ಯವಿಲ್ಲ. ಬಹಳಷ್ಟು ಪ್ರಕ್ರಿಯೆ ನಡೆದ ಬಳಿಕ ಈ ನೋಟಿಸ್ ಹೊರಡಿಸಲಾಗುತ್ತದೆ.

**ರೆಡ್ ಕಾರ್ನರ್ ನೋಟಿಸ್ ಹೇಗೆ ಹೊರಡಿಸಲಾಗುತ್ತೆ?:** ಪ್ರಜ್ವಲ್ ರೇವಣ್ಣ ಬಂಧನವಾಗದ ಹಿನ್ನೆಲೆಯಲ್ಲಿ ತಲೆಮರೆಸಿಕೊಂಡಿರುವ ಆರೋಪಪಟ್ಟಿ ನ್ಯಾಯಾಲಯಕ್ಕೆ ಸಲ್ಲಿಕೆಯಾಗಬೇಕು. ಆಗ ಕೋರ್ಟ್ ವಿಚಾರಣೆಗೆ ಹಾಜರಾಗುವಂತೆ ಆರೋಪಿಗೆ ಸಮನ್ಸ್ ಜಾರಿ ಮಾಡುತ್ತದೆ. ಈ ವೇಳೆ ಆರೋಪಿ ವಿದೇಶದಲ್ಲಿ ತಲೆ ಮರೆಸಿಕೊಂಡಿರುವ ಬಗ್ಗೆ ಎಸ್‌ಐಟಿ ಮಾಹಿತಿ ನೀಡುತ್ತದೆ. ಸಮನ್ಸ್‌ಗೆ ಗೈರಾದರೆ ಪ್ರಜ್ವಲ್ ಪತ್ತೆಗೆ ಕೋರ್ಟ್ ಅನುಮತಿಯೊಂದಿಗೆ ರೆಡ್ ಕಾರ್ನರ್ ನೋಟಿಸ್ ಹೊರಡಿಸುವಂತೆ ಸಿಬಿಐಗೆ ಎಸ್‌ಐಟಿ ಮನವಿ ಮಾಡುತ್ತದೆ. ಬಳಿಕ ಸಿಬಿಐ ಇಂಟರ್‌ಪೋಲ್ ಮೂಲಕ ರೆಡ್ ಕಾರ್ನರ್ ನೋಟಿಸ್ ಹೊರಡಿಸುತ್ತದೆ. ರೆಡ್ ಕಾರ್ನರ್ ನೋಟಿಸ್ ಜಾರಿಯಾದ್ರೆ ಪ್ರಜ್ವಲ್ ಯಾವ ದೇಶದಲ್ಲಿ ಇದ್ದಾರೋ ಆ ದೇಶದ ಪೊಲೀಸರೇ ಅವರನ್ನು ವಶಕ್ಕೆ ಪಡೆಯಲು ಅನುಮತಿ ನೀಡುತ್ತದೆ. ವಶಕ್ಕೆ ಪಡೆದ ನಂತರ ಆ ದೇಶದ ಪೊಲೀಸರು ಭಾರತಕ್ಕೆ ಒಪ್ಪಿಸುತ್ತಾರೆ. ಈ ಎಲ್ಲಾ ಪ್ರಕ್ರಿಯೆ ನಡೆಸಬೇಕಾದರೆ ಎಸ್‌ಐಟಿಗೆ ಕನಿಷ್ಠ 40 ದಿನ ಬೇಕಾಗಬಹುದು.

**ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದಿಲ್ಲ ಯಾಕೆ?:** ಪ್ರಜ್ವಲ್ ರೇವಣ್ಣ ಹಾಸನ ಲೋಕಸಭಾ ಕ್ಷೇತ್ರದ ಸಂಸದರಾಗಿರುವ ಕಾರಣ ರಾಜತಾಂತ್ರಿಕ ಪಾಸ್‌ಪೋರ್ಟ್ ಬಳಸಿ ಜರ್ಮನಿ ಹೋಗಿದ್ದಾರೆ. ಹೀಗಾಗಿ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದುಗೊಳಿಸಬೇಕೆಂಬ ಆಗ್ರಹ ಕೇಳಿ ಬಂದಿದೆ. ರಾಜತಾಂತ್ರಿಕ ಪಾಸ್‌ಪೋರ್ಟ್ ಅಷ್ಟು ಸುಲಭವಾಗಿ ರದ್ದು ಮಾಡಲು ಸಾಧ್ಯವಿಲ್ಲ. ನ್ಯಾಯಾಲಯದಿಂದ ಆದೇಶ ಬಂದ ಬಳಿಕವಷ್ಟೇ ವಿದೇಶಾಂಗ ಸಚಿವಾಲಯ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದು ಮಾಡಬಹುದಾಗಿದೆ.

## ಬಿಜೆಪಿ ಇಬ್ಭಾಗ ಆಗುತ್ತೆ

ನೀವು ಇನ್ನು ಮುಂದೆ ಪ್ರಧಾನಿಯಾಗಿ ಇರಲಾರಿರಿ. ಪಕ್ಷದ ಚಟುವಟಿಕೆಗಳನ್ನು ಮುನ್ನಡೆಸಲು ನಿಮ್ಮ ಪಕ್ಷಕ್ಕೆ ಯಾವ ಮುಖವೂ ಇರುವುದಿಲ್ಲ ಎಂದು ವ್ಯಂಗ್ಯವಾಗಿ ಮಾತನಾಡಿದ್ದಾರೆ.

ಪ್ರಧಾನಿ ಮೋದಿ ನಿವೃತ್ತಿ ಬಗ್ಗೆ ಅಮಿತ್ ಶಾ ಮಾತು ಗೃಹ ಸಚಿವ ಅಮಿತ್ ಶಾ ಸುದ್ದಿಸಂಸ್ಥೆ ಎಎನ್ ಐಗೆ ನೀಡಿದ ಸಂದರ್ಶನದಲ್ಲಿ 2029ರ ನಂತರವೂ ಪ್ರಧಾನಿ ಮೋದಿ ದೇಶವನ್ನು ಮುನ್ನಡೆಸುತ್ತಾರೆ ಎಂದು ಹೇಳಿದ್ದರು.

## ಕಡಿವಾಣಕ್ಕೆ ಒತ್ತಾಯ

ನರ್ಸರಿಗಳ ಆರಂಭಕ್ಕೆ ಬೇಕಾದ ಸೌಕರ್ಯ ಮಾನದಂಡಗಳಿಲ್ಲದೆ ಇರುವುದರಿಂದ ಎಲ್ಲಡೆ ನರ್ಸರಿಗಳ ತಲೆ ಎತ್ತಿ ಸುಲಿಗೆಗೆ ಮುಂದಾಗಿವೆ. ಹೀಗಾಗಿ ಶಿಕ್ಷಣ ಇಲಾಖೆ ಮಕ್ಕಳ ಸುರಕ್ಷಿತ ದೃಷ್ಟಿಯಿಂದ ಯಾವುದೇ ಭದ್ರತೆ ತೆಗೆದುಕೊಳ್ಳದೆ ತಲೆ ಎತ್ತುತ್ತಿರುವ ನರ್ಸರಿ ಶಾಲೆಗಳ ಮೇಲೆ ಸೂಕ್ತ ಕ್ರಮವಹಿಸುವಂತೆ ಪ್ರಾಥಮಿಕ ಶಾಲೆಗಳ ಆರಂಭಕ್ಕೆ ಇರುವ ಕನಿಷ್ಠ ಮಾನದಂಡಗಳನ್ನ ನರ್ಸರಿ ಶಾಲೆಗಳ ಆರಂಭಕ್ಕೆ ನಿಗಧಿ ಮಾಡುವಂತೆ ಮಕ್ಕಳ ಹಕ್ಕುಗಳ ಆಯೋಗ ಚಾಟಿ ಬೀಸಿದೆ.

ಪೂರ್ವ ಪ್ರಾಥಮಿಕ ಶಾಲೆಗಳ ಆರಂಭಕ್ಕೆ ಕಠಿಣವಾದ ಮಾನದಂಡಗಳಿಲ್ಲದೆ ಇರುವುದರಿಂದ ಎಲ್ಲೆಡೆ ನರ್ಸರಿಗಳು ತಲೆ ಎತ್ತಿ ಸುಲಿಗೆಗೆ ಮುಂದಾಗಿವೆ. ಹೀಗಾಗಿ ಶಿಕ್ಷಣ ಇಲಾಖೆ ಮಕ್ಕಳ ಸುರಕ್ಷಿತ ದೃಷ್ಟಿಯಿಂದ ಯಾವುದೇ ಭದ್ರತೆ ತೆಗೆದುಕೊಳ್ಳದೆ ತಲೆ ಎತ್ತುತ್ತಿರುವ ನರ್ಸರಿ ಶಾಲೆಗಳ ಮೇಲೆ ಸೂಕ್ತ ಕ್ರಮವಹಿಸುವಂತೆ ಪ್ರಾಥಮಿಕ ಶಾಲೆಗಳ ಆರಂಭಕ್ಕೆ ಇರುವ ಕನಿಷ್ಠ ಮಾನದಂಡಗಳನ್ನ ನರ್ಸರಿ ಶಾಲೆಗಳ ಆರಂಭಕ್ಕೆ ನಿಗದಿ ಮಾಡುವಂತೆ ಖಾಸಗಿ ಶಾಲೆಗಳ ಒಕ್ಕೂಟ ಒತ್ತಾಯಿಸಿದೆ. ಈ ಬಗ್ಗೆ ಶಿಕ್ಷಣ ಇಲಾಖೆ ದೂರು ನೀಡಿದ್ರೂ ಯಾವುದೇ ಪ್ರಯೋಜನವಿಲ್ಲ ಎಂದು ಖಾಸಗಿ ಶಾಲೆಗಳ ಒಕ್ಕೂಟ ಪ್ರಧಾನ ಕಾರ್ಯದರ್ಶಿ ಶಶಿಕುಮಾರ್ ಹೇಳಿದರು.

**ಪೂರ್ವ ಪ್ರಾಥಮಿಕ ಶಾಲೆಗಳ ಗೈಡ್ ಲೈನ್ಸ್ ಏನು?**

- **ಕಡ್ಡಾಯವಾಗಿ ಶಿಕ್ಷಣ ಇಲಾಖೆಯ ನೋಂದಣಿ ಮಾಡಿಸಬೇಕು**
- **ಯಾವ ಯಾವ ತರಗತಿ ಆರಂಭಕ್ಕೆ ಅಂತಾ ಮಾನ್ಯತೆ ಪಡೆಯಬೇಕು**
- **ಪೂರ್ವ ಪ್ರಾಥಮಿಕ ಶಾಲೆಗಳಿಗೆ ಕೊಠಡಿಗೆ ನಿಗದಿತ ವಿದ್ಯಾರ್ಥಿಗಳ ಮಾನದಂಡವಿದೆ**
- **ಯಾವ ಯಾವ ವಯಸ್ಸಿನ ಮಕ್ಕಳಿಗೆ LKG, UKG ಹಾಗೂ ನರ್ಸರಿ ಅಂತಾ ವಯಸ್ಸು ನಿಗದಿ ಮಾಡಲಾಗಿದೆ**
- **ಕೊಠಡಿಗೆ ಒಬ್ಬ ಶಿಕ್ಷಕ/ ಶಿಕ್ಷಕಿ ಒಬ್ಬರು ಆಯಾ ಇರಬೇಕು**
- **ಮಕ್ಕಳ ಸುರಕ್ಷಿತ ಕ್ರಮಗಳ ಬಗ್ಗೆ ಮಾರ್ಗಸೂಚಿ ಫಾಲೋ ಮಾಡಬೇಕು**
- **ಮಕ್ಕಳ ಚಟುವಟಿಕೆ ಮೇಲೆ ನಿಗಾವಹಿಸಿ ಎಚ್ಚರಿಕೆ ವಹಿಸಲು ಕೊಠಡಿಗೆ ಒಬ್ರು ಸಹಾಯಕರನ್ನು ನೇಮಿಸಬೇಕು.**
- **ಶಾಲೆಗಳ ಭದ್ರತೆ ಹಾಗೂ ರಕ್ಷಣೆಗೆ ಪೂರಕವಾಗಿರಬೇಕು**
- **ಬಹು ಅಂತಸ್ಥಿನ ಕಟ್ಟಡಗಳಲ್ಲಿ ನರ್ಸರಿ ಶಾಲೆ ಆರಂಭಿಸುವಂತಿಲ್ಲ. ಆರಂಭ ಮಾಡಿದ್ರು ಶಾಲೆ ಮೊದಲ ಮಹಡಿಯಲ್ಲಿಯೇ ಇರಬೇಕು.**
- **ಮಕ್ಕಳ ಆರೋಗ್ಯದ ಮೇಲೆ ವಿಶೇಷ ಗಮನ ಇರಬೇಕು**
- **ವಿಶೇಷ ಚಟುವಟಿಕೆಯನ್ನ ಆರಂಭದಲ್ಲಿಯೇ ಪತ್ತೆ ಹಚ್ಚಲು ಶಾಲೆಗೆ ಕನಿಷ್ಠ ಒಬ್ಬ ಆಪ್ತಸಮಾಲೋಚಕರು ಇರಬೇಕು ( ಕಡ್ಡಾಯವಲ್ಲ )**
- **ಮಕ್ಕಳ ಕೈಗೆ ಅಪಾಯಕಾರಿ ವಸ್ತುಗಳು ಸಿಗದಂತೆ ಎಚ್ಚರ ವಹಿಸಬೇಕು**
- **ಕಲಿಕೆಯಲ್ಲಿ ಹಿಂದುಳಿದ ಮಗುವಿಗೆ ಒತ್ತಡ ಅಥವಾ ಶಿಕ್ಷ ನೀಡಬಾರದು**

ಒಟ್ನಲ್ಲಿ ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ನಾಯಿ ಕೊಡೆಗಳಂತೆ ತಲೆ ಎತ್ತಿರುವ ಅನಧಿಕೃತ ನರ್ಸರಿ ಹಾಗೂ ಐಎಲು, ಗಏಲು ಗಳಿಗೆ ಬ್ರೇಕ್ ಹಾಕಬೇಕಿದೆ. ಕನಿಷ್ಠ ಮಾನದಂಡಗಳ ಮಾರ್ಗಸೂಚಿಗಳನ್ನಾದರೂ ಈ ಶಾಲೆಗಳಿಗೆ ಕಡ್ಡಾಯ ಮಾಡಬೇಕಿದೆ. ನಿಯಮ ಉಲ್ಲಂಘಿಸುವ

ಮೊದಲನೇ ಪುಟದಿಂದ...

ಶಾಲೆಗಳಿಗೆ ನರ್ಸರಿಗಳಿಗೆ ಬ್ರೇಕ್ ಹಾಕಬೇಕಿದೆ. ಇಲ್ಲದೆ ಇದ್ರೆ ಪೂರ್ವ ಪ್ರಾಥಮಿಕ ಶಾಲೆಗಳು ಶಿಕ್ಷಣಕ್ಕಿಂತ ಸುಲಿಗೆಯನ್ನೆ ಬಂಡವಾಳ ಮಾಡಿಕೊಂಡು ಗಲ್ಲಿ ಗಲ್ಲಿಗೊಂದು ತಲೆ ಎತ್ತೋದರಲ್ಲಿ ಯಾವುದೇ ಅನುಮಾನ ಇಲ್ಲ.

## ಎಚ್‌ಡಿಕೆ ವಾಗ್ದಾಳಿ

ಕೈಗೆ ಬಂದ ತುತ್ತು ಬಾಯಿಗಿಲ್ಲ!

ಬರ ಪರಿಹಾರದ ಹಣ ಬಿಡುಗಡೆಯಾದರೂ ಅನೇಕ ರೈತರ ಕೈಗೆ ಅದು ಸಿಗುತ್ತಿಲ್ಲ, ಕಾರಣ ಅವರು ಸಾಲ ಮಾಡಿರುವುದು. ಬ್ಯಾಂಕ್ ಗಳು ಬರ ಪರಿಹಾರದ ಹಣವನ್ನು ಅವರ ಸಾಲದ ಖಾತೆಗೆ ಜಮೆ ಮಾಡಿಕೊಳ್ಳುತ್ತಿವೆ. ಈ ಬಗ್ಗೆ ರಾಜ್ಯ ಹಲವು ಕಡೆಗಳಿಂದ ವರದಿಯಾಗಿದೆ. ಅನೇಕ ರೈತರಿಗೆ ದೊರೆಯಬೇಕಿದ್ದ ಬರ ಪರಿಹಾರದ ಹಣ ಸಾಲದ ಖಾತೆಗೆ ಜಮೆಯಾಗುತ್ತಿದೆ.

ಕಳೆದ ವರ್ಷ ಮುಂಗಾರು ಮಳೆಯ ಕೊರತೆಯಿಂದ ರಾಜ್ಯವು ತೀವ್ರ ಬರಗಾಲಕ್ಕೆ ತುತ್ತಾಗಿತ್ತು. ಪರಿಣಾಮವಾಗಿ ರೈತರು ಸಂಕಷ್ಟಕ್ಕೆ ಸಿಲುಕಿಕೊಂಡಿದ್ದರು. ಕೆಲವು ದಿನಗಳ ಹಿಂದಷ್ಟೇ ಕೇಂದ್ರ ಸರ್ಕಾರ ಕರ್ನಾಟಕಕ್ಕೆ 3,454 ಕೋಟಿ ರೂ. ಬರ ಪರಿಹಾರ ಬಿಡುಗಡೆ ಮಾಡಿತ್ತು. ಆದರೆ, ಅದೀಗ ರೈತರ ಕೈಗೆ ಸಿಗದಂತಾಗಿದೆ.

## ಕಣ್ಣಾಮುಚ್ಚಾಲೆ ಆಟ

ಆದರೆ ಪ್ರಜ್ವಲ್ ರೇವಣ್ಣ ಈ ಎರಡೂ ವಿಮಾನದಲ್ಲಿ ಬಾರದ ಕಾರಣ ಪೊಲೀಸರು ಬರಿಗೈಯಲ್ಲಿ ವಾಪಸ್ ಆಗಿದ್ದಾರೆ. ಪ್ರಜ್ವಲ್ ರೇವಣ್ಣ ಜರ್ಮನಿಯಿಂದ ಬೆಂಗಳೂರಿಗೆ ಆಗಮಿಸಲು ಟಿಕೆಟ್ ಬುಕ್ ಮಾಡಿದ್ದ ಖಚಿತ ಮಾಹಿತಿ ಸಿಕ್ಕಿದ ಕಾರಣ ಬುಧವಾರ ಬೆಳಗ್ಗೆಯಿಂದಲೇ ಪೊಲೀಸರು ವಿಮಾನ ನಿಲ್ದಾಣದಲ್ಲಿ ಬೀಡು ಬಿಟ್ಟಿದ್ದರು. ವಿಮಾನದಿಂದ ಇಳಿದು ಹೊರಗೆ ಬರುತ್ತಿದ್ದಂತೆ ಎಕ್ಸಿಟ್ ಗೇಟ್‌ನಲ್ಲಿ ಅವರನ್ನು ವಶಕ್ಕೆ ಪಡೆಯಲು ಎಸ್‌ಐಟಿ ಸಿದ್ಧತೆ ನಡೆಸಿತ್ತು.

## ಇಬ್ಬರಿಗೆ ಗಾಯ

ಪ್ರತಿದಿನ ಇಂತಹ ಅವಘಡಗಳು ನಡೆಯುತ್ತಲೇ ಇವೆ. ಈ ಘಟನೆಯ ಬಗ್ಗೆ ಮಾಹಿತಿ ಪಡೆದ ನಂತರ, ಸರನ್ ಎಸ್ಪಿ ಗೌರವ್ ಮಂಗಲ್ ಪ್ರಕರಣದ ತನಿಖೆಗಾಗಿ ವಿಶೇಷ ತಂಡವನ್ನು ರಚಿಸಿದ್ದಾರೆ.

ಲೋಕಸಭೆ ಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಈ ಘಟನೆ ಅತ್ಯಂತ ಮಹತ್ವ ಪಡೆದಿದೆ. ಈ ಬಗ್ಗೆ ಪೊಲೀಸರು ಪ್ರತಿಯೊಂದು ಕೋನದಲ್ಲಿ ತನಿಖೆ ನಡೆಸುತ್ತಿದ್ದು, ಶೀಘ್ರದಲ್ಲೇ ವಿಷಯ ಬಹಿರಂಗಗೊಳ್ಳಲಿದೆ ಎಂದು ಎಸ್ಪಿ ತಿಳಿಸಿದ್ದಾರೆ. ಸದ್ಯ ಪೊಲೀಸರು ಗಾಯಾಳುಗಳನ್ನು ಚಿಕಿತ್ಸೆಗಾಗಿ ಪಾಟ್ನಾಗೆ ಕಳುಹಿಸಿದ್ದು, ಅವರ ಸ್ಥಿತಿ ಚಿಂತಾಜನಕವಾಗಿದೆ ಎಂದು ಹೇಳಲಾಗಿದೆ. ವಿಧಿವಿಜ್ಞಾನ ತನಿಖಾ ವರದಿ ಬಂದ ನಂತರವಷ್ಟೇ ಬಾಂಬ್ ಎಷ್ಟು ಶಕ್ತಿಶಾಲಿ ಎಂಬುದು ಸ್ಪಷ್ಟವಾಗಲಿದೆ.

## 8 ಮಂದಿ ಸಾವು

ಇದಕ್ಕೂ ಮೊದಲು ಮೇ 13 ರಂದು ಮಧ್ಯಪ್ರದೇಶದ ಸಿಯೋನಿ, ರಾಜ್‌ಗಢ ಮತ್ತು ಛಿಂದ್ವಾರಾ ಜಿಲ್ಲೆಗಳಲ್ಲಿ ನಡೆದ ಪ್ರತ್ಯೇಕ ರಸ್ತೆ ಅಪಘಾತಗಳಲ್ಲಿ ಎಂಟು ಜನರು ಸಾವನ್ನಪ್ಪಿದರು ಮತ್ತು 20 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದರು. ಸಿಯೋನಿಯಲ್ಲಿ, ಹಿನೋಟಿಯಾ ಗ್ರಾಮದಲ್ಲಿ ಎಸ್‌ಯುವಿ ಪಲ್ಟಿಯಾದಾಗ ವಧು ಮತ್ತು ವರ ಸೇರಿದಂತೆ ಮೂವರು ಸಾವನ್ನಪ್ಪಿದ್ದಾರೆ ಮತ್ತು ಐವರು ಗಾಯಗೊಂಡಿದ್ದಾರೆ ಎಂದು ಆದಗಾಂವ್ ಪೊಲೀಸ್ ಠಾಣೆಯ ಉಸ್ತುವಾರಿ ಪೂಜಾ ಚೌಕ್ಸೆ ತಿಳಿಸಿದ್ದಾರೆ.

ರಾಜ್‌ಗಢದಲ್ಲಿ, ಕುರಾವರ್ ಪೊಲೀಸ್ ಠಾಣೆ ವ್ಯಾಪ್ತಿಯ ಪಿಲುಖೇಡಿ ಬಳಿ ರಾಷ್ಟ್ರೀಯ ಹೆದ್ದಾರಿ 46 ರಲ್ಲಿ ಮಿಲಿಟರಿ ಟ್ರಕ್ ಮತ್ತು ಇತರ ಎರಡು ವಾಹನಗಳು ಡಿಕ್ಕಿ ಹೊಡೆದು ಇಬ್ಬರು ಸಾವನ್ನಪ್ಪಿದ್ದಾರೆ ಮತ್ತು 15 ಮಂದಿ ಗಾಯಗೊಂಡಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಛಿಂದ್ವಾರಾ ಜಿಲ್ಲೆಯಲ್ಲಿ ಭಾನುವಾರ ರಾತ್ರಿ 10 ಗಂಟೆ ಸುಮಾರಿಗೆ ಮುವಾರಿ ಗಣಿಗಳಲ್ಲಿ ಎಸ್‌ಯುವಿ ಪಲ್ಟಿಯಾಗಿ ಮೂವರು ಮಹಿಳೆಯರು ಸಾವನ್ನಪ್ಪಿದ್ದಾರೆ ಮತ್ತು ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಅವಧೇಶ್ ಪ್ರತಾಪ್ ಸಿಂಗ್ ತಿಳಿಸಿದ್ದಾರೆ.

## ಬಂಧನ

ಅದರ ಬೆನ್ನಲ್ಲೇ ಆತ ಮೈಸೂರಿನ ರಾಜೀವ್ ನಗರದಲ್ಲಿ ಅಡಗಿದ್ದಾನೆ ಎಂಬ ಸುಳಿವು ಎನ್?ಐಎ ಅಧಿಕಾರಿಗಳಿಗೆ ದೊರೆತಿತ್ತು. ಸುಳಿವು ದೊರೆತ ಬೆನ್ನಲ್ಲೇ ದಾಳಿ ನಡೆಸಿದ ಎನ್?ಐಎ ತಂಡ ಆತನನ್ನು ಬಲೆಗೆ ಬೀಳಿಸುವಲ್ಲಿ ಯಶಸ್ವಿಯಾಗಿದೆ.

ನೂರುದ್ದೀನ್, ಪಾಕಿಸ್ತಾನದ ಅಮಿರ್ ಜುಬೇಗ್ ಸಿದ್ದಿಕೆ ಮತ್ತು ಶ್ರೀಲಂಕಾದ ಮುಹಮ್ಮದ್ ಜೊತೆ ಸೇರಿಕೊಂಡು ಚೆನ್ನೈನಲ್ಲಿರುವ ಅಮೆರಿಕ ದೂತಾವಾಸ ಕಚೇರಿ ಮತ್ತು ಬೆಂಗಳೂರಿನಲ್ಲಿರುವ ಇಸ್ರೇಲ್ ದೂತಾವಾಸ ಕಚೇರಿಯನ್ನು ಸ್ಫೋಟಿಸಲು 2014ರಲ್ಲಿ ಸಂಚು ರೂಪಿಸಿದ್ದ. ಈ ಕೃತ್ಯಕ್ಕೆ ಅಗತ್ಯವಾದ ಹಣವನ್ನು ನೂರೂದ್ದೀನ್ ನಕಲಿ ನೋಟು ಚಲಾವಣೆಯ ಮೂಲಕ ನೀಡಿದ್ದ. ಈ ಪ್ರಕರಣದಲ್ಲಿ ಆತನ ಬಂಧನವಾಗಿ ಆತನ ವಿರುದ್ಧ ಬೇಹುಗಾರಿಕೆ ಪ್ರಕರಣ ದಾಖಲಿಸಲಾಗಿತ್ತು. ಆತನಿಗೆ 2023ರಲ್ಲಿ ಷರತ್ತಬದ್ಧ ಜಾಮೀನು ನೀಡಲಾಗಿತ್ತು. ಬಳಿಕ ಈತ ತಲೆಮರೆಸಿಕೊಂಡಿದ್ದ. ಈ ಹಿನ್ನೆಲೆಯಲ್ಲಿ ಆತನ ಕುರಿತು ಸುಳಿವು ನೀಡಿದವರಿಗೆ 5 ಲಕ್ಷ ರೂ. ಬಹುಮಾನ ಘೋಷಿಸಲಾಗಿತ್ತು.

ಕೆಲವೇ ದಿನಗಳ ಹಿಂದೆ, ಅಂದರೆ ಮೇ 7ರಂದು ನೂರುದ್ದೀನ್?ನನ್ನು ಎನ್‌ಐಎ ವಿಶೇಷ ನ್ಯಾಯಾಲಯ ಅಪರಾಧಿ ಎಂದು ಘೋಷಿಸಿತ್ತು.

## ರಾಬರ್ಟ್ ಹತ್ಯೆಗೆ ಯತ್ನ

ಸ್ಲೋವಾಕಿಯಾದಲ್ಲಿ ಯುರೋಪಿಯನ್ ಪಾರ್ಲಿಮೆಂಟ್ ಚುನಾವಣೆಗಳಿಗೆ ಕೇವಲ 3 ವಾರಗಳು ಬಾಕಿ ಇವೆ. ಈ ವೇಳೆ ಈ ಗುಂಡಿನ ದಾಳಿ ನಡೆದಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ.

ಪ್ರಧಾನಿ ರಾಬರ್ಟ್ ಫಿಕೊ ಮೇಲಿನ ಕೆಟ್ಟ ದಾಳಿಯನ್ನು ನಾನು ಬಲವಾಗಿ ಖಂಡಿಸುತ್ತೇನೆ. ಇಂತಹ ಹಿಂಸಾಚಾರಕ್ಕೆ ನಮ್ಮ ಸಮಾಜದಲ್ಲಿ ಸ್ಥಾನವಿಲ್ಲ ಮತ್ತು ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುತ್ತದೆ ಎಂದು ಇಯು ಮುಖ್ಯಸ್ಥ ಉರ್ಸುಲಾ ವಾನ್ ಡೆರ್ ಹೇಳಿದ್ದಾರೆ.

## ರೋಗಿಗಳ ಪರದಾಟ

ನಾವು ಸರ್ಕಾರಿ ಆಸ್ಪತ್ರೆಗಳ ಮೇಲೆ ಡಿಪೆಂಡ್ ಆಗಿದ್ದೇವೆ. ಆರೋಗ್ಯ ಸುಧಾರಿಸಬಹುದು ಎಂದು ಇಲ್ಲಿಗೆ ಬಂದ್ವಿ. ಸಾವಿರಾರು ರೂಪಾಯಿ ನೀಡಿ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ನಮ್ಮಿಂದ ಸಾಧ್ಯವಿಲ್ಲ. ಆದರೆ ಸರ್ಕಾರಿ ಆಸ್ಪತ್ರೆಗಳಲ್ಲಿ ವಿದ್ಯುತ್, ನೀರು ಮುಂತಾದ ಮೂಲ ಸೌಕರ್ಯಗಳೇ ಇಲ್ಲದಿದ್ದರೆ ರೋಗಿಗಳ ಪರಿಸ್ಥಿತಿ ಏನಾಗಬಹುದು ಕೆಲವೊಮ್ಮೆ ಆಸ್ಪತ್ರೆ ಸಿಬ್ಬಂದಿ ಮಳೆ, ಸೆಸ್ಕ್ ಅಧಿಕಾರಿಗಳನ್ನು ದೂಷಿಸುತ್ತಾರೆ, ಆದರೆ ಚಿಕಿತ್ಸೆಗೆಂದೇ ಅಕ್ಕಪಕ್ಕದ ಹಳ್ಳಿಗಳಿಂದ ದೂರದೂರಿಂದ ಬರುವ ರೋಗಿಗಳ ಪರಿಸ್ಥಿತಿ, ಸಮಸ್ಯೆಗಳನ್ನು ಪರಿಗಣಿಸುವುದಿಲ್ಲ ಎಂದು ರೋಗಿಯ ಸಂಬಂಧಿ ರಂಗಸ್ವಾಮಿ ಬೇಸರ ವ್ಯಕ್ತಪಡಿಸಿದರು.

''ನಾವು ನಮ್ಮಲ್ಲಿರುವದರೊಂದಿಗೆ ಅತ್ಯುತ್ತಮ ಪ್ರಯತ್ನವನ್ನು ಮಾಡುತ್ತಿದ್ದೇವೆ, ಆದರೆ ಸ್ಥಿರವಾದ ವಿದ್ಯುತ್ ಮತ್ತು ನೀರು ಇಲ್ಲದೆ, ಈ ರೋಗಿಗಳಿಗೆ ಅಗತ್ಯವಿರುವ ಆರೈಕೆಯನ್ನು ಮಾಡಲು ಅಸಾಧ್ಯವಾಗುತ್ತಿಲ್ಲ ಎಂದು ಆಸ್ಪತ್ರೆ ಸಿಬ್ಬಂದಿಯೊಬ್ಬರು ಹೇಳಿದರು.

ಇನ್ನು ಈ ಸಮಸ್ಯೆ ಬಗ್ಗೆ ಜಿಲ್ಲಾ ಆರೋಗ್ಯಾಧಿಕಾರಿ (ಡಿಎಚ್‌ಒ) ಡಾ.ಕುಮಾರಸ್ವಾಮಿ ಅವರ ಗಮನಕ್ಕೆ ತಂದಿದ್ದು ಈ ಬಗ್ಗೆ ಪರಿಶೀಲಿಸಿ ಶೀಘ್ರದಲ್ಲಿಯೇ ಪರಿಹರಿಸುವುದಾಗಿ ತಿಳಿಸಿದ್ದಾರೆ.

## ಆದೇಶಿಸಿದ ಸಚಿವ ಖಂಡ್ರೆ

ಮುಂಡ್ರೋಟು, ಮಾಕುಟ್ಟ ಮತ್ತು ಪೊನ್ನಂಪೇಟೆ ಅರಣ್ಯ ಪ್ರದೇಶಗಳು ಕೇರಳದೊಂದಿಗೆ ಗಡಿಯನ್ನು ಹಂಚಿಕೊಂಡಿವೆ. ಅರಣ್ಯದ ಕೆಲವು ಪ್ರದೇಶಗಳಿಗೆ ಪ್ರವೇಶವೂ ದುರ್ಗಮವಾಗಿದೆ. ರಸ್ತೆ ಬಿಟ್ಟು ಕಾಲುದಾರಿಯಲ್ಲಿ ಕಿಲೋಮೀಟರ್ ಗಟ್ಟಲೆ ನಡೆಯಬೇಕಾದ ಪ್ರದೇಶಗಳಿವೆ. ಇದು ಅಕ್ರಮವಾಗಿ ಮರಗಳನ್ನು ಕಡಿಯುವುದು ಮತ್ತು ಸಾಗಾಟ ಮಾಡುವವರಿಗೆ ವರದಾನವಾಗಿದೆ ಎಂದು ಕಾರ್ಯಕರ್ತರೊಬ್ಬರು ತಿಳಿಸಿದ್ದಾರೆ.

**ಸಚಿವರ ಆದೇಶದಲ್ಲೇನಿದೆ:** ಕೊಡಗು ಜಿಲ್ಲೆ ಮಡಿಕೇರಿ ಬಳಿ ಕೊಡಗು- ಕೇರಳ ಗಡಿ ಭಾಗದ ತಲಕಾವೇರಿ ಅಭಯಾರಣ್ಯದ ಸಮೀಪದ ಮೀಸಲು ಅರಣ್ಯ ಪ್ರದೇಶದಲ್ಲಿ ಸಾವಿರಾರು ಮರಗಳ ಅಕ್ರಮ ಕಡಿತ ಆಗಿರುವ ಕುರಿತಂತೆ ನಾಡಿನ ಪ್ರತಿಷ್ಠಿತ ಮಾಧ್ಯಮಗಳಲ್ಲಿ ಸಚಿತ್ರ ವರದಿ ಪ್ರಕಟವಾಗಿರುತ್ತದೆ. ಸಾವಿರಾರು ಮರಗಳ ಅಕ್ರಮ ಹನನ ಆಗಿದ್ದರೂ ಸಚಿವರ ಕಾರ್ಯಾಲಯಕ್ಕೆ ಕೂಡಲೇ ಮಾಹಿತಿ ನೀಡದೇ ಇರುವುದನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

ಮುಂದುವರಿದು, ವೃಕ್ಷ ಸಂಪತ್ತು ಮತ್ತು ವನ್ಯ ಸಂಪತ್ತನ್ನು ರಕ್ಷಿಸಬೇಕಾದ್ದು ಅರಣ್ಯ ಸಂರಕ್ಷಣಾಧಿಕಾರಿಗಳು ಮತ್ತು ವಲಯ ಅರಣ್ಯಾಧಿಕಾರಿ ಹಾಗೂ ಅಧೀನ ಸಿಬ್ಬಂದಿಯ ಆದ್ಯ ಕರ್ತವ್ಯ ಆಗಿರುತ್ತದೆ. ಮಾಧ್ಯಮಗಳಲ್ಲಿ ಮರಗಳ ಅಕ್ರಮ ಹನನ ಕುರಿತ ಪ್ರಕಟವಾದ ವರದಿಯನ್ನು ಮೇ 10ರಂದು ಸಿಸಿಎಫ್ ಗಳು ಸದಸ್ಯರಾಗಿರುವ ವಾಟ್ಸ್ ಅಪ್ ಗ್ರೂಪ್ ನಲ್ಲಿ ಸಚಿವರ ಕಚೇರಿ ಆಪ್ತ ಸಿಬ್ಬಂದಿ ಪೋಸ್ಟ್ ಮಾಡಿ ಗಮನ ಸೆಳೆದ್ದರೂ, ಯಾವುದೇ ಮಾಹಿತಿ ನೀಡಲಾಗಿರುವುದಿಲ್ಲ, ಇದು ನಿರ್ಲಕ್ಷ್ಯ ಮತ್ತು ಕರ್ತವ್ಯಲೋಪವಾಗಿರುತ್ತದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

ಕೂಡಲೇ ಎ.ಪಿ.ಸಿ.ಸಿ.ಎಫ್. ದರ್ಜೆಯ ಅಧಿಕಾರಿಯನ್ನು ಸ್ಥಳಕ್ಕೆ ಕಳುಹಿಸಿ, ಎಷ್ಟು ಮರಗಳನ್ನು ಕಡಿಯಲಾಗಿದೆ ಎಂಬ ಬಗ್ಗೆ ಸಮಗ್ರ ಪರಿಶೀಲನೆ ನಡೆಸಿ, ವಾಸ್ತವ ವರದಿಯನ್ನು ಜಿಪಿಎಸ್ ಸಹಿತ ವಿಡಿಯೋ ಸಹಿತ, 3 ದಿನಗಳ ಒಳಗಾಗಿ ಈ ಕಚೇರಿಗೆ ಸಲ್ಲಿಸಲು ಮತ್ತು ನಿರ್ಲಕ್ಷ್ಯ ವಹಿಸಿರುವ ಅರಣ್ಯ ಅಧಿಕಾರಿ ಮತ್ತು ಸಿಬ್ಬಂದಿಗಳ ವಿರುದ್ಧ ಕಾನೂನು ರೀತ್ಯ ಶಿಸ್ತು ಕ್ರಮ ಜರುಗಿಸಲು ಹಾಗೂ ಅನುಮತಿ ಇಲ್ಲದೆ ಮರ ಕಡಿದ ತಪ್ಪಿತಸ್ಥರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಸೂಚಿಸಿದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

## ಸಹಿ

ದಿಯೋಗಢ ಜಿಲ್ಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಸಿಎಂ ಜೊತೆಗಿನ ಸಂಭಾಷಣೆಯ ಕಿರು ವೀಡಿಯೊವನ್ನು ಹಂಚಿಕೊಂಡ ಪಾಂಡಿಯನ್, ಜಗನ್ನಾಥ ಮತ್ತು ಜನರ ಆಶೀರ್ವಾದವು ನವೀನ್ ಪಟ್ನಾಯಕ್ ಅವರನ್ನು ಜೂನ್ 9ರಂದು ಮತ್ತೆ ಪ್ರಮಾಣವಚನ ಸ್ವೀಕರಿಸುವಂತೆ ಮಾಡುತ್ತದೆ.

ಮೊದಲ ಆದೇಶವು ಒಡಿಶಾದ 90 ಪ್ರತಿ ಶತ ಜನಸಂಖ್ಯೆಗೆ ಉಚಿತ ವಿದ್ಯುತ್ ಸರಬರಾಜು ಮತ್ತು ಸರ್ಕಾರಿ ನೌಕರರು ಸೇರಿದಂತೆ ಎಲ್ಲರಿಗೂ ಬಿಜು ಸ್ವಾಸ್ಥ್ಯ ಕಲ್ಯಾಣ ಯೋಜನೆ (ಬಿಎಸ್‌ಕೆವೈ) ವಿಸ್ತರಣೆಯಾಗಿದೆ ಎಂದರು. ರಾಜ್ಯ ಬಿಜೆಪಿ ನಾಯಕ ಸಮೀರ್ ಮೊಹಂತಿ ಅವರು ಬಿಜೆಡಿಯಿಂದ ಉಚಿತ ವಿದ್ಯುತ್ ಸರಬರಾಜು ಭರವಸೆಯ ಬಗ್ಗೆ ಸ್ಪಷ್ಟೀಕರಣವನ್ನು ಕೋರಿದ ನಂತರ ಸಿಎಂ ಮತ್ತು ಪಾಂಡಿಯನ್ ಅವರ ಈ ಕಿರು ವೀಡಿಯೊ ಬಂದಿದೆ.

ಎಲ್ಲರಿಗೂ ಉಚಿತ ವಿದ್ಯುತ್ ನೀಡುವುದಾಗಿ ಸುಳ್ಳು ಭರವಸೆ ನೀಡುವ ಮೂಲಕ ಬಿಜೆಡಿ ಜನರನ್ನು ವಂಚಿಸಿದೆ ಎಂದು ಆರೋಪಿಸಿರುವ ಮೊಹಾಂತಿ, ಉಚಿತ ವಿದ್ಯುತ್ ಪೂರೈಕೆಯ ಭರವಸೆಯಿಂದ ಎಷ್ಟು ಜನರಿಗೆ ಪ್ರಯೋಜನವಾಗಲಿದೆ ಎಂಬುದನ್ನು ಬಿಜೆಡಿ ಸ್ಪಷ್ಟಪಡಿಸಲಿ ಎಂದಿದ್ದರು.

ಬಿಜೆಡಿ ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ತಿಂಗಳಿಗೆ 100 ಯೂನಿಟ್‌ಗಿಂತ ಕಡಿಮೆ ಬಳಕೆ ಮಾಡುವ ಎಲ್ಲಾ ಮನೆಗಳಿಗೆ ಉಚಿತ ವಿದ್ಯುತ್ ನೀಡುವುದಾಗಿ ಭರವಸೆ ನೀಡಿದೆ. 100-150 ಯೂನಿಟ್‌ಗಳ ನಡುವೆ ಬಳಸುವ ಕುಟುಂಬಗಳಿಗೆ 50 ಯೂನಿಟ್‌ಗಳು ಉಚಿತವಾಗಿರುತ್ತದೆ.

ಬಹುತೇಕ ಇಡೀ ಗ್ರಾಮೀಣ ಜನತೆ ಈ ಉಪಕ್ರಮಗಳಿಂದ ಪ್ರಯೋಜನ ಪಡೆಯುತ್ತಾರೆ. ಇದು ನಗರ ಪ್ರದೇಶದ ಕುಟುಂಬಗಳಿಗೂ ಪ್ರಯೋಜನವನ್ನು ನೀಡುತ್ತದೆ. ಈ ಯೋಜನೆಯು ಒಡಿಶಾದ 85-90 ಪ್ರತಿಶತ ಕುಟುಂಬಗಳನ್ನು ಒಳಗೊಳ್ಳುತ್ತದೆ. ರೈತರಿಗೆ ಉಚಿತ ವಿದ್ಯುತ್ ನೀಡಲಾಗುತ್ತದೆ ಎಂಬುದನ್ನು ಪ್ರಣಾಳಿಕೆಯಲ್ಲಿ ಬರೆಯಲಾಗಿದೆ. ಮೇ13ರಂದು ಒಡಿಶಾದಲ್ಲಿ ವಿಧಾನಸಭಾ ಚುನಾವಣೆ ನಡೆದಿತ್ತು, ಜೂನ್ 4ರಂದು ಫಲಿತಾಂಶ ಹೊರಬರಲಿದೆ.

## ಸಾವು

ಪತ್ನಿ ನರ್ಸಿಂಗ್ ಕೋರ್ಸ್ ಸೇರಿದ ಬಳಿಕ ಪತಿಗೆ ಸಮಯ ನೀಡುತ್ತಿರಲಿಲ್ಲ ಎನ್ನಲಾಗುತ್ತಿದ್ದು, ಫ್ರೆಂಡ್ಸ್ ಜೊತೆ ಪದೇ ಪದೇ ಫೋನ್ ಕಾಲ್ ನಲ್ಲಿರುತ್ತಿದ್ದಳು ಎನ್ನಲಾಗಿದೆ. ಇದೇ ವಿಚಾರಕ್ಕೆ ಇಬ್ಬರ ನಡುವೆ ಆಗಾಗ ಜಗಳವಾಗುತ್ತಿತ್ತು.

ಹೀಗಾಗಿ ಪತಿ ತೊರೆದ ಪತ್ನಿ ಬೇರೆಡೆ ವಾಸವಿದ್ದರು. ಮನೆಗೆ ಪತ್ನಿ ವಾಪಾಸ್ ಬರುವಂತೆ ಪತಿ ಅಮಿತ್ ಪದೇ ಪದೇ ಕರೆ ಮಾಡಿ ಮನವಿ ಮಾಡುತ್ತಿದ್ದ. ನಿನ್ನೆ ಕೂಡ ವಿಡಿಯೋ ಕಾಲ್ ನಲ್ಲಿರುವಾಗಲೇ ನೇಣು ಬಿಗಿದುಕೊಂಡಂತೆ ಹೆದರಿಸುವಾಗಲೇ ಸಾವನ್ನಪ್ಪಿದ್ದಾರೆ. ಬಾಗಲಗುಂಟೆಯ ಪತಿ ಮನೆಯಲ್ಲಿ ನೇಣುಬಿಗಿದಿರುವ ಸ್ಥಿತಿಯಲ್ಲಿ ಮೃತದೇಹ ಪತ್ತೆ ಆಗಿದೆ.

ಸದ್ಯ ಮರಣೋತ್ತರ ಪರೀಕ್ಷೆಗೆ ಅಮಿತ್ ಕುಮಾರ್ ಮೃತದೇಹವನ್ನು ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಲಾಗಿದ್ದು, ಇಂದು ವಿಕ್ಟೋರಿಯಾದಲ್ಲಿ ಮರಣೋತ್ತರ ಪರೀಕ್ಷೆ ನಡೆಯಲಿದೆ. ಬಳಿಕ ಸಂಬಂಧಿಕರಿಗೆ ಮೃತದೇಹ ಹಸ್ತಾಂತರಿಸಲಾಗುತ್ತದೆ.

## ಮೆಟ್ರೋದಲ್ಲಿ ಜೇಬುಗಳ್ಳನನ್ನು ಹಿಡಿದ ಯೂಟ್ಯೂಬರ್

**ದೆಹಲಿ:** ಸಾಮಾಜಿಕ ಜಾಲತಾಣದಲ್ಲಿ ದೆಹಲಿ ಮೆಟ್ರೋದಲ್ಲಿ ನಡೆಯುವ ಚಿತ್ರ ವಿಚಿತ್ರ ಘಟನೆಗಳ ಬಗೆಗಿನ ವಿಡಿಯೋಗಳು ಆಗಾಗ್ಗೆ ವೈರಲ್ ಆಗುತ್ತಿರುತ್ತವೆ. ಕೆಲವೊಮ್ಮೆ ಪ್ರಯಾಣಿಕರ ನಡುವಿನ ವಾದ ವಿವಾದಗಳು, ಸೀಟಿಗಾಗಿ ನಡೆಯುವ ಜಡೆ ಜಗಳಗಳು, ಪ್ರೇಮಿಗಳ ರೊಮ್ಯಾನ್ಸ್, ರೀಲ್ಸ್ ಹುಚ್ಚಾಟ ಹೀಗೆ ಇಂತಹ ಒಂದಲ್ಲಾ ಒಂದು ಘಟನೆಗಳಿಗೆ ಸಂಬಧಿಸಿದ ವಿಡಿಯೋಗಳು ಹರಿದಾಡುತ್ತಿರುತ್ತವೆ. ಇದೀಗ ಅಂತಹದ್ದೇ ವಿಡಿಯೋವೊಂದು ವೈರಲ್ ಆಗಿದ್ದು, ದೆಹಲಿ ಮೆಟ್ರೋದಲ್ಲಿ ಪ್ರಯಾಣಿಸುತ್ತಿದ್ದ ಯೂಟ್ಯೂಬರ್ ಒಬ್ಬರು, ಮೆಟ್ರೋದಲ್ಲಿ ಪ್ರಯಾಣಿಕರ ಪರ್ಸ್, ಮೊಬೈಲ್ ಕಳ್ಳತನ ಮಾಡುತ್ತಿದ್ದಂತಹ ಜೇಬುಗಳ್ಳನನ್ನು ರೆಡ್ ಹ್ಯಾಂಡ್ ಆಗಿ ಹಿಡಿದು, ವಿಡಿಯೋ ಮಾಡುತ್ತಾ ಕಳ್ಳನ ಕಪಾಳಕ್ಕೆ ಬಾರಿಸಿದ್ದಾರೆ. ಈ ವಿಡಿಯೋ ಇದೀಗ ಸಿಕ್ಕಾಪಟ್ಟೆ ವೈರಲ್ ಆಗುತ್ತಿದೆ.



ಈ ವಿಡಿಯೋವನ್ನು @Gharkekalesh ಎಂಬ ಎಕ್ಸ್ ಖಾತೆಯಲ್ಲಿ ಹಂಚಿಕೊಳ್ಳಲಾಗಿದ್ದು, ''ದೆಹಲಿ ಮೆಟ್ರೋದಲ್ಲಿ ವ್ಲಾಗರ್ ಕೈಗೆ ಮೊಬೈಲ್ ಕಳ್ಳ ಸಿಕ್ಕಿಬಿದ್ದಿದ್ದಾನೆ'' ಎಂಬ ಶೀರ್ಷಿಕೆಯನ್ನು ಬರೆಯಲಾಗಿದೆ.

ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿರುವ ವಿಡಿಯೋದಲ್ಲಿ ಪ್ರಯಾಣಿಕರಿಂದ ತುಂಬಿ ತುಳುಕುತ್ತಿದ್ದ ದೆಹಲಿ ಮೆಟ್ರೋದಲ್ಲಿ ಸಿಕ್ಕಿದ್ದೆ ಚಾನ್ಸ್ ಎನ್ನುತ್ತಾ ಕಳ್ಳನೊಬ್ಬ ಪ್ರಯಾಣಿಕರ ಜೇಬಿನಿಂದ ಪರ್ಸ್, ಮೊಬೈಲ್ ಎಗರಿಸುವ ಕೆಲಸಕ್ಕೆ ಮುಂದಾಗಿದ್ದಾನೆ. ಅಲ್ಲೇ ವಿಡಿಯೋ ಮಾಡುತ್ತಾ ನಿಂತಿದ್ದ ಇದ್ದ ಯೂಟ್ಯೂಬರ್ ಒಬ್ಬರಿಗೆ ಈತನ ಕಳ್ಳಾಟ ಗೊತ್ತಾಗಿ ಆತನ ಕತ್ತಿನ ಪಟ್ಟಿ ಹಿಡಿದು ಏನ್ ಮಾಡ್ತಿದ್ದೀಯಾ ನೀನು ಎಂದು ಕೇಳುತ್ತಾರೆ. ಅದಕ್ಕೆ ಆ ಕಳ್ಳ ನಾನು ನನ್ನ ಮೊಬೈಲ್ ಹುಡುಕುತ್ತಿದ್ದೇನೆ ಎಂದು ಸುಳ್ಳು ಹೇಳ್ತಾನೆ. ಕಳ್ಳನನ್ನು ರೆಡ್ ಹ್ಯಾಂಡ್ ಆಗಿ ಹಿಡಿದ ಖುಷಿಯಲ್ಲಿ ಆ ಯೂಟ್ಯೂಬರ್ ವಿಡಿಯೋ ಮಾಡುತ್ತಾ ಅಮ್ಮಾ?. ನಾನು ಕಳ್ಳನನ್ನು ಹಿಡಿದುಬಿಟ್ಟೆ ಎನ್ನುತ್ತಾ ಕಳ್ಳನ ಕಪಾಳಕ್ಕೆ ಬಾರಿಸಿ ಇನ್ನು ಮುಂದೆ ಕಳ್ಳತನ ಮಾಡದಂತೆ ಬುದ್ಧಿವಾದ ಹೇಳುವ ದೃಶ್ಯವನ್ನು ಕಾಣಬಹುದು.

ಮೇ 14 ರಂದು ಹಂಚಿಕೊಳ್ಳಲಾದ ಈ ವಿಡಿಯೋ 4 ಲಕ್ಷಕ್ಕೂ ಅಧಿಕ ವೀಕ್ಷಣೆಗಳನ್ನು ಪಡೆದುಕೊಂಡಿದ್ದು, ಆ ಯೂಟ್ಯೂಬರ್ ಈ ಕ್ಷಣಕ್ಕಾಗಿ ಅದೆಷ್ಟು ದಿನದಿಂದ ಕಾದು ಕುಳಿತಿದ್ದರೋ ಎಂದು ನೆಟ್ಟಿಗರು ತಮಾಷೆ ಮಾಡಿದ್ದಾರೆ.

**ಮಾರ್ಕ್ಸ್ ಕಾರ್ಡ್ ಕಳೆದಿದೆ**

Sindhu.S D/O M.Selva Have Lost National Degree College 6th Semester Markscard (Nov 2022) With Degree Roll No.19NCJA038 Year R019-2022. If Found The Markscard by Anyone Please Contact: 9945419535.



ತಿಪಟೂರು ನಗರದ 102 ಎಕರೆ ವ್ಯಾಪ್ತಿಯಲ್ಲಿರುವ ಅಮಾನಿಕೆರೆಯಲ್ಲಿ (ಊರು ಮುಂದಿನ ಕೆರೆ) ಹೇಮಾವತಿಯ ನೀರು ಇಲ್ಲದೆ ಕೆರೆಯ ಅಂಗಳದಲ್ಲಿ ಕುರಿ-ಮೇಕೆಗಳು ಆನಂದದಿಂದ ತನ್ನ ಆಹಾರದ ಮೇವನ್ನು ಮೇಯುತ್ತಿರುವ ದೃಶ್ಯ.

# ನಾಳೆ ಭರತನಾಟ್ಯ ಪ್ರದರ್ಶನ

**ಹುಳಿಯಾರು:** ಹುಳಿಯಾರು ಸಮೀಪದ ಕೋಡಿಪಾಳ್ಯದ ಶ್ರೀ ಕಂಕಾಳೇಶ್ವರಿ, ಶ್ರೀ ತುಳಜಾಭವಾನಿ, ಶ್ರೀ ಮಾರಿಕಾಂಬ ದೇವರುಗಳ 7 ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ಮೇ.17 ರ ಶುಕ್ರವಾರ ಹಾಗೂ ಮೇ.18 ರ ಶನಿವಾರ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಾರ್ಯಕ್ರಮದ ಸಂಚಾಲಕ ಹಾಗೂ ಚಲನಚಿತ್ರ ನಿರ್ಮಾಪಕ ನಂದಿಹಳ್ಳಿ ಶಿವಣ್ಣ ತಿಳಿಸಿದ್ದಾರೆ. ಕೋಡಿಪಾಳ್ಯದ ಧ್ಯಾನನಗರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಅವರು 7 ನೇ ವರ್ಷದ ವಾರ್ಷಿಕೋತ್ಸವದ ಬಗ್ಗೆ ಮಾಹಿತಿ ನೀಡಿದರು. ಮಾ.17 ಮತ್ತು ಮೇ.18 ರಂದು ಗುರುವಂದನೆ, ಗಣಪತಿ ಪೂಜೆ, ದೇವನಾಂದಿ, ಕಲಶಸ್ಥಾಪನೆ, ಹೋಮ ನಡೆಯಲಿದೆ. ಇದೇ ದಿನ ವಾರ್ಷಿಕೋತ್ಸವದ ಅಂಗವಾಗಿ ಭ್ರಮರಿ ಡ್ಯಾನ್ಸ್ ರೆಪರ್ಟರಿಯಿಂದ ಸ್ನೇಹ ಕಪ್ಪಣ್ಣ ಅವರ ನಿರ್ದೇಶನದಲ್ಲಿ ಭರತನಾಟ್ಯ ಪ್ರದರ್ಶನವನ್ನು ಮೇ.17 ರ ಸಂಜೆ 7 ಕ್ಕೆ ಕೋಡಿಪಾಳ್ಯದ ಸಾಂಸ್ಕೃತಿಕ ಸದನದಲ್ಲಿ ಏರ್ಪಡಿಸಲಾಗಿದೆ ಎಂದು ತಿಳಿಸಿದರು.ಪತ್ರಕರ್ತ ನರೇಂದ್ರಬಾಬು, ಸಿನಿಮಾ ಸಹ ನಟ ಗೌಡಿ, ಮಾತಾಟ್ರಸ್ಟ್‌ನ ರಾಜಣ್ಣ, ಸವಿತಾ ಸಮಾಜನ ಚಂದ್ರಣ್ಣ, ಅಯ್ಯಪ್ಪಸ್ವಾಮಿ ದೇವಸ್ಥಾನದ ಭವಾನಿರಮೇಶ್, ವೀರಭದ್ರಣ್ಣ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

**ಚಿಕ್ಕನಾಯಕನಹಳ್ಳಿ ತಾಲೂಕು ಹುಳಿಯಾರು ಹೋಬಳಿಯ ತಿರುಮಲಾಪುರದ ಗ್ರಾಮ ಪಂಚಾಯ್ತಿಯಲ್ಲಿ ಭಗೀರಥ ಮಹರ್ಷಿಯ ಜಯಂತಿ ಆಚರಿಸಲಾಯಿತು.**



## ಕೈಮಗ್ಗ ನೇಕಾರರಿಗೆ ರಾಜ್ಯ ಮಟ್ಟದ ಪ್ರಶಸ್ತಿಗಾಗಿ ಅರ್ಜಿ

**ಚಿಕ್ಕಬಳ್ಳಾಪುರ:** ಕೈಮಗ್ಗ ಉತ್ಪನ್ನಗಳ ಅಭಿವೃದ್ದಿಗಾಗಿ ಕೈಮಗ್ಗ ನೇಯ್ಗೆ ವೃತ್ತಿಯಲ್ಲಿ ನೈಪುಣ್ಯತೆ,ಶ್ರೇಷ್ಠತೆ,ತಾಂತ್ರಿಕತೆ,ಉತ್ಕೃಷ್ಠತೆ ಹೊಂದಿರುವ ಉತ್ಪನ್ನಗಳ ಉತ್ಪಾದನೆಯಲ್ಲಿ ತೊಡಗಿರುವ ಕೈಮಗ್ಗ ನೇಕಾರರಿಗೆ ರಾಜ್ಯ ಮಟ್ಟದ ಪ್ರಶಸ್ತಿಗಳನ್ನು ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಪ್ರಶಸ್ತಿಯು ನಗದು ಬಹುಮಾನವಾಗಿದ್ದು, ರೇಷ್ಮೆ ವಲಯದಲ್ಲಿ ಪ್ರಥಮ ಬಹುಮಾನ 25,000/- ರೂ, ದ್ವಿತೀಯ ಬಹುಮಾನ 20,000/- ರೂಗಳಾಗಿರುತ್ತದೆ. ಹತ್ತಿ ವಲಯದಲ್ಲಿ ಪ್ರಥಮ ಬಹುಮಾನ 20,000/- ರೂ, ದ್ವಿತೀಯ ಬಹುಮಾನ 15,000/- ರೂಗಳಾಗಿದ್ದು, ಉಣ್ಣೆ ವಲಯದಲ್ಲಿ 15,000/- ರೂಗಳ ಜೊತೆಗೆ ನೆನಪಿನ ಕಾಣಿಕೆ, ಪ್ರಶಸ್ತಿ ಪತ್ರ ನೀಡಲಾಗುವುದು. ಅರ್ಹ ಕೈಮಗ್ಗ ನೇಕಾರರು ಖುದ್ದಾಗಿ ಉಪ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಕೊಠಡಿ ಸಂಖ್ಯೆ : ಎಸ್.ಎ-14, 2ನೇ ಮಹಡಿ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಈ ಕಚೇರಿಗೆ ಭೇಟಿ ನೀಡಿ ಅರ್ಜಿ ಪಡೆದು ಅಗತ್ಯ ದಾಖಲಾತಿಗಳೊಂದಿಗೆ ಮೇ 31 ರೊಳಗಾಗಿ ಸಲ್ಲಿಸತಕ್ಕದ್ದು. ಅರ್ಹತೆಗಳು: ಕೈಮಗ್ಗ ನೇಕಾರರು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ವಯಸ್ಸು ಕನಿಷ್ಠ 30 ವರ್ಷ ಪೂರೈಸಿರಬೇಕು.10 ವರ್ಷಗಳ ಅನುಭವ ಹೊಂದಿರಬೇಕು. ಉತ್ಪನ್ನದ ಮಾದರಿ ಸ್ವತಃ ಅರ್ಜಿದಾರರೇ ತಯಾರಿಸಿದ ಉತ್ಪನ್ನವೇ ಆಗಿರಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08156-277031, 9986392953, 8971754927, 9945594959 ಗೆ ಸಂಪರ್ಕಿಸಬಹುದೆಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ಕೋಳಿ ಸಾಕಾಣಿಕೆ ತರಬೇತಿಗೆ ಅರ್ಜಿ ಆಹ್ವಾನ

**ರಾಮನಗರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಕೋಳಿ ಸಾಕಾಣಿಕೆ ಕುರಿತ 10 ದಿನಗಳ ಉಚಿತ ತರಬೇತಿಯು ಅರ್ಜಿ ಆಹ್ವಾನಿಸಲಾಗಿದ್ದು, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ ಹಾಗೂ ತುಮಕೂರು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್ನ್ನ್ ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನವಾಗಿದೆ. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9380162042, 9740982585 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್ ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಬೆಂಗಳೂರು:** ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ಮತ್ತು ತಿದ್ದುಪಡಿ ನಿಯಮ 2022 ರನ್ವಯ ದಿನಾಂಕ: 13-03-2024 ರಂದು ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ 277 (ಆರ್‌ಪಿಸಿ) ಗ್ರೂಪ್-ಬಿ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಅಧಿಸೂಚನೆ ಜಾರಿ ಮಾಡಲಾಗಿತ್ತು. ಈ ಅಧಿಸೂಚನೆಯಲ್ಲಿನ ಜಲ ಸಂಪನ್ಮೂಲ ಇಲಾಖೆಯ ಸಹಾಯಕ ಇಂಜಿನಿಯರ್ (ವಿಭಾಗ-1) ಹುದ್ದೆಗಳಿಗೆ ಬಿ.ಟೆಕ್ ಪದವಿಯನ್ನು ಸಹ ಪರಿಗಣಿಸಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕವನ್ನು ಮೇ 24 ರವರೆಗೆ ವಿಸ್ತರಿಸಲಾಗಿದೆ. ದಿನಾಂಕ: 13-03-2024ರ ಅಧಿಸೂಚನೆಯಲ್ಲಿನ ಇತರೆ ಷರತ್ತು / ಸೂಚನೆಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪರೀಕ್ಷಾ ನಿಯಂತ್ರಕರು ಹಾಗೂ ಕಾರ್ಯದರ್ಶಿ(ಪ್ರ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ವ್ಯತ್ಯಯ

**ಮೈಸೂರು:** ಮೇ.16 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5:30 ಗಂಟೆಯವರೆಗೆ ಕ.ವಿ.ಪ್ರ.ನಿ.ನಿ. ವತಿಯಿಂದ ಜ್ಯೋತಿನಗರ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ 1ನೇ ತ್ರೈಮಾಸಿಕ ಅವಧಿಯ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದೆ. ಈ ಸಂಬಂಧ ಕೆಳಕಂಡ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಜಲಪುರಿ, ಗಾಯತ್ರಿಪುರಂ, ಜ್ಯೋತಿನಗರ, ಉದಯಗಿರಿ, ಕ್ಯಾತಮಾರನಹಳ್ಳಿ, ಶಾಂತಿನಗರ 1 ಮತ್ತು 2ನೇ ಹಂತ, ಗಣೇಶ್ ನಗರ, ಸತ್ಯನಗರ, ಮಹದೇವಪುರ ರಸ್ತೆ, ಜರ್ಮನ್ ಪ್ರೆಸ್, ಉಸ್ಮಾನಿಯಾ ಬ್ಲಾಕ್, ಗೌಸಿಯಾ ನಗರ, ರಾಘವೇಂದ್ರ ನಗರ, ಗಿರಿಯಾಬೋವಿ ಪಾಳ್ಯ, ಯರಗನಹಳ್ಳಿ, ಬನ್ನೂರು ರಸ್ತೆ, ಸಿದ್ಧಾರ್ಥನಗರ, ಆಲನಹಳ್ಳಿ ಬಡಾವಣೆ, ಕೆ.ಎಸ್.ಆರ್.ಟಿ.ಸಿ ಬಡಾವಣೆ, ಪೊಲೀಸ್ ಬಡಾವಣೆ 1ನೇ ಮತ್ತು 2ನೇ ಹಂತ, ಗಿರಿದರ್ಶಿನಿ ಬಡಾವಣೆ, ನಂದಿನ ಬಡಾವಣೆ 1ನೇ ಮತ್ತು 2ನೇ ಹಂತ, ನೇತಾಜಿ ಬಡಾವಣೆ, ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಗಳು ಸಹಕರಿಸಬೇಕೆಂದು ಚಾ.ವಿ.ಸ.ನಿ.ನಿ.ಯ ನ.ರಾ.ಮೊಹಲ್ಲಾ ವಿಭಾಗದ ಕಾರ್ಯ ಮತ್ತು ಪಾಲನೆ, ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರತಿ ಹರಿಹರಪುರ ಗ್ರಾಪಂ ಅಧ್ಯಕ್ಷೆ

**ಕೆ.ಆರ್.ಪೇಟೆ:** ತಾಲೂಕಿನ ಕಸಬಾ ಹೋಬಳಿಯ ಹರಿಹರಪುರ ಗ್ರಾ.ಪಂ.ನೂತನ ಅಧ್ಯಕ್ಷರಾಗಿ ಎಂ.ಬಿ.ರತಿ ಶ್ರೀಧರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಗ್ರಾಮ ಪಂಚಾಯತಿಯ ಹಿಂದಿನ ಅಧ್ಯಕ್ಷರಾಗಿದ್ದ ಸುಂದ್ರಮ್ಮ ಮಂಜೇಗೌಡ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಿಗದಿಯಾಗಿತ್ತು. ಅಧ್ಯಕ್ಷ ಸ್ಥಾನ ಬಯಸಿ ಹರಿಹರಪುರ ಎಂ.ಬಿ ರತಿ ಶ್ರೀಧರ್ ಹೊರತುಪಡಿಸಿ ಉಳಿದ ಯಾವ ಸದಸ್ಯರು ನಾಮಪತ್ರ ಸಲ್ಲಿಸದ ಕಾರಣ ಅಂತಿಮವಾಗಿ ನೂತನ ಅಧ್ಯಕ್ಷರಾಗಿ ಎಂ.ಬಿ ರತಿ ಶ್ರೀಧರ್ ಅವರನ್ನ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಲೋಕೇಶ್ ಘೋಷಿಸಿದರು. ನೂತನ ಅಧ್ಯಕ್ಷರನ್ನ ಅಭಿನಂದಿಸಿ ಮಾತನಾಡಿದ ಗ್ರಾ. ಪಂ ಸದಸ್ಯ ಹಾಗೂ ವಕೀಲ ಬೊಮ್ಮನಹಳ್ಳಿ ಹರ್ಷ ಅಧಿಕಾರ ಶಾಶ್ವತವಲ್ಲ ನಾವು ಮಾಡುವ ಕೆಲಸಗಳು ಶಾಶ್ವತವಾಗಿರುತ್ತವೆ, ಅವಿರೋಧವಾಗಿ ನಿಮಗೆ ಒಂದು ಸುವರ್ಣ ಅವಕಾಶ ಸಿಕ್ಕಿದೆ ನಿಮ್ಮ ಆಡಳಿತ ಅವಧಿಯಲ್ಲಿ ಪಕ್ಷಾ ಬೇದ ಮರೆತು ಅಭಿವೃದ್ಧಿ ಕಾರ್ಯಗಳ ಕೈಗೊಳ್ಳಬೇಕು ಹಾಗೂ ಗ್ರಾ.ಪಂ.ಗೆ ಇಂದು ನೇರವಾಗಿ ಉದ್ಯೋಗ ಖಾತ್ರಿ ಯೋಜನೆಯಡಿ ಸಾಕಷ್ಟು ಅನುದಾನ ಬರುತ್ತಿದೆ.ಗ್ರಾಮಗಳ ಸಮಗ್ರ ಅಭಿವದ್ಧಿಯ ಜತೆಗೆ ಜನರ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಸಲಹೆ ನೀಡಿದರು.

ಬಳಿಕ ಮಾತನಾಡಿದ ನೂತನ ಅಧ್ಯಕ್ಷೆ ಎಂ.ಬಿ ರತಿ ಶ್ರೀಧರ್ ನನ್ನನ್ನು ಅವಿರೋಧವಾಗಿ ಅಧ್ಯಕ್ಷರಾಗಿ ಆಯ್ಕೆಯಾಗಲು ಸಹಕಾರ ನೀಡಿದ ನಮ್ಮ ಪಂಚಾಯತಿ ಎಲ್ಲಾ ಸದಸ್ಯರು ಹಾಗೂ ಪಂಚಾಯತಿ ವ್ಯಾಪ್ತಿಯ ಮುಖಂಡರಿಗೆ ಧನ್ಯವಾದಗಳನ್ನು ಅರ್ಪಿಸಿದರು. ನನ್ನ ಆಡಳಿತ ಅವಧಿಯಲ್ಲಿ ಪಕ್ಷಭೇದ ಮರೆತು ಸರ್ವ ಸದಸ್ಯರು ಜೊತೆಗೂಡಿ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಬರುವ ಪ್ರತಿ ಗ್ರಾಮಗಳಲ್ಲಿ ರಸ್ತೆ, ಚರಂಡಿ, ವಿದ್ಯುತ್ ದೀಪಗಳು, ಕುಡಿಯುವ ನೀರು, ಜಾನುವಾರು ನೀರು ಕುಡಿಯುವ ತೊಟ್ಟಿ, ಜಾನುವಾರು ಕೊಟ್ಟಿಗೆ ಹಾಗೂ ಕೆರೆ-ಕಟ್ಟೆ ಅಭಿವೃದ್ಧಿ ಇದರ ಜೊತೆಗೆ ಸರ್ಕಾರ ಇಲಾಖೆಯಿಂದ ಬರುವ ಸವಲತ್ತುಗಳನ್ನು ಸದುಪಯೋಗ ಮಾಡಿಕೊಂಡು ಗ್ರಾಮಗಳ ಅಭಿವೃದ್ಧಿಗೆ ಒತ್ತು ನೀಡುವುದಾಗಿ ಭರವಸೆ ನೀಡಿದರು. ಗ್ರಾ.ಪಂ ಉಪಾಧ್ಯಕ್ಷ ಬಲರಾಮೇಗೌಡ ಸದಸ್ಯರಾದ ಬೊಮ್ಮನಹಳ್ಳಿ ಲತಾ,ಆಶಾ, ದೇವಮ್ಮ, ಜಯಮಣಿ, ಕುಸುಮ, ಹೆಚ್. ಎನ್ ಹರಿಚಂದ್ರ, ದೇವರಾಜು, ಸುಂದ್ರಮ್ಮ, ಜಯರಾಮೇಗೌಡ, ಬಿ ಗಣೇಶಗೌಡ, ಟಿ. ಆರ್ ನಂದೀಶ್, ಸರೋಜಮ್ಮ, ಕತ್ರಘಟ್ಟ ಎಂ.ಕೆ ಪ್ರಸನ್ನ ಕುಮಾರ್, ವಿಜಯ, ನಾಗೇಗೌಡ, ನರಸಿಂಹಮೂರ್ತಿ, ಎಸ್.ಡಿ ರುಕ್ಮಿಣಿ, ಹಿರಿಯ ಮುಖಂಡರಾದ ಹೆಚ್. ವೈ ಜಯಕುಮಾರ್, ಬಿಜೆಪಿ ತಾಲೂಕು ಉಪಾಧ್ಯಕ್ಷ ಕುರ್ನೆನಹಳ್ಳಿ ನವೀನ್ ಕುಮಾರ್ , ದೀಪಕ್, ಕತ್ರಘಟ್ಟ ಮಹೇಶ್,ಪ್ರದೀಪ್,ರೇವಣ್ಣ,ಸಿದ್ದಲಿಂಗೇಗೌಡ,ದೀಪಕ್, ಮಂಜುನಾಥ್, ಅ.ತಿ.ಶ್ರೀನಿವಾಸ್, ಮಾಡುವಿನಕೋಡಿ ನಾಗೇಶ್,ಕಾಂಗ್ರೆಸ್ ಅಲ್ಪಸಂಖ್ಯಾತರ ನಗರ ಘಟಕದ ಅಧ್ಯಕ್ಷ ಅಯಾಜ್ ಷರೀಫ್,ದೀಪು, ಹೊಸಹೊಳಲು ಅನಿಲ್, ಕೊಮ್ಮೆನಹಳ್ಳಿ ಅನಿಲ್, ಸುನಿಲ್, ಸೇರಿದಂತೆ ಉಪಸ್ಥಿತರಿದ್ದರು.



# ಮಳೆಗಾಳಿಗೆ 400 ಬಾಳೆಗಿಡ ಧರಗೆ



**ಹುಳಿಯಾರು:** ಮಳೆಗಾಳಿಗೆ 400 ಬಾಳೆಗಿಡ ಧರೆಗೆ ಉರುಳಿ ಅಪಾರ ನಷ್ಟವಾಗಿರುವ ಘಟನೆ ಹುಳಿಯಾರು ಹೋಬಳಿಯ ಯಳನಾಡು ಗ್ರಾಮದಲ್ಲಿ ನಡೆದಿದೆ.

ಯಳನಾಡು ಗ್ರಾಮದ ವೈ.ಎಸ್.ನಾಗರಾಜು ಅವರು ಯಳನಾಡು ಸರ್ವೆ ನಂಬರ್ 104/1 ರಲ್ಲಿನ ತಮ್ಮ 2.12 ಎಕರೆ ಜಮೀನಿನಲ್ಲಿ 1.30 ಎಕರೆ ಜಮೀನಿನಲ್ಲಿ ಬೆಳೆದಿರುವ ಸುಮಾರು ಫಸಲಿಗೆ ಬಂದಿರುವ 400 ಬಾಳೆಗಿಡಗಳು ಮಳೆಗಾಳಿಗೆ ಸಂಪೂರ್ಣ ನೆಲಕ್ಕೆ ಬಿದ್ದಿದೆ.

ಘಟನಾ ಸ್ಥಳಕ್ಕೆ ಕಂದಾಯ ತನಿಖಾಧಿಕಾರಿ ಶ್ರೀನಿವಾಸ್, ಗ್ರಾಮ ಲೆಕ್ಕಾಧಿಕಾರಿ ಚಂದ್ರಶೇಖರ್, ಗ್ರಾಮ ಸಹಾಯಕ ಸಿದ್ದರಾಮಯ್ಯ ಅವರು ಬಂದು ಪರಿಶೀಲಿಸಿ ಸರ್ಕಾರಕ್ಕೆ ಪರಿಹಾರಕ್ಕಾಗಿ ವರದಿ ನೀಡಿದ್ದಾರೆ.

## 80 ಸಾವಿರ ರೂ. ಕುರಿ ಪರಿಹಾರ ವಿತರಣೆ

**ಹುಳಿಯಾರು:** ಕಂದಿಕೆರೆ ಹೋಬಳಿ ರಾಮನಹಳ್ಳಿ ಗ್ರಾಪಂ ವ್ಯಾಪ್ತಿಯ ಹನುಮಂತನಹಳ್ಳಿಯಲ್ಲಿ ಮೇ.12 ರ ಭಾನುವಾರ ಸಿಡಿಲು ಬಡಿದು ಇದೇ ಗ್ರಾಮದ ಜಯಣ್ಣ ಎಂಬುವವರಿಗೆ ಸೇರಿದ 20 ಕುರಿಗಳು ಸಾವನ್ನಪ್ಪಿದ್ದವು. ಪಶು ಇಲಾಖೆಯ ತಾಲೂಕು ಸಹಾಯಕ ನಿರ್ದೇಶಕ ರೆ.ಮ.ನಾಗಭೂಷಣ ಹಾಗೂ ತಿಮ್ಮನಹಳ್ಳಿ ಪಶು ಅಧಿಕಾರಿ ಡಾ.ಶಾಂತೇಶ್ ಅವರು ಪರಿಶೀಲಿಸಿ ತಾಲೂಕು ಆಡಳಿತಕ್ಕೆ ವರದಿ ನೀಡಿದ್ದರು. ಪ್ರಕೃತಿ ವಿಕೋಪದಿಂದಾದ ನಷ್ಟವೆಂದು ತಾಲೂಕು ಆಡಳಿತ ಪರಿಗಣಿಸಿ ಘಟನೆ ನಡೆದು ಕೇವಲ 2 ದಿನದಲ್ಲಿ 80 ಸಾವಿರ ರೂ. ಪರಿಹಾರದ ನೀಡಿದೆ. ರೈತ ಜಯಣ್ಣ ಅವರ ಮನೆಗೆ ತಹಸೀಲ್ದಾರ್ ವಿನಾಯಕ ಸಾಗರ್ ಅವರು ಖುದ್ದು ಭೇಟಿ ನೀಡಿ 80 ಸಾವಿರ ರೂ.ಗಳ ಆದೇಶ ಪತ್ರವನ್ನು ವಿತರಿಸಿದರು. ಅಲ್ಲದೆ 20 ಸಾವಿರ ರೂ.ಗಳನ್ನು ಕುರಿನಿಗಮದಿಂದ ಕೊಡಿಸಲು ಕ್ರಮ ಕೈಗೊಂಡಿರುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಪಶು ಇಲಾಖೆಯ ತಾಲೂಕು ಸಹಾಯಕ ನಿರ್ದೇಶಕ ರೆ.ಮ.ನಾಗಭೂಷಣ ಹಾಗೂ ತಿಮ್ಮನಹಳ್ಳಿ ಪಶು ಅಧಿಕಾರಿ ಡಾ.ಶಾಂತೇಶ್ ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.



## 5 ದಿನಗಳ ಕಾಲ ಗಾಳಿ ಮಳೆ

**ಬೆಂಗಳೂರು:** ರಾಜ್ಯ ರಾಜಧಾನಿ ಬೆಂಗಳೂರು ಸೇರಿದಂತೆ ಹಲವು ಭಾಗಗಳಲ್ಲಿ ಕಳೆದ ಒಂದು ವಾರದಿಂದ ಮಳೆಯಾಗುತ್ತಿದೆ. ಇಂದಿನಿಂದ ಮುಂದಿನ ಐದು ದಿನಗಳ ಕಾಲ ರಾಜ್ಯದ ಹಲವೆಡೆ ಹೆಚ್ಚಿನ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಮಳೆ ಹೆಚ್ಚಾಗಲಿರುವ ಕಾರಣ ರಾಜ್ಯದ ಹಲವು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ದಕ್ಷಿಣ ಒಳನಾಡು, ಉತ್ತರ ಒಳನಾಡು, ಕರಾವಳಿ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

# ಭಗೀರಥ ಜಯಂತಿ ಆಚರಿಸದಿದ್ದಕ್ಕೆ ಆಕ್ರೋಶ

**ಹುಳಿಯಾರು:** ಗ್ರಾಮ ಪಂಚಾಯ್ತಿಯಿಂದ ಭಗೀರಥ ಜಯಂತಿ ಆಚರಿಸದೆ ನಿರ್ಲಕ್ಷ್ಯಿಸಿದ್ದಾರೆ ಎಂದು ಆರೋಪಿಸಿ ಉಪ್ಪಾರ ಸಮಾಜದ ಮುಖಂಡರು ಪಂಚಾಯ್ತಿ ಆಡಳಿತದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಘಟನೆ ಹಂದನಕೆರೆ ಹೋಬಳಿಯ ದೊಡ್ಡಎಣ್ಣೇಗೆರೆಯಲ್ಲಿ ಮಂಗಳವಾರ ಜರುಗಿದೆ.

ಮಂಗಳವಾರ ಭಗೀರಥ ಜಯಂತಿ ಇರುವುದರಿಂದ ಉಪ್ಪಾರ ಸಮಾಜದ ಬಂದುಗಳು ಜಯಂತಿಯಲ್ಲಿ ಪಾಲ್ಗೊಳ್ಳಲು ಪಂಚಾಯ್ತಿಗೆ ತೆರಳಿದ್ದಾರೆ. ಈ ಸಂದರ್ಭದಲ್ಲಿ ಪಂಚಾಯ್ತಿಯಲ್ಲಿ ಜಯಂತಿ ಆಚರಣೆಗೆ ಯಾವುದೇ ಸಿದ್ಧತೆ ಮಾಡಿಕೊಂಡಿಲ್ಲದಿದ್ದರಿಂದ ಪಿಡಿಒ ಬೀರಪ್ಪ ಅವರಿಗೆ ದೂರವಾಣಿ ಕರೆ ಮಾಡಿ ವಿಚಾರಿಸಿದ್ದಾಗ ಸರ್ಕಾರಿ ಆದೇಶವಿಲ್ಲವೆಂದು ಉತ್ತರಿಸಿದ್ದಾರೆ.

ಇದರಿಂದ ಆಕ್ರೋಶಗೊಂಡ ಮುಖಂಡರು ಭಗೀರಥ ಮಹರ್ಷಿ ತಮ್ಮ ಸತತ ಪ್ರಯತ್ನಗಳ ಮೂಲಕ ಗಂಗೆಯನ್ನು ಭೂಲೋಕಕ್ಕೆ ತಂದು ಇಡೀ ಭರತ ಖಂಡವನ್ನು ಪವಿತ್ರ ಭೂಮಿಯನ್ನಾಗಿ ಮಾಡಿದ್ದಾರೆ. ಈ ಮೂಲಕ ಕೃಷಿಕ ಸಮಾಜದ ಉದ್ಧಾರಕ್ಕೆ ಕಾರಣಕರ್ತರಾಗಿದ್ದಾರೆ. ಇಂತರ ಮಹಾನ್ ತಪಸ್ವಿಯ ಜಯಂತಿಯನ್ನು ಸರ್ಕಾರದಿಂದ ಆಚರಿಸುವಂತೆ ಉಪ್ಪಾರ ಸಮಾಜದ ಹೋರಾಟ ಮಾಡಿದ ಫಲವಾಗಿ ಮೇ.14 ರ ಗಂಗಾಸಪ್ತಮಿ ದಿನದಂದು ಸರ್ಕಾರಿ ಕಛೇರಿಗಳಲ್ಲಿ ಆಚರಿಸಲು ಸರ್ಕಾರ ಆದೇಶ ಮಾಡಿದೆ.

ಅದರಂತೆ ಹಿಂದಿದ ಪಿಡಿಒಗಳು ಉಪ್ಪಾರ ಸಮಾಜದ ಮುಖಂಡರನ್ನು ಆಹ್ವಾನಿಸಿ ಕಛೇರಿಯಲ್ಲಿ ಸರಳವಾಗಿ ಆಚರಿಸುತ್ತಿದ್ದರು. ಆದರೆ ಈ ವರ್ಷ ಆಚರಿಸುವುದಿರಲಿ ಸರ್ಕಾರದ ಆದೇಶವಿಲ್ಲವೆಂದು ಪಿಡಿಒ ಭಗೀರಥ ಮಹರ್ಷಿಗೆ ಅವಮಾನ ಮಾಡಿದ್ದಾರೆ. ಪಿಡಿಒ ಅವರ ಈ ಬೇಜವಾಬ್ದಾರಿ ವರ್ತನೆಯು ಸಮಸ್ತ ಉಪ್ಪಾರ ಸಮಾಜಕ್ಕೆ ನೋವುಂಟು ಮಾಡಿದೆ. ಹಾಗಾಗಿ ಪಿಡಿಒ ಅವರು ಕ್ಷಮೆಯಾಚಿಸಿ ಅದ್ದೂರಿಯಾಗಿ ಭಗೀರಥ ಜಯಂತಿ ಆಚರಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಾಂಚಾಯ್ತಿ ಸಮಾಜದ ಸದಸ್ಯರಾದ ಪ್ರೇಮ ರಾಘವೇಂದ್ರ. ಮಲ್ಲೇಶಯ್ಯ, ಸಮಾಜದ ಮುಖಂಡರಾದ ವಿಜಯ್ ಕುಮಾರ್, ಸಿದ್ದೇಶ್, ಜಯಣ್ಣ, ಕುಮಾರಯ್ಯ, ಕಾಂತರಾಜು, ಯತೀಶ್ ಮುಂತಾದವರು ಇದ್ದರು.

## ಪ್ರಥಮ ಪಿ.ಯು.ಸಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಾಮರಾಜನಗರ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಯ 2024-25ನೇ ಶೈಕ್ಷಣಿಕ ಸಾಲಿನ ಪ್ರಥಮ ಪಿ.ಯು.ಸಿ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಅರ್ಹ ವಿದ್ಯಾರ್ಥಿಗಳು ಮತ್ತು ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳು ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿರಬೇಕು. ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯದವರಿಗೆ ಶೇ. 75ರಷ್ಟು ಪ್ರವೇಶ ಮೀಸಲಿರಿಸಿದೆ. ಸರ್ಕಾರಿ, ಸರ್ಕಾರದಿಂದ ಅನುಮೋದಿಸಲ್ಪಟ್ಟ ಶಾಲೆಗಳಲ್ಲಿ 10ನೇ ತರಗತಿಯಲ್ಲಿ ಅಧ್ಯಯನ ಮಾಡಿ ಉತ್ತೀರ್ಣರಾಗಿರಬೇಕು. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಕುಟುಂಬದ ವಾರ್ಷಿಕ ಆದಾಯವು 2.50 ಲಕ್ಷ ರೂ. ಮೀರಿರಬಾರದು. ವಿಕಲಚೇತನರಿಗೆ ಶೇ. 3ರಷ್ಟು ಪ್ರವೇಶ ಮೀಸಲಿರಿಸಿದೆ. ಶೇ. 25ರಷ್ಟು ಸ್ಥಾನಗಳನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಪ್ರವೇಶಾತಿ ಮೀಸಲಿರಿಸಿದೆ. ಆಸಕ್ತ ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ಎಲ್ಲಾ ದಾಖಲೆಗಳೊಂದಿಗೆ ಹತ್ತಿರವಿರುವ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ, ಜಿಲ್ಲಾ ಅಥವಾ ತಾಲೂಕು ಮಾಹಿತಿ ಕೇಂದ್ರಗಳಲ್ಲಿ ಉಚಿತವಾಗಿ ಮೇ 27ರೊಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ ಮೊ.ಸಂ 7760553146 ಕೊಳ್ಳೇಗಾಲ ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಮೊ.ಸಂ 7829587596, ಯಳಂದೂರು ಮೊ.ಸಂ 9845254995, ಚಾಮರಾಜನಗರ ಮೊ.ಸಂ 9620886393, ಗುಂಡ್ಲುಪೇಟೆ ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಮೊ.ಸಂ 8217593163 ಸಂಪರ್ಕಿಸಬಹುದು.

## ಸಂಗೀತಗಾರರ ಹುದ್ದೆಗಳಿಗೆ ನೇಮಕಾತಿಗೆ ರ‍್ಯಾಲಿ

**ಕೋಲಾರ:** ಭಾರತೀಯ ವಾಯುಪಡೆಯಲ್ಲಿ ಅಗ್ನಿವೀರ್ ವಾಯು ಯೋಜನೆಯಡಿ ಸಂಗೀತಗಾರರ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ನೇಮಕಾತಿ ರ‍್ಯಾಲಿಯನ್ನು ಆಯೋಜಿಸಲಾಗಿದೆ. ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಜನವರಿ 01, 2004 ರಿಂದ ಜುಲೈ 7, 2007 ರೊಳಗೆ ಜನಿಸಿರುವ ಅವಿವಾಹಿತ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಅರ್ಹರಾಗಿರುತ್ತಾರೆ. ನೇಮಕಾತಿ ರ‍್ಯಾಲಿಯಲ್ಲಿ ಪಾಲ್ಗೊಳ್ಳಲು ಆನ್‌ಲೈನ್ https://agnipathvayu.cdac.in ನಲ್ಲಿ ಜೂನ್ 05, 2024 ರೊಳಗೆ ನೋಂದಣಿ ಮಾಡಿಕೊಳ್ಳಬಹುದು. ಅಭ್ಯರ್ಥಿಗಳು ಸರ್ಕಾರದಿಂದ ಅಂಗೀಕೃತವಾದ ಸಂಸ್ಥೆಗಳಲ್ಲಿ ಮೆಟ್ರಿಕ್ಯೂಲೇಷನ್ ಶಿಕ್ಷಣವನ್ನು ಪೂರೈಸಿದ್ದು ಸಂಗೀತ, ಹಾಡುಗಾರಿಕೆ ಹಾಗೂ ಸಂಗೀತ ವಾದ್ಯಗಳನ್ನು ನುಡಿಸುವ ಪರಿಣಿತಿ ಹೊಂದಿರಬೇಕಾಗಿರುತ್ತದೆ. ಅಭ್ಯರ್ಥಿಗಳನ್ನು ದೈಹಿಕ ಧಾಡ್ಯತೆ, ದೈಹಿಕ ಸಾಮರ್ಥ್ಯ ಪರೀಕ್ಷೆ, ಸಂಗೀತದಲ್ಲಿನ ಪರಿಣಿತಿ, ಲಿಖಿತ ಪರೀಕ್ಷೆ ಹಾಗೂ ವೈದ್ಯಕೀಯ ಪರೀಕ್ಷೆ ಮೂಲಕ ಆಯ್ಕೆ ಮಾಡಲಾಗುತ್ತದೆ. ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆಯಲ್ಲಿ ಪಡೆಯಬಹುದೆಂದು ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬುಡ್ಡಿದೀಪ ಸಂಸ್ಥೆಯಿಂದ ನಾಟಕ ಪ್ರದರ್ಶನ

**ಕೋಲಾರ:** ಕೋಲಾರದ ಪಾಪರಾಜನಹಳ್ಳಿಯಲ್ಲಿರುವ ಕೋಟಿಗಾನಹಳ್ಳಿ ರಾಮಯ್ಯನವರ ಬುಡ್ಡಿದೀಪ ಸಂಸ್ಥೆಯಿಂದ ಮೇ 18 ಮತ್ತು 19ರಂದು ನಾಟಕ ಪ್ರದರ್ಶನ ನಡೆಯಲಿದೆ. ಪತ್ರಕರ್ತರ ಭವನದಲ್ಲಿ ಇಂದುನಡೆದ ಪತ್ರಿಕಾಘೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕೋಟಗಾನಹಳ್ಳಿ ರಾಮಯ್ಯ ನವರು ನಮ್ಮ ಸಂಸ್ಥೆಯು ಮೂವತ್ತು ವರ್ಷಗಳಿಂದ ಪ್ರಾಥಮಿಕ ಶಿಕ್ಷಣದಲ್ಲಿ ಕಲೆ ,ಸಾಹಿತ್ಯ ,ಸಂಸ್ಕೃತಿ ,ಜಾನಪದ ,ರಂಗಭೂಮಿ ಹೀಗೆ ಹಲವು ಜ್ಞಾನ ಶಿಸ್ತುಗಳನ್ನು ಬೆಸೆಯುವ ಪ್ರಯೋಗಗಳ ಅಂತಿಮ ಫಲವಾಗಿದೆ .'ನುಡಿಗುರುತು -ನೆಲಗುರುತು 'ಗಳ ಮೂಲಕ ಶಿಕ್ಷಣ ನೀಡ ಬೇಕೆಂದು ಹೊಸ ನಾಟಕ ತಿಳುವಳಿಯಾಗಿದೆ ಎಂದರು. ಸಂಸ್ಕೃತಿ ಸಂಗಮ 1 ಅಕ್ಟೋಬರ್ 12 13 14 2023 ರಂದು ಕೋಲಾರದಿಂದ ಆರಂಭವಾಗಿ ಸಂಸ್ಕೃತಿ ಸಂಗಮ 2ಮಂಡ್ಯ ನೆಲದಲ್ಲಿ 15 ನಾಟಕಗಳ ರಚನೆ ಮತ್ತು ನಾಟಕಗಳ ಪ್ರದರ್ಶನ ಮುಗಿಸಿಕೊಂಡು ಇದೀಗ ಸಂಸ್ಕೃತಿ ಸಂಗಮ 3 ಕ್ಕಾಗಿ 'ನೆಲ ಗಮಲು ' ನಾಟಕೋತ್ಸವವೆಂಬ ಶೀರ್ಷಿಕೆಯಡಿ ದಿವಂಗತ ಶ್ರೀರಾಮರೆಡ್ಡಿ ರವರ ನೆನಪಿನಲ್ಲಿ ಮೇ 18 , 19 ರಂದು ಚನ್ನಯ್ಯ ರಂಗಮಂದಿರದಲ್ಲಿ ನಾಲ್ಕು ನಾಟಕಗಳ ಪ್ರದರ್ಶನ ನಡೆಯಲಿದೆ . ಇದಕ್ಕಾಗಿ ಮೇ ಒಂದರಿಂದ ಯಡಳ್ಳಿ ,ಕಾರ್ಮನಹಳ್ಳಿ ಮತ್ತು ನಚಿಕೇತ ನಿಲಯ ಮೂರುಕಡೆ ಮಕ್ಕಳ ಬೇಸಿಗೆ ಶಿಬಿರವನ್ನು ಏರ್ಪಡಿಸಲಾಗಿದೆ . ಇಲ್ಲಿ ತಯಾರಾಗುವ ನಾಟಕಗಳೊಂದಿಗೆ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದಲ್ಲಿ ಸಂಸ್ಕೃತಿಸಂಗಮ 2ರಲ್ಲಿ ತಯಾರಾದ ನಾಟಕವು ಸೇರಿ ಒಟ್ಟು 4 ನಾಟಕಗಳನ್ನು ಪ್ರದರ್ಶಿಸಲಾಗುವುದು ಎಂದರು. ಇದಕ್ಕಾಗಿ ನಚಿಕೇತ ನಿಲಯದ ಹಿಂಭಾಗದಲ್ಲಿರುವ ಬುದ್ಧನಿಲಯದ ನವೀಕರಣ ಮತ್ತು ನಿಲಯದ ಸುತ್ತಲೂ ಸ್ವಚ್ಛತೆ ಸ್ವತಃ ನಮ್ಮ ತಂಡದವರು ಮುಗಿಸಿದ್ದು ಇದಕ್ಕಾಗಿ ತಂಡದವರೇ ಕರ್ಚು ವೆಚ್ಚಗಳನ್ನು ಭರಿಸಿರುವುದು ಶ್ಲಾಘನೀಯ ಎಂದರು.

## ಮಲೆ ಮಹದೇಶ್ವರ ಬೆಟ್ಟದ ಮಜ್ಜನ ಬಾವಿಯೇ ಮುಳುಗಡೆ; ಮಜ್ಜನ ಬಾವಿಯ ನೀರು ಕಲುಷಿತ

**ಚಾಮರಾಜನಗರ :** ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಪ್ರತಿವರ್ಷದಂತೆ ಈ ವರ್ಷವೂ, ಮಳೆಗಾಲದಲ್ಲಿ ಜೋರು ಮಳೆ ಬಂದರೆ ಪ್ರತಿ ಬಾರಿಯೂ ನಂದನವನ ನೀರಿನಿಂದ ಆವೃತ ಗೊಳ್ಳುತ್ತಿದೆ.

ಚಾಮರಾಜನಗರ ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟದಲ್ಲಿ ಮಳೆ ಬಂದರೆ ಮಳೆಯ ನೀರಿನ ರಭಸಕ್ಕೆ ಮಹದೇಶ್ವರನಿಗೆ ನಿತ್ಯ ತ್ರಿಕಾಲ ಪೂಜೆ ನೆರವೇರಿಸಲು ಆಗ್ರೋದಕವನ್ನು ತರುವ ನಂದನವನದ ಮಜ್ಜನ ಬಾವಿ ಸಂಪೂರ್ಣ ನೀರಿನಿಂದ ಅವೃತವಾದಾಗಲೆಲ್ಲ ಅರ್ಚಕರು ಮತ್ತೊಂದು ಬಾವಿಯಿಂದ ಜಲವನ್ನು ತಂದು ಪೂಜೆಯನ್ನು ನೆರವೇರಿಸುವ ಸನ್ನಿವೇಶ ಎದುರಾಗಿದೆ. ಮಹದೇಶ್ವರ ಬೆಟ್ಟದ ಮಜ್ಜನ ಬಾವಿಯ ಪ್ರದೇಶಕ್ಕೆ ಕೊಳಚೆ ನೀರು ಸೇರುವುದರಿಂದ ಈ ಸನ್ನಿವೇಶದಲ್ಲಿ ಅರ್ಚಕರು ಎರಡೆರಡು ಬಾರಿ ಸ್ನಾನ ಮಾಡಿ ಪೂಜೆಗೆ ತೆರಳುವ ಸನ್ನಿವೇಶ ಉಂಟಾಗುತ್ತದೆ. ಈ ಬಗ್ಗೆ ಅಗತ್ಯ ಕ್ರಮವಹಿಸುವಂತೆ ಶ್ರೀ ಮಲೆ ಮಹದೇಶ್ವರ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಆಡಳಿತಕ್ಕೆ ಈ ಹಿಂದೆ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎನ್ನಲಾಗುತ್ತಿದೆ. ಇದೂವರೆಗೂ ಅಧಿಕಾರಿಗಳು ಒಳಚರಂಡಿ ಕಾಮಗಾರಿಯನ್ನು ಪೂರ್ಣಗೊಳಿಸಿ ಕೊಳಚೆ ನೀರು ದೇಗುಲದ ಆವರಣದಲ್ಲಿ ನಿಲ್ಲದಂತೆ ಕ್ರಮವಹಿಸಿಲ್ಲ ಎನ್ನುವ ದೂರು ಕೇಳಿ ಬರುತ್ತಿದೆ.

ನೂತನವಾಗಿ ಅಧಿಕಾರ ಸ್ವೀಕರಿಸಿರುವ ಪ್ರಾಧಿಕಾರದ ಕಾರ್ಯದರ್ಶಿ ರಘುರವರು ಪ್ರತಿ ಬಾರಿಯೂ ಮಳೆ ಬಂದಾಗ ಮಜ್ಜನಬಾವಿ ಮುಳುಗಡೆಯಾಗುವುದನ್ನು ತಪ್ಪಿಸಿ, ಮಳೆಯ ನೀರನ್ನು ಬೇರಡೆ ಹೋಗುವುದಕ್ಕೆ ಅನುಕೂಲ ಮಾಡಿಕೊಡಬೇಕಾಗಿದೆ. ಈ ಹಿಂದೆ ಹಲವು ಬಾರಿ ಸಾಮಾಜಿಕ ಜಾಲತಾಣ ಹಾಗೂ ಮಾಧ್ಯಮಗಳಲ್ಲಿ ಮಜ್ಜನ ಬಾವಿಯ ನೀರು ಕಲುಷಿತ ಕೊಳ್ಳುವುದರ ಬಗ್ಗೆ ಬಿತ್ತರಗೊಂಡಿತು. ಪ್ರತಿ ಬಾರಿಯೂ ಮಳೆ ಬಂದಾಗ ನಂದನವನ ಪ್ರದೇಶ ಮಳೆಯ ನೀರಿನ ಆವೃತ ಗೊಳ್ಳುತ್ತದೆ ಇದನ್ನು ತಪ್ಪಿಸಲು ಒಂದು ಬೃಹತ್ ಇಂಗುಗುಂಡಿಯನ್ನು ಸ್ಥಾಪಿಸಬಹುದು ಇದರಿಂದಲೂ ಕೂಡ ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಸಹಾಯವಾಗುತ್ತದೆ ಇಲ್ಲವೇ ಪಕ್ಕದಲ್ಲಿರುವ ಎರಡು ಬೃಹತ್ ಕಲ್ಯಾಣಿ ಕೊಳ ನಿರ್ಮಿಸಿರುವದಕ್ಕೆ ಅಲ್ಲಿಗೆ ಮಳೆ ನೀರು ಸರಾಗವಾಗಿ ಹೋಗಿ ಸೇರುವುದಕ್ಕೆ ಅನುಕೂಲ ಮಾಡಬಹುದಾಗಿದೆ.

### ಹಸುವಿನಲ್ಲಿ ಹೊಟ್ಟೆಯ ನಾಲ್ಕನೇ ಭಾಗದ ಸ್ಥಾನ ಪಲ್ಲಟ

## ಅಪರೂಪದ ಸ್ಥಿತಿಗೆ ಯಶಸ್ವಿ ಶಸ್ತ್ರಚಿಕಿತ್ಸೆ

**ಹುಳಿಯಾರು:** ಚಿಕ್ಕನಾಯಕನಹಳ್ಳಿ ತಾಲೂಕಿನ ಗೊಡೇಕೆರೆ ಗ್ರಾಮದ ಸರ್ವೇಶ್ ರವರ ಈಗ ತಾನೇ ಕರು ಹಾಕಿದ ಹಸುವು ಮೇವನ್ನು ತಿನ್ನಲು ಆಗದೇ, ಸರಿಯಾಗಿ ಸಗಣಿ ಇಡಲಾರದೇ ತಿರುಗಿ ತನ್ನ ಬಲಭಾಗದ ಹೊಟ್ಟೆಯನ್ನು ನೋಡುತ್ತಾ ಅತಿಯಾದ ಹೊಟ್ಟೆ ನೋವಿನಿಂದ ನರಳುತ್ತಿತ್ತು. ಹಾಲು ಇಳುವರಿ ಸಂಪೂರ್ಣವಾಗಿ ನಿಂತು ಹೋಗಿತ್ತು.

ಈ ಸಂಧರ್ಬದಲ್ಲಿ ತಿಪಟೂರಿನ ನೊಣವಿನಕೆರೆಯ ಪಶುವೈದ್ಯರಾದ ಡಾ.ಎಸ್.ಪಿ.ಮಂಜುನಾಥ್ ರವರು ಈ ಸ್ಥಿತಿಯನ್ನು ಅಪರೂಪಕ್ಕೊಮ್ಮೆ ಕಾಣಲ್ಪಡುವ ಹಸುವಿನ ಹೊಟ್ಟೆಯ ನಾಲ್ಕನೇ ಭಾಗದ ಬಲ ಭಾಗದ ಸ್ಥಳಾಂತರ ( ರೈಟ್ ಅಬೊಮೇಸಲ್ ಡಿಸ್ಪ್ಲೇಸ್ಮೆಂಟ್) ಎಂದು ಪತ್ತೆ ಹಚ್ಚಿ ಅಂದೇ ರೈತರ ಮನೆ ಬಾಗಿಲಲ್ಲೇ ನಿಂತಿರುವ ಸ್ಥಿತಿಯಲ್ಲೇ ಉದರ ತೆರೆಯುವ ಶಸ್ತ್ರ ಚಿಕಿತ್ಸೆ ನಡೆಸಿ ಸಮಸ್ಯೆಯನ್ನು ಸರಿಪಡಿಸಿದರು.

ತಿಮ್ಮನಹಳ್ಳಿಯ ಪಶುವೈದ್ಯರಾದ ಡಾ.ಶಾಂತೇಶ್ ಕೂಡ ಹಸುವಿನ ಚೇತರಿಕೆಯಲ್ಲಿ ಪ್ರಮುಖ ಪಾತ್ರ ವಹಿಸಿದರು. ಗೋಡೇಕೆರೆ ಪಶು ಚಿಕಿತ್ಸಾಲಯದ ಪಶುವೈದ್ಯ ಪರೀಕ್ಷಕರಾದ ಶಿವಕುಮಾರ್ ಶಸ್ತ್ರಚಿಕಿತ್ಸೆಯ ನಂತರದ ಆರೈಕೆಯಲ್ಲಿ ಸಹಕರಿಸಿದರು. ಈಗ ಹಸುವು ಸಂಪೂರ್ಣವಾಗಿ ಚೇತರಿಸಿಕೊಂಡಿದ್ದು ದಿನಕ್ಕೆ 20 ಲೀಟರ್ ಹಾಲು ಕೊಡುತ್ತಿದೆ.

ಈ ಸಮಯದಲ್ಲಿ ಮಾತನಾಡಿದ ಪಶುಪಾಲಕ ಸರ್ವೇಶ್



ಹಸುವಿನ ಖಾಯಿಲೆಯನ್ನು ಅತೀ ಶೀಘ್ರವಾಗಿ ಪತ್ತೆ ಹಚ್ಚಿ ಅಂದೇ ಶಸ್ತ್ರ ಚಿಕಿತ್ಸೆ ನಡೆಸಿ ಹಸುವಿನ ಪ್ರಾಣ ಉಳಿಸಿದ ಪಶು ವೈದ್ಯರನ್ನು ಶ್ಲಾಘಿಸಿದರು. ಈ ಹಿಂದೆ ಗೋಡೇಕೆರೆಯ ಊರ ಬಸವ ಕಾಲು ಮುರಿದಿದ್ದಾಗ ಸತತ ಚಿಕಿತ್ಸೆ ನೀಡಿ ಬಸವ ನಡೆವಂತೆ ಮಾಡಿದ್ದು ಇದೇ ಪಶು ವೈದ್ಯರು ಎಂದು ನೆನೆದರು.

ಡಾ. ಮಂಜುನಾಥ್ ಎಸ್.ಪಿ ರವರರು ಮಾತನಾಡಿ ಈ ಸ್ಥಿತಿಯು ಭಾರತೀಯ ಪರಿಸ್ಥಿತಿಯಲ್ಲಿ ಅತ್ಯಂತ ವಿರಳವಾಗಿ ಸಂಭವಿಸುವ ಸ್ಥಿತಿಯಾಗಿದ್ದು ಬೇಗನೇ ಖಾಯಿಲೆ ಪತ್ತೆಯಾದ್ದರಿಂದ ಉತ್ತಮ ಫಲಿತಾಂಶ ಸಿಕ್ಕಿದೆ ಎಂದರು.

## ವಳಗೆರೆಹಳ್ಳಿಯಲ್ಲಿ ಇಂದಿನಿಂದ ಶನೇಶ್ವರಸ್ವಾಮಿ ಕುಂಭಾಭಿಷೇಕ

**ಹುಳಿಯಾರು:** ಹುಳಿಯಾರು ಸಮೀಪದ ವಳಗೆರೆಹಳ್ಳಿಯಲ್ಲಿ ಶ್ರೀ ಶನೇಶ್ವರಸ್ವಾಮಿಯವರ 28 ನೇ ವರ್ಷದ ಕುಂಭಾಭಿಷೇಕ ಮಹೋತ್ಸವವನ್ನು ಮೇ.16 ರ ಗುರುವಾರದಿಂದ ಮೇ.18 ರ ಶನಿವಾರದವರೆವಿಗೆ ಏರ್ಪಡಿಸಲಾಗಿದೆ.

ಮೇ.16 ರಂದು ತಿರುಮಲಾಪುರದ ಶ್ರೀ ಕೊಲ್ಲಾಪುರದಮ್ಮದೇವಿ, ಹುಳಿಯಾರು ದುರ್ಗಮ್ಮ ದೇವರ ಆಗಮನ ಮೇ.17 ರಂದು ಶ್ರೀ ಹುಚ್ಚಂಗಿಯಲ್ಲಮ್ಮ ದೇವಿ ಹೊಸಹಳ್ಳಿ ಕೊಲ್ಲಾಪುರದಮ್ಮನ ದೇವಿ, ಹುಳಿಯಾರಿನ ಹುಳಿಯಾರಮ್ಮ ದೇವಿ ಹಾಗೂ ಹೊಸಹಳ್ಳಿಪಾಳ್ಯದ ಶ್ರೀ ಅಂತರಘಟ್ಟಮ್ಮ ದೇವರ ಆಗಮನ, ಮತ್ತು ಕೂಡುಭೇಟಿ

ಮೇ.18 ಬೆಳಿಗ್ಗೆ ಪುಣ್ಯಾಹ, ದೇವನಾಂದಿ, ನವಗ್ರಹ ಆರಾಧನೆ, ಗಣಪತಿ ಹೋಮ, ನವಗ್ರಹ ಹೋಮ, ಮೃತ್ಯುಂಜಯ ಹೋಮ, ಶನೇಶ್ವರ ಹೋಮ, ಪಂಚಾಮೃತ ಅಭಿಷೇಕ ಮತ್ತು ಸಹಸ್ರನಾಮಾರ್ಚನೆ ನಡೆದು ಮಧ್ಯಾಹ್ನ 12.45 ಕ್ಕೆ ಕುಂಭಾಭಿಷೇಕ ನಡೆಯಲಿದ್ದು ನಂತರ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ.

ಇದೇ ದಿನ ಸಂಜೆ ಬೆಳ್ಳಿ ರಥೋತ್ಸವ



ಮತ್ತು ಮದಾಸಿ ಉತ್ಸವ ನಂತರ ಆಗಮಿಸಿದ ದೇವರುಗಳ ಬೀಳ್ಕೊಟ್ಟು ಜಾಂಡೇವು ಇಳಿಸುವ ಮೂಲಕ ಧಾರ್ಮಿಕ ಕೈಂಕರ್ಯಗಳಿಗೆ ತೆರೆ ಎಳೆಯಲಾಗುವುದು. ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಧಾರ್ಮಿಕ ಚಟುವಟಿಕೆಗಳಲ್ಲಿ ಭಾಗವಹಿಸಿ ಶ್ರೀಸ್ವಾಮಿಯವರ ಕೃಪೆಗೆ ಪಾತ್ರರಾಗುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.

## ಕೃಷಿ ಇಲಾಖೆಯಿಂದ ರೈತರಿಗೆ ಬಿತ್ತನೆ ಬೀಜ ವಿತರಣೆ

**ಪಿರಿಯಾಪಟ್ಟಣ:** ಮುಂಗಾರು ಹಂಗಾಮು ಆರಂಭವಾಗಿರುವ ಹಿನ್ನೆಲೆಯಲ್ಲಿ ರೈತರಿಗೆ ಅನುಕೂಲವಾಗುವಂತೆ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದ್ದು ಈ ಸದಾವಕಾಶವನ್ನು ರೈತರು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕೃಷಿ ಇಲಾಖೆ ಸಹಾಯಕ ನಿರ್ದೇಶಕ ವೈ.ಪ್ರಸಾದ್ ತಿಳಿಸಿದರು.

ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ 2024-25ನೇ ಸಾಲಿನ ಮುಂಗಾರು ಹಂಗಾಮು ಆರಂಭವಾಗಿರುವ ಹಿನ್ನೆಲೆಯಲ್ಲಿ ಬಿತ್ತನೆ ಬೀಜ ವಿತರಿಸಿ ಮಾತನಾಡಿದರು. ತಾಲೂಕಿನಲ್ಲಿ ಪೂರ್ವ ಮುಂಗಾರಿನಲ್ಲಿ ಉತ್ತಮ ಮಳೆಯಾಗುತ್ತಿದ್ದು ಪ್ರಸ್ತುತ ವರ್ಷದಲ್ಲಿ ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಉತ್ತಮ ಮಳೆಯಾಗುವ ನಿರೀಕ್ಷೆ ಇದೆ ಈಗಾಗಲೇ 109 ಮಿ. ಮೀ ಮೀಟರ್ ಮಳೆಯಾಗಿದ್ದು ರೈತರು ತಮ್ಮ ಕೃಷಿ ಚಟುವಟಿಕೆಗಳಲ್ಲಿ ತೊಡಗಿಕೊಂಡಿದ್ದಾರೆ ಇದರಂತೆ ತಂಬಾಕು ಬೆಳೆ ನಾಟಿ ಕಾರ್ಯ ಪ್ರಗತಿಯಲ್ಲಿದ್ದು ತಾಲೂಕಿನಲ್ಲಿ ಈ ವರ್ಷ ಮುಂಗಾರು ಹಂಗಾಮಿನಲ್ಲಿ ಸುಮಾರು 25750 ಹೆ. ಪ್ರದೇಶದಲ್ಲಿ ತಂಬಾಕನ್ನು 10450 ಹೆಕ್ಟೇರ್ ಪ್ರದೇಶದಲ್ಲಿ ಮುಸ್ಕಿನ ಜೋಳ 8,400 ಹೇಕ್ಟರ್ ಪ್ರದೇಶದಲ್ಲಿ ಭತ್ತ ಹಾಗೂ ಸುಮಾರು 800 ಹೇ . ಪ್ರದೇಶದಲ್ಲಿ ವಿವಿಧ ದ್ವಿಧಳ ಧಾನ್ಯಗಳನ್ನು ಬೆಳೆಯಲು ಕೃಷಿ ಇಲಾಖೆ ಕಾರ್ಯಕ್ರಮವನ್ನು ರೂಪಿಸಿದ್ದು ಉತ್ತಮ ಮಳೆಯಿಂದಾಗಿ ಈಗಾಗಲೇ ತಂಬಾಕು ನಾಟಿ ಮತ್ತು ಮುಸುಕಿನ ಜೋಳ ಬಿತ್ತನೆಯಾಗಿದೆ . ಮುಂಗಾರು ಹಂಗಾಮಿಗೆ ತಾಲೂಕಿನ ರೈತರಿಗೆ ಕೃಷಿ ಇಲಾಖೆ ವತಿಯಿಂದ ಮುಸುಕಿನ ಜೋಳ , ರಾಗಿ , ಭತ್ತ , ಹಲಸಂದೆಗೆ ಬೇಡಿಕೆಯಿದ್ದು ಈಗಾಗಲೇ ರೈತ ಸಂಪರ್ಕ ಕೇಂದ್ರಗಳಾದ ಕಸಬಾ, ಹಾರನಹಳ್ಳಿ, ರಾವಂದೂರು, ಬೆಟ್ಟದಪುರದಲ್ಲಿ ದಸ್ತಾನು ಮಾಡಲಾಗಿದ್ದು ಬಿತ್ತನೆಬೀಜ ವಿತರಣೆಗಾಗಿ ಕ್ರಮವಹಿಸಲಾಗಿದೆ. ಇದಲ್ಲದೆ ಕಾಂಪ್ಲೆಕ್ಸ್ ಗೊಬ್ಬರ ಸರಬರಾಜುಗೆ ಯಾವುದೇ ಕೊರತೆ ಇರುವುದಿಲ್ಲ ತಾಲೂಕಿನ ರಸಗೊಬ್ಬರ ಮಾರಾಟ ಪರವಾನಗಿ ಹೊಂದಿರುವ ಖಾಸಗಿ ರಸಗೊಬ್ಬರ ಮಾಟಗಾರರು ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ರೈತರಿಗೆ ಅಗತ್ಯವಿರುವ ರಸಗೊಬ್ಬರಗಳು ಲಭ್ಯವಿದೆ ಕೃಷಿ ಇಲಾಖೆಯ ವತಿಯಿಂದ ಈಗಾಗಲೇ ಬಿತ್ತನೆಬೀಜ, ಸಾವಯವ ಗೊಬ್ಬರ ಔಷಧಿ ಹಾಗೂ ಲಘು ಪೋಷಕಾಂಶಗಳನ್ನು ಸಹಾಯಧನದಲ್ಲಿ ವಿಸ್ತರಿಸಲಾಗುತ್ತಿದ್ದು ಅಗತ್ಯವಿರುವ ರೈತರು ರೈತ ಸಂಪರ್ಕ ಕೇಂದ್ರಗಳಲ್ಲಿ ಪಡೆದುಕೊಳ್ಳಬಹುದಾಗಿದೆ ಎಂದರು.

## ಛಾಯಾಗ್ರಹಣ ಮತ್ತು ಕಿರು ವಿಡಿಯೋ ಸ್ಪರ್ಧೆಗಳಿಗೆ ಅರ್ಜಿ

ಮೈಸೂರು: ಪ್ರವಾಸೋದ್ಯಮ ಇಲಾಖೆ ವತಿಯಿಂದ '' ಮೈಸೂರಿನ ಅನ್ವೇಷಿಸದ ಪ್ರವಾಸಿ ತಾಣಗಳು ಎಂಬ ಶೀರ್ಷಿಕೆಯಡಿಯಲ್ಲಿ ರಾಜ್ಯ ಮಟ್ಟದ ಛಾಯಾಚಿತ್ರ ಮತ್ತು ಕಿರು ವಿಡಿಯೋ ಸ್ಪರ್ಧೆಗಳನ್ನು ಏರ್ಪಡಿಸಲಾಗಿದ್ದು, ಸಾರ್ವಜನಿಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ನದಿಗಳು, ಪ್ರಕೃತಿ ಮತ್ತು ರಮಣೀಯ ಸೌಂದರ್ಯ ತಾಣಗಳು, ಜಲಪಾತಗಳು, ವಸ್ತು ಸಂಗ್ರಹಾಲಯಗಳು, ಜಾನಪದ ಹಾಗೂ ಕಲೆಗಳು, ಸಾಂಪ್ರದಾಯಿಕ ಸ್ಥಳೀಯ ಹಬ್ಬಗಳು ಮತ್ತು ಕಲೆಗಳು, ಪಾರಂಪರಿಕ ಕಟ್ಟಡಗಳು ಮತ್ತು ಸ್ಮಾರಕಗಳು, ಧಾರ್ಮಿಕ ಮತ್ತು ಸಾಹಸ ಪ್ರವಾಸೋದ್ಯಮ ಹಾಗೂ ಇತರೆ ತಾಣಗಳ ರಾಜ್ಯ ಮಟ್ಟದ ಛಾಯಾಗ್ರಹಣ ಮತ್ತು ಕಿರು ವೀಡಿಯೋ ಸ್ಪರ್ಧೆಯಾಗಿದೆ. ಆಯ್ಕೆಯಾದ ಅತ್ಯುತ್ತಮ ಸಲ್ಲಿಕೆಗಳಿಗೆ ಪ್ರಥಮ ಬಹುಮಾನವಾಗಿ ರೂ.25,000 ದ್ವಿತೀಯ ಬಹುಮಾನ ರೂ.15,000 ಹಾಗೂ ತೃತೀಯ ಬಹುಮಾನವಾಗಿ ರೂ.10,000 ಗಳನ್ನು ನೀಡಲಾಗುವುದು. ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಛಿಸುವವರು https://Mysore.nic.inen/competitions ವೆಬ್ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಜೂ.20 ಅಂತಿಮ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ visitmysurutourism@gmail.com ಹಾಗೂ 7411564510, 9008693409 ನ್ನು ಸಂಪರ್ಕಿಸಬಹುದು ಎಂದು ಮೈಸೂರು ವಿಭಾಗದ ಪ್ರವಾಸೋದ್ಯಮ ಇಲಾಖೆಯ ಜಂಟಿ ನಿರ್ದೇಶಕರಾದ ಎಂ.ಕೆ. ಸವಿತಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿನಿಲಯಕ್ಕೆ ಅರ್ಜಿ

**ಮೈಸೂರು:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ ತಿ.ನರಸೀಪುರ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿನಿಲಯಗಳಿಗೆ ಮೆಟ್ರಿಕ್ ಪೂರ್ವ 5ನೇ ತರಗತಿಯಿಂದ 10ನೇ ತರಗತಿ ರವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಸಮಾಜ ಕಲ್ಯಾಣ ಇಲಾಖೆಯ ವೆಬ್ಸೈಟ್ www.sw.kar.nic.inನಲ್ಲಿ ಆನ್ಲೈನ್ ಮೂಲಕ ಮೇ 31 ರೊಳಗೆ ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ಆಫ್ ಲೈನ್ ಮೂಲಕ ಅರ್ಜಿಗಳನ್ನು ಸಂಬಂಧಪಟ್ಟ ವಿದ್ಯಾರ್ಥಿನಿಲಯ ಮೇಲ್ವಿಚಾರಕರು ಅಥವಾ ತಿ.ನರಸೀಪುರದ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿಯಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿರುತ್ತದೆ ಎಂದು ತಿ.ನರಸೀಪುರದ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನರಸಿಂಹಸ್ವಾಮಿ ಅವರಿಗೆ ಸನ್ಮಾನ

ಮೈಸೂರು: ಕೃಷ್ಣಮೂರ್ತಿಪುರಂನಲ್ಲಿರುವ ಶ್ರೀರಾಮ ಮಂದಿರದಲ್ಲಿ ವಿಪ್ರ ವಕೀಲ ಪರಿಷತ್ ವತಿಯಿಂದ ಆಚಾರ್ಯತ್ರಯರ ಜಯಂತಿಯ ಅಂಗವಾಗಿ ಇಂದು (ಮೇ 15) ನಡೆದ ಕಾರ್ಯಕ್ರಮದಲ್ಲಿ ನಗರದ ಅಗಸ್ತ್ಯ ಸಿದ್ಧ ಸಾಹಿತ್ಯ ಸಂಶೋಧನಾ ಕೇಂದ್ರದ ಸಿದ್ಧವೈದ್ಯರಾದ ನರಸಿಂಹಸ್ವಾಮಿ ಪಿ.ಎಸ್. ಅವರನ್ನು ಅವರ ವೈದ್ಯ ಕ್ಷೇತ್ರದ ಸಾಧನೆಗಾಗಿ ಸನ್ಮಾನಿಸಿ, ಗೌರವಿಸಲಾಯಿತು. ಚಿತ್ರದಲ್ಲಿ ಮೇಲುಕೋಟೆ ವೆಂಗೀಪುರ ಮಠದ ಇಳೈ ಆಳ್ವಾರ್ ಸ್ವಾಮೀಜಿ, ಸೋಸಲೆ ವ್ಯಾಸರಾಜ ಮಠದ ಶ್ರೀ ವಿದ್ಯಾಶ್ರೀಶ ತೀರ್ಥರು, ದತ್ತ ಪೀಠದ ದತ್ತ ವಿಜಯಾನಂದ ಸ್ವಾಮೀಜಿ ಹಾಗೂ ವಕೀಲರಾದ ರವೀಂದ್ರ ಅವರನ್ನು ಕಾಣಬಹುದು.

### 3192 ಜಿಲ್ಲಾ ಗೌರ್ನರ್ ವಿ.ಶ್ರೀನಿವಾಸ್ ಮೂರ್ತಿ ಅಭಿಮತ

# ನೊಂದ ಜನತೆಗೆ ನಂದಾದೀಪವಾಗಿರುವ ರೋಟರಿ ಸಂಸ್ಥೆ

**ವಿಜಯಪುರ:** ಪಟ್ಟಣದ ರೋಟರಿ ಸಂಸ್ಥೆಯು ಕಳೆದ 50 ವರ್ಷಗಳಿಂದ ನೂರಾರು ಆರೋಗ್ಯ ತಪಾಸಣಾ ಶಿಬಿರಗಳನ್ನು ಹಾಗೂ ಹತ್ತಾರು ಸಾವಿರ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುವುದರೊಂದಿಗೆ, ನೂರಾರು ಸೇವಾ ಕಾರ್ಯಗಳನ್ನು ಮಾಡಿಕೊಂಡು, ನೊಂದು-ಬೆಂದವರ, ದಾರಿ ಕಾಣದವರ, ದಾರಿದೀಪವಾಗಿ ಅವರಿಗೆ ನಂದಾದೀಪವಾಗಿದೆ ಎಂದು 3192 ಜಿಲ್ಲಾ ಗೌರ್ನರ್ ವಿ. ಶ್ರೀನಿವಾಸ್ ಮೂರ್ತಿ ತಿಳಿಸಿದರು.

ಅವರು ಇಲ್ಲಿನ ಸುಬ್ಬಮ್ಮ ಚೆನ್ನಪ್ಪ ಸಮುದಾಯ ಭವನದಲ್ಲಿ ವಿಜಯಪುರ ರೋಟರಿ ಸಂಸ್ಥೆಗೆ 50 ವರ್ಷಗಳ ಕಾಲ ತುಂಬಿದ ಸಂದರ್ಭದಲ್ಲಿ ರೋಟರಿ ಸುವರ್ಣ ಮಹೋತ್ಸವ ಕಾರ್ಯಕ್ರಮ ಸಮಾರಂಭದಲ್ಲಿ ಮಾತನಾಡುತ್ತಿದ್ದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಹಿಂದಿನ ಜಿಲ್ಲಾ ಗವರ್ನರ್ ಎಸ್.ನಾಗೇಂದ್ರರವರು ಮಾತನಾಡುತ್ತಾ, ವಿಜಯಪುರ ರೋಟರಿ ಸಂಸ್ಥೆಯು ಐದು ವಿಷಯಗಳಿಗೆ ಹೆಸರುವಾಸಿಯಾಗಿದ್ದು, ಸರ್ವಿಸ್, ಫೆಲೋಶಿಪ್, ಡೈವರ್ಸಿಟಿ, ಇಂಟಿಗ್ರಿಟಿ, ಲೀಡರ್ಶಿಪ್ ನಿರ್ಮಿಸಿಕೊಂಡು ಬಂದಿದ್ದು, ಇಲ್ಲಿನ ಸಂಸ್ಥೆಯು ನೂರಾರು ಕಣ್ಣಿನ ತಪಾಸಣಾ ಶಿಬಿರಗಳನ್ನು ಏರ್ಪಡಿಸಿದ್ದುದಲ್ಲದೆ, ಸಾವಿರಾರು ಮಂದಿಗೆ ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸೆಗಳನ್ನು ಮಾಡಿಸಿದ್ದು, ಸರಕಾರಿ ಶಾಲೆಗಳಿಗೆ ಅವಶ್ಯಕವಿರುವ ಪೀಠೋಪಕರಣ ಹಾಗೂ




ಕಲಿಕೋಪಕರಣಗಳನ್ನು ನೀಡಿದ್ದು, ಈ ಸಾಲಿನಲ್ಲಿ ಹಲವಾರು ಅಂಗನವಾಡಿ ಕಟ್ಟಡಗಳ ಪುನರುದ್ದಾರ ಮಾಡಿದ್ದು, ಇಲ್ಲಿನ ಸಂಸ್ಥೆಯ ಸೇವಾ ಮನೋಭಾವಕ್ಕೆ ಸಾಕ್ಷಿಯಾಗಿದೆ ಎಂದು, ಐವತ್ತು ವರ್ಷಗಳ ಹಿಂದೆ ಸಂಸ್ಥಾಪಕ ಸದಸ್ಯರುಗಳಾಗಿ ಬಂದ ಸದಸ್ಯರುಗಳು ಅಧ್ಯಕ್ಷರಾಗಿ, ಕಾರ್ಯದರ್ಶಿಗಳಾಗಿ ಹಾಗೂ ಇಂದಿಗೂ ಸಹ ಸದಸ್ಯರುಗಳಾಗಿಯೇ ಮುಂದುವರೆಯುತ್ತಿರುವುದು ಇಲ್ಲಿನ ಸ್ನೇಹಭಾವದ ಪ್ರತೀಕವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರೋಟರಿ ಸಂಸ್ಥೆ ಅಧ್ಯಕ್ಷರಾದ ಎ.ಎಂ ಮಂಜುಳಾ ರವರು ಮಾತನಾಡಿ, ಸುವರ್ಣ ಮಹೋತ್ಸವದ ಸಂದರ್ಭದಲ್ಲಿ ತಾವು ಅಧ್ಯಕ್ಷರಾಗಿರುವುದಲ್ಲದೆ, ಹಲವಾರು ಗುರುತಿಸಲ್ಪಡುವಂತಹ ಸೇವಾ ಕಾರ್ಯಗಳನ್ನು ಮಾಡಿದ್ದು, ಇದೀಗ ಸುವರ್ಣ ಮಹೋತ್ಸವದ ಅಂಗವಾಗಿ ನೂತನ ಕಟ್ಟಡ ನಿರ್ಮಾಣಕ್ಕೂ ಮುಂದಾಗಿರುವುದು ತಮಗೆ ಸಂತಸದ ವಿಷಯವೆಂದು ತಿಳಿಸಿದರು. ಈ ಸಂದರ್ಭದಲ್ಲಿ ರೋಟರಿ ಕಾರ್ಯದರ್ಶಿ ಗಿರಿಜಾಂಬಾ ರುದ್ರೇಶ್ ಮೂರ್ತಿ, ಸುವರ್ಣ ಮಹೋತ್ಸವ ಯೋಜನಾ ಅಧ್ಯಕ್ಷರಾದ ಬಸವರಾಜು, ಸಂಚಾಲಕರಾದ ಶೈಲೇಂದ್ರಕುಮಾರ್, ಸಂಘ ಸೇವಾ ನಿರ್ದೇಶಕರಾದ ವಿ.ಎಸ್. ರವಿ, ಇನ್ನರ್ ವೀಲ್ ಕ್ಲಬ್ ನ ಅಧ್ಯಕ್ಷ ರಾದ ನವ್ಯ ನವೀನ್, ಜಿಲ್ಲಾ ಇನ್ನರ್ ವೀಲ್ ಕ್ಲಬ್ ಮಾಜಿ ಅಧ್ಯಕ್ಷರಾದ ಆಶಾ ಶೈಲೇಂದ್ರ, ರೋಟರಿ ಎಜುಕೇಷನ್ ಟ್ರಸ್ಟ್‌ನ ಕಾರ್ಯದರ್ಶಿ ವಿ.ಸಿ.ಸಿದ್ದರಾಜು, ಮಹೇಶ್, ಕಿರಣ್, ಸುರೇಶ್, ನಿಯೋಜಿತ ಜಿಲ್ಲಾ ಪಾಲಕರಾಗಿ ನೇಮಕಗೊಂಡಿರುವ ಬೆಂಗಳೂರಿನ ಮಹದೇವ ಪ್ರಸಾದ್, ಇಂದಿರಾ ನಗರ ಸಂಸ್ಥೆಯ ಜಗದೀಶ್, ರೋಟರಿ ಉದ್ಯೋಗ್ನ ರೇಣುಕೇಶ್ವರಸ್ವಾಮಿ, ಅಸಿಸ್ಟೆಂಟ್ ಗವರ್ನರ್ ಡಾ||ಮುರಳಿಕೃಷ್ಣ, ಹೈಗ್ರೌಂಡ್ಸ್‌ನ ಗೋಪೀನಾಥ್, ಜಿಲ್ಲಾ ಕಾರ್ಯದರ್ಶಿಗಳಾದ ವಿನೋದ್ ಕುಮಾರ್, ವಿಮಲ ಮಲ್ಲಪ್ಪ, ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಸಂಸ್ಥಾಪಕ ಸದಸ್ಯರುಗಳಾದ ಪಿ ಚಂದ್ರಪ್ಪ, ಆರ್ ಚೆನ್ನಪ್ಪ, ಸಿ.ಚಂದ್ರಶೇಖರ್, ಸಿ.ಬಸಪ್ಪ, ಕೆ.ಸದ್ಯೋಜಾತಪ್ಪ, ವಿ.ಸಿ.ಸಿದ್ದರಾಜುರವರುಗಳನ್ನು ಸನ್ಮಾನಿಸಲಾಯಿತು. ಸುವರ್ಣ ಸೌರಭ ಸ್ಮರಣ ಸಂಚಿಕೆಯನ್ನು ಬಿಡುಗಡೆಗೊಳಿಸಲಾಯಿತು.

### ಇಂಡಿಗನತ್ತ ಗ್ರಾಮಕ್ಕೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಭೇಟಿ

# ಗ್ರಾಮಸ್ಥರಿಂದ ಕುಂದುಕೊರತೆ ಆಲಿಸಿದ ಡಿಸಿ

**ಚಾಮರಾಜನಗರ:** ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದ ಗ್ರಾಮ ಪಂಚಾಯತಿ ವ್ಯಾಪ್ತಿಯ ಇಂಡಿಗನತ್ತ ಹಾಗೂ ಸುತ್ತಲಿನ ಗ್ರಾಮಗಳಿಗೆ ಮೂಲ ಸೌಕರ್ಯ ಕಲ್ಪಿಸುವ ಸಂಬಂಧ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸೋಮವಾರ (ಮೇ.13ರಂದು) ಭೇಟಿ ನೀಡಿ ಗ್ರಾಮಸ್ಥರ ಸಮಸ್ಯೆ, ಕುಂದುಕೊರತೆಗಳನ್ನು ಆಲಿಸಿದರು.

ಇಂಡಿಗನತ್ತ, ತೊಳಸಿಕೆರೆ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಮೂಲಸೌಲಭ್ಯ ಕಲ್ಪಿಸುವಂತೆ ಕೋರಿ ಲೋಕಸಭಾ ಚುನಾವಣೆಯ ಮತದಾನ ಬಹಿಷ್ಕರಿಸಿ ಏಪ್ರಿಲ್ 26ರಂದು ಇಂಡಿಗನತ್ತ ಗ್ರಾಮದಲ್ಲಿ ಕೆಲ ಗ್ರಾಮಸ್ಥರು



ಮತಗಟ್ಟೆ ಧ್ವಂಸ ಹಾಗೂ ಅಧಿಕಾರಿಗಳ ಮೇಲೆ ಹಲ್ಲೆ ಮಾಡಿದ್ದ ಹಿನ್ನೆಲೆಯಲ್ಲಿ ಏಪ್ರಿಲ್ 29ರಂದು ಮರು ಮತದಾನ ನಡೆದಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ಪ್ರಸ್ತುತ ಅಲ್ಲಿನ ಸಮಸ್ಯೆ, ಕುಂದುಕೊರತೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಇಂಡಿಗನತ್ತ ಗ್ರಾಮಕ್ಕೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಗಳನ್ನು ಪರಿಶೀಲಿಸಿದರು. ಜಿಲ್ಲಾ ಪೊಲೀಸ್ ವರಿ?ಧಿಕಾರಿ ಪದ್ಮಿನಿ ಸಾಹು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ, ಇತರೆ ಅಧಿಕಾರಿಗಳ ಸಮ್ಮುಖದಲ್ಲಿ ಗ್ರಾಮದಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಗ್ರಾಮಸ್ಥರಿಂದ ಅಹವಾಲುಗಳನ್ನು ಆಲಿಸಿದರು.

ಇದೇ ವೇಳೆ ಗ್ರಾಮಸ್ಥರು ಕುಡಿಯುವ ನೀರು, ರಸ್ತೆ, ವಿದ್ಯುತ್ ಸೌಕರ್ಯಗಳನ್ನು ಕಲ್ಪಿಸಿಕೊಡಿ, ಮತಗಟ್ಟೆ ಧ್ವಂಸ ಪ್ರಕರಣದಲ್ಲಿ ಅಮಾಯಕರಾಗಿರುವ ಸಂಬಂಧಿಗಳನ್ನು ಬಂಧಿಸಲಾಗಿದೆ. ಅವರನ್ನು ಬಿಡುಗಡೆ ಮಾಡಿಸಿಕೊಡುವಂತೆ ಜಿಲ್ಲಾಧಿಕಾರಿಯವರಲ್ಲಿ ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಶಿಲ್ಪಾ ನಾಗ್




ಅವರು ನಿಮ್ಮಗಳ ನೋವು ನನಗೆ ತಿಳಿದಿದೆ. ಗ್ರಾಮಕ್ಕೆ ರಸ್ತೆ, ವಿದ್ಯುತ್, ಕುಡಿಯುವ ನೀರು ಸೌಲಭ್ಯ ಕಲ್ಪಿಸಲು ಸರ್ಕಾರದ ಮಟ್ಟದಲ್ಲಿ ಈಗಾಗಲೇ ಚರ್ಚಿಸಿ ಅಂತಿಮಗೊಳಿಸಲಾಗಿದೆ. ನಿಮ್ಮ ಸಮಸ್ಯೆಗಳನ್ನು ಬಗೆಹರಿಸಲು ಜಿಲ್ಲಾಡಳಿತ ಸಿದ್ದವಿದೆ. ಹಾಗೆಯೇ ಮತಗಟ್ಟೆ ಧ್ವಂಸ ಪ್ರಕರಣದಲ್ಲಿ ಭಾಗಿಯಾದಂತಹ ವ್ಯಕ್ತಿಗಳು ನಿರ್ಭಯವಾಗಿ ಗ್ರಾಮಕ್ಕೆ ಆಗಮಿಸಿ ಜೀವನ ನಡೆಸಬಹುದು. ಯಾವುದೇ ಆತಂಕಪಡುವ ಅಗತ್ಯವಿಲ್ಲ ಎಂದು ಗ್ರಾಮದ ಜನರಿಗೆ ಧೈರ್ಯ ತುಂಬಿದರು.

ಇಂಡಿಗನತ್ತ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಟ್ಯಾಂಕರ್‌ಗಳ ಮೂಲಕ ನೀರನ್ನು ಒದಗಿಸಲಾಗುತ್ತಿದ್ದು, ಇದುವರೆಗೆ 48 ಟ್ಯಾಂಕರ್ ನೀರನ್ನು ಸರಬರಾಜು ಮಾಡಲಾಗಿದೆ. ಕೆಟ್ಟಿದ್ದ ಮೂರು ಬೋರ್‌ವೆಲ್ ಗಳನ್ನು ದುರಸ್ಥಿಪಡಿಸಿ ನೀರಿನ ಪೈಪ್‌ಗಳನ್ನು ಅಳವಡಿಸಲಾಗಿದೆ. ಜಾನುವಾರುಗಳಿಗೆ ಮೇವು ಒದಗಿಸುವ ಸಲುವಾಗಿ ಗ್ರಾಮದ ರೈತರಿಗೆ 2 ಟನ್‌ಗೂ ಹೆಚ್ಚಿನ ಮೇವು ವಿತರಿಸಲಾಗಿದೆ. ಮುಂದಿನ ದಿನಗಳಲ್ಲಿ ಗ್ರಾಮದಲ್ಲಿ ಕುಡಿಯುವ ನೀರಿಗೆ ತೊಂದರೆ ಉಂಟಾಗದಂತೆ ನೋಡಿಕೊಳ್ಳಲು ಸ್ಥಳದಲ್ಲಿಯೇ ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಿದರು.

ಮತಗಟ್ಟೆ ಧ್ವಂಸ ಪ್ರಕರಣದಿಂದ ಬಂಧನದ ಭೀತಿ ಎದುರಿಸಿದ ಕೆಲವರು ತಮ್ಮ ಮನೆಗಳಿಗೆ ಬೀಗ ಹಾಕಿ ತಮ್ಮ ಮಕ್ಕಳು, ಬಾಣಂತಿಯರು, ಗರ್ಭಿಣಿಯರು ಹಾಗೂ ವೃದ್ಧರನ್ನ ಬಿಟ್ಟುಹೋಗಿದ್ದರಿಂದ ಅಲ್ಲಿದ್ದವರು ಒಪ್ಪೊತ್ತಿನ ಊಟಕ್ಕಾಗಿ ಪರಿತಪಿಸುತ್ತಿದ್ದ ಹಿನ್ನಲೆಯಲ್ಲಿ ಇದನ್ನು ಮನಗಂಡ ಜಿಲ್ಲಾಡಳಿತವು ಮಕ್ಕಳಿಗೆ ವೃದ್ಧರಿಗೆ ಬಾಣಂತಿಯರಿಗೆ ಗರ್ಭಿಣಿಯರಿಗೆ ಆಹಾರದ ವ್ಯವಸ್ಥೆಯನ್ನು ನೀಡಲು ಮುಂದಾಗಿದೆ. ಶಾಲೆಯಲ್ಲಿ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ಮುಂದುವರೆಸಲಾಗಿದೆ. ಗರ್ಭಿಣಿಯರು, ಬಾಣಂತಿಯರಿಗೆ, ಮಕ್ಕಳಿಗೆ ಹಾಗೂ ಹಿರಿಯರಿಗೆ ಪೌಷ್ಠಿಕ ಆಹಾರ, ಹಾಲಿನ ಪುಡಿ ನೀಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಮತಗಟ್ಟೆ ಧ್ವಂಸ ಸಮಯದಲ್ಲಿ ಜನರ ನೂಕುನುಗ್ಗಲು ಹಾಗೂ ಕಾಲ್ತುಳಿತದಿಂದ ಗಾಯಗೊಂಡಿದ್ದ ಗ್ರಾಮದ ಜನರಿಗೆ ಸ್ಥಳೀಯ ವೈದ್ಯಾಧಿಕಾರಿ ತಂಡವು ಇದುವರೆಗೆ ಮೂರು ಬಾರಿ ಆರೋಗ್ಯ ಶಿಬಿರ ಏರ್ಪಡಿಸಿ ತಪಾಸಣೆಯನ್ನು ಕೂಡ ನಡೆಸಿದೆ. ವಯೋವೃದ್ಧರಿಗೆ ಮಹದೇಶ್ವರ ಬೆಟ್ಟದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪ್ರತ್ಯೇಕವಾಗಿ ತಪಾಸಣೆ ನಡೆಸಿ ಅಗತ್ಯ ಚಿಕಿತ್ಸೆ, ಔಷಧೋಪಚಾರ ನೀಡಲಾಗಿದ್ದು, ಜನರ ಆರೋಗ್ಯ ಸುಧಾರಣೆಗೂ ಜಿಲ್ಲಾಡಳಿತ ಗಮನ ಹರಿಸಿದೆ ಎಂದು ಗ್ರಾಮಸ್ಥರಿಗೆ ಮನವರಿಕೆ ಮಾಡಿಕೊಟ್ಟರು.

ಗ್ರಾಮಸ್ಥರಿಂದ ಕುಂದುಕೊರತೆ ಆಲಿಸಿದ ಬಳಿಕ ಜಿಲ್ಲಾಧಿಕಾರಿಯವರು ಗ್ರಾಮದ ಪ್ರತಿ ಮನೆ ಮನೆಗೂ ಖುದ್ದು ಭೇಟಿ ನೀಡಿ ಜನರ ಆರೋಗ್ಯ ವಿಚಾರಿಸಿ ಗ್ರಾಮಸ್ಥರೊಡನೆ ಸಮಾಲೋಚನೆಯನ್ನು ನಡೆಸಿದರು. ಗ್ರಾಮದಲ್ಲಿದ್ದ ಚಿಕ್ಕಮಕ್ಕಳು, ಮಹಿಳೆಯರು, ವೃದ್ಧರನ್ನು ಆತ್ಮೀಯವಾಗಿ ಮಾತನಾಡಿಸಿ ಅವರ ಆರೋಗ್ಯ ಕ್ಷೇಮ ವಿಚಾರಿಸಿದರು. ರಾಷ್ಟ್ರೀಯ ಜಂತುಹುಳು ನಿರ್ಮೂಲನಾ ದಿನದ ಅಂಗವಾಗಿ ಮಕ್ಕಳ ಬಾಯಿಗೆ ಜಂತುಹುಳು ಮಾತ್ರೆ ಹಾಕಿದರು. ಗ್ರಾಮದಲ್ಲಿದ್ದ ಬೋರ್‌ವೆಲ್‌ನ ನೀರನ್ನು ಸ್ವತಃ ಜಿಲ್ಲಾಧಿಕಾರಿಯವರು ಕುಡಿಯುವ ಮೂಲಕ ನೀರಿನ ಶುದ್ಧತೆಯನ್ನು ಪರಿಶೀಲಿಸಿದರು.

ಬಳಿಕ ಮೆಂದಾರೆ ಗ್ರಾಮಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಲ್ಲಿನ ಸೋಲಿಗ ಸಮುದಾಯದ ಜನರನ್ನು ಮಾತನಾಡಿಸಿ ಆರೋಗ್ಯವನ್ನು ವಿಚಾರಿಸಿ ಜನತೆಯ ಸಮಸ್ಯೆ ಆಲಿಸಿದರು. ಇದೇ ವೇಳೆ ಮೆಂದಾರೆ ಗ್ರಾಮಸ್ಥರು ಪುನರ್ವಸತಿ ಕಲ್ಪಿಸಿಕೊಡುವಂತೆ ಮನವಿ ಮಾಡಿದರು. ಇದಕ್ಕೆ ಉತ್ತರಿಸಿದ ಜಿಲ್ಲಾಧಿಕಾರಿಯವರು ಗ್ರಾಮದ ಎಲ್ಲಾ ಸಮಸ್ಯೆಗಳ ಕುರಿತು ಸಂಬಂಧಪಟ್ಟ ವಿವಿಧ ಇಲಾಖೆಗಳು ಜಂಟಿಯಾಗಿ ಸಮಗ್ರ ಸಮೀಕ್ಷೆ ನಡೆಸಿ ಶೀಘ್ರವಾಗಿ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿ, ಸಮಸ್ಯೆ ಇತ್ಯರ್ಥಕ್ಕೆ ಕ್ರಮವಹಿಸಲಾಗುವುದು ಎಂದರು. ಅಲ್ಲದೆ ಗ್ರಾಮದಲ್ಲಿ ಕುಡಿಯುವ ನೀರಿಗೆ ಯಾವುದೇ ತೊಂದರೆಯಾಗಬಾರದು. ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೆಲಸ ಹಾಗೂ ಜನರಿಗೆ ಜಾಬ್‌ಕಾರ್ಡ್ ನೀಡಬೇಕು. ಸಮಾಜ ಕಲ್ಯಾಣ ಇಲಾಖೆಯು ಆರ್ಥಿಕ ಸೌಲಭ್ಯಗಳನ್ನು ಒದಗಿಸಬೇಕು. ಸಾಮಾಜಿಕ ಭದ್ರತಾ ಯೋಜನೆಯಡಿ ಪಿಂಚಣಿ ನೀಡಲು ಕ್ರಮ ವಹಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ಹನೂರು ತಾಲೂಕು ತಹಶೀಲ್ದಾರ್ ಗುರುಪ್ರಸಾದ್, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್, ತಾಲೂಕು ಆರೋಗ್ಯಾಧಿಕಾರಿ ಪ್ರಕಾಶ್, ಡಿವೈಎಸ್‌ಪಿ ಧರ್ಮೇಂದ್ರ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಮಂಜುಳ, ಕೊಳ್ಳೇಗಾಲ ತಾಲೂಕು ಸಮಾಜ ಕಲ್ಯಾಣಾಧಿಕಾರಿ ಕೇಶವಮೂರ್ತಿ, ವಿವಿಧ ಇಲಾಖೆ ಅಧಿಕಾರಿಗಳು, ಇತರರು ಇದ್ದರು.

# ಮುಂಗಾರು ಪೂರ್ವ ಸಿದ್ಧತೆಗಳನ್ನು ಬರ ನಿರ್ವಹಣೆಯೊಂದಿಗೆ ಎದುರಿಸಿ

**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿ ಮಳೆಗಾಲ ಆರಂಭಗೊಂಡಿದ್ದು, ಮಳೆಯಿಂದಾಗುವ ಹಾನಿಯನ್ನು ಹಾಗೂ ಪ್ರಸ್ತುತ ಜಿಲ್ಲೆಯಲ್ಲಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಜೊತೆ ಜೊತೆಗೆ ನಿವಾರಿಸಲು ಜಿಲ್ಲಾ ಮಟ್ಟದ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಸೂಚನೆಗಳನ್ನು ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಮುಂಗಾರು ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮತಾನಾಡುತ್ತಾ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಕೇಂದ್ರ ಸ್ಥಾನದಲ್ಲಿದ್ದುಕೊಂಡು ಮುಂಗಾರು ಪೂರ್ವ ಸಿದ್ದತಾ ಕಾರ್ಯಗಳನ್ನು ನಿರ್ವಹಿಸಬೇಕಿದೆ. ಮೇ ಮಾಹೆಯ ಆರಂಭದಿಂದಲೇ ಮಳೆ ಪ್ರಮಾಣ ಜಿಲ್ಲೆಯಲ್ಲಿ ಉತ್ತಮವಾಗಿದೆ. ಈವರೆಗೆ 26 ಮಿ.ಮೀ ವಾಡಿಕೆ ಮಳೆ ಬೀಳಬೇಕಿತ್ತು. ಆದರೆ 2 ಮಿ.ಮೀ ಮಳೆಯಾಗಿದೆ. ಶೇ. 93 ರಷ್ಟು ಮಳೆ ಕೊರತೆಯಾಗಿದೆ. ಮುಂದಿನ ದಿನಗಳಲ್ಲಿ ಮಳೆ ಪ್ರಮಾಣ ಹೆಚ್ಚಾಗುವ ನಿರೀಕ್ಷೆಯಿದ್ದು, ಮಳೆ ಹಾನಿಗಳನ್ನು ಜಿಲ್ಲೆಯಲ್ಲಿ ಸಂಪೂರ್ಣವಾಗಿ ತಡೆಗಟ್ಟಲು ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಬೇಕಿದೆ.

2023-24ನೇ ಸಾಲಿನಲ್ಲಿ 9ನೇ ಹಂತದವರೆಗೆ 17,70,69,155 ರೂಗಳನ್ನು ಬರ ಪರಿಹಾರವಾಗಿ ಜಿಲ್ಲೆಯ 97,278 ರೈತರಿಗೆ ರಾಷ್ಟ್ರೀಯ ವಿಪತ್ತು ನಿರ್ವಹಣೆಯ ನಿಯಮಗಳನ್ವಯ ಪಾವತಿಸಲಾಗಿದತ್ತು. ಇತ್ತೀಚೆಗೆ 10ನೇ ಹಂತದಲ್ಲಿ 37,33,26,422 ರೂಗಳನ್ನು ರೈತರ ಖಾತೆಗೆ ಡಿ.ಬಿ.ಟಿ ಮೂಲಕ ವರ್ಗಾಯಿಸಲಾಗಿದೆ. ಒಟ್ಟಾರೆ ಈ ಸಾಲಿನಲ್ಲಿ 97 ಸಾವಿರಕ್ಕೂ ಹೆಚ್ಚು ಜಿಲ್ಲೆಯ ರೈತರಿಗೆ ಒಟ್ಟು 55,03,95,577 ರೂಗಳನ್ನು ಅವರ ಖಾತೆಗೆ ನೇರವಾಗಿ ಜಮೆ ಮಾಡಲಾಗಿದೆ ಎಂದರು.

### ಬಿತ್ತನೆ ಬೀಜ ವಿತರಣೆ

**ಮಳೆ ಆರಂಭವಾದ ಮೇಲೆ ಮೇ ಮಾಹೆಯಿಂದ ರಾಗಿ, ಜೋಳ, ತೊಗರಿ, ಶೇಂಗಾ ಬಿತ್ತನೆ ಬೀಜಗಳಿಗೆ ಹೆಚ್ಚಿನ ಬೇಡಿಕೆ ಬಂದಿದೆ. ಏಪ್ರಿಲ್ ಮಾಹೆಯಿಂದಲೇ ಬಿತ್ತನೆ ಬೀಜನಗಳ ವಿತರಣೆಗೆ ಕೃಷಿ ಇಲಾಖೆಯಿಂದ ಚಾಲನೆ ನೀಡಲಾಗಿದೆ. ಪ್ರಸ್ತುತ ಬಿತ್ತನೆ ಬೀಜನಗಳನ್ನು ವಿತರಣಾ ಕಾರ್ಯ ಚುರುಕುಗೊಂಡಿದ್ದು, ಈ ಸಂದರ್ಭದಲ್ಲಿ ಸಂಬಂಧಪಟ್ಟ ಕೃಷಿ ಇಲಾಖೆ ಅಧಿಕಾರಿಗಳು ರೈತರೊಂದಿಗೆ ನೇರ ಸಂಪರ್ಕವನ್ನು ಕೈಗೊಂಡು ಬಿತ್ತನೆ ಬೀಜ ವಿತರಣೆಯಲ್ಲಿ ಯಾವುದೇ ಕೊರತೆಯುಂಟಾಗದಂತೆ ಕ್ರಮ ವಹಿಸಬೇಕು. ಜಾನುವಾರುಗಳ ಮೇವಿಗೆ ಕೊರತೆಯಾಗದಂತೆ ಇತ್ತೀಚೆಗೆ 9,000 ಮೇವಿನ ಕಿಟ್ ಗಳನ್ನು ವಿತರಿಸಲಾಗುತ್ತಿದ್ದು, ಈಗಾಗಲೇ 6 ಸಾವಿರ ಕಿಟ್ ಗಳನ್ನು ವಿತರಿಸಲಾಗಿದೆ. ಉಳಿಕೆ ಕಿಟ್ ಗಳ ವಿತರಣೆಯನ್ನು ಆದಷ್ಟು ಬೇಗ ಪೂರ್ಣಗೊಳಿಸಿ ಮೇವು ಬೆಳೆಯಲು ರೈತರನ್ನು ಉತ್ತೇಜಿಸುವ ಕಾರ್ಯವನ್ನು ಪಶುಪಾಲನಾ ಇಲಾಖೆಯ ಅಧಿಕಾರಿಗಳು ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ತಿಳಿಸಿದರು.**

# ಜ್ಞಾನಮಾರ್ಗ ತೋರಿಸಿದ ಶಂಕರಾಚಾರ್ಯರು

**ಚಾಮರಾಜನಗರ:** ಇಡೀ ಜಗತ್ತಿಗೆ ದರ್ಶನ ಮತ್ತು ಜ್ಞಾನದ ಮಾರ್ಗವನ್ನು ತೋರಿಸಿ ಮಾನವ ಜನ್ಮ ಸಾರ್ಥಕ ಗೊಳಿಸಿದವರು ಶಂಕರಾಚಾರ್ಯರು ಎಂದು ಮೈಸೂರು ಸನ್ನದು ಲೆಕ್ಕಪರಿಶೋಧಕ ಎಸ್.ಅಚ್ಯುತ್ ಹೇಳಿದರು.

ನಗರದ ಅಗ್ರಹಾರಬೀದಿಯ ಪಟ್ಟಾಭಿರಾಮಮಂದಿರದಲ್ಲಿ ಪಟ್ಟಾಭಿರಾಮಮಂದಿರ ಟ್ರಸ್ಟ್ ಶ್ರೀ ಪಟ್ಟಾಭಿರಾಮ ಮಂದಿರ ಮತ್ತು ಶ್ರೀ ಶಂಕರ ತತ್ವ ಪ್ರಸಾರ ಅಭಿಯಾನ ವತಿಯಿಂದ ಶಂಕರಾಚಾರ್ಯ, ರಾಮಾನುಜಚಾರ್ಯ ಹಾಗೂ ನೃಸಿಂಹ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಕ್ರಿಶ 8 ನೇ ಶತಮಾನದ ಕೊನೆ ಮಧ್ಯ ಕೇರಳದ ಕಾಲಡಿ ಎಂಬ ಗ್ರಾಮದಲ್ಲಿ ಜನಿಸಿದ ಆದಿಶಂಕರರು ಭಗವದ್ಗೀತೆ, ಉಪನಿ?ತ್ತು, ಹಾಗೂ ಬ್ರಹ್ಮಸೂತ್ರಗಳಿಗೆ ಭಾಷ್ಯ ಬರೆದ ಮೊದಲಿಗರು, ಶಂಕರರಿಗೆ ಚಿಕ್ಕಂದಿನಲ್ಲೇ ಸನ್ಯಾಸದ ಕಡೆಗೆ ಒಲವಿತ್ತು. ಶಿವನ ಅವತಾರವೇ ಶಂಕರಚಾರ್ಯರು ಎಂದು ಬಣ್ಣಿಸಿದರು. ಶಂಕರ ಜಯಂತಿ ಅಂಗವಾಗಿ ವೇದಪಾರಾಯಣ, ಭಜನೆ, ಸತ್ಸಂಗ ನೆರವೇರಿತು. ಜಯಂತಿ ಅಂಗವಾಗಿ ನಗರದ ಪ್ರಮುಖಬೀದಿಗಳಲ್ಲಿ ಶಂಕರಾಚಾರ್ಯರ ಭಾವಚಿತ್ರದ ಹೂವಿನ ಪಲ್ಲಕ್ಕಿ ಮೆರವಣಿಗೆ ವಿಜೃಂಭಣೆಯಿಂದ ನೆರವೇರಿತು. ಮೆರವಣಿಗೆಯಲ್ಲಿ ಪಟ್ಟಾಭಿರಾಮಮಂದಿರ ಅಧ್ಯಕ್ಷ ಕೆ.ಬಾಲಸುಬ್ರಮಣ್ಯ, ನಾಗೇಂದ್ರ ಪ್ರಸಾದ್, ಎಸ್. ಲಕ್ಷ್ಮಿ ನರಸಿಂಹ, ಶಾಂತಲಾ ವಾಸುದೇವರಾವ್, ಪ್ರಕಾಶ್, ಮೈಸೂರು ರಮೇಶ್, ವಿಜಯ ಬುಕ್ ಡಿಪೋ ಮಾಲೀಕರಾದ ಮುರಳಿ, ಅರ್ಚಕರಾದ ಕಿರಣ್ ಭಾರದ್ವಾಜ್, ಕಾರ್ತಿಕ್ ಭಾರದ್ವಾಜ್, ಬಾಲಸುಬ್ರಹ್ಮಣ್ಯ, ಶ್ರೀ ಶಂಕರ ತತ್ವ ಪ್ರಸಾರ ಅಭಿಯಾನದ ಜಿಲ್ಲಾ ಸಂಚಾಲಕ ಕೆ.ಅಜಿತ್, ಶ್ರೀನಾಥ್, ಬ್ರಾಹ್ಮಿ ಮಹಿಳಾ ಸಂಘದವರು ಭಾಗವಹಿಸಿದ್ದರು.

# ವಿವಿಧ ಹುದ್ದೆಗಳ ಭರ್ತಿಗೆ 18ರಂದು ನೇರ ಸಂದರ್ಶನ

**ಕೋಲಾರ:** ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯಲ್ಲಿ ಮೇ 18 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 2.00 ರವರೆಗೆ ಖಾಸಗಿ ಸಂಸ್ಥೆಗಳಾದ TATA CAPITAL MICRO FINANCE, FLIPKART, NAVA BHARATH FERTILIZERS LTD., ADVAITH HYUNDAI, KHIVRAJ MOTORS PVT., BHARATH FINANCIAL INCLUSION LTD, FORMAC SOFTWARE SERVICES PVT. LTD, Dr. REDDYS FOUNDATION PVT. LTD. ತಮ್ಮ ಸಂಸ್ಥೆಗಳಲ್ಲಿ ಲಭ್ಯವಿರುವ ಖಾಲಿ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ನೇರ ಸಂದರ್ಶನದ ಮೂಲಕ ಆಯ್ಕೆ ಮಾಡಿಕೊಳ್ಳಲಿದ್ದಾರೆ. ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೊಮ, ಪದವೀಧರರು, ಸ್ನಾತಕೋತ್ತರ ಪದವಿ ವಿದ್ಯಾರ್ಹತೆಯ ಆಸಕ್ತ ಅಭ್ಯರ್ಥಿಗಳು ತಮ್ಮ ಎಲ್ಲಾ ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿ, ಆಧಾರ್ ಕಾರ್ಡ್, ಬಯೋಡೇಟಾ, ಇತ್ತೀಚಿನ 4 ಭಾವಚಿತ್ರಗಳೊಂದಿಗೆ ನೇರ ಸಂದರ್ಶನದಲ್ಲಿ ಪಾಲ್ಗೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 7353232456, 940154413 ಗಳನ್ನು ಅಥವಾ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

# ಹತ್ತನೇ ತರಗತಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ನಮ್ರತಾ, ಲಾವಣ್ಯಾಗೆ ಶಿಕ್ಷಣ ಇಲಾಖೆಯಿಂದ ಸನ್ಮಾನ



**ಚಿಕ್ಕಮಗಳೂರಿನ ಸರಕಾರಿ ಜೂನಿಯರ್ ಕಾಲೇಜಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಇತರ ಅಧಿಕಾರಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಪ್ರಥಮ ಹಾಗೂ ರಾಜ್ಯಕ್ಕೆ 7 ನೇ ರ‍್ಯಾಂಕ್ ಪಡೆದ ವಿದ್ಯಾರ್ಥಿನಿಯರಾದ ಹೆಚ್.ವೈ.ನಮ್ರತಾ, ಎಸ್.ಲಾವಣ್ಯ ಇವರನ್ನು ಸನ್ಮಾನಿಸಿದರು.**

**ಚಿಕ್ಕಮಗಳೂರು:** ಉತ್ತಮ ಬೋಧನೆ, ಕಲಿಯಬೇಕೆಂಬ ಆಸಕ್ತಿ ಇದ್ದರೆ ಉತ್ತಮ ಫಲಿತಾಂಶ ಪಡೆಯಲು ಸಾಧ್ಯ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ರವೀಶ್ ಹೇಳಿದರು.

ನಗರದ ಸರಕಾರಿ ಜೂನಿಯರ್ ಕಾಲೇಜಿನಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಪಡೆದು ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ಕ್ಲಸ್ಟರ್ ವ್ಯಾಪ್ತಿಯ ವಿದ್ಯಾರ್ಥಿನಿಯರನ್ನು ಸನ್ಮಾನಿಸಿ ಮಾತನಾಡಿ, ಉತ್ತಮ ಫಲಿತಾಂಶ ತಂದಿದ್ದಕ್ಕಾಗಿ ಶಿಕ್ಷಕರ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭ 625 ಕ್ಕೆ 619 ಅಂಕಪಡೆದು ಚಿಕ್ಕಮಗಳೂರು ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ಸೇಂಟ್ ಮೇರೀಸ್ ಶಾಲೆಯ ವಿದ್ಯಾರ್ಥಿನಿ ಹೆಚ್.ವೈ.ನಮ್ರತಾ ಹಾಗೂ ಉಪ್ಪಳ್ಳಿಯ ಮಾಡಲ್ ಶಾಲೆಯ ಎಸ್.ಲಾವಣ್ಯ ಇವರನ್ನು ಸನ್ಮಾನಿಸಲಾಯಿತು. ಅತಿ ಹೆಚ್ಚು ಅಂಕ ಪಡೆದ ಹೆಚ್. ವೈ.ನಮ್ರತಾ, ಎಸ್.ಲಾವಣ್ಯ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ಬಿಇಒ ಹೆಚ್.ಸಿ.ರವೀಶ್, ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿ ಟಿಜಿಕೆ ಅರಸ್, ಇಸಿಒ ವಿರೇಶ್ ಕೌಲಗಿ, ಪೋಷಕರಾದ ಯಲ್ಲರಾಜಅರಸು, ಹೆಚ್.ಜಿ.ಸೀತಾರಾಮಚಂದ್ರ, ಮುಖ್ಯಶಿಕ್ಷಕರಾದ ಟಿ.ಎಲ್.ಉತ್ತಮ್ ಇತರರು ಇದ್ದರು.

ಅಭಿನಂದನೆ: ಚಿಕ್ಕಮಗಳೂರು ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿರುವ ವಿದ್ಯಾರ್ಥಿಗಳ ಬಗ್ಗೆ ಚಿಕ್ಕಮಗಳೂರಿನ ಡಿಡಿಪಿಐ ಪ್ರಕಾಶ್ ಮೆಚ್ಚುಗೆ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

# ರಾಷ್ಟ್ರೀಯ ಮಟ್ಟದಲ್ಲಿ ಭಗೀರಥ ಜಯಂತಿ ಆಚರಿಸಿ

**ಪಿರಿಯಾಪಟ್ಟಣ:** ದೇಶದ ಉದ್ದಗಲಕ್ಕೂ ವ್ಯಾಪಿಸಿ ವಿವಿಧ ಹೆಸರುಗಳಿಂದ ಕರೆಯಲ್ಪಡುವ ಉಪ್ಪಾರ ಸಮುದಾಯಕ್ಕೆ ಶಾಶ್ವತ ಆಯೋಗವನ್ನು ರಚಿಸುವ ಮೂಲಕ ಉಪ್ಪಾರರ ಆರಾಧ್ಯ ದೈವ ಶ್ರೀ ಭಗೀರಥ ಮಹರ್ಷಿಗಳ ಜಯಂತಿಯನ್ನು ರಾಷ್ಟ್ರೀಯ ಹಬ್ಬವನ್ನಾಗಿ ಆಚರಿಸಲು ಕೇಂದ್ರ ಸರ್ಕಾರ ಮುಂದಾಗಬೇಕು ಎಂದು ಕೆಪಿಸಿಸಿ ಸದಸ್ಯ ಅನಿಲ್ ಕುಮಾರ್ ಆಗ್ರಹಿಸಿದರು.

ಪಟ್ಟಣದ ಶ್ರೀ ಭಗೀರಥ ಸರ್ಕಲ್ ನಲ್ಲಿ ಉಪ್ಪಾರ ಸಮಾಜದ ಸಂಘಟನೆಗಳ ಒಕ್ಕೂಟದ ವತಿಯಿಂದ ಆಯೋಜಿಸಿದ್ದ ಮಹರ್ಷಿ ಶ್ರೀ ಭಗೀರಥ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಭಾರತೀಯ ಸಂಸ್ಕೃತಿ ಇಡೀ ಪ್ರಪಂಚದಲ್ಲಿಯೇ ವಿಶಿಷ್ಟತೆ ಹೊಂದಿದ್ದು, ಈ ನಾಡು ಅನೇಕ ದಾರ್ಶನಿಕರು, ಸಾಧು ಸಂತರು, ಸತ್ಪುರುಷರನ್ನು ಪ್ರಪಂಚಕ್ಕೆ ಕೊಡುಗೆ ನೀಡಿದೆ. ಇವರೆಲ್ಲರೂ ಸಕಲ ಮನುಕುಲಕ್ಕೆ ದಾರಿ ದೀಪವಾಗಿದ್ದಾರೆ ಅಂತಹ ಸತ್ಪುರುಷರಲ್ಲಿ ಭಗೀರಥ ಮಹರ್ಷಿ ಪ್ರಮುಖರು. ಇವರ ಅನುವಂಶಿಕರಾದ ಉಪ್ಪಾರ ಸಮಾಜವು ದೇಶದ ಉದ್ದಗಲಕ್ಕೂ ವ್ಯಾಪಿಸಿ ವಿವಿಧ ಹೆಸರುಗಳಿಂದ ಕರೆಯಲ್ಪಡುವ ಈ ಸಮಾಜವನ್ನು ಮುಖ್ಯವಾಹಿನಿಗೆ ತರಲು ಸಮಾಜಕ್ಕೆ ಶಾಶ್ವತವಾದ ನಿಗಮ ಹಾಗೂ ಈ ಸಮಾಜದ ಆರಾಧ್ಯ ದೈವ ಶ್ರೀ ಭಗೀರಥರ ಜಯಂತಿಯನ್ನು ರಾಷ್ಟ್ರೀಯ ಮಟ್ಟದಲ್ಲಿ ಆಚರಿಸಲು ಕೇಂದ್ರ ಸರ್ಕಾರ ಮುಂದಾಗಬೇಕು ಎಂದು ಆಗ್ರಹಿಸಿದರು.

ಸರ್ಕಾರಿ ಐಟಿಐ ಕಾಲೇಜು ಪ್ರಾಂಶುಪಾಲ ಸಿ.ಎಲ್.ಸೋಮಶೇಖರ್ ಮಾತನಾಡಿ ಭಗೀರಥ ಮಹರ್ಷಿ ತನ್ನ ತಪೋಶಕ್ತಿಯಿಂದ ಗಂಗೆಯನ್ನು ಭೂಮಿಗೆ ಇಳಿಸಿ, ಭೂಲೋಕದ ಸಕಲ ಜೀವಿಗಳ ದಾಹ ತಣಿಸಿದ ಮಹಾತ್ಮ ಭಗೀರಥ ಮಹರ್ಷಿ, ಇವರು ಬಹುದೊಡ್ಡ ಮಹಾರಾಜ, ಸಕಲ ವೈಭವಗಳಿದ್ದರೂ, ತನ್ನ ತಂದೆ ಹಾಗೂ ಹಿರಿಯರಿಗೆ ಸ್ವರ್ಗ ಪ್ರಾಪ್ತಿ ಮಾಡಲು ಅವರ ಪೂರ್ವಜರ ಮಹದಾಸೆಯಂತೆ ದೇವಗಂಗೆಯಿಂದ ಪವಿತ್ರಗೊಳಿಸಲು, ವೈಭೋಗವನ್ನು ತೊರೆದು, ಪ್ರತಿಜ್ಞೆಯೊಂದಿಗೆ ಕಠಿಣ ತಪಸ್ಸು ಮಾಡಿ ದೇವಗಂಗೆಯನ್ನು ಭೂ ಲೋಕಕ್ಕೆ ಕರೆತಂದರು. ಸಮಾಜದಲ್ಲಿ ಇಂದಿಗೂ ಕಠಿಣ ಪರಿಶ್ರಮಕ್ಕೆ ಭಗೀರಥ ಯತ್ನ ಎಂದೇ ಉದಾಹರಣೆ ನೀಡಲಾಗುತ್ತದೆ. ಕಠಿಣ ಪರಿಶ್ರಮದಿಂದ ಭೂಮಿಗೆ ಗಂಗೆ ತರಲಾದರೂ, ಆಧುನಿಕ ಪ್ರಪಂಚದಲ್ಲಿ ಭೂಮಿಯಲ್ಲಿನ ಮನುಷ್ಯರು ನೀರನ್ನು ಸದ್ಬಳಕೆ ಮಾಡದೆ, ನೀರು ಕಲುಷಿತಗೊಳಿಸುತ್ತಾರೆ ಮತ್ತು ಪರಿಸರವನ್ನು ನಾಶಪಡಿಸಿ ಪ್ರಾಣಿ ಪಕ್ಷಿಗಳಿಗೆ ತೊಂದರೆ ಉಂಟು ಮಾಡುತ್ತಾರೆ. ನೀರಿಗಾಗಿಯೇ ಮುಂದೊಂದು ದಿನ ಮಹಾಯುದ್ಧ ಸಂಭವಿಸಿದರೂ ಅಚ್ಚರಿಯಿಲ್ಲ ಎಂದರು.

ಯುವ ಮುಖಂಡ ಬಿ.ವಿ.ಮಂಜುನಾಥ್ ಮಾತನಾಡಿ ತಾಲ್ಲೂಕಿನಲ್ಲಿ ಉಪ್ಪಾರ ಸಮಾಜ ಹೆಚ್ಚಿನ ಸಂಖ್ಯೆಯಲ್ಲಿ ಇದ್ದರೂ ಜನಸಂಖ್ಯೆಗೆ ಅನುಗುಣವಾಗಿ ಯಾವುದೆ ಸ್ಥಾನ ಮಾನ, ಸವಲತ್ತುಗಳನ್ನು ಸಿಗುತ್ತಿಲ್ಲ ಉಪ್ಪಾರ ಸಮಾಜದ ಶೈಕ್ಷಣಿಕ ಅಭಿವೃದ್ಧಿ ಹಾಗೂ ಸಮುದಾಯ ಭವನಕ್ಕೆ ಅಗತ್ಯ ನಿವೇಶನಕ್ಕೆ ಸರ್ಕಾರದ ಮಟ್ಟದಲ್ಲಿ ಜಾಗ ನೀಡುವಂತೆ ಆದೇಶವಿದ್ದರೂ ಇದು ಕಾರ್ಯಗತ ವಾಗಿಲ್ಲ ಆದ್ದರಿಂದ ಸಮಾಜದ ಬಂಧುಗಳು ಒಗ್ಗಟ್ಟಿನಿಂದ ತಮ್ಮ ಬೇಡಿಕೆಯನ್ನು ಈಡೇರಿಸಿಕೊಳ್ಳಲು ಒತ್ತಾಯ ಮಾಡಬೇಕು, ಮುಂದಿನ ದಿನಗಳಲ್ಲಿ ಸಮಾಜದ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲು ಪ್ರತಿಭಾ ಪುರಸ್ಕಾರದಂತ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಸಲಹೆ ನೀಡಿದರು. ಉಪ್ಪಾರ ನೌಕರರ ಹಾಗೂ ವೃತ್ತಿಪರರ ಸಂಘದ ಅಧ್ಯಕ್ಷ ಪಿ.ಎಲ್.ರಾಮಣ್ಣ, ಗ್ರಾಪಂ ಅಧ್ಯಕ್ಷ ಕಾಮರಾಜ್, ಮುಖಂಡ ಪಿ.ಕೆ.ಕುಮಾರ್, ವಕೀಲ ಬಿ.ಎನ್. ಹರೀಶ್ ಮಾತನಾಡಿದರು .

ಪುರಸಭಾ ಮಾಜಿ ಸದಸ್ಯ ಎಂ.ಮಂಜು, ಪಿ.ಮಹದೇವ್, ಪಿ.ಡಿ.ತ್ರಿನೇಶ್, ಅಡಿಕೆ ಸುರೇಶ್, ಮುಖಂಡರಾದ ಪಿ.ಎನ್.ದೇವೇಗೌಡ, ಎನ್. ರವೀಂದ್ರ , ಲಕ್ಕಣ್ಣ, ಶಿವು, ಹೆಚ್.ಟಿ.ಗಣೇಶ್, ಮಹೇಶ್, ಬಸವರಾಜ್, ಮಹೇಶ್, ರಾಮೇಗೌಡ, ಚಂದ್ರಶೇಖರ್, ಹೊಟೇಲ್ ಆನಂದ್, ಲಕ್ಷ್ಮಣ, ವೀರಭದ್ರ, ತಿಮ್ಮು, ನಾಗರಾಜ್, ಪುನೀತ್, ಮಾಯಣ್ಣ ಸೇರಿದಂತೆ ಉಪ್ಪಾರ ಹಾಗೂ ಸೋದರ ಸಮಾಜದ ಮುಖಂಡರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಮನುಷ್ಯ ಎಷ್ಟೇ ಬೆಳೆದರೂ ಮೂಲ ಸಂಸ್ಕೃತಿ ಮರೆಯಬಾರದು

**ಕಲಬುರ್ಗಿ:** ಬೆಟ್ಟದಷ್ಟು ಕಷ್ಟಗಳು ಬಂದರೂ ಅಚಲವಾದ ಗಟ್ಟಿತನ ನಮ್ಮದಾಗಬೇಕು. ಸತ್ಯ ಧರ್ಮ ಪರಿಪಾಲನೆಯಿಂದ ಮನಸ್ಸು ಪರಿಶುದ್ಧಗೊಳ್ಳುತ್ತದೆ. ಮನುಷ್ಯ ಎಷ್ಟೇ ಎತ್ತರಕ್ಕೆ ಬೆಳೆದರೂ ಮೂಲ ಸಂಸ್ಕೃತಿ ಮರೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಬುಧವಾರ ತಾಲೂಕಿನ ಶ್ರೀನಿವಾಸ ಸರಡಗಿ ಚಿನ್ನದಕಂತಿ ಚಿಕ್ಕವೀರೇಶ್ವರ ಸಂಸ್ಥಾನ ಹಿರೇಮಠದ ಡಾ||ರೇವಣಸಿದ್ಧ ಶಿವಾಚಾರ್ಯರ ಷಷ್ಠಿಪೂರ್ತಿ ಸಮಾರಂಭ ಅಂಗವಾಗಿ ಮಂಗಲ ಸ್ನಾನ ಹಾಗೂ ನೂತನ ಉತ್ತರಾಧಿಕಾರಿ ನಿಯುಕ್ತಿ ಅಂಗವಾಗಿ ಜರುಗಿದ ಭಕ್ತ ಹಿತ ಚಿಂತನ ಸಮಾವೇಶದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಆಧುನಿಕ ವಿಜ್ಞಾನ ಎಲ್ಲಿ ನಿರುತ್ತರವಾಗುವುದೋ ಅಲ್ಲಿಂದ ಭಾರತೀಯ ಆಧ್ಯಾತ್ಮ ಚಿಂತನೆ ಪ್ರಾರಂಭಗೊಳ್ಳುತ್ತದೆ ಎಂದು ದಿವಂಗತ ರಾಷ್ಟ್ರಪತಿ ಡಾ||ಎಸ್.ರಾಧಾಕೃಷ್ಣನ್ ಅವರ ಮಾತಿನಂತೆ ಧರ್ಮ ಮತ್ತು ಸಂಸ್ಕೃತಿಗೆ ಅತ್ಯಂತ ಮಹತ್ವವಿದೆ. ಬದುಕಿನ ಯಶಸ್ವಿಗಾಗಿ ಲೌಕಿಕ ಜ್ಞಾನ ಹೇಗೆ ಅವಶ್ಯಕವೋ ಹಾಗೆ ನೊಂದ ಬೆಂದ ಮನಕ್ಕೆ ಆಧ್ಯಾತ್ಮ ಜ್ಞಾನದ ಅವಶ್ಯಕತೆಯಿದೆ. ಗುರಿಯಿಲ್ಲದ ಮತ್ತು ಗುರಿ ಸಾಧಿಸದ ವ್ಯಕ್ತಿಯ ಜೀವನ ನಿರರ್ಥಕವಾಗುತ್ತದೆ ಎಂಬ ಶ್ರೀ ಜಗದ್ಗುರು ರೇಣುಕಾಚಾರ್ಯರ ಸಂದೇಶದಂತೆ ಮನುಷ್ಯ ಜಾಗೃತನಾಗಿ ಧರ್ಮ ಪಾಲನೆ ಮಾಡಿಕೊಂಡು ಮುನ್ನಡೆಯಬೇಕಾಗಿದೆ. ಹುಟ್ಟು ಎಷ್ಟು ಸಹಜವೋ ಸಾವು ಅಷ್ಟೇ ನಿಶ್ಚಿತ. ಇವೆರಡರ



ಮಧ್ಯದ ಬದುಕು ಸಮೃದ್ಧಗೊಳಿಸಲು ಮಹಾತ್ಮರು ತೋರಿದ ದಾರಿ ಸದಾ ಆಶಾಕಿರಣವಾಗಿದೆ. ಶ್ರೀ ರೇವಣಸಿದ್ಧ ಶಿವಾಚಾರ್ಯರು ತಮ್ಮ ನಿರಂತರ ಪ್ರಯತ್ನ ಮತ್ತು ಸಾಧನೆಯಿಂದ ಶ್ರೀ ಮಠದ ಗೌರವ ಘನತೆಯನ್ನು ಹೆಚ್ಚಿಸಿದ್ದಾರೆ. ಶ್ರೀಗಳವರ ಕ್ರಿಯಾಶೀಲ ಬದುಕು ಅವರ ಜೀವನದ ಶ್ರೇಯಸ್ಸಿಗೆ ಸಾಕ್ಷಿಯಾಗಿದೆ. ಶ್ರೀಗಳವರು ಸಶಕ್ತವಾಗಿರುವಾಗಲೇ ಪುತ್ರವರ್ಗ ಪರಂಪರೆಯಂತೆ ಅದ್ವಿಕ್ ಎಂಬ ವಟುವನ್ನು ಸ್ವೀಕರಿಸಿ ತಮ್ಮ ಉತ್ತರಾಧಿಕಾರಿಗಳೆಂದು ಘೋಷಿಸಿರುವುದು ಅವರ ತ್ಯಾಗ ಔದಾರ್ಯಕ್ಕೆ ಈ ಸಮಾರಂಭ ಸಾಕ್ಷಿಯಾಗಿದೆ. ಶ್ರೀ ಪೀಠದಿಂದ ರೇವಣಸಿದ್ಧ ಶಿವಾಚಾರ್ಯರಿಗೂ ಹಾಗೂ ನೂತನ ಉತ್ತರಾಧಿಕಾರಿಗಳಿಗೆ ರೇಶ್ಮೆ ಮಡಿ ಸ್ಮರಣಿಕೆ ಫಲ ಪುಷ್ಪದೊಂದಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಶುಭವನ್ನು ಹಾರೈಸಿದರು. ಸಮಾರಂಭದ ನೇತೃತ್ವ ವಹಿಸಿದ ಡಾ||ಶ್ರೀ ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ನೀರಿನಲ್ಲಿ ಸ್ನಾನ ಮಾಡಿದರೆ ಬಟ್ಟೆ ಬದಲಿಸಬಹುದು. ಬೆವರಿನಲ್ಲಿ ಸ್ನಾನ ಮಾಡಿದರೆ ಇತಿಹಾಸವನ್ನು ನಿರ್ಮಿಸಲು ಸಾಧ್ಯ. ಸುಣ್ಣದ ನೀರು ಹಾಲಿನಂತೆ ಬೆಳ್ಳಗೆ ಕಾಣುತ್ತದೆ. ಆದರೆ ಗುಣ ಮತ್ತು ರುಚಿ ಮಾತ್ರ ಬೇರೆಯಾಗಿರುತ್ತದೆ. ಅದೇ ರೀತಿ ಕೆಲವರು ನಮ್ಮವರಂತೆ ಕಂಡರೂ ಅವರ ಒಳಗಿನ ರೂಪ ಭಾವನೆ ಬೇರೆಯೇ ಇರುತ್ತದೆ ಎಂಬುದನ್ನು ಮರೆಯಬಾರದು. ವೀರಶೈವ ಧರ್ಮ ಸಂಸ್ಕೃತಿ ಮತ್ತು ಸಂಸ್ಕಾರ ಕಲಿಸಿಕೊಟ್ಟಿದ್ದನ್ನು ಅನುಸರಿಸಿ ಬಾಳಬೇಕೆಂದರು. ಈ ಪವಿತ್ರ ಸಮಾರಂಭದಲ್ಲಿ ಸ್ಟೇಷನ್ ಬಬಲಾದ ಶಿವಮೂರ್ತಿ ಶಿವಾಚಾರ್ಯರು, ಕಲಬುರ್ಗಿ ಡಾ.ರಾಜಶೇಖರ ಶಿವಾಚಾರ್ಯರು, ತೊನಸನಹಳ್ಳಿ ರೇವಣಸಿದ್ಧ ಚರಂತೇಶ್ವರ ಶಿವಾಚಾರ್ಯರು, ಆಲಮೇಲ ಚಂದ್ರಶೇಖರ ಶಿವಾಚಾರ್ಯರು, ಕಲಕರ್ಟಿ ರಾಜಶೇಖರ ಶಿವಾಚಾರ್ಯರು, ಆಳಂದ ಸಿದ್ಧಲಿಂಗ ಶಿವಾಚಾರ್ಯರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಕಲಬುರ್ಗಿಯ ಬಸವರಾಜ ಭೀಮಳ್ಳಿ, ಅಣ್ಣಾರಾವ್ ಬಿರಾದಾರ, ಅಮೃತಪ್ಪ ಗೌಡ, ಬೆಂಗಳೂರಿನ ಬೀರೂರು ಶಿವಸ್ವಾಮಿ, ಆರ್.ಆರ್ .ಹಿರೇಮಠ, ಜೇರಟಗಿ ಮಡಿವಾಳ ಶಾಸ್ತ್ರಿಗಳು, ಬ್ಯಾಹಟ್ಟಿ ಸತೀಶ ಹಿರೇಮಠ ಸೇರಿದಂತೆ ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ನಾಗಲಿಂಗಯ್ಯ ಹಿರೇಮಠ ಮತ್ತು ಹಣಮಂತ್ರಾಯ ಅಟ್ಟೂರು ನಿರೂಪಣೆ ಮಾಡಿದರು. ಸಮಾರಂಭದ ನಂತರ ಸಕಲ ಸದ್ಭಕ್ತರಿಗೆ ಅನ್ನ ದಾಸೋಹ ಜರುಗಿತು.

## ತೊಂದರೆಗೊಳಗಾದವರು ಯಾವುದೇ ಹಿಂಜರಿಕೆ ಇಲ್ಲದೆ ಧೈರ್ಯವಾಗಿ ದೂರುಗಳನ್ನು ಸಲ್ಲಿಸಿ

**ವಿಜಯಪುರ;** ಸರ್ಕಾರಿ ಹಾಗೂ ಸಾರ್ವಜನಿಕರ ಕಚೇರಿಗಳಲ್ಲಿ ಕೆಲಸ ಕಾರ್ಯ ಮಾಡಿಕೊಡದೆ ಸತಾಯಿಸುವುದು ಲಂಚಕ್ಕೆ ಬೇಡಿಕೆ ಇಡುವುದು ಮುಂತಾಗಿ ತೊಂದರೆ ಅನುಭವಿಸುತ್ತಿರುವ ನೊಂದ ಸಾರ್ವಜನಿಕರು ಲೋಕಾಯುಕ್ತಕ್ಕೆ ಧೈರ್ಯವಾಗಿ ಯಾವುದೇ ಹಿಂಜರಿಕೆ ಇಲ್ಲದೆ ದೂರುಗಳನ್ನು ಸಲ್ಲಿಸಬಹುದೆಂದು, ದೂರು ನೀಡುವುದರಿಂದ ತಮ್ಮ ಕೆಲಸಗಳು ಆಗದೆ ಮಧ್ಯಂತರದಲ್ಲಿ ನಿಂತು ಹೋಗುತ್ತದೆ ಎಂಬ ಹಿಂಜರಿಕೆ ಬೇಕಾಗಿಲ್ಲವೆಂದು, ದೂರಿಗೆ ಸಂಬಂಧಪಟ್ಟಂತೆ ನೊಂದವರ ಅರ್ಜಿದಾರರ ಕೆಲಸ ಸಂಪೂರ್ಣ ವಾಗುವಂತೆ ನೋಡಿಕೊಳ್ಳಲಾಗುತ್ತದೆ ಎಂದು ಲೋಕಾಯುಕ್ತ ಎಸ್ ಪಿ ಪವನ್ ನಿಜ್ಜೂರ್ ತಿಳಿಸಿದರು.

ಇಲ್ಲಿನ ಪರಿವೀಕ್ಷಣ ಮಂದಿರದಲ್ಲಿ ಲೋಕಾಯುಕ್ತ ವತಿಯಿಂದ ಏರ್ಪಡಿಸಲಾಗಿದ್ದ ಸಾರ್ವಜನಿಕ ಕುಂದು ಕೊರತೆ ಸಮಸ್ಯೆಗಳ ಬಗ್ಗೆ ಅರ್ಜಿಗಳನ್ನು ಸ್ವೀಕರಿಸಿ ಮಾತನಾಡುತ್ತಿದ್ದರು. ಸಾರ್ವಜನಿಕರಿಂದ 19 ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, ಬಹುತೇಕ ಅರ್ಜಿಗಳು ಪುರಸಭೆಯ ನೌಕರರುಗಳ ಹಾಗೂ ಕಂದಾಯ ಇಲಾಖೆಗಳ ಮೇಲಿದ್ದು, ಖಾತೆಗಳನ್ನು ಮಾಡಿಕೊಡದಿರುವುದು, ರಾಜಕಾಲುವೆಗಳ ಒತ್ತುವರಿ, ನಕಾಶೆ ರಸ್ತೆಗಳ ಒತ್ತುವರಿ, ಮುಂತಾದವುಗಳೊಂದಿಗೆ ತಾಲೂಕಿನ ಕೊಯಿರಾ ಬಂಡೆ ಬಳಿ ಅನಧಿಕೃತವಾಗಿ ಗಣಿಗಾರಿಕೆ ನಡೆಸುತ್ತಿರುವುದು, ಶಿಥಿಲವಾದ ವಿದ್ಯುತ್ ಕಂಬ ತೆರವುಗೊಳಿಸದಿರುವುದು ಮುಂತಾಗಿ ದೂರುಗಳು ದಾಖಲಾಗಿವೆ ಎಂದು ಡಿಎಸ್ಪಿ ಗಿರೀಶ್ ಪಿ.ರೋಡಕರ್ ರವರು ತಿಳಿಸಿದರು.

ಇನ್ಸ್ಪೆಕ್ಟರ್ ನಂದಕುಮಾರ್ ರವರು ಮಾತನಾಡಿ ಅರ್ಜಿಗಳಿಗೆ ಸಂಬಂಧಿಸಿದಂತೆ ಸಂಬಂಧಪಟ್ಟ ಅಧಿಕಾರಿಗಳನ್ನು ಸ್ಥಳದಲ್ಲೇ ಕರೆಸಿ ಸೂಚನೆಗಳನ್ನು ನೀಡುವುದರೊಂದಿಗೆ, ಪುರಸಭೆಗೆ ಭೇಟಿ ನೀಡಿ ಸಮಸ್ಯೆಗಳ ಬಗ್ಗೆ ಪರಿಶೀಲನೆ ನಡೆಸಿದ್ದು ಸರಕಾರಿ ಸಮುದಾಯ ಆರೋಗ್ಯ ಕೇಂದ್ರಕ್ಕೂ ಭೇಟಿ ನೀಡಿ, ಪರಿಶೀಲನೆ ನಡೆಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಇನ್ಸ್ಪೆಕ್ಟರ್ ಪಿ ವಿ ವೆಂಕಟೇಶ್, ಹೆಡ್ ಕಾನ್ ಸ್ಟೇಬಲ್ಗಳಾದ ಶ್ರೀಧರ್, ವೆಂಕಟರೆಡ್ಡಿ, ಬೈರೇಶ್, ಕಾನ್ಸ್ಟೇಬಲ್ಗಳಾದ ದೇವರಾಜ್, ಪ್ರಕಾಶ್ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.



# ಮಹರ್ಷಿಗಳ ಆದರ್ಶ ಅನುಸರಿಸಿ

**ಚಿಕ್ಕಬಳ್ಳಾಪುರ:** ತಮ್ಮದೇ ಆದ ಅದ್ವೈತ ಸಿದ್ಧಾಂತವನ್ನು ಭಾರತಾದ್ಯಂತ ಪ್ರಚಾರ ಪಡಿಸುವ ಮೂಲಕ ಹಿಂದೂ ಧರ್ಮದ ಪುನರುಜ್ಜೀವನ ಮಾಡುವಲ್ಲಿ ಶಂಕರಚಾರ್ಯರ ಪಾತ್ರ ಅಪಾರವಾದುದು ಎಂದು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಅವರು ತಿಳಿಸಿದರು.

ಮಂಗಳವಾರ ಜಿಲ್ಲಾಡಳಿತ ವತಿಯಿಂದ ಜಿಲ್ಲಾಡಳಿತ ಭವನದಲ್ಲಿ ಆಯೋಜಿಸಿದ್ದ ಶ್ರೀ ಶಂಕರಚಾರ್ಯರ ಮತ್ತು ಭಗೀರಥ ಮಹರ್ಷಿ ಯವರ ಜಯಂತಿ ಕಾರ್ಯಕ್ರಮಕ್ಕೆ ಅವರುಗಳ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಶಂಕರಾಚಾರ್ಯರು ಭಕ್ತಿ ಮತ್ತು ಜ್ಞಾನ್ನ ಮಾರ್ಗಕ್ಕೆ ಹೆಚ್ಚು ಒತ್ತು ನೀಡಿದ್ದರು. ಸೌಂದರ್ಯ ಮತ್ತು ಯವ್ವನದ ಬಗ್ಗೆ ಹೆಚ್ಚು ಹೆಮ್ಮೆ ಪಡಬಾರದು ಎಂಬುದನ್ನು ಬೋಧಿಸಿದರು. ಜ್ಞಾನಕ್ಕಿಂತ ಮಿಗಿಲಾದದ್ದು ಜಗತ್ತಿನಲ್ಲಿ ಬೇರೊಂದಿಲ್ಲ. ಹಣಕ್ಕೆ ಹೆಚ್ಚು ಮಹತ್ವ ನೀಡಬಾರದು. ತಮ್ಮ ಮೂಲಭೂತ ಅಗತ್ಯಗಳನ್ನು ಪೂರೈಸಿದ ಮೇಲೆ ಮಿಗಿಲಾದ ಸಂಪತ್ತನ್ನು ಅಗತ್ಯ ಇರುವವರಿಗೆ, ಅಶಕ್ತರಿಗೆ ದಾನ ಮಾಡಿ ನೆಮ್ಮದಿ ಜೀವನ ಕಟ್ಟಿಕೊಳ್ಳಿ ಎಂದು ಭೋದಿಸಿದ ಅವರು ಭಾರತದಾದ್ಯಂತ ಸಂಚರಿಸಿ ಹಿಂದೂ ಧರ್ಮವನ್ನು ಪ್ರಚಾರ ಮಾಡಿದರು. ದೇಶದ ನಾಲ್ಕು ಭಾಗಗಳಲ್ಲಿ ಮಠಗಳನ್ನು ಸ್ಥಾಪಿಸಿದರು. ಅತ್ಯಂತ ಕಡಿಮೆ ಜೀವಿತಾವಧಿಯಲ್ಲಿ ಹೆಚ್ಚು ಸಾಧನೆ ಗೈದರು. ಅವರು ಪ್ರಸ್ತುತ ದೇಹವನ್ನು ಮಾತ್ರ ತ್ಯಜಿಸಿದ್ದಾರೆ. ಆದರೆ ಅವರ ಸಾಧನೆಗಳು, ವಿಚಾರ ದಾರೆಗಳು, ಆದರ್ಶಗಳು ಭೂಮಿ ಇರುವವರೆಗೂ ಜನಮಾನಸದಲ್ಲಿ ಜೀವಂತವಾಗಿರುತ್ತವೆ. ಹಿಂದೂ ಧರ್ಮವು ಅವನತಿ ಹೊಂದುವ ಹಾದಿಯಲ್ಲಿದ್ದ ಸಂದರ್ಭದಲ್ಲಿ ಧರ್ಮ ಪುನರುಜ್ಜೀವನದಲ್ಲಿ ಪ್ರಮುಖಪಾತ್ರ ವಹಿಸಿ ಭಾರತೀಯ ಸಮಾಜ ಸುಧಾರಕರಾಗಿದ್ದಾರೆ. ಇಂತಹ ಮಹನೀಯರು ರಚನೆ ಮಾಡಿರುವ ಎಲ್ಲ ಕೃತಿಗಳು, ಸಾಹಿತ್ಯಗಳು ಕನ್ನಡ ಭಾಷೆಗೂ



ಭಾಷಾಂತರಗೊಂಡರೆ ಹೆಚ್ಚು ಅನುಕೂಲವಾಗಲಿದೆ ಎಂದು ತಿಳಿಸಿದರು. ಯಾವುದೇ ಪ್ರಯತ್ನವನ್ನು ಮಾಡಿದರೂ ನಿರಂತರವಾಗಿ, ನಿಷ್ಠೆಯಿಂದ ಗುರಿ ಮುಟ್ಟುವ ತನಕ ಮಾಡಬೇಕು. ಅಂತೆಯೇ ತಮ್ಮ ಯೋಗ ಮತ್ತು ತಪಸ್ಸಿನ ಮೂಲಕ ನಿರಂತರ ಪ್ರಯತ್ನದಿಂದ ಭಗೀರಥ ಮಹರ್ಷಿಗಳು ಗಂಗೆಯನ್ನು ಹಿಮಾಲಯ ಪರ್ವತದಿಂದ ತಂದರು. ಹಾಗಾಗಿ ಭಗೀರಥ ಪ್ರಯತ್ನ ಎಂಬುದು ನಮ್ಮ ಸಮಾಜದಲ್ಲಿ ನಾಣ್ನುಡಿಯಾಗಿದೆ. ವೇದ ಸುಳ್ಳಾದರೂ ಗಾದೆ ಸುಳ್ಳಾಗುವುದಿಲ್ಲ ಎಂಬ ನಾಣ್ನುಡಿಯಂತೆ ನಾವು ಯಾವುದೇ ಪ್ರಯತ್ನವನ್ನು ಪ್ರಮಾಣಿಕವಾಗಿ ಮತ್ತು ನಿರಂತರವಾಗಿ ಮಾಡಿದರೆ ಎಂತಹ ಸಾಧನೆಯನ್ನು ಸಹ ನಾವು ಸಾಧಿಸಬಹುದು. ಶಂಕರಚಾರ್ಯರು ಹಾಗೂ ಭಗೀರಥ ಮಹರ್ಷಿಗಳು ಸೇರಿದಂತೆ ಇನ್ನಿತರ ಮಹಾನ್ ಸಾಧಕರ ಆದರ್ಶಗಳನ್ನ ನಾವೆಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಬಹಳ ಭಕ್ತಿ ಪೂರ್ವಕವಾಗಿ ಹಾಗೂ ಅರ್ಥಪೂರ್ಣವಾಗಿ ಇರ್ವರ ಜಯಂತಿಗಳನ್ನು ಕನ್ನಡ ಸಂಸ್ಕತಿ ಇಲಾಖೆಯ ಸಹಯೋಗದಲ್ಲಿ ಜಿಲ್ಲಾಡಳಿತ ಆಯೋಜಿಸಿದೆ. ಇದಕ್ಕೆ ಸಹಕಾರ ನೀಡಿದ ಸಮುದಾಯದ ಪ್ರತಿಯೊಬ್ಬರಿಗೂ ಅಭಿನಂಧನೆಗಳನ್ನು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಅವರು ತಿಳಿಸಿದರು.

ಈ ವೇಳೆ ಉಷಾ ವೇಣುಗೋಪಾಲ ರವರು ಮಾತನಾಡಿ, ಆದಿ ಶಂಕರ ಎಂದರೆ ಶುಭದ ಸಂಕೇತವಾಗಿದೆ. ಶ್ರೀ ಶಂಕರಾಚಾರ್ಯರು 8ನೇ ವಯಸ್ಸಿಗೆ 4 ವೇದಗಳನ್ನು ಕಲಿತು 12ನೇ ವಯಸ್ಸಿಗೆ ಎಲ್ಲ ವಿದ್ಯೆ, ಶಾಸ್ತ್ರ ಪರಂಗತರಾದರು. 16ನೇ ವಯಸ್ಸಿನಲ್ಲಿ 58 ಗ್ರಂಥಗಳು, 72 ಸ್ತೋತ್ರಗಳು ಮತ್ತು ಭಾಷ್ಯಗಳನ್ನು ರಚಿಸಿದರು ಎಂದು ತಿಳಿಸಿದರು. ಸಮುದಾಯದ ಮುಖಂಡ ವೆಂಕಟೇಶ್ ರವರು ಮಹರ್ಷಿ ಭಗೀರಥರ ಜೀವನ ಸಾಧನೆ ಕುರಿತು ತಿಳಿಸಿಕೊಟ್ಟರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಎನ್.ತಿಪ್ಪೇಸ್ವಾಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾದ ಎನ್. ಮನಿಷ್, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಮಹೇಶ್ ಕುಮಾರ್, ಪ್ರಾದೇಶಿಕ ಸಾರಿಗೆ ಅಧಿಕಾರಿ ವಿವೇಕಾನಂದ ರೈ, ಸಮುದಾಯದ ಮುಖಂಡರಾದ ಮೊಕ್ಷ ಗುಡಂ ವೇಣು ಗೋಪಾಲ, ಜಯ ಪ್ರಕಾಶ, ದೇವಾಶಾಸ್ತ್ರಿ, ಅನುಪಮ ನಾಗಭೂಷಣ್, ಶ್ರೀನಾಥ್, ನಳಿನ, ವೇಂಕಟೇಶ್ ಉಪಸ್ಥಿತರಿದ್ದರು.

## ವಿವಿಧ ಆಗಮ ಪ್ರವರ ಮತ್ತು ಪ್ರವೀಣ ಪ್ರಸಿದ್ಧ ಪರೀಕ್ಷೆ

**ಚಾಮರಾಜನಗರ:** ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ಇಲಾಖೆಯ 2022-23 ಮತ್ತು 2023-24ನೇ ಸಾಲಿನ ವಿವಿಧ ಆಗಮ ಪ್ರವರ ಮತ್ತು ಪ್ರವೀಣ ಪ್ರಸಿದ್ಧ ಪರೀಕ್ಷೆಗಳು ಮೇ 20 ರಿಂದ 25 ರವರೆಗೆ ಹನೂರು ತಾಲೂಕಿನ ಮಹದೇಶ್ವರ ಬೆಟ್ಟದ ಶ್ರೀ ಸಾಲೂರು ಮಠದಲ್ಲಿನ ಶ್ರೀ ಮಲೆ ಮಹದೇಶ್ವರ ವೇದ ಆಗಮ ಪಾಠಶಾಲೆಯಲ್ಲಿ ನಡೆಯಲಿದ್ದು, ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷಾ ಕಾರ್ಯವು ನ್ಯಾಯೋಚಿತವಾಗಿ, ಶಾಂತಿ ಸುವ್ಯವಸ್ಥೆಯಿಂದ ನಡೆಸುವ ಸದುದ್ದೇಶದಿಂದ ಹಾಗೂ ಪರೀಕ್ಷಾ ಅಕ್ರಮಗಳನ್ನು ತಡೆಯಲು ಪರೀಕ್ಷಾ ಕೇಂದ್ರಗಳ ಸುತ್ತಲ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ಸಾರ್ವಜನಿಕ ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶ ಹೊರಡಿಸಿದ್ದಾರೆ. ಪರೀಕ್ಷಾ ಕೇಂದ್ರದ ಸುತ್ತಲ 200 ಮೀಟರ್ ವ್ಯಾಪ್ತಿಯಲ್ಲಿ ಸೆಕ್ಷನ್ 144 ರನ್ವಯ ಪರೀಕ್ಷಾ ದಿನಗಳಂದು ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ನಿಷೇಧಾಜ್ಞೆ ವಿಧಿಸಲಾಗಿದೆ. ಅಲ್ಲದೇ ಸದರಿ ದಿನಗಳಂದು ಪರೀಕ್ಷಾ ಕೇಂದ್ರಗಳ 200 ಮೀಟರ್ ವ್ಯಾಪ್ತಿಯಲ್ಲಿ ಬರುವ ಜೆರಾಕ್ಸ್ ಅಂಗಡಿಗಳನ್ನು ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆಯವರೆಗೆ ಮುಚ್ಚಲು ಸಹ ಆದೇಶಿಸಲಾಗಿದೆ. ನಿಷೇಧಾಜ್ಞೆ ಆದೇಶವು ವಿವಿಧ ಆಗಮ ಪ್ರವರ ಮತ್ತು ಪ್ರವೀಣ ಪ್ರಸಿದ್ಧ ಪರೀಕ್ಷೆಯ ಕೆಲಸಕ್ಕೆ ನಿಯೋಜಿತರಾದ ಅಧಿಕಾರಿ ಸಿಬ್ಬಂದಿ ವರ್ಗದವರಿಗೆ ಮತ್ತು ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳಿಗೆ ಅನ್ವಯವಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

## ರಾಷ್ಟ್ರೀಯ ಡೆಂಗೀ ದಿನಾಚರಣೆ ಅಂಗವಾಗಿ ಮಾನವ ಸರಪಳಿ

**ಚಾಮರಾಜನಗರ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿ ಸಹಯೋಗದಲ್ಲಿ ರಾಷ್ಟ್ರೀಯ ಡೆಂಗೀ ದಿನಾಚರಣೆಯನ್ನು ಮೇ 16ರಂದು ಬೆಳಿಗ್ಗೆ 9.30 ಗಂಟೆಗೆ ನಗರದ ಪಚ್ಚಪ್ಪ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಆಚರಣೆ ಮಾಡಲಾಗುತ್ತದೆ ಎಂದು ಜಿಲ್ಲಾ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ರಾಜೇಶ್ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಮಳೆ, ಬೆಳೆಗಾಗಿ ರಾಜರಾಜೇಶ್ವರಿ ದೇವಾಲಯದಲ್ಲಿ ಚಂಡಿಕ ಹೋಮ ಹಾಗೂ ಅಶ್ಲೇಷ ಪೂಜೆ

**ಕೋಲಾರ:** ತಾಲ್ಲೂಕಿನ ವಕ್ಕಲೇರಿ ಗ್ರಾಮದಲ್ಲಿರುವ ರಾಜರಾಜೇಶ್ವರಿ ದೇವಾಲಯ ನಿರ್ಮಾಣವಾಗಿ ಹತ್ತು ವರ್ಷ ತುಂಬಿದ ಹಿನ್ನೆಲೆ ದೇವಾಲಯದಲ್ಲಿ ಚಂಡಿಕ ಹೋಮ ಹಾಗೂ ಅಶ್ಲೇಷ ಪೂಜೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ದೇವಾಲಯದ ಮುಖ್ಯ ಅರ್ಚಕ ಮನೋಜಿ ರಾವ್ ನೇತೃತ್ವದಲ್ಲಿ ಚಂಡಿಕ ಹೋಮ, ಅಶ್ಲೇಷ ಪೂಜೆ ಕಾರ್ಯಕ್ರಮಗಳು ನೇರವೇರಿದವು. ಈ ಸಂದರ್ಭದಲ್ಲಿ ಆರ್ಚಕ ಮನೋಜಿ ರಾವ್ ಮಾತನಾಡಿ, ದೇವಾಲಯ ನಿರ್ಮಾಣವಾಗಿ ಹತ್ತು ವರ್ಷ ತುಂಬಿದ ಹಿನ್ನೆಲೆ ಪ್ರತಿ ವರ್ಷದಂತೆ ಈ ವರ್ಷವು ಅದ್ದೂರಿಯಾಗಿ ದೇವಿಯ ಪೂಜೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ವಕ್ಕಲೇರಿ ಗ್ರಾಮದ ಸಮಸ್ತ ಜನತೆ ಹಾಗೂ ದೇವಾಲಯದ ಭಕ್ತರ ನೆರವಿನಿಂದ ಚಂಡಿಕ ಹೋಮ, ಅಶ್ಲೇಷ ಪೂಜೆ ಸೇರಿದಂತೆ ರಾಜರಾಜೇಶ್ವರಿ ದೇವಿಗೆ ಮಹಾ ಮಂಗಳಾರತಿ ಪೂಜೆಗಳು ನಡೆಸಲಾಯಿತು. ರಾಜ್ಯದಲ್ಲಿ ಬಹುತೇಕ ಕಡೆ ಬರಗಾಲ ವ್ಯಾಪಿಸಿದೆ. ಜಿಲ್ಲೆಯಲ್ಲಿ ಮಳೆ ಇಲ್ಲದೇ ಪ್ರಾಣಿಪಕ್ಷಿಗಳಿಗೆ ಸಂಕಷ್ಟ ಎದುರಾಗಿದೆ. ಮಳೆ ಇಲ್ಲದೆ ರೈತರು ಬೆಳೆ ಬೆಳೆಯಲು ಸಾಧ್ಯವಾಗದೇ ನಷ್ಟ ಅನುಭವಿಸುತ್ತಿದ್ದಾರೆ. ನಾಡು ಹಾಗು ಜಿಲ್ಲೆಯಲ್ಲಿ ಮಳೆ ಬೆಳೆಯಾಗಿ ರೈತರ ಜೀವನ ಸಮೃದ್ಧಿಯಾಗಲೆಂದು ಲೋಕಕಲ್ಯಾಣಕ್ಕಾಗಿ ಚಂಡಿಕ ಹೋಮ ನಡೆಸಲಾಗಿದೆ ಮತ್ತು ಸಂಜೆ ಶ್ರೀದೇವಿ ಭೂದೇವಿ ಸಮೇತ ಶ್ರೀನಿವಾಸ್ ಕಲ್ಯಾಣೋತ್ಸವ ನಡೆಯಲಿದೆ ಎಂದರು. ನೂರಾರು ಮಹಿಳೆಯರು ಕಳಸ ಹೊತ್ತು ಪೂಜೆ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

## ಉಚಿತ ಕೋಳಿ ಸಾಕಾಣಿಕೆ ತರಬೇತಿಗೆ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಕೋಳಿ ಸಾಕಾಣಿಕೆ ಕುರಿತ 10 ದಿನಗಳ ಉಚಿತ ತರಬೇತಿಯು ಅರ್ಜಿ ಆಹ್ವಾನಿಸಲಾಗಿದ್ದು, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ ಹಾಗೂ ತುಮಕೂರು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನವಾಗಿದೆ. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9380162042, 9740982585 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀರಿನ ಅದಾಲತ್

**ಬೆಂಗಳೂರು:** ಬೆಂಗಳೂರು ಜಲ ಮಂಡಳಿಯ ವಿವಿಧ ಉಪ ವಿಭಾಗಗಳಾದ ವಾಯುವ್ಯ-2, ವಾಯುವ್ಯ-4, ಕೇಂದ್ರ 1-2, ಈಶಾನ್ಯ - 2, ಉತ್ತರ 1-2, ಉತ್ತರ 2-2, ದಕ್ಷಿಣ 1-2, ದಕ್ಷಿಣ 2?2, ನೈರುತ್ಯ -2, ನೈರುತ್ಯ -5, ಪೂರ್ವ 1-3 ಮತ್ತು ಪೂರ್ವ 2-3, ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದು ಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಮೇ 16 ರಂದು ಬೆಳಿಗ್ಗೆ 9.30 ಗಂಟೆಯಿಂದ 11.00 ಗಂಟೆಯವರೆಗೆ ನೀರಿನ ಅದಾಲತ್ತ್ನ್ನು ನಡೆಸಲಾಗುವುದು. ನೀರಿನ ಅದಾಲತ್ ಸೇವಾಠಾಣೆಗಳು ಹೆಚ್.ಎಂ.ಟಿ ಪೀಣ್ಯ, ದಾಸರಹಳ್ಳಿ, ಪೀಣ್ಯ, ಲಿಂಗಧೀರನಹಳ್ಳಿ, ಅಂದರಹಳ್ಳಿ, ಹೆಗ್ಗನಹಳ್ಳಿ, ಕೊಟ್ಟಿಗೆಪಾಳ್ಯ, ಹೇರೋಹಳ್ಳಿ, ಫ್ರೇಜರ್ಟೌನ್, ಮಚಲಿಬೆಟ್ಟ, ಪಿಳ್ಳಣ್ಣಗಾರ್ಡನ್ 12, ಕೆಂಪೇಗೌಡ ಟವರ್, ಕುಮಾರ ಪಾರ್ಕ್, ಜಯಮಹಲ್, ಸಂಜಯನಗರ, ನ್ಯೂ ಬಿ.ಇ.ಎಲ್. ರಸ್ತೆ, ಆರ್.ಟಿ.ನಗರ ಕಾವಲ್ ಬೈರಸಂದ್ರ, ಗಂಗಾನಗರ, ಆನಂದನಗರ, ಮನೋರಾಯನಪಾಳ್ಯ, ಸಿಂಗಾಪುರ, ವಿದ್ಯಾರಣ್ಯಪುರ, ಸಹಕಾರನಗರ, ಹೆಚ್.ಎಸ್. ಆರ್-1, ಕೋಡಿಚಿಕ್ಕನಹಳ್ಳಿ, ಬೊಮ್ಮನಹಳ್ಳಿ, ಕೂಡ್ಲು, ಬೇಗೂರು, ವಿ.ವಿ.ಪುರಂ, ಸುಧಾಮನಗರ-2, ಕೆಂಪೇಗೌಡ ನಗರ, ಜಗಜೀವನರಾಮ್ ನಗರ, ಚಾಮರಾಜಪೇಟೆ, ಬನಗಿರಿನಗರ, ಬಿ.ಎಸ್.ಕೆ-1 2, ಕುಮಾರಸ್ವಾಮಿ ಲೇಔಟ್, ಇಸ್ರೋ ಲೇಔಟ್, ಪೂರ್ಣ ಪ್ರಜ್ಞಾ ಲೇಔಟ್, ಪೂರ್ವ ವಿಲೇಜ್-2-1, 2-2, ಕಾಡುಗೋಡಿ ವರ್ತೂರು, ಐ.ಎಸ್.ಪಿ.ಎಸ್. ಹೊರಮಾವು, ರಾಜಾಕೆನಲ್ ವ್ಯಾಪ್ತಿಯಲ್ಲಿ ನೀರಿನ ಅದಾಲತ್ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916ಗೆ ಕರೆ ಮಾಡಿ ದೂರುಗಳನ್ನು ದಾಖಲಿಸಬಹುದು. ಹಾಗೂ ವಾಟ್ಸಆಫ್ ಸಂಖ್ಯೆ 8762228888 ಸಂದೇಶದ ಮೂಲಕ ದೂರನ್ನು ಸಲ್ಲಿಸಬಹುದಾಗಿದೆ ಎಂದು ಬೆಂಗಳೂರು ಜಲ ಮಂಡಳಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ಕೋಳಿ ಸಾಕಾಣಿಕೆ ತರಬೇತಿಗೆ ಅರ್ಜಿ ಆಹ್ವಾನ

**ಮಂಡ್ಯ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಕೋಳಿ ಸಾಕಾಣಿಕೆ ಕುರಿತ 10 ದಿನಗಳ ಉಚಿತ ತರಬೇತಿಯು ಅರ್ಜಿ ಆಹ್ವಾನಿಸಲಾಗಿದೆ. 18 ರಿಂದ 45 ವರ್ಷ ವಯೋಮಾನದ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರು ಅರ್ಜಿ ಸಲ್ಲಿಸಬಹುದಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನವಾಗಿದೆ. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಬೆಂಗಳೂರಿನ ನೆಲಮಂಗಲ ತಾಲ್ಲೂಕು, ಅರಿಶಿನಕುಂಟೆಯಲ್ಲಿರುವ ರುಡ್ಸೆಟ್ ಸಂಸ್ಥೆಯ ಮೊ. ಸಂ: 9380162042, 9740982585 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ತಿಳಿಸಿದ್ದಾರೆ.

## ಗ್ರಾಹಕ ಸಂವಾದ ಸಭೆ

**ಬೆಂಗಳೂರು:** ಬೆಸ್ಕಾಂನ ಎಲ್ಲಾ ಕಾರ್ಯ ಮತ್ತು ಪಾಲನಾ ಉಪವಿಭಾಗಗಳಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರದಂದು ಮಧ್ಯಾಹ್ನ 3 ಗಂಟೆಯಿಂದ ಸಂಜೆ 5.30ರವರೆಗೆ ನಡೆಯುವ ಗ್ರಾಹಕ ಸಂವಾದ ಸಭೆಗಳಲ್ಲಿ, ಗ್ರಾಹಕ ಬಾಂಧವರು ಪಾಲ್ಗೊಂಡು ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬೆಸ್ಕಾಂನ ಅಧಿಕಾರಿಗಳೊಂದಿಗೆ ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಬೆಸ್ಕಾಂನ ಪ್ರಧಾನ ವ್ಯವಸ್ಥಾಪಕರು (ಗ್ರಾ.ಸಂ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಂದ್ರಣ್ಣ ಕಟ್ಟಿದ ಮಾರುತಿ ಪ್ರೌಢಶಾಲೆಯೇ ಸುತ್ತಳ್ಳಿ ವಿದ್ಯಾರ್ಥಿಗಳಿಗೆ ವರ

**ಹುಳಿಯಾರು:** ದಿವಂಗತ ಸಿ.ಚಂದ್ರಯ್ಯ ಉರುಫ್ ಕೊಬ್ಬರಿ ಮಂಡಿ ಚಂದ್ರಣ್ಣ ಎಂದರೆ ಹುಳಿಯಾರು ಹೋಬಳಿಯಲ್ಲಿ ಸಿಕ್ಕಾಪಟ್ಟೆ ಫೇಮಸ್. ಮದುವೆ, ನಾಮಕರಣ, ನಾಟಕ, ದೇವರ ಉತ್ಸವ, ಆರ್ಕೇಸ್ಟ್ರಾ, ಪ್ರತಿಭಾಪುರಸ್ಕಾರ ಹೀಗೆ ಸಹಾಯ ಕೇಳಿಕೊಂಡು ಬಂದವರನ್ನು ಬರಿಗೈಯಲ್ಲಿ ಕಳುಹಿಸಿದ ನಿದರ್ಶನವಿಲ್ಲ. ಬದುಕಿನ ಕೊನೆ ಕ್ಷಣದವರೆವಿಗೂ ದಾನಧರ್ಮ ಮಾಡಿದ ಫಲವಾಗಿಯೇ ಇಹಲೋಕ ತ್ಯಜಿಸಿ ಐದಾರು ವರ್ಷಗಳು ಕಳೆದಿದ್ದರೂ ಇಂದಿಗೂ ಜನಮಾನಸದಲ್ಲಿ ಅಚ್ಚಳಿಯದೆ ಉಳಿದಿದ್ದಾರೆ. ಹುಳಿಯಾರು ಎಪಿಎಂಸಿಯಲ್ಲಿ ಚಂದ್ರಣ್ಣ ಅವರ ಕೊಬ್ಬರಿ ಮಂಡಿ ಇದ್ದು ಅಂದಿನ ಕಾಲದಲ್ಲೇ ಲಕ್ಷಾಂತರ ರೂ. ದುಡಿಯುತ್ತಿದ್ದರೂ ಸಹ ವಾಸ ಮಾತ್ರ ಹುಟ್ಟೂರಾದ ಚಿಕ್ಕಬಿದರೆ ಎಂಬ ಪುಟ್ಟ ಹಳ್ಳಿಯಲ್ಲಿ. ಹಾಗಾಗಿಯೇ ಇವರಿಗೆ ಹಳ್ಳಿ ಜನರ ಕಷ್ಟಕಾರ್ಪಣ್ಯ ತಿಳಿದಿತ್ತು. ಹತ್ತಿರದಲೆಲ್ಲೂ ಪ್ರೌಢಶಿಕ್ಷಣ ಸಿಗದೆ ದೂರದೂರಿಗೆ ಹೋಗಲಾರದೆ ಕಲಿಕೆಯಿಂದ ವಂಚಿತರಾದ ಮಕ್ಕಳಿಗೆ ನೆರವಾಗಲು 1983 ರಲ್ಲಿ ಶ್ರೀ ಮಾರುತಿ ಗ್ರಾಮಾಂತರ ಪ್ರೌಢಶಾಲೆ ಕಟ್ಟಿದರು. ಮೊದಲೇ ಕೊಡುಗೈ ದಾನಿಯಾಗಿದ್ದ ಇವರು ಶಿಕ್ಷಣವನ್ನೂ ಸಹ ಉಚಿತವಾಗಿ ನೀಡಲು ಮುಂದಾದರು. ಶಾಲೆ ಆರಂಭದಲ್ಲಿ ಚಂದ್ರಣ್ಣ ಅವರೊಂದಿಗೆ ಅನೇಕ ಶಿಕ್ಷಕರೂ ಸಹ ಕೈ ಜೋಡಿಸಿದರು. ಪ್ರತಿಫಲಾಪೇಕ್ಷೆ ಇಲ್ಲದೆ ಬೋದನೆ ಮಾಡುವ ಜೊತೆಗೆ ಸ್ಪೆಷಲ್ ಕ್ಲಾಸ್ ಮಾಡಿ ಉತ್ತಮ ಫಲಿತಾಂಶಕ್ಕೆ ಕಾರಣರಾದರು. ಹೀಗೆ ಸುತ್ತಳ್ಳಿಯಲ್ಲಿ ಫೇಮಸ್ ಆಗುವ ಜೊತೆಗೆ ಹಳ್ಳಿ ವಿದ್ಯಾರ್ಥಿಗಳಿಗೆ ಮಾರುತಿ ಪ್ರೌಢಶಾಲೆ ವರ ಎನ್ನುವಂತಾಗಿದೆ. ಶಿಕ್ಷಣದಿಂದ ವಂಚಿತರಾಗುತ್ತಿದ್ದ ಚಿಕ್ಕಬಿದರೆ ಸೇರಿದಂತೆ ಸುತ್ತಮತ್ತಲಿನ ಹದಿನೈದಿಪ್ಪತ್ತು ಹಳ್ಳಿಯ ಸಾವಿರಾರು ವಿದ್ಯಾರ್ಥಿಗಳು ತಾನು ಕಟ್ಟಿದ ಶಾಲೆಯಲ್ಲಿ ಕಲಿತು ಒಳ್ಳೊಳ್ಳೆಯ ಉದ್ಯೋಗಕ್ಕೆ ಹೋಗುತ್ತಿರುವುದನ್ನೇ ನೋಡಿಯೇ ಚಂದ್ರಣ್ಣ ಆತ್ಮತೃಪಿ ಪಟ್ಟುಕೊಂಡರೆ ವಿನಃ ಶಿಕ್ಷಣದಿಂದ ಹಣ ಮಾಡುವ ಮನಸ್ಸು ಮಾಡಲೇ ಇಲ್ಲ.

ಕಲಿಕೆಯ ಪೂರಕ ವಾತವರಣ ಹಾಗೂ ಗುಣಮಟ್ಟದ ಶಿಕ್ಷಣ ಸಿಗುತ್ತಿರುವುದನ್ನು ಮನಗಂಡು ಸರ್ಕಾರ ಈ ಶಾಲೆಗೆ ಅನುದಾನ ಕೊಡಲು ಮುಂದಾಯಿತು. ಆದರೆ ಸರ್ಕಾರಗಳು ಬದಲಾದಂತೆಲ್ಲಾ ಅನುದಾನ ನೀಡಿಕೆಯಲ್ಲಿ ತಾರತಮ್ಯ ಮಾಡಿತು. ಅನುದಾನಿತ ಶಾಲೆಯಾದರೂ ಕೈಯಿಂದ ಹಣ ಹಾಕಿ ಶಾಲೆಯನ್ನು ನಡೆಸಿಕೊಂಡು ಬರುತ್ತಿದ್ದ ಚಂದ್ರಣ್ಣ ಐದು ವರ್ಷಗಳ ಹಿಂದೆ ನಿಧನರಾದರು. ನಂತರ ಚಂದ್ರಣ್ಣ ಅವರ ಪುತ್ರ ಪ್ರದೀಪ್ ಸಹ ಶಾಲೆಯ ಜವಾಬ್ದಾರಿ ಹೆಗಲ ಮೇಲೆತ್ತಿಕೊಂಡರು. ತಂದೆಯಂತೆಯೇ ಶಾಲೆಗೆ ಮನೆಯಿಂದ ಹಣ ಹಾಕಿ ಮುನ್ನಡೆಸಿದರು. ಆದರೆ ಸರ್ಕಾರದ ಶಿಕ್ಷಕರ ನೇಮಕಾತಿಗೆ ತಡೆಯಿಡಿದಿದ್ದರಿಂದ ಲಕ್ಷಾಂತರ ರೂ. ಕೈಯಿಂದ ಸಂಬಳ ಕೊಟ್ಟು ಮಕ್ಕಳಿಗೆ ಕಲಿಕೆಯಲ್ಲಿ ತೊಡಕಾಗದಂತೆ ನೋಡಿಕೊಳ್ಳುವ ಮೂಲಕ ತಂದೆಗೆ ತಕ್ಕ ಮಗ ಎಂದು ಹೆಸರಾಗಿದ್ದಾರೆ.



### ಈ ಶಾಲೆಯಲ್ಲಿ ಓದಿ ಬೆಸ್ಕಾಂ ಅಧಿಕಾರಿಯಾದೆ

**ಹತ್ತಿರದಲ್ಲಿ ಪ್ರೌಡಶಾಲೆ ಇಲ್ಲ ಎನ್ನುವ ಕಾರಣದಿಂದ ನನ್ನ ಸೋದರಿ ಸೇರಿದಂತೆ ಅನೇಕರು ಶಿಕ್ಷಣದಿಂದ ಮೂರ್ನಾಲ್ಕು ದಶಕಗಳ ಹಿಂದೆ ವಂಚಿತರಾಗಿದ್ದಾರೆ. ನಾನು ಪ್ರೌಢಶಾಲೆಗೆ ಬಂದಾಗ ಗುಡಿಸಲಿನಲ್ಲಿ ಶ್ರೀ ಮಾರುತಿ ಶಾಲೆ ನಡೆಯುತ್ತಿತ್ತು. ಹತ್ತಿರವಿದೆ ಎನ್ನುವ ಒಂದೇ ಕಾರಣಕ್ಕೆ ಪೋಷಕರು ನನ್ನನ್ನು ಇಲ್ಲಿಗೆ ಓದಲು ಕಳುಹಿಸಿದರು. ಚಂದ್ರಣ್ಣ ಅವರ ಸಹಕಾರ, ಶಿಕ್ಷಕರ ಶಿಸ್ತುಬದ್ಧ ಬೋದನೆಯಿಂದ ನಾನು ಉತ್ತಮ ಶ್ರೇಣಿಯಲ್ಲಿ ಎಸ್ಎಲ್ಎಲ್ಸಿ ಪಾಸಾಗಿ ಉತ್ತನ ಶಿಕ್ಷಣ ಪಡೆದು ಇಂದು ಬೆಸ್ಕಾಂ ಅಧಿಕಾರಿಯಾಗಿದ್ದೇನೆ. ನನ್ನಂತೆಯೇ ಅನೇಕ ಹಳ್ಳಿ ಬಡಕುಟುಂಬದ ಮಕ್ಕಳು ಇಲ್ಲಿ ಕಲಿತು ಶಿಕ್ಷಕರು, ಎಂಜಿನಿಯರ್, ಅಂಚೆಕಛೇರಿ ಸೇರಿದಂತೆ ಅನೇಕ ಕಡೆ ಉದ್ಯೋಗಕ್ಕೆ ಸೇರಿದ್ದಾರೆ.**

। **ಉಮೇಶ್‌ನಾಯ್ಕ** ಬರಕನಹಾಲ್ ತಾಂಡ್ಯ, ಹುಳಿಯಾರು ಹೋಬಳಿ

### ತಂದೆಯ ಸಮಾಜಮುಖಿ ಕಾರ್ಯ ಮಾದರಿ

**ಬಡತನದಿಂದ ಹಳ್ಳಿ ಮಕ್ಕಳು ಶಿಕ್ಷಣದಿಂದ ವಂಚಿತಗೊಂಡಿದ್ದನ್ನು ತಿಳಿದು 1983 ರಲ್ಲಿ ಶಾಲೆ ಕಟ್ಟಿ ಸತತ ಮೂವತ್ತೈದು ವರ್ಷಗಳ ಕಾಲ ಇಲ್ಲಿನ ಮಕ್ಕಳ ಭವಿಷ್ಯತ್ತಿನ ಕನಸು ಸಾಕಾರಗೊಳಿಸಿದ್ದಾರೆ. ಶಾಲಾ ಮಕ್ಕಳಲ್ಲಿ ವರ್ಗ ಬೇಧಗಳನ್ನು ಮಾಡದೆ, ಜಾಣ-ದಡ್ಡ ಭೇದ-ಭಾವ ಎಣಿಸದೆ ಎಲ್ಲ ಮಕ್ಕಳಲ್ಲಿ ಸಮಾನತೆಯಿಂದ ಕಂಡು ಶಿಕ್ಷಣ ಕೊಟ್ಟು ಸಾವಿರಾರು ವಿದ್ಯಾರ್ಥಿಗಳ ಭವಿಷ್ಯಕ್ಕೆ ಬೆಳಕಾಗಿದ್ದಾರೆ. ಅವರ ಈ ಸಮಾಜಮುಖಿ ಕಾರ್ಯ ಮಾದರಿಯಾಗಿದ್ದು ಗ್ರಾಮೀಣ ಪ್ರತಿಭಾವಂತ ಹಾಗೂ ಬಡಮಕ್ಕಳ ಶೈಕ್ಷಣಿಕ ಜೀವನವನ್ನು ಹಸನಾಗಿಸುವ ನಿಟ್ಟನಲ್ಲಿ ತಂದೆ ಕಟ್ಟಿದ ಶಾಲೆ ಉಳಿಸಲು ನಾನೂ ಸಹ ಅಳಿಲು ಸೇವೆ ಸಲ್ಲಿಸುತ್ತಿದ್ದೇನೆ. ಈಗಾಗಲೇ ಐದಾರು ಲಕ್ಷ ರೂ. ಹಣ ಹಾಕಿ ಶಾಲೆ ನವೀಕರಣ ಮಾಡಲಾಗುತ್ತಿದೆ. ಗ್ರಾಮೀಣ ಪ್ರದೇಶದ ಮಕ್ಕಳಿಗೆ ಉತ್ತಮ ಗುಣಮಟ್ಟ ಹಾಗೂ ಶಿಸ್ತುಬದ್ಧ ಶಿಕ್ಷಣವನ್ನು ಒದಗಿಸುವ ನಿಟ್ಟನಲ್ಲಿ ಸರ್ಕಾರ ನಮ್ಮೊಂದಿಗೆ ಕೈ ಜೋಡಿಸಬೇಕಿದೆ.**

। **ಸಿ.ಪ್ರದೀಪ್**
ಕಾರ್ಯದರ್ಶಿ, ಮಾರುತಿ ಪ್ರೌಢಶಾಲೆ

### ನಾಲ್ವರು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ

**ಹುಳಿಯಾರು ಹೋಬಳಿಯ ಣಚಿಕ್ಕಬಿದರೆ ಶ್ರೀ ಮಾರುತಿ ಗ್ರಾಮಾಂತರ ಪ್ರೌಢಶಾಲೆಯಿಂದ ಪ್ರಸಕ್ತ ಸಾಲಿನ ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ಶೇ.83.84 ಫಲಿತಾಂಶ ಲಭಿಸಿದೆ. ಪರೀಕ್ಷಗೆ ಕುಳಿತಿದ್ದ 31 ವಿದ್ಯಾರ್ಥಿಗಳ ಪೈಕಿ 26 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ನಾಲ್ವರು ಅತ್ಯುನ್ನತ ಶ್ರೇಣಿ, 9 ಮಂದಿ ಪ್ರಥಮ ಶ್ರೇಣಿ, ನಾಲ್ವರು ದ್ವಿತೀಯ ಶ್ರೇಣಿ, 9 ಮಂದಿ ತೃತೀಯ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಕಾರ್ಯದರ್ಶಿ ಸಿ.ಪ್ರದೀಪ್, ಮುಖ್ಯಶಿಕ್ಷಕ ಎಚ್. ತಮ್ಮೇಗೌಡ, ಶಿಕ್ಷಕರಾದ ಶೋಭ, ಜ್ಯೋತಿ, ರೇಖಾ, ಮಂಜುನಾಥ್, ಕೆ.ಜಿ.ಧರಣೇಶ್ ಸೇರಿದಂತೆ ಸಿಬ್ಬಂದಿಗಳು ಅಭಿನಂಧಿಸಿದ್ದಾರೆ.**

# ಸಂಜೆ ಟಿಪ್ಸ್



## ರೋಸ್ಟೀಯಿಂದ ಫ್ಲಾಗ್ ಶಿಪ್ ಲೈಫ್ ಸ್ಟೈಲ್ ಕೆಫೆ ಪ್ರಾರಂಭ

ಭಾರತದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪಾನೀಯ ಬ್ರಾಂಡ್ ರೋಸ್ಟೀಬೆಂಗಳೂರಿನ ಉಜ್ವಲ ಐಟಿ ಹಬ್ ನಲ್ಲಿ ತನ್ನ ಎರಡನೆಯ ಕೆಫೆಯನ್ನು ಅದ್ದೂರಿಯಾಗಿ ಚಾಲನೆ ನೀಡಿದೆ. ಬೆಂಗಳೂರಿನಕೋರಮಂಗಲ 80 ಅಡಿ ರಸ್ತೆಯಲ್ಲಿರುವ ಈ ಕೆಫೆ ಮೇ 15, 2024ರಂದು ಪ್ರಾರಂಭವಾಗಿದೆ. ರೋಸ್ಟೀ ಕುಟುಂಬಕ್ಕೆ ಈಹೊಚ್ಚಹೊಸ ಸೇರ್ಪಡೆಯು ಬೆಂಗಳೂರಿನ ಡೈನಿಂಗ್ ಅನುಭವವನ್ನು ಮರು ವ್ಯಾಖ್ಯಾನಿಸುವ ಲೈಫ್ ಸ್ಟೈಲ್ ಇಕೊಸಿಸ್ಟಂನೊಂದಿಗೆ ಸಂತೋಷ ನೀಡುವ ಭರವಸೆ ತಂದಿದೆ. ಇದರ ವಿನೂತನ ಕೊಡುಗೆಗಳಲ್ಲಿ ಹ್ಯಾಂಡ್-ಮೇಡ್ ಪಾಸ್ತಾಗಳಿಂದ ಲೈವ್ ಕ್ರಾಫ್ಟ್ ಬೇಕರಿಯು ಸರಿಸಾಟಿ ಇರದ ತಿನಿಸಿನ ಅನುಭವ ನೀಡುತ್ತದೆ. ಬೆಂಗಳೂರಿನಲ್ಲಿ ತನ್ನ ಮೊದಲ ಔಟ್ಲೆಟ್ ಅಭೂತಪೂರ್ವ ಯಶಸ್ಸಿನ ನಂತರ ರೋಸ್ಟೀ ನಗರದಲ್ಲಿ ತನ್ನ ಗುಣಮಟ್ಟ ಹಾಗೂಆವಿಷ್ಕಾರದ ಸಂಯೋಜನೆಯ ಮೂಲಕ ಮತ್ತಷ್ಟು ಗ್ರಾಹಕರಿಗೆ ತನ್ನ ವ್ಯಾಪ್ತಿ ವಿಸ್ತರಿಸುತ್ತಿದೆ. ರೋಸ್ಟೀ ಭಾರತದಲ್ಲಿ 14ಮಳಿಗೆಗಳನ್ನು ಹೊಂದಿದೆ ಮತ್ತು ಇದು ಬ್ರಾಂಡ್ ಗೆ ಅದರ ವಿಸ್ತರಿಸುತ್ತಿರುವ ವ್ಯಾಪ್ತಿಯಲ್ಲಿ ಗಮನಾರ್ಹ ಮೈಲಿಗಲ್ಲಾಗಿದೆ. ಈ ವಿಸ್ತರಣೆ ಕುರಿತು ಚೈತನ್ಯ ಭಮಿಡಿಪಟಿ, ''ನಮ್ಮ ಹೊಚ್ಚಹೊಸ ಮಳಿಗೆಯ ಪ್ರಾರಂಭವನ್ನು ಪ್ರಕಟಿಸಲು ನಾವು ಬಹಳಉತ್ಸುಕರಾಗಿದ್ದು ಇದು ಬೆಂಗಳೂರಿನ ಡೈನಿಂಗ್ ಅನುಭವವನ್ನು ಮರು ವ್ಯಾಖ್ಯಾನಿಸುವ ಲೈಫ್ ಸ್ಟೈಲ್ ಇಕೊಸಿಸ್ಟಂ ಆಗಿದೆ.ನಗರದ ಹೃದಯಭಾಗದಲ್ಲಿರುವ ಬೆಂಗಳೂರಿನ ಪರ್ಯಾಯ ಹೆಸರೆನಿಸಿದ ಶಾಂತತೆ ಮತ್ತು ಹಸಿರಿನ ಪ್ರದೇಶದ ನಡುವೆ ಇರುವನಮ್ಮ ವಿಸ್ತಾರ ಪ್ರದೇಶಕ್ಕೆ ನಮ್ಮ ಪೋಷಕರಿಗೆ ಆಹ್ವಾನಿಸುತ್ತೇವೆ. ಇದು ಬರೀ ಕೆಫೆಯಲ್ಲ, ರೋಸ್ಟೀ ಕೋರಮಂಗಲ ತಲ್ಲೀನಗೊಳಿಸುವ ಅನುಭವ ನೀಡುತ್ತಿದ್ದು ಪೋಷಕರು ಬೆಂಗಳೂರಿನ ಪ್ರಶಾಂತ ತಾಣದಲ್ಲಿ ಪರಸ್ಪರ ಸಂವಹನ ನಡೆಸಬಹುದು. ನಮ್ಮ ಹ್ಯಾಂಡ್ ಮೇಡ್ ಪಾಸ್ತಾಗಳಿಂದ ಇಟಾಲಿಯನ್ ಸ್ಟೈಲ್ ಕಾಫಿವರೆಗೆ ಎಲ್ಲ ಕೊಡುಗೆಗಳನ್ನೂ ನಮ್ಮ ವಿಸ್ತಾರ ಪೂರೈಕೆದಾರರಿಂದ ಎಚ್ಚರಿಕೆಯಿಂದ ಆಯ್ಕೆ ಮಾಡಲಾದ ಅಳವಡಿಕೆಗಳಿಂದ ತಯಾರಿಸಲಾಗಿದೆ ಎಂದರು.

## ಸ್ಟೂತಿ ಬಾದಾಮ್ ಕಾ ಹರಿರಾ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

**200 ಮಿ.ಲೀ. ಹಾಲು, 15 ನೆನೆಸಿದ ಬಾದಾಮಿಗಳು, 2 ಲವಂಗ, 1 ಏಲಕ್ಕಿ, 1 ಕಪ್ ನೀರು, 3 ಚಮಚ ಅಕ್ಕಿ, 1 ಚಮಚ ತುಪ್ಪ, 1 ಇಂಚು ದಾಲ್ಚಿನ್ನಿ , 3 ಚಮಚ ಸಕ್ಕರೆ, 1 ಚಮಚ ತೆಂಗಿನಹಾಲಿನ ಪುಡಿ.**

### ಮಾಡುವ ವಿಧಾನ

ಮೊದಲಿಗೆ ಒಂದು ಪ್ಯಾನ್ ನಲ್ಲಿ ಹಾಲನ್ನು ಹಾಕಿ, ಮೀಡಿಯಂ ಫ್ಲೇಮ್ ನಲ್ಲಿ ಕುದಿಸಿಕೊಳ್ಳಿ. ನಂತರ ಅದನ್ನು ತಣ್ಣಗಾಗಲು ಬಿಡಿ. ಅಷ್ಟರಲ್ಲಿ, ಅಕ್ಕಿಯನ್ನು 30 ನಿಮಿಷ ನೀರಿನಲ್ಲಿ ನೆನೆಸಿ. 2-3 ಗಂಟೆಗಳ ಕಾಲ ನೆನೆಸಿದ ಬಾದಾಮಿಯ ಸಿಪ್ಪೆಯನ್ನು ಬಿಡಿಸಿಕೊಳ್ಳಿ. ನಂತರ ಗ್ರೈಂಡರ್ ನಲ್ಲಿ ನೆನೆಸಿದ ಬಾದಾಮಿ, ನೆನೆಸಿದ ಅಕ್ಕಿ ಜೊತೆಗೆ ತೆಂಗಿನಕಾಯಿ ಹಾಲಿನ ಪುಡಿಯನ್ನು ಸೇರಿಸಿ ಮೃದುವಾಗಿ ಪೇಸ್ಟ್ ತಯಾರಿಸಿಕೊಳ್ಳಿ. ಈಗ ಒಂದು ಮಸ್ಲಿನ್ ಬಟ್ಟೆ ತೆಗೆದುಕೊಂಡು ದೊಡ್ಡ ಬೌಲ್ ಮೇಲೆ ಹರಡಿ, ಗ್ರೈಂಡ್ ಮಾಡಿದ ಪೇಸ್ಟ್ ಅನ್ನು ಹಾಕಿಕೊಂಡು, ಅದರಲ್ಲಿರುವ ದ್ರವವನ್ನು ಸ್ಕ್ವೀಜ್ ಮಾಡಿ. ಸ್ವಲ್ಪ ಸ್ವಲ್ಪವೇ ನೀರನ್ನು ಸೇರಿಸಿಕೊಳ್ಳುತ್ತಾ ಈ ರೀತಿ 2-3 ಬಾರಿ ಹಿಂಡಿಕೊಳ್ಳಿ. ನಂತರ ಮೀಡಿಯಂ ಫ್ಲೇಮ್ ನಲ್ಲಿ ಒಂದು ಬಾಣಲೆಯನ್ನು ಇಟ್ಟು, ಇದಕ್ಕೆ ತುಪ್ಪವನ್ನು ಹಾಕಿ, ತುಪ್ಪ ಕರಗಿದ ಮೇಲೆ, ಇದಕ್ಕೆ ಲವಂಗ, ಏಲಕ್ಕಿ ಮತ್ತು ದಾಲ್ಚಿನ್ನಿಯನ್ನು ಸೇರಿಸಿ ಕೆಲವು ಸೆಕೆಂಡ್ ವರೆಗೆ ಫ್ರೈ ಮಾಡಿಕೊಳ್ಳಿ. ಈಗ ಸ್ಕ್ವೀಜ್ ಮಾಡಿಕೊಂಡ ದ್ರವವನ್ನು ಇದಕ್ಕೆ ಸೇರಿಸಿ, ಗಂಟುಗಳಾಗದಂತೆ ನಿಧಾನವಾಗಿ ಮಿಕ್ಸ್ ಮಾಡಿ.ಕುದಿಯುತ್ತಿರುವ ಮಿಶ್ರಣ ದಪ್ಪವಾಗಿ ಹಾಗೆ ಮೃದುವಾದ ಪೇಸ್ಟ್ ಆಗಿ ಪರಿವರ್ತನೆಯಾಗುವವರೆಗೂ ಕಲಸುತ್ತಾ ಇರಿ, ಇದಕ್ಕೆ ಈಗ ಸಕ್ಕರೆ ಮತ್ತು ಹಾಲನ್ನು ಸೇರಿಸಿ ಚೆನ್ನಾಗಿ ಕುದಿಸಿದ ನಂತರ ಸ್ಟೌವ್ ಆಫ್ ಮಾಡಿ. ಬೇಕಿದ್ದಲ್ಲಿ ಫ್ರಿಡ್ಜ್ ನಲ್ಲಿಟ್ಟು ಸಹ ಕುಡಿಯಬಹುದು.

## ವಿಜಯ್ ದೇವರಕೊಂಡ ಜೊತೆ ನ್ಯಾಚುರಲ್ ಬ್ಯೂಟಿ ಸಾಯಿ ಪಲ್ಲವಿ

ರಾಜಾವಾರು ರಾಣಿಗಾರು ಖ್ಯಾತಿಯ ನಿರ್ದೇಶಕ ರವಿಕಿರಣ್ ಕೋಲಾ ಅವರೊಂದಿಗೆ ವಿಜಯ್ ದೇವರಕೊಂಡ ತಮ್ಮ ಹೊಸ ಚಿತ್ರವನ್ನು ಮಾಡಲಿದ್ದಾರೆ. ದಿಲ್ ರಾಜು ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ?ಫ್ಯಾಮಿಲಿ ಸ್ಟಾರ್? ದೊಡ್ಡ ಫ್ಲಾಪ್ ಕೊಟ್ಟರೂ ದಿಲ್ ರಾಜು ಮತ್ತೊಮ್ಮೆ ವಿಜಯ್ ಜೊತೆ ಸಿನಿಮಾ ಮಾಡಲು ಮುಂದಾಗಿದ್ದಾರೆ. ಈ ಸಿನಿಮಾದ ಪೋಸ್ಟರ್ ರಿಲೀಸ್ ಆದ ಬೆನ್ನಲ್ಲೇ ಸಿನಿಮಾಗೆ ಸಂಬಂಧಿಸಿದ ಬಿಸಿ ಬಿಸಿ ಸುದ್ದಿಯೊಂದು ವೈರಲ್ ಆಗುತ್ತಿದೆ. ರವಿಕಿರಣ್ ಮತ್ತು ರೌಡಿ ಹೀರೋ ವಿಜಯ್ ಮುಂಬರುವ ಸಿನಿಮಾದಲ್ಲಿ ಸಾಯಿ ಪಲ್ಲವಿ ನಟಿಸಲಿದ್ದಾರೆ ಎಂಬ ಮಾತು ಕೇಳಿ ಬರುತ್ತಿದೆ. ನಿರ್ದೇಶಕ ರವಿಕಿರಣ್ ಕೂಡ ಸಾಯಿ ಪಲ್ಲವಿಯನ್ನು ಕಲ್ಪಿಸಿಕೊಂಡು ಕಥೆಯಲ್ಲಿ ಒಂದು ಪಾತ್ರ ಬರೆದಿದ್ದಾರಂತೆ. ಹೀಗಾಗಿ ಈ ಸಿನಿಮಾದಲ್ಲಿ ಸಾಯಿ ಪಲ್ಲವಿ ಅವರನ್ನು ಆಯ್ಕೆ ಮಾಡಲು ಚಿತ್ರತಂಡ ಪ್ರಯತ್ನಿಸುತ್ತಿದೆ.

ಗ್ರಾಮೀಣ ಆಯಕ್ಷನ್ ಡ್ರಾಮಾ ಇರುವ ಈ ಚಿತ್ರದಲ್ಲಿ ನಾಯಕಿಯ ಪಾತ್ರಕ್ಕೂ ಹೆಚ್ಚಿನ ಆದ್ಯತೆ ಇದೆ ಎನ್ನಲಾಗಿದೆ. ಸಾಯಿ ಪಲ್ಲವಿ ಈಗಾಗಲೇ ದಿಲ್ ರಾಜು ಅವರ ಬ್ಯಾನರ್ನಲ್ಲಿ ಫಿದಾ ಮತ್ತು ಎಂಸಿಎ ಚಿತ್ರಗಳನ್ನು ಮಾಡಿರುವುದರಿಂದ ಅವರನ್ನು ಈ ಚಿತ್ರಕ್ಕೆ ಒಪ್ಪಿಸುವುದು ದೊಡ್ಡ ವಿಷಯವಲ್ಲ. ಸಾಯಿ ಪಲ್ಲವಿ ಇದುವರೆಗೂ ವಿಜಯ್ ದೇವರಕೊಂಡ ಜೊತೆ ತೆರೆ ಹಂಚಿಕೊಂಡಿರಲಿಲ್ಲ. ಈ ಜೋಡಿ ತೆರೆಗೆ ಫ್ರೆಶ್ ನೆಸ್ ತರಲಿದೆ ಎಂಬುದು ಸಿನಿರಸಿಕರ ನಂಬಿಕೆ.

ಇತ್ತೀಚಿಗೆ ರೌಡಿ ಬಾಯ್ ಸಿನಿಮಾಗಳಲ್ಲಿ ಲಿಪ್ ಲಾಕ್ ದೃಶ್ಯ ಕಾಮನ್ ಆಗಿದೆ. ಸಾಯಿ ಪಲ್ಲವಿ ಈ ಹಿಂದೆ ಅನೇಕ ಬಾರಿ ಇಂತಹ ದೃಶ್ಯಗಳಲ್ಲಿ ನಟಿಸುವುದಿಲ್ಲ ಅಂತ ಬಹಿರಂಗಪಡಿಸಿದ್ದಾರೆ. ಲಿಪ್ ಲಾಕ್ ದೃಶ್ಯಗಳಿಲ್ಲದೆ ಸಾಯಿ ಪಲ್ಲವಿಯನ್ನು ಗಮನದಲ್ಲಿಟ್ಟುಕೊಂಡು ರವಿಕಿರಣ್ ಕಥೆಯಲ್ಲಿ ಏನಾದರೂ ಬದಲಾವಣೆಗಳನ್ನು ಮಾಡಬಹುದೇ ಎಂದು ಕಾಯ್ದು ನೋಡಬೇಕು.

ಈ ಚಿತ್ರಕ್ಕೆ ರೌಡಿ ಜನಾರ್ದನ್ ಎಂಬ ಶೀರ್ಷಿಕೆಯನ್ನು ಚಿತ್ರತಂಡ ನೀಡಲಿದೆ ಎಂದು ವರದಿಯಾಗಿದೆ. ಎಲ್ಲವೂ ಸುಸೂತ್ರವಾಗಿ ನಡೆದರೆ ಚಿತ್ರ ಶೀಘ್ರದಲ್ಲೇ ಸೆಟ್ಟೇರಲಿದೆ. ಸದ್ಯ ವಿಜಯ್ ದೇವರಕೊಂಡ ಗೌತಮ್ ತಿನ್ನನೂರಿ ನಿರ್ದೇಶನ ಸಿನಿಮಾದಲ್ಲಿ ಪೊಲೀಸ್ ಅಧಿಕಾರಿಯ ಪಾತ್ರದಲ್ಲಿ ಕಾಣಿಸಿ ಕೊಳ್ಳಲಿದ್ದಾರೆ.



ಗ್ರಾಮೀಣ ಆಯಕ್ಷನ್ ಡ್ರಾಮಾ ಇರುವ ಚಿತ್ರ



## ಪಾರ್ಶ್ವವಾಯು ಸಮಸ್ಯೆಗೆ ಇದೆ ಮನೆ ಮದ್ದು

ಸದ್ದಿಲ್ಲದೆ ಕಾಡುವ ರೋಗಗಳಲ್ಲಿ ಪಾರ್ಶ್ವವಾಯು ಕೂಡ ಒಂದು. ಕೈ, ಕಾಲು ಕೆಲಸ ಮಾಡುವುದಿಲ್ಲ. ಬಾಯಿಗೆ ಪಾರ್ಶ್ವವಾಯು ಹೊಡೆದ್ರೆ, ಮಾತನಾಡೋದು ಕಷ್ಟವಾಗುತ್ತದೆ. ಏಕಾಏಕಿ ಬರುವ ಈ ಪಾರ್ಶ್ವವಾಯುವಿನಿಂದ ಚೇತರಿಸಿಕೊಳ್ಳುವುದು ಕಷ್ಟ.ತುಂಬಾ ದಿನ ಸರಿಯಾಗಿ ಔಷಧಿ ಬಿದ್ರೆ, ಮಾತ್ರ ಮತ್ತೆ ಮೊದಲಿನಂತಾಗಲು ಸಾಧ್ಯ.ಪಾರ್ಶ್ವವಾಯುವಿಗೆ ಒಳಗಾದವರು ಮನೆ ಮದ್ದನ್ನು ಬಳಸಿ ಬೇಗ ಗುಣಮುಖರಾಗಬಹುದು.

ಒಂದು ಚಮಚ ಕರಿ ಮೆಣಸನ್ನು ಪುಡಿ ಮಾಡಿ ತುಪ್ಪಕ್ಕೆ ಹಾಕಿ. ಇದನ್ನು ಸರಿಯಾಗಿ ಮಿಶ್ರಣ ಮಾಡಿ ಲೇಪವನ್ನು ಸಿದ್ಧಪಡಿಸಿ. ಇದನ್ನು ಪಾರ್ಶ್ವವಾಯು ಬಡಿದ ಜಾಗಕ್ಕೆ ಹಾಕಿ ಮಸಾಜ್ ಮಾಡಿ. ಹೀಗೆ ಮಾಡಿದ್ರೆ, ಪಾರ್ಶ್ವವಾಯು ಬಡಿದ ಜಾಗ ನಿಧಾನವಾಗಿ ಸರಿಯಾಗುತ್ತ ಬರುತ್ತದೆ.

ನಿಯಮಿತ ರೂಪದಲ್ಲಿ ಹಾಗಲಕಾಯಿ ಮತ್ತು ತರಕಾರಿಯನ್ನು ಸೇವಿಸುತ್ತ ಬನ್ನಿ. ಹೀಗೆ ಮಾಡಿದ್ರೆ, ಪಾರ್ಶ್ವವಾಯು ಸಮಸ್ಯೆ ಬೇಗ ಕಡಿಮೆಯಾಗುತ್ತದೆ.

ಈರುಳ್ಳಿ ಕೂಡ ಈ ಸಮಸ್ಯೆಗೆ ಮುಕ್ತಿ ನೀಡುತ್ತದೆ. ನಿಯಮಿತವಾಗಿ ಈರುಳ್ಳಿ ರಸ ಅಥವಾ ಈರುಳ್ಳಿ ಸೇವನೆ ಮಾಡಬೇಕಾಗುತ್ತದೆ.



### ಹೆಲ್ತ್ ಟಿಪ್ಸ್

6 ಬೆಳ್ಳುಳ್ಳಿಯನ್ನು ರುಬ್ಬಿ ರಸ ಮಾಡಿ ಅದಕ್ಕೆ ಒಂದು ಚಮಚ ಬೆಣ್ಣೆ ಹಾಕಿ ಇದನ್ನು ಪ್ರತಿದಿನ ಸೇವನೆ ಮಾಡುತ್ತ ಬನ್ನಿ.

ತುಳಸಿ ಎಲೆ, ಮೊಸರು ಮತ್ತು ಉಪ್ಪನ್ನು ಸಮ ಪ್ರಮಾಣದಲ್ಲಿ ಮಿಕ್ಸ್ ಮಾಡಿ ಪೇಸ್ಟ್ ತಯಾರಿಸಿಕೊಳ್ಳಿ. ಇದನ್ನು ಪಾರ್ಶ್ವವಾಯು ಸ್ಥಳಕ್ಕೆ ಹಚ್ಚಿದ್ರೆ, ಕೆಲಸ ನಿಲ್ಲಿಸಿದ ಅಂಗ ಮತ್ತೆ ಕೆಲಸ ಶುರು ಮಾಡುತ್ತದೆ.

ತುಳಸಿ ಎಲೆಗಳನ್ನು ನೀರಿಗೆ ಹಾಕಿ ಕುದಿಸಿ. ಪಾರ್ಶ್ವವಾಯು ಆಗಿರುವ ಜಾಗಕ್ಕೆ ಈ ನೀರಿನ ಶಾಖ ಕೊಡಿ.

## ಹೆಣ್ಣುಮಕ್ಕಳಿಗೆ ದೊರೆಯಲಿ ಸಂಪೂರ್ಣ ಹಕ್ಕು; ತಂತ್ರಜ್ಞಾನ ಕ್ಷೇತ್ರದಲ್ಲಿ ಪುರುಷರಷ್ಟೇ ಸಮಾನ ಪಾಲು: ಇಶಾ ಅಂಬಾನಿ



ನಾಲ್ಕನೇ ಕೈಗಾರಿಕೆ ಕ್ರಾಂತಿಯಾದ ಈ ಡಿಜಿಟಲ್ ಯುಗದಲ್ಲಿ ಭಾರತ ದೇಶವು ವಿಶ್ವನಾಯಕ ಆಗಿ ಹೊರಹೊಮ್ಮಬೇಕು ಎಂದಾದರೆ ಹೆಣ್ಣುಮಕ್ಕಳನ್ನು ಮುಂದೆ ತರಬೇಕು. ವಿಜ್ಞಾನ, ತಂತ್ರಜ್ಞಾನ, ಎಂಜಿನಿಯರಿಂಗ್ ಹಾಗೂ ಮಾಹಿತಿ ಮತ್ತು ಸಂವಹನ ಕ್ಷೇತ್ರಗಳಲ್ಲಿ ಯುವತಿಯರ ಪಾಲ್ಗೊಳ್ಳುವಿಕೆ ಹೆಚ್ಚಾಗಬೇಕು ಎಂದು ರಿಲಯನ್ಸ್ ಇಂಡಸ್ಟ್ರೀಸ್ ನಿರ್ದೇಶಕಿ ಇಶಾ ಅಂಬಾನಿ ಅವರು ಅಭಿಪ್ರಾಯಪಟ್ಟಿದ್ದಾರೆ. ದೂರಸಂಪರ್ಕ ಇಲಾಖೆಯಿಂದ ಆಯೋಜಿಸಿದ್ದ ಗರ್ಲ್ಸ್ ಇನ್ ಐಸಿಟಿ ಇಂಡಿಯಾ ? 2024' ಕಾರ್ಯಕ್ರಮದಲ್ಲಿ ಹೆಣ್ಣುಮಕ್ಕಳನ್ನು ಉದ್ದೇಶಿಸಿ ಅವರು ಮಾತನಾಡಿದರು.

ಹೆಣ್ಣುಮಕ್ಕಳು ತಂತ್ರಜ್ಞಾನ ಕ್ಷೇತ್ರವನ್ನು ವೃತ್ತಿಯನ್ನಾಗಿ ತೆಗೆದುಕೊಳ್ಳಬೇಕು ಎಂದು ಹೇಳಿದ ಅವರು, ತಂತ್ರಜ್ಞಾನ ಕ್ಷೇತ್ರದಲ್ಲಿ ಮಹಿಳೆ ಹಾಗೂ ಪುರುಷರ ಪಾಲ್ಗೊಳ್ಳುವಿಕೆ ಅನುಪಾತವು ಸಮಾನವಾಗಿ ಇರಬೇಕು. ಇದಕ್ಕಾಗಿ ನಾವು ಇನ್ನೂ ಬಹಳ ದೂರ ಸಾಗಬೇಕಿದೆ ಎಂದು ಹೇಳಿದರು. ಭಾರತ ಸರ್ಕಾರ, ಅಂತಾರಾಷ್ಟ್ರೀಯ ದೂರಸಂಪರ್ಕ ಒಕ್ಕೂಟ (ದಕ್ಷಿಣ ಏಷ್ಯಾ), ಇನ್ನೋವೇಶನ್ ಸೆಂಟರ್ - ದೆಹಲಿ ಮತ್ತು ಇತರ ಯುಎನ್ ಏಜೆನ್ಸಿಗಳ ದೂರಸಂಪರ್ಕ ಇಲಾಖೆ ಜಂಟಿಯಾಗಿ 'ಗರ್ಲ್ಸ್ ಇನ್ ಇನ್ಫರ್ಮೇಷನ್ ಅಂಡ್ ಕಮ್ಯುನಿಕೇಷನ್ ಟೆಕ್ನಾಲಜಿ (ಜಿಐಸಿಟಿ) ಇಂಡಿಯಾ - 2024' ಅನ್ನು ಆಯೋಜಿಸಿವೆ.

ಇನ್ನು ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವವನ್ನು ಶ್ಲಾಘಿಸಿದ ಇಶಾ ಅಂಬಾನಿ, ''ಸರ್ಕಾರವು ಅಗತ್ಯ ಸುಧಾರಣೆಗಳನ್ನು ಮಾಡುತ್ತಿದೆ ಮತ್ತು ಅದರ ಫಲಿತಾಂಶಗಳು ಸಹ ಗೋಚರಿಸುತ್ತಿವೆ. ಕಳೆದ ಒಂದು ದಶಕದಲ್ಲಿ ತಂತ್ರಜ್ಞಾನ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರನ್ನು ಗಮನಿಸಿದರೆ ಮಹಿಳಾ ಪ್ರಾತಿನಿಧ್ಯವು ಶೇ 6ರಷ್ಟು ಹೆಚ್ಚಾಗಿದೆ, ಆದರೆ ಉದ್ಯಮವು ತನ್ನ ಪಾತ್ರವನ್ನು ನಿರ್ವಹಿಸಬೇಕಾಗಿದೆ. ಮಹಿಳೆಯರ ವೃತ್ತಿಜೀವನದಲ್ಲಿ ಸ್ಥಿರತೆಯನ್ನು ಖಚಿತಪಡಿಸಿಕೊಳ್ಳಲು ಅಂತಹ ವಿಧಾನಗಳು ಮತ್ತು ಸಾಧನಗಳನ್ನು ಸಿದ್ಧಪಡಿಸಬೇಕು. ಒಟ್ಟಾರೆಯಾಗಿ, ನಮ್ಮ ಹೆಣ್ಣುಮಕ್ಕಳು ನಾಳಿನ ನಾಯಕತ್ವ ವಹಿಸುವುದಕ್ಕೆ ಸಮಾನ ಅವಕಾಶಗಳನ್ನು ಹೊಂದಿರುವ ಭವಿಷ್ಯವನ್ನು ನಾವು ರೂಪಿಸಬಹುದು,'' ಎಂದು ಹೇಳಿದರು. ಇಶಾ ಅವರು ತನ್ನ ತಾಯಿ ನೀತಾ ಅಂಬಾನಿಯವರ ಮಾತನ್ನು ಉಲ್ಲೇಖಿಸಿ, ''ಒಬ್ಬ ಪುರುಷನನ್ನು ಸಬಲಗೊಳಿಸಿದರೆ ಆತ ತನ್ನ ಕುಟುಂಬವನ್ನು ಪೋಷಿಸುತ್ತಾನೆ, ಆದರೆ ಮಹಿಳೆ ಸಬಲಳಾಗಿದ್ದರೆ, ಅವಳು ಇಡೀ ಗ್ರಾಮವನ್ನು ಪೋಷಿಸುತ್ತಾಳೆ ಎಂದು ಅವರು ಪದೇ ಪದೇ ಹೇಳುತ್ತಾರೆ. ''ನನಗೆ ಅಮ್ಮ ಹೇಳುವ ಮಾತಿನಲ್ಲಿ ಸಂಪೂರ್ಣ ವಿಶ್ವಾಸವಿದೆ. ಮಹಿಳೆಯರು ಹುಟ್ಟಿನಿಂದಲೇ ನಾಯಕಿಯರು. ಅವರಲ್ಲಿರುವ ಸಹಜವಾದ ನಿಸ್ವಾರ್ಥತೆಯು ಅತ್ಯುತ್ತಮ ನಾಯಕರನ್ನಾಗಿ ಮಾಡುತ್ತದೆ. ಮಹಿಳಾ ಉದ್ಯೋಗಿಗಳನ್ನು ಅವರ ವೃತ್ತಿಜೀವನದ ಆರಂಭದಿಂದಲೂ ಪ್ರೋತ್ಸಾಹಿಸಬೇಕು ಮತ್ತು ಕೇವಲ ಕಾಗದದ ಮೇಲೆ ಮಾತ್ರ ವೈವಿಧ್ಯತೆ ಮತ್ತು ಒಳಗೊಳ್ಳುವಿಕೆಯನ್ನು ತೋರಿಸುವುದರಿಂದ ಯಾವುದೇ ಬದಲಾವಣೆಯನ್ನು ಆಗುವುದಿಲ್ತರುವುದಿಲ್ಲ ಎಂದು ನಾನು ಬಲವಾಗಿ ನಂಬುತ್ತೇನೆ ಎಂದರು.

## ಸುಂದರವಾಗಿ ಕಾಣಲು ಇದೊಂದು ತೈಲ ಇದ್ದರೆ ಸಾಕು.!

ಸುಂದರವಾಗಿ ಕಾಣಬೇಕು ಅನ್ನೋ ಆಸೆ ಯಾರಿಗಿರಲ್ಲ ಹೇಳಿ. ಇದಕ್ಕಾಗಿ ಹತ್ತಾರು ಬಗೆಯ ಸೌಂದರ್ಯ ವರ್ಧಕಗಳನ್ನು ಬಳಸ್ತೀವಿ. ಇಲ್ಲವಾದ್ರೆ ಮೇಕಪ್ ಕೂಡ ಟ್ರೈ ಮಾಡೋದು ಸಹಜ. ಆದ್ರೆ ನೈಸರ್ಗಿಕವಾದ ಸೌಂದರ್ಯವನ್ನು ಪಡೆಯಲು ಕೇವಲ ಒಂದೇ ಒಂದು ಉತ್ಪನ್ನವಿದ್ರೆ ಸಾಕು. ಬದಲಾದ ಜೀವನ ಶೈಲಿಯಿಂದ ವಯಸ್ಸಿಗೂ ಮೊದಲೇ ಮುಖವನ್ನು ಆವರಿಸುವ ಸುಕ್ಕು, ಮೊಡವೆ, ಕಲೆಗಳು ಎಲ್ಲದಕ್ಕೂ ಮದ್ದು ತೆಂಗಿನ ಎಣ್ಣೆ. ತೆಂಗಿನ ಎಣ್ಣೆ ನಿಮ್ಮ ಮುಖದ ಎಲ್ಲಾ ರೀತಿಯ ಸಮಸ್ಯೆಗಳಿಗೂ ಪರಿಹಾರ ನೀಡಬಲ್ಲದು. ತೆಂಗಿನ ಎಣ್ಣೆಯಲ್ಲಿ ಕೊಬ್ಬಿನಾಮ್ಲಗಳು, ವಿಟಮಿನ್-ಇ ಮತ್ತು ಬ್ಯಾಕ್ಟೀರಿಯಾ ವಿರೋಧಿ ಗುಣಗಳಿವೆ. ಈ ತೈಲವು ಸೀರಮ್ನಂತೆ ಕಾರ್ಯನಿರ್ವಹಿಸುತ್ತದೆ. ಆದ್ರೆ ತೆಂಗಿನೆಣ್ಣೆ ಅತಿಯಾಗಿ ಬಳಸಬಾರದು ಅಂತಾನೂ ಹೇಳಲಾಗುತ್ತದೆ. ತೆಂಗಿನ ಎಣ್ಣೆಯಲ್ಲಿ ವಿಟಮಿನ್ ಇ ಸಮೃದ್ಧವಾಗಿದೆ. ತೆಂಗಿನ ಎಣ್ಣೆಯನ್ನು ಪ್ರತಿನಿತ್ಯ ಮುಖಕ್ಕೆ ಹಚ್ಚುತ್ತಾ ಬಂದಲ್ಲಿ ಮುಖದ ಕಾಂತಿ ಹೆಚ್ಚಾಗುತ್ತದೆ. ರಾತ್ರಿ ಮಲಗುವ ಮುನ್ನ ಇದನ್ನು ಮುಖಕ್ಕೆ ಹಚ್ಚಿಕೊಳ್ಳುವುದು ಉತ್ತಮ. ನಿಮ್ಮ ಮುಖದ ಮೇಲೆ ಸುಕ್ಕುಗಳ ಸಮಸ್ಯೆ ಇದ್ದರೆ ನೀವು ತೆಂಗಿನ ಎಣ್ಣೆಯನ್ನು ಹಚ್ಚಬೇಕು. ನಿಮ್ಮ ಚರ್ಮಕ್ಕೆ ವಯಸ್ಸಾಗದಂತೆ ಇದು ತಡೆಯಬಲ್ಲದು. ಹವಾಮಾನ ಬದಲಾವಣೆಯಿಂದಾಗಿ ಒಮ್ಮೊಮ್ಮೆ ಮುಖವೂ ಶುಷ್ಕವಾಗುತ್ತದೆ, ಚರ್ಮ ಒಣಗಿ ಹೋಗುತ್ತದೆ. ನಿಮ್ಮ ಮುಖದ ಶುಷ್ಕತೆಯನ್ನು ಹೋಗಲಾಡಿಸಲು ತೆಂಗಿನ ಎಣ್ಣೆಯನ್ನು ಹಚ್ಚಿ ಮಸಾಜ್ ಮಾಡಿಕೊಳ್ಳಬೇಕು. ಹೀಗೆ ಮಾಡಿದ್ರೆ ನಿಮ್ಮ ಮುಖದಲ್ಲಿ ತೇವಾಂಶ ಉಳಿಯುತ್ತದೆ.

### ಬ್ಯೂಟಿ ಟಿಪ್ಸ್



ಮಾಲಿನ್ಯ ಮತ್ತು ಕಲುಷಿತ ಆಹಾರದಿಂದಾಗಿ ಮುಖದ ಮೇಲೆ ಮೊಡವೆ ಮತ್ತು ವಿವಿಧ ರೀತಿಯ ಕಲೆಗಳು ಕಂಡುಬರುತ್ತವೆ. ಇದನ್ನು ಹೋಗಲಾಡಿಸಲು ನೀವು ತೆಂಗಿನ ಎಣ್ಣೆಯನ್ನು ಸಹ ಬಳಸಬಹುದು. ಪ್ರತಿದಿನ ರಾತ್ರಿ ಮಲಗುವ ಮುನ್ನ ಅಂಗೈಗೆ ತೆಂಗಿನೆಣ್ಣೆಯ ನಾಲ್ಕು ಹನಿಗಳನ್ನು ಹಾಕಿಕೊಂಡು ಮುಖಕ್ಕೆ ಮಸಾಜ್ ಮಾಡಿ. ಸುಮಾರು 5 ರಿಂದ 10 ನಿಮಿಷಗಳ ಕಾಲ ಮಸಾಜ್ ಮಾಡಿದರೆ ಕಲೆಗಳು ಹೋಗುತ್ತವೆ.



**ಜಯಶ್ರೀ.ಬಿ.ಆರ್**

ಖ್ಯಾತ ಜ್ಯೋತಿಷಿ

ದೂರವಾಣಿ-9964739507

www.jyotishyavaastu.com

## ರಾಶಿ ಭವಿಷ್ಯ

**ಮೇಷ:** ವ್ಯವಹಾರದಲ್ಲಿ ಚಿಂತೆ ಮತ್ತು ನಷ್ಟ, ಸಂಗಾತಿಯೊಂದಿಗೆ ಕಲಹ, ಅಪವಾದ ಅಪನಿಂದನೆ ಗೌರವಕ್ಕೆ ಧಕ್ಕೆ, ತಂದೆಯಿಂದ ಅನುಕೂಲ.

**ವೃಷಭ:** ಆತುರ, ಮುಂಗೋಪ, ಖರ್ಚು, ದುಃಸ್ವಪ್ನಗಳು, ವ್ಯಾಪಾರ ವ್ಯವಹಾರದಲ್ಲಿ ಎಳೆದಾಟ, ಆರೋಗ್ಯದಲ್ಲಿ ವ್ಯತ್ಯಾಸ.

**ಮಿಥುನ:** ಪ್ರೀತಿ, ಪ್ರೇಮ, ಭಾವನೆಗಳಲ್ಲಿ ತೊಳಲಾಟ, ಮಕ್ಕಳಿಂದ ಲಾಭ, ಮಿತ್ರರಿಂದ ಸಹಕಾರ, ಲಾಭ ಮತ್ತು ನಷ್ಟ ಸಮ ಪ್ರಮಾಣ, ಸಾಲ ತೀರಿಸುವ ಅವಕಾಶ.

**ಕಟಕ:** ಸ್ಥಿರಾಸ್ತಿ ವಿಷಯದಲ್ಲಿ ಸಮಸ್ಯೆ, ಮಾನಸಿಕ ಸಂಕಟ ಬೇಸರ, ಮಾಟ ಮಂತ್ರ ತಂತ್ರದ ಆತಂಕ, ವಿದ್ಯಾಭ್ಯಾಸದಲ್ಲಿ ನಿರಾಸಕ್ತಿ.

**ಸಿಂಹ:** ಅನಿರೀಕ್ಷಿತ ಖರ್ಚು, ಸ್ತ್ರೀಯರಿಂದ ಅಪವಾದ, ಸ್ಥಿರಾಸ್ತಿಯಿಂದ ನಷ್ಟ, ಮಕ್ಕಳಿಂದ ಯೋಗ ಫಲ.

**ಕನ್ಯಾ:** ಆರ್ಥಿಕ ಅಡೆತಡೆಗಳು, ಮಕ್ಕಳ ಭವಿಷ್ಯದ ಚಿಂತೆ, ಕೌಟುಂಬಿಕ ಚಿಂತೆ, ಅನಗತ್ಯ ತಿರುಗಾಟ.

**ತುಲಾ:** ಸೋಮಾರಿತನ ಉಡಾಫೆ, ಆರೋಗ್ಯದಲ್ಲಿ ವ್ಯತ್ಯಾಸ, ಕೌಟುಂಬಿಕ ಕಲಹ, ಅಭ್ಯಾಸದಲ್ಲಿ ನಿರಾಸಕ್ತಿ.

**ವೃಶ್ಚಿಕ:** ಸಾಲದ ಚಿಂತೆ, ಪಾಲುದಾರಿಕೆಯಲ್ಲಿ ನಷ್ಟ, ಅವಕಾಶ ಕೈ ತಪ್ಪುವುದು, ಅಧಿಕ ಕೋಪ ದುಡುಕುತನ.

**ಧನಸ್ಸು:** ಮಕ್ಕಳಿಂದ ಲಾಭ, ಸಾಲ ಮಾಡುವ ಯೋಚನೆ, ಕಾರ್ಮಿಕರಿಂದ ಅನಾನುಕೂಲ, ಕೌಟುಂಬಿಕ ಸಮಸ್ಯೆ.

**ಮಕರ:** ಉದ್ಯೋಗದಲ್ಲಿ ಎಳೆದಾಟ, ಮಕ್ಕಳಿಂದ ಲಾಭ, ಗೃಹ ನಿರ್ಮಾಣಕ್ಕೆ ಶುಭ, ಗೌರವಕ್ಕೆ ಧಕ್ಕೆ.

**ಕುಂಭ:** ಪ್ರಯಾಣದಲ್ಲಿ ಎಚ್ಚರಿಕೆ, ವ್ಯಾಮೋಹಕ್ಕೆ ಬಲಿ, ಉದ್ಯೋಗದಲ್ಲಿ ಪ್ರಗತಿ, ಭೂಮಿ ವಾಹನ ಖರೀದಿ.

**ಮೀನ:** ಆಯುಷ್ಯದ ಚಿಂತೆ, ಕಲಹಗಳು ಮತ್ತು ಅವಮಾನಗಳು, ಪ್ರಯಾಣದಲ್ಲಿ ವಿಘ್ನ, ಉದ್ಯೋಗ ಕಳೆದುಕೊಳ್ಳುವ ಭೀತಿ.

## ಅಂತಾರಾಷ್ಟ್ರೀಯ ಬೆಳಕಿನ ದಿನ

ಕಲೆ ಮತ್ತು ಸಂಸ್ಕೃತಿ, ಶಿಕ್ಷಣ, ವೈದ್ಯಕೀಯ, ಸಂವಹನ, ವಿಜ್ಞಾನ ಮತ್ತು ಸುಸ್ಥಿರ ಅಭಿವೃದ್ಧಿ ಸೇರಿದಂತೆ ಜೀವನದ ವಿವಿಧ ಕ್ಷೇತ್ರಗಳು ಮತ್ತು ಕ್ಷೇತ್ರಗಳಿಗೆ ಬೆಳಕು ಮತ್ತು ಬೆಳಕು ಆಧಾರಿತ ತಂತ್ರಜ್ಞಾನಗಳ ಕೊಡುಗೆಯನ್ನು ಆಚರಿಸಲು ವಾರ್ಷಿಕವಾಗಿ ಮೇ 16 ರಂದು ಅಂತರರಾಷ್ಟ್ರೀಯ ಬೆಳಕಿನ ದಿನವನ್ನು ಆಚರಿಸಲಾಗುತ್ತದೆ. 1802 ರಲ್ಲಿ ಹಂಫ್ರೆ ಡೇವಿ ವಿಶ್ವದ ಮೊದಲ ವಿದ್ಯುತ್ ದೀಪವನ್ನು ಕಂಡುಹಿಡಿದರು ಎಂದು ನಿಮಗೆ ತಿಳಿದಿದೆಯೇ? 1960 ರಲ್ಲಿ ಭೌತಶಾಸ್ತ್ರಜ್ಞ ಮತ್ತು ಇಂಜಿನಿಯರ್ ಥಿಯೋಡರ್ ಮೈಮನ್ ಅವರ ಮೊದಲ ಯಶಸ್ವಿ ಲೇಸರ್ ಕಾರ್ಯಾಚರಣೆಯ ವಾರ್ಷಿಕೋತ್ಸವವನ್ನು ಅಂತರರಾಷ್ಟ್ರೀಯ ಬೆಳಕಿನ ದಿನವು ನೆನಪಿಸುತ್ತದೆ. ಪ್ರಾಚೀನ ಕಾಲದಿಂದಲೂ, ಮಾನವರು ಬೆಳಕನ್ನು ಉತ್ಪಾದಿಸಲು ವಿವಿಧ ವಸ್ತುಗಳನ್ನು ಬಳಸಿದ್ದಾರೆ, ಟೊಳ್ಳಾದ ಕಲ್ಲು, ಚಿಪ್ಪುಗಳು ಅಥವಾ ಪ್ರಾಣಿಗಳ ಕೊಬ್ಬು ಮತ್ತು ಎಣ್ಣೆ ದೀಪಗಳಲ್ಲಿ ನೆನೆಸಿದ ಮರದಿಂದ ಮೇಣದಬತ್ತಿಗಳು ಮತ್ತು ಅನಿಲದವರೆಗೆ. ಬೆಳಕಿನ ಆಧುನಿಕ ಇತಿಹಾಸವು ವಿದ್ಯುತ್ ಬೆಳಕಿನ ಬಲ್ಬ್ ಆವಿಷ್ಕಾರದೊಂದಿಗೆ ಪ್ರಾರಂಭವಾಯಿತು. ಜನಪ್ರಿಯ ನಂಬಿಕೆಗೆ ವಿರುದ್ಧವಾಗಿ, ಥಾಮಸ್ ಎಡಿಸನ್ ಪೇಟೆಂಟ್ ಪಡೆಯುವ ಮೊದಲು ಬೆಳಕಿನ ಬಲ್ಬ್ ಅನ್ನು ಕಂಡುಹಿಡಿಯಲಾಯಿತು. ಎಡಿಸನ್ ಮಾತ್ರ ಬೆಳಕಿನ ಬಲ್ಬ್ ಅನ್ನು ವಾಣಿಜ್ಯಿಕವಾಗಿ ತಯಾರಿಸಲು ಸಾಧ್ಯವಾಯಿತು. 1802 ರಲ್ಲಿ, ಹಂಫ್ರೆ ಡೇವಿ ವೋಲ್ಟಾಯಿಕ್ ಪೈಲ್ಗಳನ್ನು ಇದ್ದಿಲು ವಿದ್ಯುದ್ವಾರಗಳಿಗೆ ಸಂಪರ್ಕಿಸುವ ಮೂಲಕ ಪ್ರಕಾಶಮಾನ ವಿದ್ಯುತ್ ಬಲ್ಬ್ನ ಆರಂಭಿಕ ಪೂರ್ವವರ್ತಿಯಾದ ಎಲೆಕ್ಟ್ರಿಕ್ ಆರ್ಕ್ ಲ್ಯಾಂಪ್ ಅನ್ನು ಕಂಡುಹಿಡಿದನು. ಆದಾಗ್ಯೂ, ಆರ್ಕ್ ಲ್ಯಾಂಪ್ ಬೆಳಕಿನ ಪ್ರಾಯೋಗಿಕ ಮೂಲವಾಗಿರಲಿಲ್ಲ, ಏಕೆಂದರೆ ಇದು ದೇಶೀಯ ಅಥವಾ ಕೆಲಸದ ಬಳಕೆಗಳಿಗೆ ತುಂಬಾ ಪ್ರಕಾಶಮಾನವಾಗಿತ್ತು ಮತ್ತು ಅದು ಬೇಗನೆ ಸುಟ್ಟುಹೋಯಿತು. ಈ ಆವಿಷ್ಕಾರವು 1815 ರಲ್ಲಿ ಮೈನರ್ಸ್ ಸುರಕ್ಷತಾ ದೀಪದ ಸೃಷ್ಟಿಗೆ ಕಾರಣವಾಯಿತು. 1850 ರಲ್ಲಿ, ಜೋಸೆಫ್ ಸ್ವಾನ್ ವಿದ್ಯುತ್ ದೀಪದ ಸಂಶೋಧಕರು ವರ್ಷಗಳಲ್ಲಿ ಎದುರಿಸಿದ ಸಮಸ್ಯೆಗಳಲ್ಲಿ ಒಂದನ್ನು ಪರಿಹರಿಸಿದರು: ದೀಪದ ತಂತುವಿನ ವೆಚ್ಚ-ಪರಿಣಾಮಕಾರಿತ್ವ. ಪ್ಲಾಟಿನಮ್ ಫಿಲಾಮೆಂಟ್ಸ್ ಬದಲಿಗೆ, ಸ್ವಾನ್ ಅಗ್ಗದ ಕಾರ್ಬೊನೈಸ್ಡ್ ಪೇಪರ್ ಫಿಲಾಮೆಂಟ್ಸ್ ಅನ್ನು ಬಳಸಿತು. 1878 ರಲ್ಲಿ, ಅವರು ಯುನೈಟೆಡ್ ಕಿಂಗ್ಡಮ್ನಲ್ಲಿ ತಮ್ಮ ವಿದ್ಯುತ್ ದೀಪಕ್ಕೆ ಪೇಟೆಂಟ್ ಪಡೆದರು ಮತ್ತು ಇಂಗ್ಲೆಂಡ್ನ ನ್ಯೂಕ್ಯಾಸಲ್ನಲ್ಲಿನ ಉಪನ್ಯಾಸದಲ್ಲಿ ಅದನ್ನು ಪ್ರದರ್ಶಿಸಿದರು. ಸ್ವಾನ್ನ ಆವಿಷ್ಕಾರ, ಡೇವಿಯ ಆರ್ಕ್ ಲ್ಯಾಂಪ್ನಂತೆ, ಅದರ ನಿರ್ವಾತ ಪಂಪ್ಗಳ ಅಸಮರ್ಥತೆಯಿಂದಾಗಿ ದೈನಂದಿನ ಬಳಕೆಗೆ ಅಪ್ರಾಯೋಗಿಕವಾಗಿದೆ. ಎಡಿಸನ್ ಸ್ವಾನ್ನ ವಿದ್ಯುತ್ ದೀಪದಲ್ಲಿನ ನ್ಯೂನತೆಯನ್ನು ಕಂಡುಹಿಡಿದಾಗ, ಅವರು ಸುಧಾರಣೆಗಳನ್ನು ಮಾಡಿದರು ಮತ್ತು ಡಿಸೆಂಬರ್ 1879 ರಲ್ಲಿ ತಮ್ಮ ಬಲ್ಬ್ ಅನ್ನು ಪ್ರಸ್ತುತಪಡಿಸಿದರು. ಸ್ವಾನ್ ಈ ಸುಧಾರಣೆಗಳನ್ನು ನಕಲಿಸಿದರು ಮತ್ತು ಇಂಗ್ಲೆಂಡ್ನಲ್ಲಿ ವಿದ್ಯುತ್ ಬೆಳಕಿನ ಕಂಪನಿಯನ್ನು ಸ್ಥಾಪಿಸಿದರು.



# ಬಿಜೆಪಿ ಧರ್ಮದ ಹೆಸರಿನಲ್ಲಿ ಜನರನ್ನು ವಂಚಿಸಿದೆ: ಪ್ರಿಯಾಂಕಾ ಗಾಂಧಿ

**ರಾಯ್ಬರೇಲಿ:** ಧರ್ಮದ ಹೆಸರಿನಲ್ಲಿ ಜನರನ್ನು ವಂಚಿಸಿ ಮತ್ತೆ ಅಧಿಕಾರಕ್ಕೆ ಬರಬಹುದು ಎಂದು ಬಿಜೆಪಿ ನಾಯಕರು ನಂಬಿದ್ದಾರೆ ಎಂದು ಪ್ರಿಯಾಂಕಾ ಗಾಂಧಿ ವಾದ್ರಾ ಕಿಡಿಕಾರಿದರು. ಲೋಕಸಭೆ ಚುನಾವಣೆಯ ಸಂದರ್ಭದಲ್ಲಿ ಬಿಜೆಪಿ ಧರ್ಮದ ವಿಚಾರವನ್ನು ಎತ್ತಿ ಹಿಡಿದು ಜನರ ಗಮನವನ್ನು ಬೇರೆಡೆಗೆ ಸೆಳೆಯುತ್ತಿದೆ ಎಂದು ಬುಧವಾರ ಆರೋಪ ಮಾಡಿ, ರಾಯ್ಬರೇಲಿಯಲ್ಲಿ ರಾಹುಲ್ ಗಾಂಧಿ ಪರ ಪ್ರಚಾರ ನಡೆಸಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರಿಂದ ಹಿಡಿದು ಬಿಜೆಪಿಯ ನಾಯಕರೆಲ್ಲರೂ, ಜನರನ್ನು ದಿಕ್ಕು ತಪ್ಪಿಸುತ್ತಿದ್ದಾರೆ ಎಂದು ಟೀಕಿಸಿದ್ದಾರೆ.ದೇಶದಲ್ಲಿ ಎರಡು ರೀತಿಯ ರಾಜಕಾರಣ ಮಾಡಲಾಗುತ್ತಿದೆ. ಬಿಜೆಪಿಯ ರಾಜಕೀಯ ಜನರ ಭಾವನೆಗಳೊಂದಿಗೆ ಆಟವಾಡುತ್ತಿದೆ. ಧರ್ಮದ ಹೆಸರಿನಲ್ಲಿ ಮತಯಾಚಿಸುತ್ತಾರೆ. ಮತದಾರರ ಬಗ್ಗೆ ಯಾವುದೇ ಕಾಳಜಿಯಿಲ್ಲದೆ ಅಧಿಕಾರದಲ್ಲಿ ಉಳಿಯುತ್ತಾರೆ. ಮತ್ತೊಂದೆಡೆ ಕಾಂಗ್ರೆಸ್ ನಿಜವಾದ ರಾಜಕಾರಣ ಮಾಡುತ್ತಿದ್ದು, ಜನರಿಗಾಗಿ ಕೆಲಸ ಮಾಡಲು ಸದಾ ಸಿದ್ಧವಿದೆ ಎಂದು ಅವರು ಹೇಳಿದರು. ಬಿಜೆಪಿ ನಮ್ಮನ್ನು ಭ್ರಷ್ಟರೆಂದು ಕರೆಯುತ್ತಾರೆ. ಆದರೆ ಅಧಿಕಾರದಲ್ಲಿದ್ದ 55 ವರ್ಷಗಳಲ್ಲಿ ಕಾಂಗ್ರೆಸ್ಗೆ ಶ್ರೀಮಂತ ಪಕ್ಷವಾಗಲು ಸಾಧ್ಯವಾಗಲಿಲ್ಲ. ಮತ್ತೊಂದೆಡೆ ಬಿಜೆಪಿ 10 ವರ್ಷಗಳಲ್ಲೇ ವಿಶ್ವದ ಅತಿ ಶ್ರೀಮಂತ ಪಕ್ಷವಾಗಿದೆ ಎಂದು ಹೇಳಿದ್ದಾರೆ. ರಾಯ್ಬರೇಲಿ ಲೋಕಸಭಾ ಕ್ಷೇತ್ರದಲ್ಲಿ ಐದನೇ ಹಂತದಲ್ಲಿ ಮೇ 20ರಂದು ಮತದಾನ ನಡೆಯಲಿದೆ.

# ಕೆಂಪು ಲಿಪ್ ಸ್ಟಿಕ್ ಬ್ಯಾನ್!

ಕಿಮ್ ಜಾಂಗ್ ಉನ್ ನಾಯಕತ್ವದಲ್ಲಿ ಉತ್ತರ ಕೊರಿಯಾ ಕಠಿಣ ಮತ್ತು ಆಗಾಗ್ಗೆ ಅಸಾಮಾನ್ಯ ಕಾನೂನುಗಳನ್ನು ಜಾರಿಗೊಳಿಸುತ್ತದೆ, ಇದು ಫ್ಯಾಷನ್ ಆಯ್ಕೆಗಳಿಗೂ ವಿಸ್ತರಿಸುತ್ತದೆ. ಆಡಳಿತವು ಜನಪ್ರಿಯ ಜಾಗತಿಕ ಫ್ಯಾಷನ್ ಮತ್ತು ಸೌಂದರ್ಯವರ್ಧಕ ಬ್ರಾಂಡ್ಗಳ ಮೇಲೆ ನಿಷೇಧವನ್ನು ವಿಧಿಸಿದೆ, ಅದು ಕೂಡ ಉತ್ತರ ಕೊರಿಯಾ ಸರ್ಕಾರವು ಕೆಂಪು ಲಿಪ್ ಸ್ಟಿಕ್ ಅನ್ನು ನಿಷೇಧಿಸಿದೆ.ಈ ಆದೇಶವನ್ನು ಅನುಸರಣೆ ಮಾಡದಿದ್ದರೆ ಕಠಿಣ ದಂಡ ವಿಧಿಸಲಾಗುತ್ತದೆ. ಕೆಂಪು ಬಣ್ಣವು ಕಮ್ಯುನಿಸಂನೊಂದಿಗೆ ಐತಿಹಾಸಿಕ ಸಂಪರ್ಕವನ್ನು ಹೊಂದಿದ್ದರೂ, ಉತ್ತರ ಕೊರಿಯಾ ಕೆಂಪು ಲಿಪ್ಸ್ಟಿಕ್ ಅನ್ನು ನಿಷೇಧಿಸಿದೆ, ಕೆಂಪು ಲಿಪ್ಸ್ಟಿಕ್ ಉತ್ತರ ಕೊರಿಯಾದ ನಿರ್ಬಂಧಿತ ವೈಯಕ್ತಿಕ ಚಿತ್ರಣ ನೀತಿಯ ಒಂದು ಅಂಶವಾಗಿದೆ. ಇದಲ್ಲದೇ ಮಹಿಳೆಯರಿಗೆ ಉದ್ದನೆಯ ಕೂದಲು ಮತ್ತು ತೆಳುವಾದ ಅಥವಾ ನೀಲಿ ಜೀನ್ಸ್ ಸೇರಿದಂತೆ ಬಂಡವಾಳಶಾಹಿ ತತ್ವಶಾಸ್ತ್ರಕ್ಕೆ ಸಂಬಂಧಿಸಿದ ಹಲವಾರು ಹೆಚ್ಚುವರಿ ಉತ್ಪನ್ನಗಳು ಮತ್ತು ಹೇರ್ ಕಟ್ ಗಳನ್ನು ಕಿಮ್ ಜಾಂಗ್ ಉನ್ ಸರ್ಕಾರವು ಇತ್ತೀಚಿನ ವರ್ಷಗಳಲ್ಲಿ ಕಾನೂನುಬಾಹಿರಗೊಳಿಸಿದೆ. ಮಹಿಳೆಯರು ಮತ್ತು ಪುರುಷರಿಗೆ ರಾಜ್ಯ ಅನುಮೋದಿತ ಕೇಶವಿನ್ಯಾಸವನ್ನು ಮಾತ್ರ ಅನುಮತಿಸಲಾಗಿದೆ.



# ಉಕ್ರೇನ್ ಮಾತುಕತೆಗೆ ಸಿದ್ಧ: ರಷ್ಯಾ ಅಧ್ಯಕ್ಷ ಪುಟಿನ್

**ಮಾಸ್ಕೋ:** ಉಕ್ರೇನ್ ವಿಷಯದಲ್ಲಿ ಮಾತುಕತೆಗೆ ತನ್ನ ಸರಕಾರ ಸಿದ್ಧವಿದೆ ಎಂದು ರಶ್ಯ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಬುಧವಾರ ಹೇಳಿದ್ದಾರೆ. ಉಕ್ರೇನ್ ವಿಷಯದಲ್ಲಿ ನಡೆಯುವ ಮಾತುಕತೆ ರಶ್ಯ ಸೇರಿದಂತೆ ಸಂಘರ್ಷದಲ್ಲಿ ತೊಡಗಿರುವ ಎಲ್ಲಾ ದೇಶಗಳ ಹಿತಾಸಕ್ತಿಗಳನ್ನು ಗಣನೆಗೆ ತೆಗೆದುಕೊಳ್ಳಬೇಕು. ಈ ಸಂಘರ್ಷವನ್ನು ಶಾಂತಿಯುತವಾದ ವಿಧಾನಗಳ ಮೂಲಕ ಸಮಗ್ರ, ಸುಸ್ಥಿರ, ಸಮರ್ಥನೀಯ ಮತ್ತು ನ್ಯಾಯಯುತ ರೀತಿಯಲ್ಲಿ ಇತ್ಯರ್ಥಗೊಳಿಸಬೇಕು ಎಂದು ಪುಟಿನ್ ಹೇಳಿದ್ದಾರೆ. ಈಶಾನ್ಯ ಉಕ್ರೇನ್ನ ಖಾರ್ಕಿವ್ ಪ್ರಾಂತದ ಮೇಲೆ ರಶ್ಯ ಪಡೆಗಳು ಆಕ್ರಮಣ ತೀವ್ರಗೊಳಿಸುತ್ತಿರುವ ಸಂದರ್ಭದಲ್ಲಿ ಗುರುವಾರ ಪುಟಿನ್ ಚೀನಾಕ್ಕೆ ನೀಡುವ ಭೇಟಿ ಮಹತ್ವ ಪಡೆದಿದೆ. ಪುಟಿನ್ ಮತ್ತು ಚೀನಾ ಅಧ್ಯಕ್ಷ ಕ್ಸಿ ಜಿಂಪಿಂಗ್ ಬೀಜಿಂಗ್ನಲ್ಲಿ ನಡೆಯುವ ಸಭೆಯಲ್ಲಿ ಸಮಗ್ರ ಪಾಲುದಾರಿಕೆ ಮತ್ತು ಕಾರ್ಯತಂತ್ರದ ಸಹಕಾರಕ್ಕೆ ಸಂಬಂಧಿಸಿದ ವಿಷಯಗಳನ್ನು ಚರ್ಚಿಸಲಿದ್ದಾರೆ ಎಂದು ರಶ್ಯದ ವಿದೇಶಾಂಗ ಇಲಾಖೆಯ ಹೇಳಿಕೆ ತಿಳಿಸಿದೆ.



# ಸಚಿನ್ ತೆಂಡೂಲ್ಕರ್ ಭದ್ರತಾ ಸಿಬ್ಬಂದಿ ಗುಂಡು ಹಾರಿಸಿಕೊಂಡು ಆತ್ಮಹತ್ಯೆ



**ಜಲಗಾಂವ್:** ಕ್ರಿಕೆಟ್ ದಿಗ್ಗಜ ಮತ್ತು ಭಾರತ ರತ್ನ ಪ್ರಶಸ್ತಿ ಪುರಸ್ಕೃತ ಸಚಿನ್ ತೆಂಡೂಲ್ಕರ್ ಅವರ ವೈಯಕ್ತಿಕ ಭದ್ರತಾ ಸಿಬ್ಬಂದಿ(ಗನ್ಮ್ಯಾನ್) ಸರ್ವೀಸ್ ಗನ್ ನಿಂದ ಕುತ್ತಿಗೆಗೆ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ.

ಮಹಾರಾಷ್ಟ್ರ ರಾಜ್ಯ ಮೀಸಲು ಪೊಲೀಸ್ ಪಡೆಯಲ್ಲಿ ಭದ್ರತಾ ಸಿಬ್ಬಂದಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಜಾಮ್ನೇರ್ನ ಪ್ರಕಾಶ್ ಕಾಪ್ಡೆ (39) ಸಚಿನ್ ತೆಂಡೂಲ್ಕರ್ ಅವರ ಗನ್ಮ್ಯಾನ್ ಆಗಿ ನಿಯೋಜನೆಗೊಂಡಿದ್ದರು. ಇತ್ತೀಚೆಗಷ್ಟೇ ಕರ್ತವ್ಯಕ್ಕೆ ರಜೆ ಪಡೆದು ಮನೆಯಲ್ಲೇ ಇದ್ದರು ಎನ್ನಲಾಗಿದೆ. ಬುಧವಾರ ಮಧ್ಯರಾತ್ರಿ 1.30ರ ಸುಮಾರಿಗೆ ಸರ್ವೀಸ್ ಗನ್ ನಿಂದ ಕುತ್ತಿಗೆಗೆ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇದನ್ನು ಗಮನಿಸಿದ ಕುಟುಂಬಸ್ಥರು ಕೂಡಲೇ ಹತ್ತಿರದ ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ ಪ್ರಕಾಶ್ ಅದಾಗಲೇ ಮೃತಪಟ್ಟಿದ್ದರು. ಪ್ರಕಾಶ್ ಆತ್ಮಹತ್ಯೆಗೆ ಸಂಬಂಧಿಸಿದಂತೆ ಪೊಲೀಸರು ಅನುಮಾನಾಸ್ಪದ ಸಾವು ಎಂದು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಸಾವಿಗೆ ಕಾರಣ ತಿಳಿದುಬಂದಿಲ್ಲ. ವೈಯಕ್ತಿಕ ಕಾರಣದಿಂದ ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ.

# ಗೋಧ್ರಾ ಗಲಭೆ ನಂತರ ಮುಸ್ಲಿಮರಲ್ಲಿ ನನ್ನ ವ್ಯಕ್ತಿತ್ವಕ್ಕೆ ಕಳಂಕ ತರಲಾಗಿದೆ: ಮೋದಿ



**ನವದೆಹಲಿ:** 2002ರ ಗೋಧ್ರಾ ಗಲಭೆ ನಂತರ ವಿರೋಧಿಗಳು ಮುಸ್ಲಿಮರಲ್ಲಿ ನನ್ನ ವ್ಯಕ್ತಿತ್ವಕ್ಕೆ ಕಳಂಕ ತಂದಿದ್ದಾರೆ ಎಂದು ಪ್ರಧಾನಿ ಮೋದಿ ಅಸಮಾಧಾನ ಹೊರಹಾಕಿದ್ದಾರೆ. ಖಾಸಗಿ ವಾಹಿನಿಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ಅವರು, 2002ರಲ್ಲಿ ಗೋಧ್ರಾ ಹತ್ಯಾಕಾಂಡದ ಬಳಿಕ, ವಿರೋಧಿಗಳು ಮುಸ್ಲಿಮರಲ್ಲಿ ನನ್ನ ವ್ಯಕ್ತಿತ್ವಕ್ಕೆ ಕಳಂಕ ತಂದಿದ್ದಾರೆ ಎಂದು ಕಿಡಿ ಕಾರಿದ್ದಾರೆ.

ಮುಸ್ಲಿಮರು ನಮಗೆ ಎಷ್ಟು ಬೆಂಬಲ ಕೊಡುತ್ತಾರೆ ಎಂಬುದನ್ನು ಲೆಕ್ಕಿಸದೇ ಅವರ ಪರ ಕೆಲ ಮಾಡುತ್ತಿದ್ದೇನೆ. ನಮ್ಮ ಮನೆಯ ಸುತ್ತ ಎಲ್ಲಾ ಮುಸ್ಲಿಂ ಕುಟುಂಬಗಳೇ ಇವೆ. ನಮ್ಮ ಮನೆಯಲ್ಲಿ ಈದ್ ಜೊತೆಗೆ ಬೇರೆ ಬೇರೆ ಹಬ್ಬಗಳ ಆಚರಿಸುತ್ತಿದ್ದೆವು. ಈದ್ ಆಚರಿಸುವಾಗ ನಮ್ಮ ಮನೆಯಲ್ಲಿ ಅಡುಗೆಯೇ ಮಾಡುತ್ತಿರಲಿಲ್ಲ. ಸುತ್ತಮುತ್ತಲಿನ ಮುಸ್ಲಿಂ ಕುಟುಂಬಗಳಿಂದಲೇ ಊಟ ಬರುತ್ತಿತ್ತು. ಆ ಪ್ರಪಂಚದಲ್ಲೂ ನಾನು ಬೆಳೆದಿದ್ದೇನೆ. ಇಂದಿಗೂ ಮೊಹರಂ ಸಂದರ್ಭದಲ್ಲಿ ಕೆಲ ಮುಸ್ಲಿಂ ಸ್ನೇಹಿತರು ಮನೆಗೆ ಊಟ ತಂದುಕೊಡುತ್ತಾರೆ. ಆದ್ರೆ 2002ರಲ್ಲಿ ನಡೆದ ಗೋಧ್ರಾ ಹತ್ಯಾಕಾಂಡದ ಬಳಿಕ ಮುಸ್ಲಿಮರಲ್ಲಿ ನನ್ನ ವ್ಯಕ್ತಿತ್ವಕ್ಕೆ ಕಳಂಕ ತರಲಾಗಿದೆ ಎಂದು ಬೇಸರ ಹೊರಹಾಕಿದ್ದಾರೆ. ಮುಂದುವರಿದು ಮಾತನಾಡಿದ ಅವರು, ನಾನು ಯಾವತ್ತಿಗೂ ಹಿಂದೂ-ಮುಸ್ಲಿಮರು ಅಂತ ಪ್ರತ್ಯೇಕಿಸುವುದಿಲ್ಲ. ನಾನು ಹಿಂದೂ-ಮುಸ್ಲಿಮರನ್ನು ಪ್ರತ್ಯೇಕಿಸುವ ದಿನ ಸಾರ್ವಜನಿಕ ಜೀವನದಲ್ಲಿ ಇರಲು ಅರ್ಹನಾಗುವುದಿಲ್ಲ. ಎಂದಿಗೂ ನಾನು ಹಿಂದೂ-ಮುಸ್ಲಿಂ ಅಂತ ಪ್ರತ್ಯೇಕಿಸಲ್ಲ, ಇದು ನನ್ನ ಪ್ರತಿಜ್ಞೆ ಎಂದು ಮೋದಿ ನುಡಿದಿದ್ದಾರೆ.

ಇದೇ ವೇಳೆ ಕೆಲ ದಿನಗಳ ಹಿಂದೆ ರಾಜಸ್ಥಾನದ ಬನ್ಸ್ವಾರಾದಲ್ಲಿ ಚುನಾವಣಾ ಸಮಾವೇಶವನ್ನುದ್ದೇಶಿಸಿ ಮಾತನಾಡುವ ವೇಳೆ, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ದೇಶದ ಸಂಪತ್ತನ್ನು ಒಳನುಗ್ಗುವವರು ಮತ್ತು ಹೆಚ್ಚು ಮಕ್ಕಳನ್ನು ಹೊಂದಿರುವವರಿಗೆ ಹಂಚಬಹುದು ಎಂದಿದ್ದ ತಮ್ಮ ಹೇಳಿಕೆಗೆ ಸ್ಪಷ್ಟನೆ ನೀಡಿದ್ದಾರೆ. ನಾನು ಇದನ್ನು ಮುಸ್ಲಿಮರಿಗೆ ಹೇಳಿದ್ದಲ್ಲ. ನಾನು ಯಾವುದೇ ಕಾರಣಕ್ಕೂ ವೋಟ್ ಬ್ಯಾಂಕ್ ಗಾಗಿ ಕೆಲಸ ಮಾಡುವುದಿಲ್ಲ. ಸಬ್ಕಾ ಸಾಥ್, ಸಬ್ಕಾ ವಿಕಾಸ್ ಅನ್ನು ನಂಬುತ್ತೇನೆ ಎಂದು ಸ್ಪಷ್ಟನೆ ನೀಡಿದ್ದಾರೆ. ಹೆಚ್ಚು ಮಕ್ಕಳನ್ನು ಹೊಂದಿರುವವರು ಎಂದು ಮಾತನಾಡಿದ್ದೇನೆ, ಆದ್ರೆ ಮುಸ್ಲಿಮರು ಎಂದು ಯಾರು ಹೇಳಿದ್ದು ಇಂದಿನ ಬಡ ಕುಟುಂಬಗಳಲ್ಲಿಯೂ ಇದೇ ಪರಿಸ್ಥಿತಿ ಇದೆ. ಬಡತನ ಇರುವ ಕುಟುಂಬಗಳಲ್ಲೇ ಹೆಚ್ಚು ಮಕ್ಕಳಿರುತ್ತಾರೆ. ಆದ್ರೆ ನಾನು ಈ ಹೇಳಿಕೆ ನೀಡುವಾಗ ಹಿಂದೂ ಅಥವಾ ಮುಸ್ಲಿಂ ಎಂದು ಹೇಳಿಲ್ಲ. ಎಷ್ಟು ಮಕ್ಕಳನ್ನು ಸಾಕಲು ಸಾಧ್ಯವೋ ಅಷ್ಟು ಮಕ್ಕಳನ್ನು ಹೊಂದಬೇಕು. ಏಕೆಂದರೇ ಸರ್ಕಾರವೇ ನಿಮ್ಮಕ್ಕಳನ್ನು ರಕ್ಷಣೆ ಮಾಡುವ ಪರಿಸ್ಥಿತಿ ಎಂದಿಗೂ ಬರದಿರಲಿ ಎಂದು ಸಲಹೆ ನೀಡಿದ್ದಾರೆ.

# ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಮುಂದುವರೆದ ಪ್ರತಿಭಟನೆ !

**ಮುಜಫ್ಫರಾಬಾದ್:** ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಜಮ್ಮು-ಕಾಶ್ಮೀರ ಜಂಟಿ ಆವಾಮಿ ಕ್ರಿಯಾ ಸಮಿತಿಯ ನೇತೃತ್ವದಲ್ಲಿ ಲಕ್ಷಾಂತರ ಆಂದೋಲನಕಾರರು ಈ ಆಂದೋಲನವನ್ನು ರಾಜಧಾನಿ ಮುಜಫ್ಫರಾಬಾದ್ ಕಡೆಗೆ ಕರೆದೊಯ್ಯಲು ಆರಂಭಿಸಿದ್ದಾರೆ.ಈ ಆಂದೋಲನದಲ್ಲಿನ ಆಂದೋಲನಾಕಾರರು ಮುಜಫ್ಫರಾಬಾದ್ ಜಿಲ್ಲೆಯನ್ನು ಪ್ರವೇಶಿಸಿದ್ದಾರೆ. ಆಂದೋಲನಕಾರರು ಮುಜಫ್ಫರಾಬಾದ್ ನಗರದಲ್ಲಿ ಶಾಸಕಾಂಗ ಸಭೆಗೆ ಮುತ್ತಿಗೆ ಹಾಕುವವರಿದ್ದಾರೆ. ಈ ಆಂದೋಲನದ ಹಿನ್ನೆಲೆಯಲ್ಲಿ ಪಾಕಿಸ್ತಾನ ಸೇನೆಯನ್ನು ನಿಯೋಜಿಸಲಾಗಿದೆ. ಇದರಿಂದ ಆಂದೋಲನಕಾರರು ಆಕ್ರೋಶಗೊಂಡಿದ್ದಾರೆ ಮತ್ತು ಹಲವೆಡೆ ಸೈನಿಕರನ್ನು ಥಳಿಸಿದ್ದಾರೆ. ಇಡೀ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ 5 ದಿನಗಳಿಂದ ಇಂಟರ್ನೆಟ್ ಮತ್ತು ಮೊಬೈಲ್ ಸೇವೆಗಳನ್ನು ಸ್ಥಗಿತಗೊಳಿಸಲಾಗಿದೆ. ಇಲ್ಲಿಯ ನಾಗರಿಕರು ನಾವು ಸರಕಾರದ ಭ್ರಷ್ಟ ಆಡಳಿತ ವ್ಯವಸ್ಥೆಯಿಂದ ಸಂಕಷ್ಟಕ್ಕೆ ಸಿಲುಕಿದ್ದೇವೆ ನಮಗೆ ಸ್ವಾತಂತ್ರ್ಯ ಬೇಕು, ನಮ್ಮ ಆಂದೋಲನ ಶಾಂತಿಯುತವಾಗಿದೆ, ನಾವು ಯಾವುದೇ ಹಾನಿ ಮಾಡಲು ಬಯಸುವುದಿಲ್ಲ. ಒಂದೇ ಒಂದು ಬೇಡಿಕೆ ಈಡೇರದೇ ಇದ್ದಲ್ಲಿ ನಾವು ಹಿಂದೆ ಸರಿಯುವುದಿಲ್ಲ. ನಮ್ಮ ಎಲ್ಲಾ ಬೇಡಿಕೆಗಳನ್ನು ಪೂರೈಸಿದ ನಂತರವೇ ನಾವು ಸಾಯುತ್ತೇವೆ ಎಂದು ಹೇಳುತ್ತಿದ್ದಾರೆ.



# 400 ಕ್ಕೂ ಅಧಿಕ ಸ್ಥಾನ ಬಂದ್ರೆ ಮಥುರಾ, ಕಾಶಿಯಲ್ಲಿ ಭವ್ಯ ಮಂದಿರ ನಿರ್ಮಾಣ: ಅಸ್ಸಾಂ ಸಿಎಂ

ನವದೆಹಲಿ: ಬಿಜೆಪಿಗೆ 300 ಸ್ಥಾನಗಳು ಬಂದಾಗ ಅಯೋಧ್ಯೆಯಲ್ಲಿ ಭವ್ಯ ರಾಮ ಮಂದಿರ ನಿರ್ಮಾಣವಾಗಿದೆ. 400 ಅಧಿಕ ಸ್ಥಾನಗಳು ಬಂದರೆ ಮಥುರಾದ ಶ್ರೀಕೃಷ್ಣ ಜನ್ಮಭೂಮಿಯಲ್ಲಿ ದೇವಸ್ಥಾನ, ಜ್ಞಾನವಾಪಿ ಮಸೀದಿಯ ಜಾಗದಲ್ಲಿ ಭವ್ಯ ಬಾಬಾ ವಿಶ್ವನಾಥ ಮಂದಿರ ನಿರ್ಮಾಣವಾಗಲಿದೆ ಎಂದು ಅಸ್ಸಾಂ ಸಿಎಂ ಹಿಮಂತ್ ಬಿಸ್ವಾ ಶರ್ಮಾ ಹೇಳಿರುವ ವೀಡಿಯೋ ವೈರಲ್ ಆಗಿದೆ.

ಚುನಾವಣಾ ಭಾಷಣವೊಂದರಲ್ಲಿ ಮಾತನಾಡಿದ ಅವರು, 400 ಕ್ಕೂ ಅಧಿಕ ಸ್ಥಾನಗಳು ಯಾಕೆ ಬೇಕು ಎಂದು ಕಾಂಗ್ರೆಸ್ ನಾಯಕರು ಪ್ರಶ್ನೆ ಎತ್ತಿದ್ದಾರೆ. ಇದಕ್ಕೆ ಉತ್ತರ ನೀಡುವುದು ಸರಿ ಎಂದು ನನಗೂ ಅನಿಸಿತು. ಅದಕ್ಕಾಗಿ ಹೇಳುತ್ತಿದ್ದೇನೆ ಈ ಹಿಂದೆ ದೇಶದಲ್ಲಿ ಮೊಘಲರು ಮಾಡಿರುವುದನ್ನು ಸರಿಪಡಿಸಬೇಕಿದೆ, ಸಾಕಷ್ಟು ಕೆಲಸ ಬಾಕಿ ಇದೆ ಎಂದರು.

ಕಳೆದ ಹತ್ತು ವರ್ಷಗಳ ಹಿಂದೆ ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣವಾಗುತ್ತದೆ ಎಂದರೆ ಯಾರು ನಂಬುತ್ತಿರಲಿಲ್ಲ. ಈಗ ಮೋದಿ ಸರ್ಕಾರದ ಅವಧಿಯಲ್ಲಿ ಅದಾಗಿದೆ. ಈಗ ಮಥುರಾ ಮತ್ತು ಕಾಶಿಯಲ್ಲಿ ಭವ್ಯ ನಿರ್ಮಾಣದ ಬಗ್ಗೆ ಜನರಲ್ಲಿ ನಂಬಿಕೆ ಇದೆ. 400 ಸ್ಥಾನಗಳು ಬಂದಲ್ಲಿ ಅದು ಕಾರ್ಯರೂಪಕ್ಕೆ ಬರಲಿದೆ ಎಂದರು.

ಕಾಂಗ್ರೆಸ್ ಆಡಳಿತದಲ್ಲಿ ಸಂಸತ್ತಿನಲ್ಲಿ ಪಾಕ್ ಆಕ್ರಮಿತ ಕಾಶ್ಮೀರ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ. ಆದರೆ ಕಳೆದೊಂದು ವಾರದಿಂದ ಗಮನಿಸಬಹುದು ಅಲ್ಲಿನ ಜನರು ಭಾರತ ತ್ರಿವರ್ಣ ಧ್ವಜ ಹಿಡಿದು ಭಾರತ ಸೇರಲು ಉತ್ಸುಕರಾಗಿದ್ದಾರೆ. ಈಗ ಶೀಘ್ರದಲ್ಲೇ ಪಿಒಕೆ ನಮ್ಮ ದೇಶದ ಭಾಗವಾಗಲಿದೆ 400 ಅಧಿಕ ಸೀಟುಗಳು ಬಂದಲ್ಲಿ ಪಿಒಕೆ ಕೂಡಾ ಭಾರತದ ಭಾಗವಾಗಲಿದೆ ಎಂದು ಹೇಳಿದರು.

# ಚೀನಾದ ಆಮದಿನ ಮೇಲೆ ಭಾರೀ ಸುಂಕ ವಿಧಿಸಿದ ಅಮೆರಿಕ

**ವಾಷಿಂಗ್ಟನ್:** ಚೀನಾದಿಂದ ಆಮದಾಗುವ ಬ್ಯಾಟರಿಗಳು, ವಿದ್ಯುತ್ಚಾಲಿತ ವಾಹನಗಳು, ಉಕ್ಕು, ಅಲ್ಯುಮಿನಿಯಂ ಮುಂತಾದ ವಸ್ತುಗಳ ಮೇಲೆ ಭಾರೀ ಆಮದು ಸುಂಕ ವಿಧಿಸುವುದಾಗಿ ಅಮೆರಿಕ ಅಧ್ಯಕ್ಷ ಜೋ ಬೈಡನ್ ಘೋಷಿಸಿದ್ದಾರೆ.

ಚೀನಾದಿಂದ ಆಮದಾಗುವ ವಿದ್ಯುತ್ ವಾಹನಗಳ ಮೇಲೆ 100%, ಸೆಮಿಕಂಡಕ್ಟರ್ ಗಳ ಮೇಲೆ 50% ಮತ್ತು ವಿದ್ಯುತ್ ವಾಹನಗಳ ಬ್ಯಾಟರಿಗಳ ಮೇಲೆ 25% ಸುಂಕ ವಿಧಿಸಲಾಗುವುದು.

ಇದು ಅನ್ಯಾಯದ ವ್ಯಾಪಾರ ಪದ್ಧತಿಗೆ ತಡೆಯೊಡ್ಡಿ ಅಮೆರಿಕದ ಪ್ರಜೆಗಳು ತಮಗೆ ಇಷ್ಟಬಂದ ಕಾರುಗಳನ್ನು ಖರೀದಿಸುವ ಅವಕಾಶವನ್ನು ಮುಂದುವರಿಸುತ್ತದೆ. ನಾನು ಚೀನಾದ ಜತೆ ನ್ಯಾಯಸಮ್ಮತ ಪೈಪೋಟಿ ಬಯಸುತ್ತೇನೆ, ಸಂಘರ್ಷವನ್ನಲ್ಲ. 21ನೇ ಶತಮಾನದ ಆರ್ಥಿಕ ಸ್ಪರ್ಧೆಯನ್ನು ಚೀನಾದ ವಿರುದ್ಧ ಗೆಲ್ಲಲು ನಾವು ಎಲ್ಲರಿಗಿಂತ ಬಲವಾದ ಸ್ಥಾನದಲ್ಲಿರುತ್ತೇವೆ. ಯಾಕೆಂದರೆ ನಾವು ಮತ್ತೆ ಅಮೆರಿಕಾದಲ್ಲಿ ಹೂಡಿಕೆ ಮಾಡುತ್ತಿದ್ದೇವೆ' ಎಂದು ಶ್ವೇತಭವನದಲ್ಲಿ ನಡೆಸಿದ ಸುದ್ದಿಗೋಷ್ಠಿಯಲ್ಲಿ ಬೈಡನ್ ಹೇಳಿದರು.

ಚೀನಾ ಸರಕಾರ ಉಕ್ಕು, ಅಲ್ಯುಮಿನಿಯಂ, ಸೆಮಿಕಂಡಕ್ಟರ್ ಗಳು, ವಿದ್ಯುತ್ ವಾಹನಗಳು, ಸೋಲಾರ್ ಪ್ಯಾನೆಲ್ಗಳು ಹಾಗೂ ಮಾಸ್ಕ್, ಕೈಗವಸು(ಗ್ಲೌಸ್) ಇತ್ಯಾದಿ ಅಗತ್ಯದ ಆರೋಗ್ಯ ಸಾಧನಗಳನ್ನು ಉತ್ಪಾದಿಸುವ ಸಂಸ್ಥೆಗಳಲ್ಲಿ ಹೂಡಿಕೆ ಮಾಡಿದೆ. ಈ ಉತ್ಪನ್ನಗಳ ಮೇಲೆ ಗಮನಾರ್ಹ ಪ್ರಮಾಣದ ಸಬ್ಸಿಡಿಯನ್ನೂ ಒದಗಿಸುತ್ತಿರುವುದರಿಂದ ಚೀನಾದ ಸಂಸ್ಥೆಗಳು ಜಾಗತಿಕ ಬೇಡಿಕೆಗಿಂತ ಹಲವು ಪಟ್ಟು ಹೆಚ್ಚು ಉತ್ಪಾದನೆ ಮಾಡುತ್ತವೆ. ಹೀಗಾಗಿ ಕಡಿಮೆ ಬೆಲೆಯಲ್ಲಿ ಈ ವಸ್ತುಗಳನ್ನು ಜಾಗತಿಕ ಮಾರುಕಟ್ಟೆಗೆ ಸುರಿಯಲಾಗುತ್ತದೆ.

# ಮೋದಿಯಂತಹ ನಾಯಕ ಬೇಕಿತ್ತು: ಪಾಕಿಸ್ತಾನ ಉದ್ಯಮಿ

**ಇಸ್ಲಾಮಾಬಾದ್:** ನಮಗೂ ಮೋದಿಯಂತಹ ಸ್ಟ್ರಿಕ್ ನಾಯಕ ಬೇಕಿತ್ತು ಎಂದು ಪಾಕಿಸ್ತಾನಿ ಮೂಲದ ಉದ್ಯಮಿ ಸಾಜಿದ್ ತರಾರ್ ಹೇಳಿಕೊಂಡಿದ್ದಾರೆ. ಮೋದಿಯಂತಹ ಪ್ರಭಾವಿ ಮತ್ತು ನೈಸರ್ಗಿಕವಾಗಿ ನಾಯಕತ್ವ ಗುಣವಿರುವ ಪ್ರಧಾನಿ ಬೇಕಿತ್ತು ಎಂದಿದ್ದಾರೆ. ಮೋದಿ ಜೀ ಪ್ರಭಾವಿ ಮತ್ತು ನಾಯಕತ್ವ ಗುಣವಿರುವ ವ್ಯಕ್ತಿ. ಅವರು ಕೇವಲ ಭಾರತಕ್ಕೆ ಮಾತ್ರವಲ್ಲ, ತಮ್ಮ ಸುತ್ತಮುತ್ತಲ ದೇಶಗಳಿಗೂ ಒಳಿತು ಮಾಡಿದರು. ಅಹಿತಕರ ಸನ್ನಿವೇಶದಲ್ಲೂ ಪಾಕಿಸ್ತಾನಕ್ಕೆ ಭೇಟಿ ಕೊಟ್ಟಿದ್ದರು. ಮೋದಿ ಜಿ ಸದ್ಯದಲ್ಲೇ ಪಾಕಿಸ್ತಾನ ಜೊತೆ ಮಾತುಕತೆ ಮತ್ತು ವಾಣಿಜ್ಯ ಸಂಬಂಧ ವೃದ್ಧಿಸುವ ನಿರೀಕ್ಷೆಯಿದೆ ಎಂದಿದ್ದಾರೆ. ಪಾಕಿಸ್ತಾನ ಶಾಂತಿಯುತವಾಗಿರುವುದು ಭಾರತಕ್ಕೂ ಒಳಿತು. ಮೋದಿಜೀ ಭಾರತದ ಮುಂದಿನ ಪ್ರಧಾನಿ ಎಂದು ಎಲ್ಲೆಡೆ ಹೇಳಲಾಗುತ್ತಿದೆ ಎಂದು ಮೋದಿಯವರನ್ನು ಹಾಡಿ ಹೊಗಳಿದ್ದಾರೆ. ಪಾಕಿಸ್ತಾನದಲ್ಲಿ ಈಗ ಹಣದುಬ್ಬರ ತಾಂಡವವಾಡುತ್ತಿದೆ. ಅಲ್ಲಿ ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿದೆ. ವಿಶ್ವ ಬ್ಯಾಂಕ್ ಕೂಡಾ ಸಾಲ ನೀಡಲು ಹಿಂದೇಟು ಹಾಕುತ್ತಿದೆ. ಹೀಗಿರುವಾಗ ಪಾಕ್ ಪ್ರಧಾನಿ ಪಾಕ್ ಆಕ್ರಮಿತ ಕಾಶ್ಮೀರಕ್ಕೆ 2000 ಕೋಟಿ ಅನುದಾನ ಘೋಷಿಸಿದ್ದಾರೆ. ಇದಕ್ಕೆಲ್ಲಾ ಹಣ ಎಲ್ಲಿಂದ ತರುತ್ತೀರಿ? ಪಾಕಿಸ್ತಾನದಲ್ಲಿ ಆರ್ಥಿಕ ವ್ಯವಸ್ಥೆ ಸುಧಾರಿಸಲು ತಳಮಟ್ಟದಲ್ಲಿ ಯಾವ ಕ್ರಮ ಕೈಗೊಳ್ಳಬೇಕು ಎಂದು ಚಿಂತನೆ ಮಾಡುತ್ತಿಲ್ಲ. ಎಲ್ಲವೂ ಭಯೋತ್ಪಾದನೆಯ ಕಪಿಮುಷ್ಟಿಯಲ್ಲಿದೆ. ಪಿಒಕೆಯಲ್ಲಿ ರಾಜಕೀಯ ಅಸ್ಥಿರತೆ ಉಂಟಾಗಿದೆ. ಇದೆಲ್ಲವನ್ನೂ ನಿಯಂತ್ರಿಸುವಂತಹ ಕಠಿಣ, ದಕ್ಷ ನಾಯಕನ ಅಗತ್ಯ ನಮಗಿದೆ ಎಂದು ತರಾರ್ ಹೇಳಿದ್ದಾರೆ.

# ದೀದಿಗೆ ಪಶ್ಚಿಮ ಬಂಗಾಳವನ್ನು 'ಮುಸ್ಲಿಂ ರಾಜ್ಯ' ಮಾಡುವ ಚಿಂತನೆ?



**ದೆಹಲಿ:** ಕೇಂದ್ರ ಸಚಿವ ಗಿರಿರಾಜ್ ಸಿಂಗ್ ಅವರು ಬುಧವಾರ ಮಮತಾ ಬ್ಯಾನರ್ಜಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಮಮತಾ ಪಶ್ಚಿಮ ಬಂಗಾಳವನ್ನು 'ಮುಸ್ಲಿಂ ರಾಜ್ಯ' ಮಾಡಲು ಚಿಂತಿಸುತ್ತಿದ್ದಾರೆ ಎಂದು ಆರೋಪ ಮಾಡಿದ್ದಾರೆ.

ಬಂಗಾಳವನ್ನು ಮುಸ್ಲಿಂ ರಾಜ್ಯವಾಗಬೇಕೆಂದು ಮಮತಾ ಬ್ಯಾನರ್ಜಿ ಬಯಸಿದ್ದಾರೆ. ಕಳೆದ ಚುನಾವಣೆಗಳಿಗೆ ಮುನ್ನ, ಅವರ ಸರ್ಕಾರದ ಸಚಿವರೊಬ್ಬರು ಪತ್ರಕರ್ತರಿಗೆ 'ಮಿನಿ-ಪಾಕಿಸ್ತಾನ' ಎಂದು ಕರೆಯುವ ಮಾರ್ಗದರ್ಶಕ ಪ್ರವಾಸವನ್ನು ನೀಡಿದರು. ಕೇಂದ್ರದಲ್ಲಿ ಮತ್ತೆ ಮತ ಚಲಾಯಿಸಿದರೆ, ನಾವು ರಾಷ್ಟ್ರೀಯ ನಾಗರಿಕರ ನೋಂದಣಿ, ಪೌರತ್ವ ತಿದ್ದುಪಡಿ ಕಾಯ್ದೆ ಮತ್ತು ಏಕರೂಪ ನಾಗರಿಕ ಸಂಹಿತೆ, ಜೊತೆಗೆ ಜನಸಂಖ್ಯೆ ನಿಯಂತ್ರಣದ ಕ್ರಮಗಳನ್ನು ಜಾರಿಗೊಳಿಸುತ್ತೇವೆ.

ಕಿಮ್ ಜಾಂಗ್ ಉನ್ ಅವರಂತಹ ಸರ್ವಾಧಿಕಾರವನ್ನು ನಾವು ಕೊನೆಗೊಳಿಸುತ್ತೇವೆ ಎಂದು ಹೇಳಿದ್ದಾರೆ. ಬಿಹಾರದ ಬೇಗುಸರಾಯ್ನಿಂದ ಸತತ ಎರಡನೇ ಬಾರಿಗೆ ಲೋಕಸಭೆಗೆ ಸ್ಪರ್ಧಿಸಲು ಬಯಸುತ್ತಿರುವ ಬಿಜೆಪಿ ನಾಯಕ, ವಿರೋಧ ಪಕ್ಷದ ಇಂಡಿಯಾ ಬ್ಲಾಕ್ ಸದಸ್ಯರು ದೇಶದ ಮೇಲೆ 'ಇಸ್ಲಾಮಿಕ್ ಆಡಳಿತ' ಜಾರಿಗೊಳಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಮಂಗಳವಾರ ಬಂಗಾಳದ ನಾಡಿಯಾ ಜಿಲ್ಲೆಯಲ್ಲಿ ರ್ಯಾಲಿಯನ್ನುದ್ದೇಶಿಸಿ ಮಾತನಾಡಿದ ಮಮತಾ ಬ್ಯಾನರ್ಜಿ, ಸಾರ್ವತ್ರಿಕ ಚುನಾವಣೆಯ ನಂತರ ನರೇಂದ್ರ ಮೋದಿ ಮತ್ತೆ ಅಧಿಕಾರಕ್ಕೆ ಬರುವುದಿಲ್ಲ ಎಂದು ಹೇಳಿದ್ದರು. ಲೋಕಸಭಾ ಚುನಾವಣೆಯಲ್ಲಿ ಮೋದಿ ಅಧಿಕಾರಕ್ಕೆ ಮರಳುವುದಿಲ್ಲ ಎಂಬುದು ಒಂದೇ ಗ್ಯಾರಂಟಿ. ಇಂಡಿಯಾ ಬಣ 295 ರಿಂದ 315 ಸ್ಥಾನಗಳನ್ನು ಪಡೆಯುತ್ತದೆ ಮತ್ತು ಬಿಜೆಪಿ ಗರಿಷ್ಠ 200 ಕ್ಕೆ ಸೀಮಿತವಾಗಲಿದೆ ಎಂದು ಅವರು ಹೇಳಿದರು.

# ಆಂಡ್ರಾಯ್ಡ್ ಮೊಬೈಲ್ ಅಪ್ಡೇಟ್ ಮಾಡುವಂತೆ ಕೇಂದ್ರ ಸರ್ಕಾರ ಎಚ್ಚರಿಕೆ

**ನವದೆಹಲಿ:** ಆಂಡ್ರಾಯ್ಡ್ ಮೊಬೈಲ್ ಆಪರೇಟಿಂಗ್ ಸಿಸ್ಟಮ್ನಲ್ಲಿ ತಾಂತ್ರಿಕ ಲೋಪಗಳು ಪತ್ತೆಯಾಗಿವೆ. ಹೀಗಾಗಿ, ದೇಶದ ಆಂಡ್ರಾಯ್ಡ್ ಬಳಕೆದಾರರು ಎಚ್ಚರಿಕೆಯಿಂದ ಇರಬೇಕು ಎಂದು ಭಾರತೀಯ ಕಂಪ್ಯೂಟರ್ ತುರ್ತು ಸ್ಪಂದನಾ ತಂಡ (ಸಿಇಆರ್ಟಿ) ಎಚ್ಚರಿಕೆ ನೀಡಿದೆ.

ತಾಂತ್ರಿಕ ಲೋಪದ ಹಿನ್ನಲೆ ಹ್ಯಾಕರ್ಸ್ಗಳು ಸ್ಮಾರ್ಟ್ಫೋನ್ಗನ್ನು ನಿಯಂತ್ರಿಸುತ್ತಾರೆ. ಮೊಬೈಲ್ನ್ನು ಹ್ಯಾಕ್ ಮಾಡುತ್ತಾರೆ. ಅಲ್ಲದೆ ಮೋಬೈಲ್ನ್ನು ಸಂಪೂರ್ಣವಾಗಿ ನಿಷ್ಕ್ರಿಯಗೊಳಿಸಬಹುದು ಎಂದು ಎಚ್ಚರಿಕೆ ನೀಡಿದ್ದಾರೆ. ಬಳಕೆದಾರರಿಗೆ ಅರಿವಿಲ್ಲದಂತೆ ಆಪ್ಲಿಕೇಶನ್ಗಳನ್ನು ಅಳವಡಿಸುವಂತೆ ಮಾಡಿ ಮೋಬೈಲ್ನಲ್ಲಿ ಇರುವ ಮಾಹಿತಿ ಪರಿಶೀಲಿಸಬಹುದು. ಈ ಹಿನ್ನಲೆಯಲ್ಲಿ ಸ್ಮಾರ್ಟ್ಫೋನ್ಗಳನ್ನು ಅಪ್ಡೇಟ್ ಮಾಡಬೇಕು ಎಂದು ಕೇಂದ್ರ ಸರ್ಕಾರ ಸಲಹೆ ನೀಡಿದೆ.



# 125 ಬಿಲಿಯನ್ ಡಾಲರ್ ಮೌಲ್ಯದ ಪಿಂಚಣಿ ಡೇಟಾ ಡಿಲೀಟ್: ಗೂಗಲ್



**ವಾಷಿಂಗ್ಟನ್:** ಈಗ ಎಲ್ಲವೂ ಡಿಜಿಟಲ್ಯುಗ ಬ್ಯಾಂಕ್ ಮಾಹಿತಿಯಿಂದ ಎಲ್ಲಾ ಡೇಟಾಗಳು ಈಗ ಆನ್ಲೈನ್ ಪ್ಲಾಟ್ಫಾರ್ಮ್ಗಳಲ್ಲಿ ಸಂಗ್ರಹಿಸಿಡಲಾಗುತ್ತದೆ. ಆದರೆ ಒಮ್ಮೆ ಇವು ಡಿಲೀಟ್ ಆದರೆ ಅಥವಾ ಸೋರಿಕೆಯಾದರೆ ಆಗುವ ಅನಾಹುತ ಅಷ್ಟಿಷ್ಟಲ್ಲ. ಇಂಥಲ್ಲೇ ಒಂದು ಘಟನೆ ನಡೆದಿದ್ದು ಗೂಗಲ್ (ರಠಠರಟಜ) ಅಚಾತುರ್ಯದಿಂದ 6 ಲಕ್ಷ ಪಿಂಚಣಿದಾರರ ಪಿಂಚಣಿ ಮಾಹಿತಿಯನ್ನು ಡಿಲೀಟ್ ಮಾಡಿದೆ. ಆಸ್ಟ್ರೇಲಿಯಾದ ಸರ್ಕಾರಿ ನೌಕರರಿಗೆ, ಪ್ರಾಧ್ಯಾಪಕರಿಗೆ ನೀಡಲಾಗುವ ಪಿಂಚಣಿಯನ್ನು ಯುನಿಸೂಪರ್ ಎಂಬ ಕಂಪನಿ ನಿರ್ವಹಿಸುತ್ತದೆ. ಇದು 6.2 ಲಕ್ಷ ಜನರ ಪಿಂಚಣಿಯನ್ನು ಹೊಂದಿದ್ದು ಸುಮಾರು 125 ಬಿಲಿಯನ್ ಡಾಲರ್ ಮೌಲ್ಯದ್ದಾಗಿದೆ. ಇತ್ತೀಚೆಗೆ ತನ್ನ ಕೆಲವು ಡೇಟಾಗಳನ್ನು ಗೂಗಲ್ ಕ್ಲೌಡ್ಗೆ ವರ್ಗಾಯಿಸಿದೆ, ಈ ವೇಳೆ ಈ ದುರ್ಘಟನೆ ನಡೆದಿದ್ದು ಗೂಗಲ್ ಮತ್ತು ಯುನಿಸೂಪರ್ ಜಂಟಿಯಾಗಿ ಕ್ಷಮೆಯಾಚಿಸಿದೆ.

ಈ ಬಗ್ಗೆ ಮಾಹಿತಿ ನೀಡಿದ ಸಂಸ್ಥೆಗಳು ಇದು ಸೈಬರ್ ದಾಳಿಯಲ್ಲ, ಯಾರ ಮಾಹಿತಿಯೂ ಸೋರಿಕೆಯಾಗಿಲ್ಲ ಆತಂಕ ಬೇಡ ಎಲ್ಲವನ್ನೂ ಸರಿ ಮಾಡುತ್ತೇವ ಎಂದು ಹೇಳಿದೆ. ಈಗಾಗಲೇ ಮಾಹಿತಿಗಳು ಗೋಚರಿಸಲು ಆರಂಭವಾಗಿದ್ದು ಕೆಲ ಅಪ್ಡೇಟ್ಗಳು ಬಾಕಿ ಇವೆ ಶೀಘ್ರದಲ್ಲೇ ಎಲ್ಲವೂ ಸರಿಯಾಗಲಿದೆ ಎಂದು ಹೇಳಿದೆ. ಈ ಘಟನೆ ಬಳಿಕ ಯುನಿಸೂಪರ್ ಗೂಗಲ್ ಜೊತೆಗಿನ ಒಪ್ಪಂದವನ್ನು ರದ್ದುಗೊಳಿಸಿದೆ.

# ಇಂಡೋನೇಶ್ಯಾದಲ್ಲಿ ಪ್ರವಾಹ: ಮೃತರ ಸಂಖ್ಯೆ 58ಕ್ಕೆ ಏರಿಕೆ

**ಜಕಾರ್ತ:** ಇಂಡೋನೇಶ್ಯಾದ ಪಶ್ಚಿಮ ಸುಮಾತ್ರಾ ಪ್ರಾಂತದಲ್ಲಿ ಕಳೆದ ವಾರಾಂತ್ಯದಿಂದ ಸುರಿಯುತ್ತಿರುವ ಮಳೆಯಿಂದಾಗಿ ಪ್ರವಾಹ ಮತ್ತು ಭೂಕುಸಿತಕ್ಕೆ ಸಿಲುಕಿ ಮೃತಪಟ್ಟವರ ಸಂಖ್ಯೆ 58ಕ್ಕೆ ಏರಿದೆ. 35 ಮಂದಿ ಇನ್ನೂ ನಾಪತ್ತೆಯಾಗಿದ್ದು ಶೋಧ ಕಾರ್ಯಾಚರಣೆ ಮುಂದುವರಿದಿದೆ ಎಂದು ವಿಪತ್ತು ನಿರ್ವಹಣಾ ಇಲಾಖೆಯ ಅಧಿಕಾರಿಗಳು ಹೇಳಿದ್ದಾರೆ. ಶನಿವಾರದಿಂದ ಸುರಿಯುತ್ತಿರುವ ಮಳೆಯಿಂದಾಗಿ ನದಿಗಳ ನೀರು ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು ಪ್ರವಾಹದ ಸಮಸ್ಯೆ ಎದುರಾಗಿದೆ. ಭೂಕುಸಿತದಿಂದ ಕೆಸರು ಮಣ್ಣು ಹಾಗೂ ಪಶ್ಚಿಮ ಸುಮಾತ್ರಾದ ಮೂರು ಜಿಲ್ಲೆಗಳಲ್ಲಿ ಮರಾಪಿ ಪರ್ವತದಿಂದ ಸಿಡಿದ ಜ್ವಾಲಾಮುಖಿಯ ಬಿಸಿಬೂದಿ ಪ್ರವಾಹದ ನೀರಿನಲ್ಲಿ ಸೇರಿಕೊಂಡು ಪ್ರಮುಖ ರಸ್ತೆಗಳಲ್ಲಿ ತ್ಯಾಜ್ಯಗಳು ರಾಶಿಬಿದ್ದಿವೆ. ತನಾಹ್ ದತಾರ್ ಜಿಲ್ಲೆಯಲ್ಲಿ ಹಲವು ಸೇತುವೆ, ಮನೆಗಳು ಕುಸಿದಿಬಿದ್ದಿದ್ದು ರಸ್ತೆ ಸಂಚಾರ ಅಸ್ತವ್ಯಸ್ತಗೊಂಡಿದೆ. ರಸ್ತೆಗಳಲ್ಲಿ ರಾಶಿಬಿದ್ದಿರುವ ಕಲ್ಲು ಮಣ್ಣು, ಮರಗಳು ಹಾಗೂ ತ್ಯಾಜ್ಯವನ್ನು ತೆರವುಗೊಳಿಸಿ ಸಂಚಾರ ವ್ಯವಸ್ಥೆ ಸುಗಮಗೊಳಿಸಲು ಪ್ರಮುಖ ಆದ್ಯತೆ ನೀಡಿರುವುದಾಗಿ ಅಧಿಕಾರಿಗಳು ಹೇಳಿದ್ದಾರೆ. ಕನಿಷ್ಠ 249 ಮನೆಗಳು, 556 ಎಕರೆ ಕೃಷಿ ಪ್ರದೇಶ, 19 ಸೇತುವೆಗಳು ಹಾಗೂ ಪ್ರಮುಖ ರಸ್ತೆಗಳು ಹಾನಿಗೊಂಡಿವೆ. ಮುಂದಿನ ವಾರ ಪಶ್ಚಿಮ ಸುಮಾತ್ರಾ ಪ್ರಾಂತದಲ್ಲಿ ಮತ್ತೆ ಮಳೆಸುರಿಯಬಹುದು ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ವಿಜಯ್ ದೇವರಕೊಂಡಗೆ ಸಾಯಿ ಪಲ್ಲವಿ ನಾಯಕಿ



'ಪ್ರೇಮಂ' ಬೆಡಗಿ ಸಾಯಿ ಪಲ್ಲವಿ ಇದೀಗ ಬಾಲಿವುಡ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. 'ರಾಮಾಯಣ' ಸಿನಿಮಾದ ಶೂಟಿಂಗ್ ತೊಡಗಿಸಿಕೊಂಡಿರುವ ಸಾಯಿ ಪಲ್ಲವಿ ಈಗ ತೆಲುಗಿನ ಹೊಸ ಚಿತ್ರಕ್ಕೆ ಗ್ರೀನ್ ಸಿಗ್ನಲ್ ನೀಡಿದ್ದಾರೆ. ರೌಡಿ ಬಾಯ್‌ಗೆ ಸಾಯಿ ಪಲ್ಲವಿ ನಾಯಕಿಯಾಗಲು ಸಜ್ಜಾಗಿದ್ದಾರೆ.

ಖುಷಿ, ಫ್ಯಾಮಿಲಿ ಸ್ಟಾರ್ ನಟ ವಿಜಯ್ ದೇವರಕೊಂಡ ನಟನೆಯ ಹೊಸ ಚಿತ್ರಕ್ಕೆ ಸಾಯಿ ಪಲ್ಲವಿ ನಾಯಕಿ ಎಂದು ಸುದ್ದಿ ಹರಿದಾಡುತ್ತಿದೆ. ವಿಜಯ್ ಜೊತೆ ಸಾಯಿ ಪಲ್ಲವಿ ಜೋಡಿಯಾಗಿ ತೋರಿಸಲು ಡೈರೆಕ್ಟರ್ ರವಿ ಕಿರಣ್ ಕೋಲಾ ಪ್ಲ್ಯಾನ್ ಮಾಡಿದ್ದಾರೆ ಎನ್ನಲಾಗಿದೆ.

ಒಂದು ವಿಭಿನ್ನ ಕಥೆಯನ್ನು ತೋರಿಸಲು ರವಿಕಿರಣ್ ಹೊರಟಿದ್ದಾರೆ. ವಿಜಯ್‌ಗೆ ಸಾಯಿ ಪಲ್ಲವಿ ಸೂಕ್ತ ನಾಯಕಿ ಎಂದು ಚಿತ್ರತಂಡ ಯೋಚಿಸಿ ನಟಿಯನ್ನು ಸಂಪರ್ಕಿಸಿದೆ. ಸಾಯಿ ಪಲ್ಲವಿ ಕೂಡ ಕಥೆ ಕೇಳಿ ಓಕೆ ಎಂದಿದ್ದಾರೆ ಎನ್ನಲಾಗಿದೆ. ಆದರೆ ಈ ಬಗ್ಗೆ ಚಿತ್ರತಂಡ ಅಧಿಕೃತ ಮಾಹಿತಿ ನೀಡಿಲ್ಲ.

ಇನ್ನೂ ಆಮೀರ್ ಖಾನ್ ಪುತ್ರನಿಗೆ ನಾಯಕಿಯಾಗಿ ಬಾಲಿವುಡ್‌ಗೆ ಸಾಯಿ ಪಲ್ಲವಿ ಪಾದಾರ್ಪಣೆ ಮಾಡುತ್ತಿದ್ದಾರೆ. ಯಶ್ ಸಹ-ನಿರ್ಮಾಣದ 'ರಾಮಾಯಣ' ಚಿತ್ರದಲ್ಲಿ ಸೀತೆಯಾಗಿ ನಟಿಸುತ್ತಿದ್ದಾರೆ. ನಾಗಚೈತನ್ಯ ಜೊತೆ ತಾಂಡೇಲ್ ಸಿನಿಮಾ ಮಾಡಿ ಮುಗಿಸಿದ್ದಾರೆ. ಹೀಗೆ ಹಲವು ಪ್ರಾಜೆಕ್ಟ್‌ಗಳು ನಟಿಯ ಕೈಯಲ್ಲಿವೆ.

# ಸ್ವಪ್ನಮಂಟಪ: ಶೂಟಿಂಗ್ ಮುಗಿಸಿದ ಬರಗೂರು ರಾಮಚಂದ್ರಪ್ಪ





ಮೈಸೂರಿನ ಬಾಬುನಾಯ್ಕ್ ಅವರು ತಮ್ಮ ಮಲೈಮಹದೇಶ್ವರ ಎಂಟರ್ ಪ್ರೈಸಸ್ ಸಂಸ್ಥೆಯಿಂದ 'ಸ್ವಪ್ನಮಂಟಪ' ಎಂಬ ಕನ್ನಡ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ಈ ಚಿತ್ರವು ಬರಗೂರು ರಾಮಚಂದ್ರಪ್ಪನವರ ಅದೇ ಹೆಸರಿನ ಕಾದಂಬರಿಯನ್ನು ಆಧರಿಸಿದೆ. ಬರಗೂರು ರಾಮಚಂದ್ರಪ್ಪನವರೇ ಚಿತ್ರಕತೆ, ಸಂಭಾಷಣೆ, ಗೀತರಚನೆ ಮಾಡಿ ನಿರ್ದೇಶನ ಮಾಡಿದ್ದಾರೆ. 'ಸ್ವಪ್ನಮಂಟಪ' ಚಿತ್ರವು ಈಗಾಗಲೇ ಚಿತ್ರೀಕರಣ ಮತ್ತು ಡಬ್ಬಿಂಗ್ ಕೆಲಸಗಳನ್ನು ಮುಗಿಸಿದೆ. ಕನಕಪುರ ರಸ್ತೆಯ ಒಂದು ಹಳ್ಳಿಯಲ್ಲಿ ಚಿತ್ರೀಕರಣವನ್ನು ಮಾಡಲಾಗಿದೆ. ಹೊಸಮನೆ ಮೂರ್ತಿಯವರು ಈ ಸೆಟ್ ನಿರ್ಮಾಣ ಮಾಡಿದ್ದಾರೆ.

'ಸ್ವಪ್ನಮಂಟಪ' ಚಿತ್ರವು ಪಾರಂಪರಿಕ ಸ್ಥಳಗಳ ರಕ್ಷಣೆಯನ್ನು ಪ್ರತಿಪಾದಿಸುವ ಕಥಾವಸ್ತುವನ್ನು ಒಳಗೊಂಡಿದೆ. ಒಂದು ಹಳ್ಳಿಯಲ್ಲಿ ರಾಜನೊಬ್ಬ ನಿರ್ಮಿಸಿದ ಸ್ವಪ್ನಮಂಟಪವನ್ನು ಕೆಡವಿ ಹಾಕುವ ಪ್ರಯತ್ನವನ್ನು ಕೆಲವರು ಮಾಡಿದಾಗ , ಕಥಾನಾಯಕ ಮತ್ತು ನಾಯಕಿ ಜನರನ್ನು ಸಂಘಟಿಸಿ ಸ್ವಪ್ನಮಂಟಪವನ್ನು ಉಳಿಸಿ ಸರ್ಕಾರದ ಅಧಿಕೃತ ಸ್ಮಾರಕದ ಪಟ್ಟಿಗೆ ಸೇರಿಸುವ ಮೂಲಕ ಚಾರಿತ್ರಿಕ ಸ್ಮಾರಕಗಳ ಪರಂಪರೆಯನ್ನು ಎತ್ತಿ ಹಿಡಿಯುತ್ತಾರೆ. ಈ ಸಾಮಾಜಿಕ ಚಿತ್ರದಲ್ಲಿ ಸ್ವಪ್ನಮಂಟಪವನ್ನು ನಿರ್ಮಾಣ ಮಾಡಿದ ರಾಜ-ರಾಣಿ ಯರ ಕಥನವನ್ನೂ ಹಿನ್ನೋಟ ತಂತ್ರದಲ್ಲಿ ಸೇರಿಸಿರುವುದು ಒಂದು ವಿಶೇಷ.

ನಾಯಕ ಮತ್ತು ನಾಯಕಿಯ ಪಾತ್ರದಲ್ಲಿ ಕ್ರಮವಾಗಿ ವಿಜಯ ರಾಘವೇಂದ್ರ ಮತ್ತು ರಂಜಿನಿ ರಾಘವನ್ ಅಭಿನಯಿಸಿದ್ದಾರೆ. ಇವರಿಬ್ಬರೂ ದ್ವಿಪಾತ್ರಗಳಲ್ಲಿ ಅಭಿನಯಿಸಿರುವುದು ಸಿನಿಮಾದ ಒಂದು ವಿಶೇಷ. ಜೊತೆಗೆ ಸುಂದರರಾಜ್, ಶೋಭಾರಾಘವೇಂದ್ರ, ರಜನಿ, ಮಹಾಲಕ್ಷ್ಮೀ, ಸುಂದರರಾಜ ಅರಸು, ರಾಜಪ್ಪದಳವಾಯಿ, ಅಂಬರೀಶ ಸಾರಂಗಿ, ಮೈಸೂರು ಮಂಜುಳ, ಉಮ್ಮತ್ತೂರು ಬಸವರಾಜು, ವೆಂಕಟರಾಜು, ಶಿವಲಿಂಗಪ್ರಸಾದ್, ಭಾರತಿರಮೇಶ್, ಗುಂಡಿ ರಮೇಶ್ ಮುಂತಾದವರು ತಾರಾಗಣದಲ್ಲಿ ಇದ್ದಾರೆ.

ಬಾಬುನಾಯ್ಕ್ ನಿರ್ಮಾಣ ಮತ್ತು ಬರಗೂರರ ನಿರ್ದೇಶನದ ಈ ಚಿತ್ರವು ನಾಗರಾಜ ಆದವಾನಿ ಛಾಯಗ್ರಹಣ, ಸುರೇಶ್ ಅರಸು ಸಂಕಲನ, ಶಮಿತಾ ಮಲ್ನಾಡ್ ಸಂಗೀತ ನಿರ್ದೇಶನ ಮತ್ತು ತ್ರಿಭುವನ್ ನೃತ್ಯ ಸಂಯೋಜನೆಯನ್ನು ಒಳಗೊಂಡಿದೆ. ನಟರಾಜ್ ಶಿವು ಮತ್ತು ಪ್ರವೀಣ್ ಸಹನಿರ್ದೇಶಕರಾಗಿದ್ದಾರೆ.

# ಸಲ್ಮಾನ್ ಚಿತ್ರದಲ್ಲಿ ನಟಿಸಲು ದುಬಾರಿ ಸಂಭಾವನೆ



ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣಗೆ ಅದೃಷ್ಟ ಖುಲಾಯಿಸಿದೆ. ಪುಷ್ಪ, ಅನಿಮಲ್ ಚಿತ್ರದ ಸಕ್ಸಸ್ ನಂತರ ರಶ್ಮಿಕಾಗೆ ಬಾಲಿವುಡ್ ಬಾಗಿಲು ತೆರೆದಿದೆ. 'ಸಿಖಂದರ್' ಚಿತ್ರದಲ್ಲಿ ಸಲ್ಮಾನ್ ಖಾನ್ ಜೊತೆ ಡ್ಯುಯೆಟ್ ಹಾಡಲು ದುಬಾರಿಯನ್ನು ನಟಿ ಕೇಳಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ.

'ಸಿಖಂದರ್' ಸಿನಿಮಾ ಘೋಷಣೆಯ ನಂತರ ಸಲ್ಮಾನ್ ಖಾನ್‌ಗೆ 58 ವರ್ಷ, ರಶ್ಮಿಕಾಗೆ 28 ವರ್ಷ ಎಂದು ವಯಸ್ಸಿನ ಅಂತರದ ಬಗ್ಗೆ ಸಿಕ್ಕಾಪಟ್ಟೆ ಟ್ರೋಲ್ ಆಗಿತ್ತು. ಈಗ ರಶ್ಮಿಕಾ ಸಂಭಾವನೆ ಕುರಿತು ಭಾರೀ ಚರ್ಚೆ ಶುರುವಾಗಿದೆ. ಬೇಡಿಕೆಯ ನಟಿಯಾಗಿರುವ ರಶ್ಮಿಕಾ ಈಗ 'ಸಿಖಂದರ್' ಚಿತ್ರಕ್ಕೆ 4 ಕೋಟಿ ರೂ. ಸಂಭಾವನೆ ಚಾರ್ಜ್ ಮಾಡಿದ್ದಾರೆ ಎನ್ನಲಾಗಿದೆ.

ತಮಿಳಿನ ಸೂಪರ್ ಹಿಟ್ ನಿರ್ದೇಶಕ ಮುರುಗದಾಸ್ ಜೊತೆ ಸಲ್ಮಾನ್ ಸಿನಿಮಾ ಮಾಡುವ ಬಗ್ಗೆ ಇತ್ತೀಚೆಗೆ ಅನೌನ್ಸ್ ಆಗಿತ್ತು. 'ಸಿಖಂದರ್' ಎಂಬ ಆಕ್ಷನ್ ಕಥೆಗೆ ಸಲ್ಮಾನ್ ಖಾನ್ ಕೈಜೋಡಿಸಿದ್ದಾರೆ. ನಮ್ಮ ಸಿನಿಮಾಗೆ ರಶ್ಮಿಕಾನೇ ಸೂಕ್ತ ನಾಯಕಿ ಅಂತ ಶ್ರೀವಲ್ಲಿಗೆ ಮಣೆ ಹಾಕಿದ್ದಾರೆ.

ಅಂದಹಾಗೆ, ಸಿನಿಮಾದ ಕಥೆ, ತಮ್ಮ ಪಾತ್ರಕ್ಕೆ ಕೊಟ್ಟಿರುವ ಪ್ರಾಮುಖ್ಯತೆ ನೋಡಿ ರಶ್ಮಿಕಾಗೂ ಇಷ್ಟವಾಗಿ ಚಿತ್ರತಂಡಕ್ಕೆ ಸಾಥ್ ನೀಡಿದ್ದಾರೆ. ನೀವೆಲ್ಲರೂ ನನ್ನ ಮುಂದಿನ ಚಿತ್ರದ ಬಗ್ಗೆ ಅಪ್‌ಡೇಟ್ ಅನ್ನು ಕೇಳುತ್ತಿದ್ರಿ. ಇದೀಗ ಸಿಖಂದರ್ ಚಿತ್ರತಂಡವನ್ನು ಸೇರಿಕೊಳ್ಳುತ್ತಿರುವ ಬಗ್ಗೆ ಖುಷಿಯಿದೆ ಎಂದು ಸೋಷಿಯಲ್ ಮೀಡಿಯಾದಲ್ಲಿ ನಟಿ ಸಂತಸ ವ್ಯಕ್ತಪಡಿಸಿದ್ದರು.

## ಆಟಕ್ಕುಂಟು ಲೆಕ್ಕಕ್ಕಿಲ್ಲದ ಪಂದ್ಯದಲ್ಲಿ ಗೆದ್ದು ಬೀಗಿದ ಪಂಜಾಬ್

# ಕಿಂಗ್ಸ್‌ಗೆ 5 ವಿಕೆಟ್‌ಗಳ ಜಯ!




ಸ್ಯಾಮ್ ಕರ್ರನ್ ಆಲ್‌ರೌಂಡ್ ಆಟ, ಸಂಘಟಿತ ಬೌಲಿಂಗ್ ದಾಳಿ ನೆರವಿನಿಂದ ಪಂಜಾಬ್ ಕಿಂಗ್ಸ್ ರಾಜಸ್ಥಾನ್ ರಾಯಲ್ಸ್ ವಿರುದ್ಧ 5 ವಿಕೆಟ್‌ಗಳ ಜಯ ಸಾಧಿಸಿದೆ. ಈಗಾಗಲೇ ಪ್ಲೇ ಆಫ್‌ನಿಂದ ಹೊರಬಿದ್ದಿರುವ ಪಂಜಾಬ್ ಕಿಂಗ್ಸ್ ಆಟಕ್ಕುಂಟು ಲೆಕ್ಕಕ್ಕಿಲ್ಲದ ಪಂದ್ಯದಲ್ಲಿ ರೋಷಾವೇಶ ಮೆರೆದಿದೆ.

ಇಲ್ಲಿನ ಬರ್ಸಪರ ಕ್ರೀಡಾಂಗಣದಲ್ಲಿ ಇದೀಗ ನಡೆದ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ್ ರಾಯಲ್ಸ್ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ ಕೇವಲ 144 ರನ್ ಗಳನ್ನ ಗಳಿಸಿತ್ತು. ಈ ಗುರಿ ಬೆನ್ನತ್ತಿದ ಪಂಜಾಬ್ ಕಿಂಗ್ಸ್ 18.5 ಓವರ್‌ಗಳಲ್ಲೇ 5 ವಿಕೆಟ್ ನಷ್ಟಕ್ಕೆ 145 ರನ್ ಗಳಿಸಿ ಗೆಲುವು ಸಾಧಿಸಿತು.

ಅಲ್ಪ ಮೊತ್ತದ ಗುರಿ ಬೆನ್ನಟ್ಟಿದ ಪಂಜಾಬ್ ಕಿಂಗ್ಸ್ ಸಹ ಆರಂಭದಲ್ಲೇ ಪ್ರಮುಖ ವಿಕೆಟ್ ಕಳೆದುಕೊಂಡು ತೀವ್ರ ಸಂಕಷ್ಟಕ್ಕೀಡಾಯಿತು. ಹಿಂದಿನ ಪಂದ್ಯಗಳಲ್ಲಿ ಅಬ್ಬರಿಸಿದ್ದ ಜಾನಿ ಬೈರ್‌ಸ್ಟೋವ್, ಪ್ರಭ್ ಸಿಮ್ರನ್ ಸಿಂಗ್, ರೀಲಿ ರುಸ್ಸೋ, ಶಶಾಂಕ್ ಸಿಂಗ್ ಬ್ಯಾಟಿಂಗ್‌ನಲ್ಲಿ ಕೈಕೊಟ್ಟರು.

**ಕರ್ರನ್ ಆಲ್‌ರೌಂಡ್ ಆಟ:** ಮಾರಕ ಬೌಲಿಂಗ್ ದಾಳಿಯಲ್ಲಿ 2 ವಿಕೆಟ್ ಕಿತ್ತಿದ್ದ ನಾಯಕ ಸ್ಯಾಮ್ ಕರ್ರನ್ ಬ್ಯಾಟಿಂಗ್‌ನಲ್ಲೂ ಅಬ್ಬರಿಸಿದರು. 41 ಎಸೆತಗಳಲ್ಲಿ 63 ರನ್ (3 ಸಿಕ್ಸರ್, 5 ಬೌಂಡರಿ) ಬಾರಿಸುವ ಮೂಲಕ ತಂಡಕ್ಕೆ ಗೆಲುವು ತಂದುಕೊಟ್ಟರು. ಇದರೊಂದಿಗೆ ಜಿತೇಶ್ ಶರ್ಮಾ 22 ರನ್, ಅಶುತೋಷ್ ಶರ್ಮಾ 17 ರನ್, ಪ್ರಭ್ ಸಿಮ್ರನ್ ಸಿಂಗ್ 6, ಜಾನಿ ಬೈರ್‌ಸ್ಟೋವ್ 14 ರನ್, ರೀಲಿ ರೊಸ್ಸೊ 22 ರನ್ ಗಳಿಸಿದರೆ, ಶಶಾಂಕ್ ಸಿಂಗ್ ಶೂನ್ಯ ಸುತ್ತಿದರು.

ಇದಕ್ಕೂ ಮುನ್ನ ಬ್ಯಾಟಿಂಗ್ ಮಾಡಿದ್ದ ರಾಜಸ್ಥಾನ್ ಕಳಪೆ ಪ್ರದರ್ಶನವನ್ನೇ ನೀಡಿತ್ತು. ಅಗ್ರ ಕ್ರಮಾಂಕದ ಬ್ಯಾಟರ್‌ಗಳು ಅಧಿಕ ರನ್ ಗಳಿಸದೇ ಕೈಕೊಟ್ಟರು. ರಾಜಸ್ಥಾನ್ ರಾಯಲ್ಸ್ ಪರ ರಿಯಾನ್ ಪರಾಗ್ 48 ರನ್ (34 ಎಸೆತ, 6 ಬೌಂಡರಿ), ಆರ್. ಅಶ್ವಿನ್ 28 ರನ್ ಗಳಿಸಿದ್ದು ಬಿಟ್ಟರೆ ಇನ್ನುಳಿದ ಬ್ಯಾಟರ್‌ಗಳು ಕ್ರೀಸ್‌ನಲ್ಲಿ ಹೆಚ್ಚು ಹೊತ್ತು ಉಳಿಯಲೇ ಇಲ್ಲ.

ಯಶಸ್ವಿ ಜೈಸ್ವಾಲ್ ಮೊದಲ ಓವರ್‌ನಲ್ಲೇ 4 ರನ್ ಗಳಿಸಿ ಪೆವಿಲಿಯನ್ ಸೇರಿಕೊಂಡರು. ಟಾಮ್ ಕೊಹ್ಲರ್-ಕ್ಯಾಡ್ಮೋರ್ ಮತ್ತು ಸಂಜು ಸ್ಯಾಮ್ಸನ್ ತಲಾ 18 ರನ್, ಟ್ರೆಂಟ್ ಬೋಲ್ಟ್ 12 ರನ್ ಗಳಿಸಿದರು. ಪಂಜಾಬ್ ಪರ ಸ್ಯಾಮ್ ಕರ್ರನ್, ಹರ್ಷಲ್ ಪಟೇಲ್, ರಾಹುಲ್ ಚಹಾರ್ ತಲಾ ಎರಡು ವಿಕೆಟ್ ಕಿತ್ತರೆ, ಅರ್ಷ್‌ದೀಪ್ ಸಿಂಗ್, ನಥಾನ್ ಎಲ್ಲಿಸ್ ತಲಾ ಒಂದೊಂದು ವಿಕೆಟ್ ಪಡೆದರು.

# ಬಹುಮತ ಸರ್ಕಾರವನ್ನ ಅಭದ್ರ ಮಾಡಲ್ಲ, ಆದ್ರೆ ಸುಮ್ಮನೆ ಕೂರಲ್ಲ



**ಬೆಂಗಳೂರು:** ಕರ್ನಾಟಕ ಕಾಂಗ್ರೆಸ್ ಸರ್ಕಾರವನ್ನು ಅಲುಗಾಡಿಸುವ ಬಗ್ಗೆ ಮಹಾರಾಷ್ಟ್ರ ಸಿಎಂ ಏಕನಾಥ್ ಶಿಂಧೆ ಆಡಿರುವ ಮಾತುಗಳು ರಾಜ್ಯ ರಾಜಕಾರಣದಲ್ಲಿ ಭಾರೀ ಚರ್ಚೆಗೆ ಗ್ರಾಸವಾಗಿದೆ. ಇನ್ನು ಈ ಬಗ್ಗೆ ಕರ್ನಾಟಕ ಬಿಜೆಪಿ ಪ್ರಧಾನ ಕಾರ್ಯದರ್ಶಿ, ಶಾಸಕ ಸುನಿಲ್ ಕುಮಾರ್ ಪ್ರತಿಕ್ರಿಯಿಸಿ, ಬಹುಮತ ಇರುವ ಸರ್ಕಾರವನ್ನ ಬಿಜೆಪಿ ಅಭದ್ರ ಮಾಡಲ್ಲ. ಆದರೆ, ಕಾಂಗ್ರೆಸ್ ನಾಯಕತ್ವದಲ್ಲಿನ ಗೊಂದಲದ ಭಾರಕ್ಕೆ ಅವರೇ ಕುಸಿದು ಬಿದ್ದರೆ ಆಮೇಲೆ ನಾವು ನೋಡುತ್ತೇವೆ. ನಾವು ಯಾವುದೇ ಕಾರಣಕ್ಕೂ ಸರ್ಕಾರ ಅಭದ್ರ ಮಾಡಲ್ಲ ಎಂದು ಸ್ಪಷ್ಟಪಡಿಸಿದರು.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಸುನಿಲ್ ಕುಮಾರ್, ಸಿದ್ದರಾಮಯ್ಯ ವಿರುದ್ಧ ಬಹಳ ಶಾಸಕರು ಮಾತಾಡುತ್ತಿದ್ದಾರೆ. ಡಿಕೆ ಶಿವಕುಮಾರ್ ಸಿಎಂ ಆಗಬೇಕೆಂದು ಅವರ ಶಾಸಕರೇ ಮಾತನಾಡುತ್ತಿದ್ದಾರೆ. ಯಾರ ಭಾರದಿಂದ ಸರ್ಕಾರ ಕುಸಿಯುತ್ತೋ ನೋಡೋಣ. ಸರ್ಕಾರ ಡಿಸಿಎಂ ಡಿಕೆ ಅವರ ಭಾರದಿಂದ ಕುಸಿಯುತ್ತೋ? ಸಿಎಂ ಭಾರದಿಂದ ಕುಸಿಯುತ್ತೋ ಬಿಜೆಪಿ ಕಾದು ನೋಡುತ್ತೆ. ಸರ್ಕಾರ ಅದರದ್ದೇ ಭಾರದಿಂದ ಕುಸಿದ್ರೆ, ಸುಮ್ಮನೆ ಇರಬೇಕಾ? ವಿಪಕ್ಷವಾಗಿ ನಾವು ಸುಮ್ಮನೆ ಕುಳಿತುಕೊಂಡಿರಲು ಆಗುತ್ತಾ? ಎಂದು ಹೇಳಿದರು. ಈ ಮೂಲಕ ಪರೋಕ್ಷವಾಗಿ ಬಿಜೆಪಿ ಸರ್ಕಾರ ರಚನೆ ಮಾಡಲು ಪ್ರಯತ್ನಿಸುತ್ತೆ ಎನ್ನುವ ಅರ್ಥದಲ್ಲಿ ಹೇಳಿದರು.

ಇನ್ನು ಇದೇ ವೇಳೆ ಸರ್ಕಾರ ಆಡಳಿತದ ಬಗ್ಗೆ ಮಾತನಾಡಿದ ಸುನಿಲ್ ಕುಮಾರ್, ಕಾಂಗ್ರೆಸ್ ಸರ್ಕಾರ ಬಂದು ಒಂದು ವರ್ಷವಾದ್ರೂ ಅಭಿವೃದ್ಧಿ ಶೂನ್ಯ. ಯಾವ ಯೋಜನೆಗಳಿಗೆ ಎಷ್ಟು ಅನುದಾನವೆಂದು ಬಿಡುಗಡೆ ಮಾಡಲಿ. ಶಾಸಕರು 1 ವರ್ಷದಿಂದ ಒಂದೂ ಗುದ್ದಲಿ ಪೂಜೆ ಮಾಡಲು ಆಗಿಲ್ಲ. ಇಡೀ ಸಚಿವ ಸಂಪುಟವೇ ಅಸಮರ್ಥ ಸಂಪುಟ. ಸಚಿವರ ಮೇಲೆ ಹಿಡಿತ ಇಲ್ಲದ ಸಿಎಂ ಆಡಳಿತ ನಡೆಸುತ್ತಿದ್ದಾರೆ ಎಂದು ಕಿಡಿಕಾರಿದರು.

ಕಾನೂನು ಸುವ್ಯವಸ್ಥೆ ಕಾಪಾಡಲು ಗೃಹ ಸಚಿವರು ಅಸಮರ್ಥರು. ಬ್ರ್ಯಾಂಡ್ ಬೆಂಗಳೂರು ಕೂಡ ಈಗ ದಿಕ್ಕೆಟ್ಟ ಬೆಂಗಳೂರು ಆಗಿದೆ. ಜನಪ್ರತಿನಿಧಿಗಳಿಗೆ ಅಪಮಾನವಾಗುವಂತಹ ರೀತಿ ಆಡಳಿತ ನಡೆಯುತ್ತಿದೆ. ಇದರ ವಿರುದ್ಧ ಜನಾಂದೋಲನವನ್ನು ಬಿಜೆಪಿ ಆರಂಭ ಮಾಡುತ್ತದೆ. ಗ್ಯಾರಂಟಿ ಗುಂಗಿನಲ್ಲೇ ಇರದೇ ಜನರ ನಿರೀಕ್ಷೆಯಂತೆ ಕೆಲಸ ಮಾಡಿ ಎಂದು ಸರ್ಕಾರಕ್ಕೆ ಸಲಹೆ ನೀಡಿದರು.

**ಸರಕಾರಿ ನೌಕರರಿಗೆ ಸಂಬಳ ಸಿಗುತ್ತಿಲ್ಲ..:** ಜನರು ಕೂಡ ಈ ಸರಕಾರದಿಂದ ಅನುದಾನ ಬರುವುದಿಲ್ಲ ಎಂಬಷ್ಟರ ಮಟ್ಟಿಗೆ ಪಶ್ಚಾತ್ತಾಪ ಪಡುತ್ತಿದ್ದಾರೆ. ಮುಖ್ಯಮಂತ್ರಿಗಳು ಮತ್ತು ಸಂಪುಟವನ್ನು ಗಮನಿಸಿದರೆ ಇಡೀ ಸಂಪುಟವೇ ಅಸಮರ್ಥವಾಗಿದೆ. ಸಚಿವರ ಮೇಲೆ ಹಿಡಿತವಿಲ್ಲದೆ ಮುಖ್ಯಮಂತ್ರಿಗಳು ಅಸಮರ್ಥವಾಗಿದ್ದಾರೆ. ಯೋಜನೆ ರೂಪಿಸುವುದರಲ್ಲಿ ಮುಖ್ಯಮಂತ್ರಿಗಳು ಅಸಮರ್ಥವಾಗಿದ್ದಾರೆ. ಸರಕಾರಿ ನೌಕರರಿಗೆ ಸಂಬಳ ಸಿಗುತ್ತಿಲ್ಲ ಅನ್ನುವಷ್ಟರ ಮಟ್ಟಿಗೆ ಅಸಮರ್ಥ ಮುಖ್ಯಮಂತ್ರಿಯ ಆಡಳಿತವನ್ನು ಕರ್ನಾಟಕದಲ್ಲಿ ನೋಡುತ್ತಿದ್ದೇವೆ ಎಂದು ವಿ. ಸುನೀಲ್ ಕುಮಾರ್ ಅವರು ತಿಳಿಸಿದರು.

ಪಿಎಲ್‌ಡಿ ಬ್ಯಾಂಕ್ ಗಳಲ್ಲಿ ರೈತರಿಗೆ ಮರು ಸಾಲ ಸಿಗುತ್ತಿಲ್ಲ. ಅಸಮರ್ಥ ಕಂದಾಯ, ಕೃಷಿ, ಸಹಕಾರ, ಇಂಧನ, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ನಗರಾಭಿವೃದ್ಧಿ ಸಚಿವರು ನಮ್ಮಲ್ಲಿದ್ದಾರೆ. ಬ್ರಾಂಡ್ ಬೆಂಗಳೂರು ಈಗ ದಿಕ್ಕೆಟ್ಟ ಬೆಂಗಳೂರು ಆಗಿದೆ. ಕರ್ನಾಟಕದಲ್ಲಿ ಆಡಳಿತವನ್ನು ಕೆಲವು ಕುಟುಂಬದ ಸದಸ್ಯರು, ಇವೆಂಟ್ ಮ್ಯಾನೇಜ್ಮೆಂಟ್ ನ ಸದಸ್ಯರು ನಡೆಸುತ್ತಿದ್ದಾರೆ. ವಿಧಾನಸೌಧದ ಆಡಳಿತ ಯಾರದೋ ಮನೆಯ ಕಿಚನ್ ನಲ್ಲಿ ನಡೆಯುತ್ತಿರುವಂತೆ ಭಾಸವಾಗುತ್ತಿದೆ. ಜನಪ್ರತಿನಿಧಿಗಳಿಗೆ ಅಪಮಾನವಾಗುವಂತಹ ರೀತಿ ಆಡಳಿತ ನಡೆಯುತ್ತಿದೆ. ಇದರ ವಿರುದ್ಧ ಜನಾಂದೋಲನವನ್ನು ಬಿಜೆಪಿ ಆರಂಭ ಮಾಡುತ್ತದೆ ಎಂದು ಎಚ್ಚರಿಕೆ ನೀಡಿದರು.

# ಟಿ20 ವಿಶ್ವಕಪ್: ಸ್ಕಾಟ್ಲೆಂಟ್ ತಂಡದ ಜೆರ್ಸಿಯಲ್ಲಿ ಕರ್ನಾಟಕದ 'ನಂದಿನಿ' ಬ್ರ್ಯಾಂಡ್ ಲೋಗೋ



ಟಿ20 ಕ್ರಿಕೆಟ್ ವಿಶ್ವಕಪ್‌ಗಾಗಿ ತನಗೆ ಪ್ರಾಯೋಜಕತ್ವ ನೀಡಿರುವ ಕರ್ನಾಟಕ ಹಾಲು ಒಕ್ಕೂಟದ 'ನಂದಿನಿ' ಬ್ರ್ಯಾಂಡ್ ಲೋಗೋ ಇರುವ ಜೆರ್ಸಿಯನ್ನು ಸ್ಕಾಟ್ಲೆಂಡ್ ತಂಡ ಅನಾವರಣಗೊಳಿಸಿದೆ.

ವೆಸ್ಟ್ ಇಂಡೀಸ್ ಮತ್ತು ಅಮೆರಿಕ ನಲ್ಲಿ ನಡೆಯುವ ಪಂದ್ಯಾವಳಿ ಜೂ.2 ರಿಂದ ಆರಂಭವಾಗಲಿದೆ. ಸ್ಕಾಟ್ಲೆಂಡ್ ಪುರುಷರ ಪ್ಲೇಯಿಂಗ್ ಶರ್ಟ್‌ಗಳ ಎಡ ತೋಳಿನ ಮೇಲೆ ನಂದಿನಿ ಲೋಗೋ ಇರುತ್ತದೆ. ಲೋಗೋದಲ್ಲಿ 'ನಂದಿನಿ' ಎಂದು ಕನ್ನಡ ಮತ್ತು ಇಂಗ್ಲಿಷ್ ಎರಡರಲ್ಲೂ ಬರೆಯಲಾಗಿದೆ.

ನಂದಿನಿ ಬ್ರಾಂಡ್‌ನಲ್ಲಿ ತನ್ನ ಡೈರಿ ಉತ್ಪನ್ನಗಳನ್ನು ಮಾರಾಟ ಮಾಡುವ ಕರ್ನಾಟಕ ಹಾಲು ಉತ್ಪಾದಕರ ಒಕ್ಕೂಟ, ಟಿ20 ಕ್ರಿಕೆಟ್ ವಿಶ್ವಕಪ್‌ಗಾಗಿ ಸ್ಕಾಟ್ಲೆಂಡ್ ಮತ್ತು ಐರ್ಲೆಂಡ್ ತಂಡಗಳಿಗೆ ಪ್ರಾಯೋಜಕತ್ವ ನೀಡಿದೆ. ಪ್ರತಿ ತಂಡಕ್ಕೆ ಪ್ರಾಯೋಜಕತ್ವದ ಮೊತ್ತ ಸುಮಾರು 2.5 ಕೋಟಿ ಎಂದು ಕೆಎಂಎಫ್ ಮೂಲಗಳು ತಿಳಿಸಿವೆ.

ಜೂನ್ 1 ರಿಂದ 18ರ ವರೆಗೆ ಗುಂಪು ಹಂತದ ಪಂದ್ಯಗಳು ನಡೆಯಲಿದೆ. ಜೂನ್ 19 ರಿಂದ 24ರ ವರೆಗೆ ಸೂಪರ್-8 ಪಂದ್ಯಗಳು, ಜೂನ್ 26 ಮತ್ತು ಜೂನ್ 27 ರಂದು ಸೆಮಿಫೈನಲ್ ಪಂದ್ಯಗಳು ನಡಯೆಲಿದ್ದು, ಜೂನ್ 29ರಂದು ಬಾರ್ಬಡೋಸ್ ಮೈದಾನದಲ್ಲಿ ಫೈನಲ್ ಪಂದ್ಯ ನಡೆಯಲಿದೆ. ಗುಂಪು ಹಂತದಲ್ಲಿ ಭಾರತ ಎದುರಿಸುವ 4 ಪಂದ್ಯಗಳ ಪೈಕಿ ಮೂರು ಪಂದ್ಯಗಳು ನ್ಯೂಯಾರ್ಕ್ ನಗರದಲ್ಲಿ, ಒಂದು ಪಂದ್ಯ ಫ್ಲೋರಿಡಾ ನಗರದಲ್ಲಿ ನಡೆಯಲಿದೆ. ಗುಂಪು ಹಂತದಲ್ಲಿ ಜೂನ್ 5 ರಂದು ಐರ್ಲೆಂಡ್ ವಿರುದ್ಧ, ಜೂನ್ 12 ರಂದು ಯುಎಸ್‌ಎ ವಿರುದ್ಧ, ಜೂನ್ 15 ರಂದು ಕೆನಡಾ ವಿರುದ್ಧ ಭಾರತ ತಂಡ ಸೆಣಸಲಿದೆ. ಇನ್ನೂ ಬಹು ನಿರೀಕ್ಷಿತ ಹೈವೋಲ್ಟೇಜ್ ಕದನದಲ್ಲಿ ಜೂನ್ 9 ರಂದು ಪಾಕಿಸ್ತಾನ ವಿರುದ್ಧ ನ್ಯೂಯಾರ್ಕ್‌ನ ಅಂಗಳದಲ್ಲಿ ಭಾರತ ಸೆಣಸಲಿದೆ.

# ಜೆಡಿಎಸ್‌ನಿಂದ ವಿವೇಕಾನಂದಾಗೆ ಬಿ ಫಾರಂ



**ಮೈಸೂರು:** ಕರ್ನಾಟಕ ವಿಧಾನ ಪರಿಷತ್ ಚುನಾವಣೆಯಲ್ಲಿ ಜೆಡಿಎಸ್, ಬಿಜೆಪಿ ಮೈತ್ರಿಯ ನಡುವಣ ಮುಸುಕಿನ ಗುದ್ದಾಟ ಈಗ ಬಹಿರಂಗವಾಗಿದೆ. ದಕ್ಷಿಣ ಶಿಕ್ಷಕರ ಕ್ಷೇತ್ರಕ್ಕೆ ಬಿಜೆಪಿಯಿಂದ ಇಸಿ ನಿಂಗರಾಜೇಗೌಡಗೆ ಟಿಕೆಟ್ ಫೈನಲ್ ಮಾಡಿ ಹೆಸರು ಘೋಷಣೆ ಮಾಡಿದ್ದರೂ ಜೆಡಿಎಸ್ ಕೂಡ ಅಭ್ಯರ್ಥಿ ಘೋಷಣೆ ಮಾಡಿದೆ. ದಕ್ಷಿಣ ಶಿಕ್ಷಕರ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿಯಾಗಿ ವಿವೇಕಾನಂದ ಅವರನ್ನು ಆಯ್ಕೆ ಮಾಡಲಾಗಿದ್ದು, ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಹಾಗೂ ಶಾಸಕರಾದ ಜಿಟಿ ದೇವಗೌಡರ ಸಮ್ಮುಖದಲ್ಲಿ ಪಕ್ಷದ ವರಿಷ್ಠ ಹೆಚ್‌ಡಿ ದೇವೇಗೌಡ 'ಬಿ' ಫಾರಂ ನೀಡಿದ್ದಾರೆ.

ಬಿಜೆಪಿ ಈಗಾಗಲೇ ಅಭ್ಯರ್ಥಿ ಘೋಷಣೆ ಮಾಡಿರುವುದರಿಂದ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆ ಕುತೂಹಲ ಕೆರಳಿಸಿದೆ. ಜೆಡಿಎಸ್‌ಗೆ ಈ ಕ್ಷೇತ್ರ ಬಿಟ್ಟುಕೊಡುವುದಾಗಿ ಬಿಜೆಪಿ ಹೈಕಮಾಂಡ್ ಈಗಾಗಲೇ ಸ್ಪಷ್ಟಪಡಿಸಿದೆ ಎಂದು ಮಾಜಿ ಶಾಸಕ ಸಾ.ರಾ. ಮಹೇಶ್ ಸುಳಿವು ನೀಡಿದ್ದರು. ಮೇ15ಕ್ಕೆ ಅಭ್ಯರ್ಥಿಯನ್ನು ಅಂತಿಮಗೊಳಿಸುವುದಾಗಿಯೂ ಹೇಳಿದ್ದರು. ಅದರಂತೆಯೇ ಅಭ್ಯರ್ಥಿಗೆ 'ಬಿ' ಫಾರಂ ನೀಡಲಾಗಿದೆ. ಹೀಗಾಗಿ ಇದೀಗ, ಬಿಜೆಪಿಯ ಮುಂದಿನ ನಡೆ ಏನಿರಬಹುದು ಎಂಬ ಕುತೂಹಲ ಮೂಡಿದೆ.

ಸಾರಾ ಮಹೇಶ್ ಹೇಳಿದ್ದು ನಿಜವೇ ಆಗಿದ್ದಲ್ಲಿ ಹೈಕಮಾಂಡ್ ಸೂಚನೆ ಮೇರೆಗೆ ಬಿಜೆಪಿ ಅಭ್ಯರ್ಥಿ ಘೋಷಣೆಯನ್ನು ವಾಪಸ್ ಪಡೆಯಲಿದೆಯೇ ಎಂಬ ಪ್ರಶ್ನೆಯೂ ಮೂಡಿದೆ.

ಒಂದು ವೇಳೆ ಬಿಜೆಪಿ ಹಾಗೂ ಜೆಡಿಎಸ್ ಪ್ರತ್ಯೇಕ ಸ್ಪರ್ಧೆ ನಡೆಸಿದರೆ ಕಾಂಗ್ರೆಸ್ ಪಕ್ಷಕ್ಕೆ ಪ್ರಯೋಜನವಾಗಲಿದೆಯೇ ಎಂಬ ಲೆಕ್ಕಾಚಾರವೂ ಈಗ ಶುರುವಾಗಿದೆ. ಅಂತಿಮವಾಗಿ ಇದು ರಾಜ್ಯದಲ್ಲಿ ಬಿಜೆಪಿ ಜೆಡಿಎಸ್ ಮೈತ್ರಿ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆಯೇ ಎಂಬ ಪ್ರಶ್ನೆಯೂ ಸೃಷ್ಟಿಯಾಗಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com